ಸಂಪುಟ: 05 ಸಂಚಿಕೆ: 85 ಪುಟಗಳು: 08 ಭಾನುವಾರ 08 ಜೂನ್ 2025

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

UV ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ನನ್ನ ಹಾಗೆ ನೀನೂ ಬದುಕು ಎಂದು ಸಲಹೆ ನೀಡಬಹುದೇ ಹೊರತು, ನಾನು ಹೇಗಾದರೂ ಬದುಕುತ್ತೇನೆ, ನೀನು ಹೀಗೆ ಬದುಕು ಎಂದು ಹೇಳುವುದು ಸರಿಯಲ್ಲ.

# ಡಿಸಿಎಂಗೆ ಸಿಎಂ ಡಿಶುಂ ಡಿಶುಂ

## ಶೋ ಕೊಟ್ಟು ಸಂಕಷ್ಟ ತಂದಿಟ್ಟ ಡಿಕೆಶಿ

• ಉದಯವಾಹಿನಿ, ಬೆಂಗಳೂರು

ಉಪಮುಖ್ಯ ಮಂತ್ರಿ ಡಿ.ಕೆ ಶಿವಕುಮಾರ್ ಅವರನ್ನು ಮುಖ್ಯ ಮಂತ್ರಿ ಸಿದ್ದರಾಮಯ್ಯ ತರಾಟೆಗೆ ತೆಗೆದುಕೊಂಡಿರುವುದು ಬೆಳಕಿಗೆ ಬಂದಿದೆ.

ಸಚಿವ ಸಂಪುಟ ಸಭೆಯ ಬಳಿಕ ಕಾಲ್ತುಳಿತ ಪ್ರಕರಣ ಕುರಿತು ಚರ್ಚಿಸುವ ಸಲುವಾಗಿ ನಡೆದ ವಿಶೇಷ ಸಭೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಡಿ.ಕೆ.ಶಿವಕುಮಾರ್ ನಡುವೆ ಪರಸ್ಪರ ಕಾವೇರಿದ ಮಾತುಕತೆಗಳು ನಡೆದಿವೆ.

ಕಳೆದೆರಡು ದಿನಗಳ ಹಿಂದೆ ನಡೆಸಿದ್ದ ಸಚಿವ ಸಂಪುಟ ಸಭೆಯಲ್ಲಿ ಡಿಕೆಶಿ ವಿರುದ್ಧ ಸಿದ್ದರಾಮಯ್ಯ ಗರಂ ಆಗಿದ್ರು ಅನ್ನೋ ಮಾಹಿತಿ ಲಭ್ಯವಾಗಿದೆ. ನೀವು ಯಾಕೆ ಹೆಚ್ಎಎಲ್‌ಗೆ ಹೋಗಿದ್ರಿ. ನೀವು ಹೋಗಿದ್ದಕ್ಕೆ ಚಿನ್ನಸ್ವಾಮಿ ಸ್ಟೇಡಿಯಂನಲ್ಲಿ ಸರ್ಕಾರವೇ ಕಾರ್ಯಕ್ರಮವನ್ನ ಆಯೋಜಿಸಿತ್ತು ಎಂಬಂತೆ ಬಿಂಬಿಸುತ್ತಿದ್ದಾರೆ. ಅಲ್ಲಿಗೆ ನೀವು ಹೋಗಬೇಕಾದ ಪ್ರೋಟೋಕಾಲ್ ಏನಾದ್ರೂ ಇತ್ತಾ. ನೀವ್ಯಾಕೆ ಅಲ್ಲಿಗೆ ಹೋಗಬೇಕಿತ್ತು ಎಂದು ಕ್ಲಾಸ್ ತೆಗೆದುಕೊಂಡಿದ್ದಾರೆ ಅಂತಾ ಹೇಳಲಾಗಿದೆ.

ಜೂ.3 ರಂದು ಆರ್‌ಸಿಬಿ ಐಪಿಎಲ್ ಟ್ರೋಫಿ ಗೆದ್ದಿತ್ತು. ಅದೇ ಖುಷಿಯಲ್ಲಿ ರಾಜ್ಯ ಸರ್ಕಾರದ ವತಿಯಿಂದ ವಿಧಾನಸೌಧದಲ್ಲಿ ಆರ್‌ಸಿಬಿ ಟೀಂಗೆ ಜೂ.4 ರಂದು ಸನ್ಮಾನ ಕಾರ್ಯಕ್ರಮ ಆಯೋಜನೆಗೊಂಡಿತ್ತು. ಅಹ್ಮದಾಬಾದ್‌ನಿಂದ ನೇರವಾಗಿ ಬೆಂಗಳೂರಿಗೆ ಬಂದಿಳಿದಿದ್ದ ಆರ್‌ಸಿಬಿ ಟೀಂ ಸ್ವಾಗತಿಸಲು ಉಪಮುಖ್ಯಮಂತ್ರಿ ಡಿಕೆಶಿವಕುಮಾರ್ ಹೋಗಿದ್ದರು. ಇದೇ ವಿಚಾರ ಸಿಎಂ ಕಣ್ಣು ಕೆಂಪಾಗುವಂತೆ ಮಾಡಿದೆ ಎನ್ನಲಾಗಿದೆ. ವಿಧಾನಸೌಧದಲ್ಲಿ ಸನ್ಮಾನ ಕಾರ್ಯಕ್ರಮ, ಚಿನ್ನಸ್ವಾಮಿಯಲ್ಲಿ ನಡೆದ ವಿಕ್ಟರಿ ಪರೇಡ್ ವೀಕ್ಷಿಸಲು ಅಪಾರ ಸಂಖ್ಯೆಯಲ್ಲಿ ಆರ್‌ಸಿಬಿ ಅಭಿಮಾನಿಗಳು ಬಂದಿದ್ದರು. ಪರಿಣಾಮ ಚಿನ್ನಸ್ವಾಮಿ ಮೈದಾನದ ಬಳಿ ನೂಕು ನುಗ್ಗಲು ಸಂಭವಿಸಿ ಕಾಲ್ತುಳಿತ ಉಂಟಾಯಿತು. ಆರ್‌ಸಿಬಿಯ 11 ಅಭಿಮಾನಿಗಳು ಜೀವ ಕಳೆದುಕೊಂಡರು.

**ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಕಿಡಿ:** ಮಲ್ಲೇಶ್ವರಂನ ಬಿಜೆಪಿ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತಾಡಿದ ಶೋಭಾ ಕರಂದ್ಲಾಜೆ, ಕಾಲ್ತುಳಿತದಲ್ಲಿ ಮಕ್ಕಳನ್ನ ಕಳೆದುಕೊಂಡ ಪೋಷಕರು ಕಣ್ಣೀರು ಹಾಕ್ತಿದ್ದಾರೆ. ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿ ಕೆ ಶಿವಕುಮಾರ್ ಕೈಯಲ್ಲಿ ರಕ್ತ ಅಂಟಿದೆ. ತಮ್ಮ ಕೈಯಲ್ಲಿರುವ ರಕ್ತವನ್ನು ಪೊಲೀಸರ ಮೂತಿಗೆ ಒರೆಸ್ತಿದ್ದಾರೆ. ಒಬ್ಬ ಪ್ರಾಮಾಣಿಕ ಕಮಿಷನರ್ ಅನ್ನು ಸಸ್ಪೆಂಡ್ ಮಾಡಿದ್ದಾರೆ. ಬೆಂಗಳೂರಿನ ಇತಿಹಾಸದಲ್ಲೇ ಇದೊಂದು ಕಪ್ಪು ಚುಕ್ಕೆ ಎಂದು ಶೋಭಾ ಕರಂದ್ಲಾಜೆ ಕಿಡಿಕಾರಿದ್ರು.




### ಇತ್ತ ಸಿಎಂ ಡಿಸಿಎಂ ರಾಜೀನಾಮೆಗೆ ವಿಪಕ್ಷಗಳ ಪಟ್ಟು

ಆರ್‌ಸಿಬಿ ವಿಜಯೋತ್ಸವದ ವೇಳೆ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆದ ದುರಂತದಿಂದ ಕಾಂಗ್ರೆಸ್ ಸರ್ಕಾರ ಸಂಕಷ್ಟಕ್ಕೆ ಸಿಲುಕಿದೆ. 11 ಮಂದಿ ಸಾವಿಗೆ ಸರ್ಕಾರವೇ ನೇರ ಹೊಣೆ ಎಂದು ಬಿಜೆಪಿ ನಾಯಕರು ಆರೋಪ ಮಾಡ್ತಿದ್ದಾರೆ. ನೈತಿಕ ಹೊಣೆ ಹೊತ್ತು ಸಿಎಂ ಸಿದ್ದರಾಮಯ್ಯ ಹಾಗೂ ಡಿಕೆ ಶಿವಕುಮಾರ್ ರಾಜೀನಾಮೆ ನೀಡಬೇಕು ಎಂದು ಜೆಡಿಎಸ್ ಹಾಗೂ ಬಿಜೆಪಿ ನಾಯಕರು ಪಟ್ಟು ಹಿಡಿದ್ದಾರೆ. ಇದು ಕಾಂಗ್ರೆಸ್‌ಗೆ ದೊಡ್ಡ ತಲೆಬಿಸಿಯಾಗಿದೆ.

### ಡಿಕೆಶಿ ಗಪ್‌ಚುಪ್

ಆರ್‌ಸಿಬಿ ಆಟಗಾರರನ್ನ ನೀವೇ ಹೋಗಿ ಯಾಕೆ ಸ್ವಾಗತ ಮಾಡಿಕೊಂಡ್ರಿ. ಈ ಬಗ್ಗೆ ಪ್ರೋಟೋಕಾಲ್ ಇತ್ತಾ ಅಧಿಕಾರಿಗಳನ್ನ ನಿಯೋಜಿಸಿಸಲಾಗಿತ್ತು. ನೀವ್ಯಾಕೆ ಅಲ್ಲಿಗೆ ಹೋಗಬೇಕಿತ್ತು ಎಂದು ಡಿಕೆ ಶಿವಕುಮಾರ್ ವಿರುದ್ಧ ಸಿಎಂ ಸಿದ್ದರಾಮಯ್ಯ ಅಸಮಾಧಾನ ಹೊರಹಾಕಿದ್ರು ಎನ್ನಲಾಗ್ತಿದೆ. ಸಂಪುಟ ಸದಸ್ಯರ ಮುಂದೆ ಸಿಎಂ ಅಸಮಾಧಾನ ಹೊರಹಾಕಿದ್ರು. ಈ ವೇಳೆ ಸಿಎಂ ಸಿದ್ದರಾಮಯ್ಯ ಅವರ ಯಾವುದೇ ಪ್ರಶ್ನೆಗಳಿಗೂ ಡಿಸಿಎಂ ಡಿಕೆ ಶಿವಕುಮಾರ್ ಉತ್ತರ ನೀಡಿದೆ ಗಪ್‌ಚುಪ್ ಆಗಿದ್ದರು ಎಂದು ಹೇಳಲಾಗ್ತಿದೆ. ಸಂಪುಟ ಸಭೆಯಲ್ಲಿ ಸಿಎಂ ಸಿದ್ದರಾಮಯ್ಯ ಫುಲ್ ಗರಂ ಆಗಿದ್ದರು ಎನ್ನುವ ಮಾಹಿತಿ ಹೊರಬಿದ್ದಿದೆ. ಸಭೆಯಲ್ಲಿ ಡಿಕೆ ಶಿವಕುಮಾರ್ ಮೇಲೆ ಸಿಎಂ ಸಿದ್ದರಾಮಯ್ಯ ಅಸಮಾಧಾನ ಹೊರಹಾಕಿದ್ದಾರೆ ಎನ್ನಲಾಗ್ತಿದೆ. ಮೊನ್ನೆ ನಡೆದ ಸಂಪುಟ ಸಭೆಯಲ್ಲಿ ಡಿಸಿಎಂ ಡಿಕೆಶಿ ಮೇಲೆ ಸಿಎಂ ಸಿದ್ದರಾಮಯ್ಯ ಬೇಸರ ಹೊರಹಾಕಿದ್ದಾರೆ ಎನ್ನುವ ಮಾಹಿತಿ ಉನ್ನತ ಮೂಲಗಳಿಂದ ತಿಳಿದು ಬಂದಿದೆ.

1 ಜೂನ್ 4 ರಂದು ಚಿನ್ನಸ್ವಾಮಿಯಲ್ಲಿ ಕಾಲ್ತುಳಿತ ಪ್ರಕರಣ

2 ದುರಂತ ಪ್ರಕರಣದಲ್ಲಿ 11 ಆರ್‌ಸಿಬಿ ಅಭಿಮಾನಿಗಳು ನಿಧನ

3 ಸಚಿವ ಸಂಪುಟ ಸಭೆಯಲ್ಲಿ ಸಿದ್ದರಾಮಯ್ಯ ಗರಂ

### ಬಕ್ರೀದ್ ಪ್ರಾರ್ಥನೆಯಿಂದ ದೂರ ಉಳಿದ ಸಿಎಂ

### ಪರಸ್ಪರ ಹೊಂದಾಣಿಕೆ ಇಲ್ಲದ್ದೇ ಇಷ್ಟಕ್ಕೆಲ್ಲ ಕಾರಣ

ಬೆಂಗಳೂರಿನಲ್ಲಿ ಏಳು ಏಜೆನ್ಸಿಗಳದ್ದೂ ತಪ್ಪಿದೆ. ಪರಸ್ಪರ ಒಬ್ಬರಿಗೊಬ್ಬರು ಹೊಂದಾಣಿಕೆ ಇಲ್ಲದೆ ಕಾರ್ಯಕ್ರಮ ಮಾಡಿದ್ದರಿಂದ ಯಡವಟ್ಟಾಗಿದೆ. ಬೆಂಗಳೂರಿನಲ್ಲಿ ರಾತ್ರಿಯಿಡೀ ಸಂಭ್ರಮ ನಡೆಸಿ ಮರುದಿನ ಕಾರ್ಯಕ್ರಮ ನಡೆಸಿದ್ದು ತಪ್ಪು. ನೂರು ಆಂಬ್ಯುಲೆನ್ಸ್, ಸ್ಟ್ರೆಚರ್, ಹಗ್ಗ, ಕ್ರೌಡ್ ಕಟ್ಟಿಂಗ್ ಉಪಕರಣ ಇಟ್ಟುಕೊಳ್ಳಬೇಕು. ಇಂಟೆಲಿಜೆನ್ಸ್ ಫೇಲ್ ಆದ ಮೇಲೆ ಕಾನೂನು ಸುವ್ಯವಸ್ಥೆ ಆದ್ರೂ ಕಾರ್ಯನಿರ್ವಹಿಸಬೇಕಿತ್ತು. ಆರ್‌ಸಿಬಿ ತಂಡ ಕರ್ನಾಟಕ ಮತ್ತು ಭಾರತ ತಂಡವಲ್ಲ. ಇದೊಂದು ಖಾಸಗಿ ಕ್ಲಬ್. ಹರಾಜು ಹಾಕಿ ಖರೀದಿಸಿರುವ ತಂಡ. ನಾವು ಸಮವಸ್ತ್ರ ಹಾಕಿದ ಮೇಲೆ ದೊರೆ ವಿರುದ್ಧ ಮಾತನಾಡಲ್ಲ. ದೊರೆ ಕೊಟ್ಟ ತೀರ್ಮಾನವೇ ಅಂತಿಮ ಎಂದು ಸಿಎಂ ಸಿದ್ದರಾಮಯ್ಯ ವಿರುದ್ಧ ಭಾಸ್ಕರ್ ರಾವ್ ಪರೋಕ್ಷ ವಾಗ್ದಾಳಿ ನಡೆಸಿದರು.



## ರಾಜ್ಯದಲ್ಲಿ ಕೊರೋನಾ ಹೆಚ್ಚಳ ಸಾವಿನ ಸಂಖ್ಯೆ 9ಕ್ಕೆ ಏರಿಕೆ

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ಇತ್ತೀಚೆಗೆ ಮೃತಪಟ್ಟವರಲ್ಲಿ ಇಬ್ಬರು ಕೋವಿಡ್ ಪೀಡಿತರಾಗಿದ್ದರು ಎನ್ನುವುದು ಪ್ರಯೋಗಾಲಯ ಪರೀಕ್ಷೆಯಿಂದ ದೃಢಪಟ್ಟಿದೆ. ಇದರಿಂದಾಗಿ ಈ ವರ್ಷ ಕೋವಿಡ್‌ನಿಂದ ಮೃತಪಟ್ಟವರ ಸಂಖ್ಯೆ ಒಂಬತ್ತಕ್ಕೆ ಏರಿಕೆಯಾಗಿದೆ. ಹೃದಯ ಸಂಬಂಧಿ ಸಮಸ್ಯೆ ಎದುರಿಸುತ್ತಿದ್ದ ಬೆಳಗಾವಿಯ 78 ವರ್ಷದ ವ್ಯಕ್ತಿ ಏಪ್ರಿಲ್ 6ರಂದು ಖಾಸಗಿ ಆಸ್ಪತ್ರೆಗೆ ದಾಖಲಾಗಿದ್ದರು. ಶ್ವಾಸಕೋಶ ಸಂಬಂಧಿ ಸಮಸ್ಯೆ ಎದುರಿಸುತ್ತಿದ್ದ 46 ವರ್ಷದ ವ್ಯಕ್ತಿ ಮೇ 29ರಂದು ಸರ್ಕಾರಿ ಆಸ್ಪತ್ರೆಗೆ ದಾಖಲಾಗಿದ್ದರು. ಅವರಿಗೆ ಜ್ವರ, ಉಸಿರಾಟದ ಸಮಸ್ಯೆ ಕಾಣಿಸಿಕೊಂಡಿದ್ದರಿಂದ ಕೋವಿಡ್ ಪರೀಕ್ಷೆಗೆ ಗಂಟಲ ದ್ರವದ ಮಾದರಿಯನ್ನು ಸಂಗ್ರಹಿಸಲಾಗಿತ್ತು. ಇಬ್ಬರೂ ಇದೇ 5ರಂದು ಮೃತಪಟ್ಟಿದ್ದಾರೆ. ಅವರ ಕೋವಿಡ್ ಪರೀಕ್ಷಾ ವರದಿ ಶನಿವಾರ ಬಂದಿದ್ದು, ಕೊರೋನಾ ಸೋಂಕಿತರಾಗಿರುವುದು ದೃಢಪಟ್ಟಿದೆ. ರಾಜ್ಯದಲ್ಲಿ 24 ಗಂಟೆಗಳ ಅವಧಿಯಲ್ಲಿ 542 ಗಂಟಲ ದ್ರವದ ಮಾದರಿಗಳನ್ನು ಪರೀಕ್ಷೆ ಮಾಡಲಾಗಿದ್ದು, 57 ಪ್ರಕರಣಗಳು ಹೊಸದಾಗಿ ದೃಢಪಟ್ಟಿವೆ. ಇದರಿಂದಾಗಿ ಈವರೆಗೆ ವರದಿಯಾದ ಒಟ್ಟು ಕೋವಿಡ್ ಪ್ರಕರಣಗಳ ಸಂಖ್ಯೆ 894ಕ್ಕೆ ಏರಿಕೆಯಾಗಿದೆ. ಸಕ್ರಿಯ ಪ್ರಕರಣಗಳ ಸಂಖ್ಯೆ 366ಕ್ಕೆ ತಲುಪಿದೆ. 353 ಮಂದಿ ಮನೆ ಆರೈಕೆಗೆ ಒಳಗಾದರೆ, 13 ಮಂದಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆದುಕೊಳ್ಳುತ್ತಿದ್ದಾರೆ.

## ಒಳ ಮೀಸಲು ಸಮೀಕ್ಷೆ ಹೆಸರು, ಜಾತಿ ಬಹಿರಂಗಪಡಿಸಿ

• ಉದಯವಾಹಿನಿ, ಬೆಂಗಳೂರು

ಪರಿಶಿಷ್ಟ ಜಾತಿಗಳಲ್ಲಿ ಒಳ ಮೀಸಲಾತಿ ಕಲ್ಪಿಸಲು ನಡೆಯುತ್ತಿರುವ ಸಮೀಕ್ಷೆಯು ಪೂರ್ಣಗೊಂಡ ತಕ್ಷಣ ಆಯಾ ಜಾತಿಗಳ ಜನರ ಹೆಸರು ಮತ್ತು ಮೂಲ ಜಾತಿಯನ್ನು ಗ್ರಾಮ ಪಂಚಾಯಿತಿ ಮತ್ತು ವಾರ್ಡ್ ಕಚೇರಿಗಳಲ್ಲಿ ಬಹಿರಂಗಪಡಿಸಬೇಕು. ಆ ಮೂಲಕ, ತಪ್ಪುಗಳಿದ್ದರೆ ಆಕ್ಷೇಪಣೆ ಸಲ್ಲಿಸಲು ಅವಕಾಶ ನೀಡಬೇಕು ಎಂದು ಆಗ್ರಹಿಸಿ ನಿವೃತ್ತ ನ್ಯಾಯಮೂರ್ತಿ ಎಚ್.ಎನ್. ನಾಗಮೋಹನ್ ದಾಸ್ ನೇತೃತ್ವದ ಆಯೋಗಕ್ಕೆ ಕರ್ನಾಟಕ ನವ ಜಾಗೃತಿ ವೇದಿಕೆ ಮನವಿ ಸಲ್ಲಿಸಿದೆ. ಸಮೀಕ್ಷೆಯಲ್ಲಿ ಪ್ರಶ್ನಾವಳಿ ಸುದೀರ್ಘವಾಗಿದ್ದ ಕಾರಣ ಗಣತಿದಾರರು ನಮೂದಿಸಿರುವ ಹೆಸರು, ಜಾತಿ ಮತ್ತಿತರ ಮಾಹಿತಿ ಸರಿಯಾಗಿ ದಾಖಲಾಗಿದೆಯೇ ಎಂಬ ಬಗ್ಗೆ ಶೇ 90ಕ್ಕೂ ಹೆಚ್ಚು ಜನರಿಗೆ ತಿಳಿದಿಲ್ಲ. ದಾಖಲಿಸಿಕೊಂಡಿರುವ ಮಾಹಿತಿಯನ್ನು ಮೊಬೈಲ್‌ನಲ್ಲಿಯೇ ಪರಿಶೀಲಿಸಿಕೊಳ್ಳಬಹುದು ಎಂದು ಆಯೋಗ ಹೇಳಿದ್ದರೂ ಅದು ಕಾರ್ಯಸಾಧ್ಯವಾಗಿಲ್ಲ. ಪರಿಶಿಷ್ಟ ಜಾತಿಗೆ ಸೇರಿದ ಕೆಲವರು ಗಣತಿದಾರರು ತಮ್ಮ ಜಾತಿಯ ಜನಸಂಖ್ಯೆ ಜಾಸ್ತಿಯಾಗಲು ಬೇರೆ ಉಪ ಜಾತಿಯವನ್ನು ತಮ್ಮ ಜಾತಿಯವರೆಂದು ದಾಖಲು ಮಾಡಿಕೊಂಡಿರುವ ಆರೋಪಗಳೂ ಇವೆ.

## 11 ಮೃತರ ಕುಟುಂಬಕ್ಕೆ ಪರಿಹಾರ 25 ಲಕ್ಷಕ್ಕೆ ಹೆಚ್ಚಿಸಲು ಸಿಎಂ ಆದೇಶ

• ಉದಯವಾಹಿನಿ, ಬೆಂಗಳೂರು

ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಸಂಭವಿಸಿದ ದುರಂತದಲ್ಲಿ ಮೃತಪಟ್ಟಿದ್ದ 11 ಮಂದಿಯ ಕುಟುಂಬಗಳಿಗೆ ಘೋಷಿಸಿದ್ದ ಪರಿಹಾರವನ್ನು ತಲಾ 25 ಲಕ್ಷ ರೂ.ಗಳಿಗೆ ಹೆಚ್ಚಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಆದೇಶಿಸಿದ್ದಾರೆ. ಈ ಮೊದಲು ತಲಾ 10 ಲಕ್ಷ ರೂ.ಗಳ ಪರಿಹಾರವನ್ನು ಸರ್ಕಾರ ಘೋಷಿಸಿತ್ತು. ಇದೀಗ ಪರಿಹಾರ ಮೊತ್ತ ಹೆಚ್ಚಿಸಲು ಸಿಎಂ ಸಿದ್ದರಾಮಯ್ಯ ಅವರು ಸೂಚಿಸಿದ್ದಾರೆ. ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡದ ಸಂಭ್ರಮಾಚರಣೆ ವೇಳೆ ನಡೆದ ದುರಂತದಲ್ಲಿ 11 ಜನರು ಸಾವಿಗೀಡಾಗಿದ್ದರು. ಅವರ ಕುಟುಂಬಗಳಿಗೆ ಈ ಮೊದಲು ತಲಾ 10 ಲಕ್ಷ ರೂ. ಪರಿಹಾರವನ್ನು ಸಿಎಂ ಸಿದ್ದರಾಮಯ್ಯ ಅವರು ಘೋಷಿಸಿದ್ದರು. ಅಲ್ಲದೆ ಗಾಯಗೊಂಡವರ ಚಿಕಿತ್ಸೆ ವೆಚ್ಚವನ್ನೂ ಸರಕಾರ ಭರಿಸಲಿದೆ ಎಂದು ಹೇಳಿದ್ದರು. ಅದೇ ರೀತಿ ಮೃತರಿಗೆ ಆರ್‌ಸಿಬಿ 10 ಲಕ್ಷ ಹಾಗೂ ಕೆಎಸ್‌ಸಿಎ 5 ಲಕ್ಷ ಪರಿಹಾರವನ್ನು ಘೋಷಿಸಿತ್ತು.

## ಜೂನ್ 9 ಮಳೆಯಾಗುವ ಬಗ್ಗೆ ಹವಾಮಾನ ಇಲಾಖೆ ಮುನ್ಸೂಚನೆ

• ಉದಯವಾಹಿನಿ, ಬೆಂಗಳೂರು

ರಾಜ್ಯದ ಹಲವೆಡೆ ಇದೇ ಸೋಮವಾರದಿಂದ (ಜೂನ್ 9)ಮಳೆಯಾಗುವ ಬಗ್ಗೆ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ತಗ್ಗಿದ ಮಳೆ ಮತ್ತೆ ಬಿರುಸು ಪಡೆಯುವ ಸಾಧ್ಯತೆಯಿದ್ದು, ಸೋಮವಾರದಿಂದ ಮೂರು ದಿನಗಳು ಉತ್ತರ ಕನ್ನಡ, ಉಡುಪಿ ಹಾಗೂ ದಕ್ಷಿಣ ಕನ್ನಡ ಜಿಲ್ಲೆಯನ್ನು ಹೊರತುಪಡಿಸಿ, ರಾಜ್ಯದ ಉಳಿದ ಜಿಲ್ಲೆಗಳಿಗೆ ಯೆಲ್ಲೊ ಅಲರ್ಟ್ ಘೋಷಿಸಲಾಗಿದೆ. ಉತ್ತರ ಒಳನಾಡಿನ ಕಲಬುರಗಿ, ಬಾಗಲಕೋಟೆ, ಗದಗ, ಬೆಳಗಾವಿ, ಧಾರವಾಡ, ವಿಜಯಪುರ, ಬೀದರ್, ರಾಯಚೂರು, ಯಾದಗಿರಿ, ಕೊಪ್ಪಳ ಮತ್ತು ಹಾವೇರಿ ಜಿಲ್ಲೆಯ ಹಲವೆಡೆ ಗುಡುಗು ಹಾಗೂ ಗಂಟೆಗೆ 30 ಕಿ.ಮೀನಿಂದ 40 ಕಿ.ಮೀ. ವೇಗದಲ್ಲಿ ಗಾಳಿ ಸಹಿತ ಮಳೆಯಾಗುವ ಸಾಧ್ಯತೆಯಿದೆ ಎಂದು ಇಲಾಖೆ ತಿಳಿಸಿದೆ. ದಕ್ಷಿಣ ಒಳನಾಡಿನ ಬಳ್ಳಾರಿ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ಚಿಕ್ಕಬಳ್ಳಾಪುರ, ಕೋಲಾರ, ಚಿತ್ರದುರ್ಗ, ದಾವಣಗೆರೆ, ತುಮಕೂರು, ವಿಜಯನಗರ, ಶಿವಮೊಗ್ಗ, ಚಿಕ್ಕಮಗಳೂರು, ಚಾಮರಾಜನಗರ, ರಾಮನಗರ, ಮಂಡ್ಯ ಹಾಗೂ ಮೈಸೂರು ಜಿಲ್ಲೆಯ ಹಲವೆಡೆ ಭಾರಿ ಗಾಳಿಯೊಂದಿಗೆ ಮಳೆಯಾಗುವ ಸಂಭವವಿದೆ ಎಂದು ಹೇಳಿದೆ.

## ಸಿಂಧೂ ನದಿ ನೀರನ್ನು ತಿರುಗಿಸಲು ಸಿದ್ಧತೆ ಚುರುಕುಗೊಳಿಸಿದ ಭಾರತ

• ಉದಯವಾಹಿನಿ, ನವದೆಹಲಿ

ಪ್ರಸ್ತುತ ನಿಷ್ಕ್ರಿಯವಾಗಿರುವ ಸಿಂಧೂ ಜಲ ಒಪ್ಪಂದ ಅಡಿಯಲ್ಲಿ ಪಾಕಿಸ್ತಾನಕ್ಕೆ ಹರಿಯುತ್ತಿರುವ ಚೆನಾಬ್‌ನಿಂದ ನೀರನ್ನು ತಿರುಗಿಸುವ ಗುರಿಯನ್ನು ಹೊಂದಿರುವ ಚೆನಾಬ್-ರವಿ-ಬಿಯಾಸ್-ಸಟ್ಲೆಜ್ ಲಿಂಕ್ ಕಾಲುವೆ ಯೋಜನೆಯ ನಿರ್ಮಾಣಕ್ಕಾಗಿ ಭಾರತವು ಪೂರ್ವ-ಕಾರ್ಯಸಾಧ್ಯತಾ ಅಧ್ಯಯನವನ್ನು ಪ್ರಾರಂಭಿಸಿದೆ. ಜಲವಿದ್ಯುತ್ ಸಂಗ್ರಹಣಾ ಸಾಮರ್ಥ್ಯವನ್ನು ಹೆಚ್ಚಿಸುವ ಮತ್ತು ಐಡಬ್ಲ್ಯೂಟಿ ಅಡಿಯಲ್ಲಿ ಅನುಮತಿಸಲಾದ ನೀರಿನ ಸಂಪನ್ಮೂಲಗಳಲ್ಲಿ ಭಾರತದ ಪಾಲನ್ನು ಹೆಚ್ಚಿಸುವ ಗುರಿಯನ್ನು ಹೊಂದಿರುವ ಚೆನಾಬ್, ಝೀಲಂ ಮತ್ತು ಸಿಂಧೂ ನದಿಗಳಿಗೆ ಸಂಪರ್ಕ ಹೊಂದಿದ ಹಲವಾರು ಪ್ರಮುಖ ಜಲಾಶಯಗಳಲ್ಲಿ ಹೂಳು ತೆಗೆಯುವ ಕೆಲಸ ಪ್ರಾರಂಭವಾಗಿದೆ ಎಂದು ಮೂಲಗಳು ದೃಢಪಡಿಸಿವೆ.

ದೇಶೀಯ ನೀರಿನ ಮೂಲಸೌಕರ್ಯವನ್ನು ಬಲಪಡಿಸಲು ಮತ್ತು ಸಿಂಧೂ ಜಲಾನಯನ ಸಂಪನ್ಮೂಲಗಳ ಮೇಲೆ ಹೆಚ್ಚಿನ ನಿಯಂತ್ರಣವನ್ನು ಪ್ರತಿಪಾದಿಸಲು ವಿಶಾಲ ಪ್ರಯತ್ನದ ಭಾಗವಾಗಿ, ಚೆನಾಬ್‌ನಿಂದ 15-20 ಮಿಲಿಯನ್ ಎಕರೆ-ಅಡಿ ನೀರನ್ನು ಭಾರತದ ರಾಜ್ಯಗಳಾದ ಪಂಜಾಬ್, ಹರಿಯಾಣ ಮತ್ತು ರಾಜಸ್ಥಾನಕ್ಕೆ ಹರಿಸಲು ಈ ಯೋಜನೆಯು ಪ್ರಸ್ತಾಪಿಸಿದೆ. ಈ ಕ್ರಮವು ಭಾರತವು ಜಲಾನಯನ ಪ್ರದೇಶದ ಶೇ. 20ರಷ್ಟು ನೀರನ್ನು ಬಳಸಲು ಅನುಮತಿಸಲಾದ ಸಿಂಧೂ ಜಲ ಒಪ್ಪಂದದ ಪರಿಣಾಮಕಾರಿ ರದ್ದತಿಯನ್ನು ಅನುಸರಿಸುತ್ತದೆ.



**ಹೂಳು ತೆಗೆಯುವ ಕೆಲಸ ಪ್ರಾರಂಭ**

ಜಮ್ಮು ಮತ್ತು ಕಾಶ್ಮೀರ, ಪಂಜಾಬ್, ಹರಿಯಾಣ ಮತ್ತು ರಾಜಸ್ಥಾನದಾದ್ಯಂತ ಅಸ್ತಿತ್ವದಲ್ಲಿರುವ ಕಾಲುವೆ ರಚನೆಗಳನ್ನು ನಿರ್ಣಯಿಸಲು ಒಂದು ತಂಡವು ಮುಂದಾಗಿದೆ. ಈ ಕಾಲುವೆಗಳ ಮೂಲಕ ಚೆನಾಬ್‌ನಿಂದ ತಿರುಗಿಸಲಾದ ನೀರನ್ನು ಸರಿಯಾದ ಸ್ಥಿತಿಯಲ್ಲಿ ತಲುಪಿಸಲಾಗುತ್ತಿದೆಯೇ ಎಂದು ನಾವು ಮೌಲ್ಯಮಾಪನ ಮಾಡಬೇಕಾಗಿದೆ ಮತ್ತು ಕಾಲುವೆ ವ್ಯವಸ್ಥೆಯನ್ನು ಪುನರ್ ರಚಿಸಲು ಅಗತ್ಯವಾದ ಹೂಡಿಕೆಯನ್ನು ನಿರ್ಧರಿಸಬೇಕಾಗಿದೆ ಎಂದು ಜಲಶಕ್ತಿ ಸಚಿವಾಲಯದ ಅಧಿಕಾರಿಯೊಬ್ಬರು ಹೇಳಿದ್ದಾರೆ.

ಚೆನಾಬ್-ರವಿ-ಬಿಯಾಸ್-ಸಟ್ಲೆಜ್ ಲಿಂಕ್ ಕಾಲುವೆ ಯೋಜನೆಯ ಜೊತೆಗೆ, ಈ ಉಪಕ್ರಮಗಳನ್ನು ಬೆಂಬಲಿಸಲು ಭಾರತವು ಹಲವಾರು ಹೊಸ ಸಂಗ್ರಹಣೆ ಮತ್ತು ನದಿಯ ಹರಿವಿನ ಯೋಜನೆಗಳನ್ನು ತ್ವರಿತವಾಗಿ ನಡೆಸುತ್ತಿದೆ.

ಐಡಬ್ಲ್ಯೂಟಿ ಅಡಿಯಲ್ಲಿ ಭಾರತವು ಶೇ. 20ರಷ್ಟು ನೀರನ್ನು ಬಳಕೆ ಮಾಡದ ಉದ್ದೇಶಗಳಿಗಾಗಿ ಬಳಸಲು ಅನುಮತಿಸಲಾಗಿದೆ. ಮರು ಮಾತುಕತೆಯ ಸಂದರ್ಭದಲ್ಲಿ ಶೇ. 40ರಷ್ಟು ನೀರನ್ನು ಬಳಸಲು ಅನುಮತಿಯನ್ನು ಕೋರಲು ಯೋಜಿಸಿದೆ ಎಂದು ಅಧಿಕಾರಿಯೊಬ್ಬರು ಹೇಳಿದ್ದಾರೆ.

## ಕಾಲ್ತುಳಿತ ಘಟನೆಯಿಂದ ಸಿಎಂ ಸಿದ್ದರಾಮಯ್ಯ ಬಹಳ ನೊಂದಿದ್ದಾರೆ

• ಉದಯವಾಹಿನಿ, ಚಿಕ್ಕಬಳ್ಳಾಪುರ

ಕಾಲ್ತುಳಿತ ಘಟನೆಯಿಂದ ಸಿಎಂ ಸಿದ್ದರಾಮಯ್ಯ ಬಹಳ ನೊಂದಿದ್ದಾರೆ, ನಮಗೆಲ್ಲಾ ಬಹಳ ದುಃಖ ಆಗಿದೆ. ಸಿಎಂ ಅಂತೂ ಬಹಳ ನೋವು ತಿಂದಿದ್ದಾರೆ ಎಂದು ಸಚಿವ ಎಂಸಿ ಸುಧಾಕರ್ ಹೇಳಿದ್ದಾರೆ. ಸರ್ಕಾರ ತನಿಖೆ ಮಾಡುತ್ತಿದೆ. ಸತ್ಯಾಸತ್ಯತೆ ಬಂದ ಮೇಲೆ ಖಂಡಿತ ಕ್ರಮ ತೆಗೆದುಕೊಳ್ಳುತ್ತಾರೆ. ಸತ್ತವರ ಜೀವ ತಂದುಕೊಡಲು ಸಾಧ್ಯ ಇಲ್ಲ, ಕುಟುಂಬ ಸದಸ್ಯರ ನೋವು ಮರೆಸಲು ಸಾಧ್ಯ ಇಲ್ಲ. ನನ್ನ ಕ್ಷೇತ್ರದಲ್ಲಿ ಇಬ್ಬರು ಹುಡುಗರ ಸಾವಾಗಿದೆ. ನನಗೂ ನೋವಾಗಿದೆ. ನಾನು ಸಹ ಕ್ರಿಕೆಟ್ ಆಟಗಾರ ಪ್ರೇಮಿ, ವಿಶ್ವಕಪ್ ಪಂದ್ಯ ಗೆದ್ದಾಗಲೂ ಈ ರೀತಿ ಸಂಭ್ರಮ ಇರುತ್ತಿರಲಿಲ್ಲ. ಆದರೆ ಪ್ರೀಮಿಯರ್ ಲೀಗ್‌ಗೆ ಜನ ಈ ರೀತಿ ಸಂಭ್ರಮ ಮಾಡುತ್ತಾರೆ. ಮೈಮರೀತಾರೆ ಅನ್ನೋದು ನಾನು ನೋಡಿಲ್ಲ. ಹಳ್ಳಿಗಳಲ್ಲಿ ಸಂಭ್ರಮ ಮನೆ ಮಾಡಿತ್ತು. ಐಪಿಎಲ್ ಆಪರೇಷನ್ ಸಿಂಧೂರದಿಂದ ಕೆಲ ಸಮಯ ವಿಳಂಬ ಆಯಿತು. ಹಾಗಾಗಿ ಆರ್‌ಸಿಬಿ ಮ್ಯಾನೇಜ್‌ಮೆಂಟ್ ಆಟಗಾರರ ಕಮಿಟ್ಮೆಂಟ್‌ನಿಂದ ಸಂಭ್ರಮಾಚರಣೆ ತೀರ್ಮಾನ ಮಾಡಿದ್ದು ನಾವಲ್ಲ ಎಂದರು.

ಒಪನ್ ಪರೇಡ್‌ಗೆ ಬಿಟ್ಟಿಲ್ಲ ಅಂದಾಗ ವಿಪಕ್ಷದವರೇ ಕ್ರೀಡಾಭಿಮಾನಿಗಳ ವಿರೋಧಿ ಸರ್ಕಾರ ಎಂದು ಟ್ವೀಟ್ ಮಾಡಿದ್ದರು. ದುರ್ಘಟನೆ ಆದ ಕೂಡಲೇ ಬೇರೆ ರೀತಿ ಯಾಕೆ ಮಾತಾಡ್ತೀರಾ? ಅನಾಹುತ ಆಗಬಹುದು ಎಂದು ಸರ್ಕಾರದ ಗಮನಕ್ಕೂ ಇತ್ತು. ಐದಾರು ಪಂದ್ಯಕ್ಕೆ ಬರುವ ಜನ ಒಂದೇ ಬಾರಿ ಬಂದಿದ್ದಾರೆ ಎಂದರು.


## ಸೋನಿಯಾ ಗಾಂಧಿ ಆರೋಗ್ಯದಲ್ಲಿ ಏರುಪೇರು

• ಉದಯವಾಹಿನಿ, ಹೊಸದಿಲ್ಲಿ

ಕಾಂಗ್ರೆಸ್ ವರಿಷ್ಠೆ ಸೋನಿಯಾ ಗಾಂಧಿ ಆರೋಗ್ಯದಲ್ಲಿ ಏರುಪೇರಾದ ಕಾರಣ ಹಿಮಾಚಲದ ಶಿಮ್ಲಾದಲ್ಲಿರುವ ಇಂದಿರಾ ಗಾಂಧಿ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಗೆ ದಾಖಲಿಸಲಾಗಿದೆ. ಆರೋಗ್ಯದಲ್ಲಿ ಏರುಪೇರು ಕಂಡ ಕಾರಣ ಕೂಡಲೇ ತಪಾಸಣೆಗಾಗಿ ಆಸ್ಪತ್ರೆಗೆ ಕರೆದೊಯ್ಯಲಾಗಿದೆ.

ಅವರಿಗೆ ಎಂಆರ್‌ಐ ಸ್ಕ್ಯಾನ್ ಮಾಡಲಾಗುತ್ತಿದೆ. ಹಿಮಾಚಲ ಪ್ರದೇಶದ ಮುಖ್ಯಮಂತ್ರಿ ಸುಖವಿಂದರ್ ಸಿಂಗ್ ಸುಖು ಅವರು ಶೀಘ್ರದಲ್ಲೇ ದೆಹಲಿಯ ಆಸ್ಪತ್ರೆಗೆ ಭೇಟಿ ನೀಡಲಿದ್ದಾರೆ. ಸೋನಿಯಾ ಗಾಂಧಿ ಅವರು ಮೇ 27 ರಂದು ಕೊನೆಯ ಬಾರಿಗೆ ಸಾರ್ವಜನಿಕವಾಗಿ ಕಾಣಿಸಿಕೊಂಡರು.

**ಫೆಬ್ರವರಿಯಲ್ಲೂ ಆಸ್ಪತ್ರೆಗೆ ದಾಖಲಾಗಿದ್ದರು:** ಸೋನಿಯಾ ಗಾಂಧಿ ಅವರು ಈ ಹಿಂದೆ ಹಲವು ಬಾರಿ ಆಸ್ಪತ್ರೆಗೆ ದಾಖಲಾಗಿದ್ದರು.ಈ ವರ್ಷದ ಫೆಬ್ರವರಿಯಲ್ಲೂ ಸೋನಿಯಾ ಗಾಂಧಿ ಆಸ್ಪತ್ರೆಗೆ ದಾಖಲಾಗಿದ್ದರು. ಅಂದು ಹೊಟ್ಟೆಗೆ ಸಂಬಂಧಿಸಿದ ಸಮಸ್ಯೆಯಿಂದ ಬಳಲುತ್ತಿದ್ದ ಅವರನ್ನು ದೆಹಲಿಯ ಸರ್ ಗಂಗಾ ರಾಮ್ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಸೋನಿಯಾ ಗಾಂಧಿ ಅವರಿಗೆ ಉಸಿರಾಟದ ತೊಂದರೆ ಮತ್ತು ಕೋವಿಡ್ ನಂತರದ ಸಮಸ್ಯೆಗಳು ಇದ್ದವು. 2022 ರಲ್ಲಿ, ಉಸಿರಾಟದ ತೊಂದರೆ



ಮತ್ತು ವೈರಲ್ ಜ್ವರದಿಂದಾಗಿ ಅವರನ್ನು ದೆಹಲಿಯ ಸರ್ ಗಂಗಾರಾಮ್ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಜೂನ್ 2022 ರಲ್ಲಿ ಕೊರೋನಾ ಸೋಂಕಿಗೆ ಒಳಗಾದ ನಂತರ ಮತ್ತೆ ಆಸ್ಪತ್ರೆಗೆ ಸೇರಬೇಕಾಯಿತು. ಸೆಪ್ಟೆಂಬರ್ 2022 ರಲ್ಲಿಯೂ ಆರೋಗ್ಯ ಸಮಸ್ಯೆಗಳಿಂದಾಗಿ ದೆಹಲಿಯ ಆಸ್ಪತ್ರೆಗೆ ದಾಖಲಾಗಿದ್ದರು.

ಅಧ್ಯಕ್ಷೆ ಸೋನಿಯಾ ಗಾಂಧಿ ಅವರನ್ನು ಸಣ್ಣ ಆರೋಗ್ಯ ಸಮಸ್ಯೆಗಳ ಕಾರಣದಿಂದ ಸಾಮಾನ್ಯ ತಪಾಸಣೆಗಾಗಿ ಶಿಮ್ಲಾದ ಇಂದಿರಾ ಗಾಂಧಿ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಗೆ ಕರೆತರಲಾಗಿದೆ. ವೈದ್ಯರು ಅವರನ್ನು ಪರೀಕ್ಷಿಸುತ್ತಿದ್ದಾರೆ. ಅವರು ಸ್ಥಿರವಾಗಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ನಿರೀಕ್ಷಿಸಲಾಗಿದೆ ಎಂದು ಪ್ರಧಾನ ಸಲಹೆಗಾರರಾದ ನರೇಶ್ ಚೌಹಾಣ್ ಹೇಳಿದ್ದಾರೆ.

**ಶಿಮ್ಲಾದ ಇಂದಿರಾ ಗಾಂಧಿ ಆಸ್ಪತ್ರೆಗೆ ದಾಖಲು**

ಸೋನಿಯಾ ಗಾಂಧಿ ಅವರು ತಮ್ಮ ಪುತ್ರಿ ಪ್ರಿಯಾಂಕಾ ಗಾಂಧಿ ವಾದ್ರಾ ಅವರ ಮನೆಯಲ್ಲಿ ತಂಗಿದ್ದರು. ಅವರು ವೈಯಕ್ತಿಕ ಭೇಟಿಗಾಗಿ ಶಿಮ್ಲಾಕ್ಕೆ ಬಂದಿದ್ದರು. ಆದರೆ, ಇದ್ದಕ್ಕಿದ್ದಂತೆ ಅವರ ಆರೋಗ್ಯ ಹದಗೆಟ್ಟಿದೆ ಎನ್ನಲಾಗಿದೆ.

## ಕಮಿಷನರ್ ಅಮಾನತು : ಸಿವಿಲ್ ಡ್ರೆಸ್ಸಿನಲ್ಲೇ ಅಧಿಕಾರ ಹಸ್ತಾಂತರ

● ತಡರಾತ್ರಿಯೇ ಸೀಮಂತ್ ಕುಮಾರ್ ಸಿಂಗ್‌ರಿಗೆ ಅಧಿಕಾರ ಸ್ವೀಕರಿಸಲು ಸೂಚನೆ ● ಯಾರದ್ದೋ ತಪ್ಪಿಗೆ ಯಾರಿಗೂ ತಲೆದಂಡ

• ಉದಯವಾಹಿನಿ ಬೆಂಗಳೂರು

ನಗರದ ಪೊಲೀಸ್ ಆಯುಕ್ತರಾಗಿದ್ದ ಬಿ.ದಯಾನಂದ್ ಅವರನ್ನು ಅಮಾನತು ಮಾಡಿದ ವಿಚಾರ, ಸಾಕಷ್ಟು ವಿರೋಧಕ್ಕೆ ಕಾರಣವಾಗುತ್ತಿರುವ ಬೆನ್ನಲ್ಲೇ, ರಾತ್ರಿಯೇ, ಅಧಿಕಾರ ಹಸ್ತಾಂತರ ತರಾತುರಿಯಲ್ಲಿ ನಡೆದಿದೆ. ಸೀಮಂತ್ ಕುಮಾರ್ ಸಿಂಗ್, ನೂತನ ಕಮಿಷನರ್ ಆಗಿ ಅಧಿಕಾರ ಸ್ವೀಕರಿಸಿಕೊಂಡಿದ್ದಾರೆ.

ಎಡಿಜಿಪಿ ಮಟ್ಟದಲ್ಲಿ ಅಮಾನತು ಆದ ಉದಾಹರಣೆಗಳೇ ಕಮ್ಮಿ ಎನ್ನುವ ರೀತಿಯಲ್ಲಿ, ಆಶ್ಚರ್ಯಕರ ರೀತಿಯಲ್ಲಿ ದಯಾನಂದ್ ಅವರ ಅಮಾನತು ಆದೇಶ ಹೊರಬಿದ್ದಿತ್ತು. ಸಚಿವ ಸಂಪುಟ ಸಭೆಯ ನಂತರ, ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿಕೆ ಶಿವಕುಮಾರ್, ಗೃಹ ಸಚಿವ ಡಾ.ಪರಮೇಶ್ವರ ಮತ್ತು ಕಾನೂನು ಸಚಿವ ಎಚ್.ಕೆ.ಪಾಟೀಲ್ ಅವರು ಮಾತ್ರ ಸಭೆಯಲ್ಲಿ ಉಳಿದುಕೊಂಡಿದ್ದರು.

**ಮುಖ್ಯಮಂತ್ರಿ ಅನುಮತಿ ಕಡ್ಡಾಯ**

ಆ ವೇಳೆ, ದಯಾನಂದ್ ಅವರನ್ನು ಅಮಾನತು ಮಾಡುವ ನಿರ್ಧಾರಕ್ಕೆ ಬರಲಾಯಿತು ಎಂದು ಹೇಳಲಾಗುತ್ತಿದೆ. ಸಚಿವ ಸಂಪುಟ ಸಭೆಯಲ್ಲಿ ಸಚಿವರು ಚಿನ್ನಸ್ವಾಮಿ ಕಾಲ್ತುಳಿತ ಘಟನೆಗೆ ಸಂಬಂಧಿಸಿದಂತೆ ಅಸಮಾಧಾನವನ್ನು ಹೊರಹಾಕಿದ್ದರು ಎಂದು ಹೇಳಲಾಗುತ್ತಿದೆ. ಗುಪ್ತಚರ ವೈಫಲ್ಯದ ಬಗ್ಗೆ ಸಂಪುಟ ಸಭೆಯಲ್ಲಿ ಅಸಮಾಧಾನವಿದ್ದರೂ, ಬೆಂಗಳೂರು ಪೊಲೀಸರ ಅಸಾಹಯಕತೆಯ ಬಗ್ಗೆ ಎಲ್ಲರಿಗೂ ಅರಿವಿತ್ತು.

ಆದರೆ, ಹಲವು ಒತ್ತಡಗಳ ನಡುವೆ ಮೇಜರ್ ನಿರ್ಧಾರಕ್ಕೆ ಬರಬೇಕಾಗಿತ್ತು. ಹಾಗಾಗಿ, ಸಂಪುಟ ಸಭೆಯ ನಂತರ, ಮನೆಗೆ ತೆರಳಿದ್ದ ಅಧಿಕಾರಿಗಳನ್ನು ವಾಪಸ್ ವಿಧಾನಸೌಧಕ್ಕೆ ಕರೆಸಲಾಯಿತು. ಆಯ್ದ ಡಿಪಿಎಆರ್ (ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ) ಅಧಿಕಾರಿಗಳನ್ನೂ ವಾಪಸ್ ಕರೆಸಿಕೊಳ್ಳಲಾಯಿತು. ಆ ವೇಳೆ, ದಯಾನಂದ್ ಅವರನ್ನು ಅಮಾನತು ಮಾಡುವ ನಿರ್ಧಾರಕ್ಕೆ ಬರಲಾಯಿತು. ಇದರ ಆದೇಶ ಈಗಲೇ ಸಿದ್ದವಾಗಬೇಕು ಎನ್ನುವ ಸೂಚನೆ ಸಿಎಂ ಕಡೆಯಿಂದ ಬಂತು ಎನ್ನುವ ಸುದ್ದಿ ಹರಿದಾಡುತ್ತಿದೆ. ಐಪಿಎಸ್ ಅಥವಾ ಐಎಎಸ್ ಅಧಿಕಾರಿಗಳ ಅಮಾನತು/ವರ್ಗಾವಣೆ ಆದೇಶವನ್ನು ಡಿಪಿಎಆರ್ ಇಲಾಖೆ ಹೊರಡಿಸುವ ಮುನ್ನ ಮುಖ್ಯಮಂತ್ರಿಗಳ ಅನುಮತಿಯನ್ನು ಪಡೆಯುವುದು ಕಡ್ಡಾಯ. ಹಾಗಾಗಿ, ಅಮಾನತಿನ ಡ್ರಾಫ್ಟ್ ರೆಡಿ ಮಾಡಿ, ಸಿಎಂ ಸಹಿಗೆ ಕಳುಹಿಸಲಾಯಿತು. ಅಲ್ಲಿಂದ ಬಂದ ಮೇಲೆ, ಅಧಿಕೃತ ಆದೇಶ ಹೊರಡಿಸಲಾಯಿತು. ಅಷ್ಟೊತ್ತಿಗಾಗಲೇ, ತಡರಾತ್ರಿಯಾಗಿತ್ತು ಎಂದು ವರದಿಯಾಗಿದೆ. ಆದೇಶ ಹೊರಬಿದ್ದ ಕೂಡಲೇ, ಪೊಲೀಸ್ ಕಮಿಷನರ್ ಹುದ್ದೆಯನ್ನು ಖಾಲಿ ಬಿಡುವಂತಿಲ್ಲ, ಯಾಕೆಂದರೆ ಅಮಾನತು ಆದೇಶವನ್ನು ಪ್ರಶ್ನಿಸಿ, ನ್ಯಾಯಾಲಯದ ಮೊರೆ ಹೋಗುವ ಸಾಧ್ಯತೆಯಿದೆ.

ಇದನ್ನರಿತು, ಸೀಮಂತ್ ಕುಮಾರ್ ಸಿಂಗ್ ಅವರ ಹೆಸರನ್ನು ಸಿಎಂ ಫೈನಲ್ ಮಾಡಿದರು. ಗೃಹ ಸಚಿವರ ಮೂಲಕ, ಅವರಿಗೆ ಫೋನ್ ಮಾಡಿಸಿ, ಈ ಕೂಡಲೇ ಅಧಿಕಾರ ಸ್ವೀಕರಿಸುವಂತೆ ಸೂಚಿಸಲಾಯಿತು.



### ತಡರಾತ್ರಿ ನಡೆದ ಕ್ಷಿಪ್ರ ಬೆಳವಣಿಗೆ

ಗೃಹ ಸಚಿವರ ಆದೇಶದ ಬೆನ್ನಲ್ಲೇ ತರಾತುರಿಯಲ್ಲಿ ಆಗಮಿಸಿದ ಸೀಮಂತ್ ಕುಮಾರ್ ಸಿಂಗ್, ಪೊಲೀಸ್ ಆಯುಕ್ತರ ಪ್ರಧಾನ ಕಚೇರಿಗೆ ಆಗಮಿಸಿದರು. ತಡರಾತ್ರಿ ನಡೆದ ಕ್ಷಿಪ್ರ ಬೆಳವಣಿಗೆಯಿಂದ ವಿಚಲಿತರಾದರೂ, ಕರ್ತವ್ಯ ಪಾಲನೆ ದೃಷ್ಟಿಯಲ್ಲಿ ಬಿ.ದಯಾನಂದ್, ಕಮಿಷನರ್ ಕಚೇರಿಗೆ, ಸಿವಿಲ್ ಡ್ರೆಸ್ಸಿನಲ್ಲೇ ಬಂದು ಅಧಿಕಾರ ಹಸ್ತಾಂತರಿಸಿದರು. ಶಿಷ್ಟಾಚಾರದ ಪ್ರಕಾರ, ಬೇಟನ್ ಹಸ್ತಾಂತರವನ್ನು ಈ ಸಂದರ್ಭದಲ್ಲಿ ಮಾಡಬೇಕು. ಆದರೆ, ದಯಾನಂದ್ ಅವರು ಅಮಾನತು ಆಗಿದ್ದರಿಂದ, ಬೇಟನ್ ಪಡೆಯದೆಯೇ, ಸೀಮಂತ್ ಕುಮಾರ್ ಸಿಂಗ್, ಬೆಂಗಳೂರು ಕಮಿಷನರ್ ಆಗಿ ಅಧಿಕಾರ ಸ್ವೀಕರಿಸಿದರು ಎಂದು ವರದಿಯಾಗಿದೆ.

**ಈ ದಿನದ ದರ** ಪೆಟ್ರೋಲ್: 103.50 ₹/L ಡೀಸೆಲ್ : 90.03 ₹/L ಬಂಗಾರ: ₹9,797/Gram24ct ₹8,980/Gram22ct ಬೆಳ್ಳಿ: ₹107.00/Gram

## ಕೆ.ಜಿ.ಹಳ್ಳಿ ಪೊಲೀಸ್ ಠಾಣೆ ಸುಟ್ಟ ಪ್ರಕರಣ: ಜಾಮೀನಿಗೆ ಎನ್‌ಐಎ ಆಕ್ಷೇಪ

• **ಉದಯವಾಹಿನಿ, ಬೆಂಗಳೂರು**

ಯಾವುದೇ ಆರೋಪಿಯನ್ನು ಮಾನವೀಯ ನೆಲೆಗಟ್ಟಿನಲ್ಲಿ ಪರಿಗಣಿಸಲು ಎಷ್ಟು ಆದ್ಯತೆ ನೀಡಲಾಗುತ್ತದೆಯೋ ಅಷ್ಟೇ ಸರಿಸಮಾನವಾಗಿ ರಾಷ್ಟ್ರೀಯ ಪ್ರಜ್ಞೆಯ ವಿಷಯ ಬಂದಾಗ ಎನ್‌ಐಎ ಕರ್ತವ್ಯಪ್ರಜ್ಞೆಯಿಂದ ಹಿಂದೆ ಸರಿಯುವ ಪ್ರಶ್ನೆಯೇ ಇಲ್ಲ' ಎಂದು ಎನ್‌ಐಎ ಪರ ವಕೀಲರು ಹೈಕೋರ್ಟ್‌ಗೆ ಅರುಹಿದರು. ಕೆ.ಜಿ.ಹಳ್ಳಿ ಪೊಲೀಸ್ ಠಾಣೆ ಸುಟ್ಟ ಪ್ರಕರಣದಲ್ಲಿ 6ನೇ ಆರೋಪಿಯಾಗಿರುವ ನಗರದ ಬೈರಪ್ಪನ ಲೇಔಟ್ ನಿವಾಸಿ ಜಿಯಾ ಉರ್ ರಹಮಾನ್ ಅಲಿಯಾಸ್ ಜಿಯಾ ಅವರು ವೈದ್ಯಕೀಯ ಚಿಕಿತ್ಸೆ ಆಧಾರದಲ್ಲಿ ಕೋರಿರುವ ಜಾಮೀನು ಅರ್ಜಿಯನ್ನು ನ್ಯಾಯಮೂರ್ತಿ ಶ್ರೀನಿವಾಸ ಹರೀಶ್ ಕುಮಾರ್ ನೇತೃತ್ವದ ವಿಭಾಗೀಯ ನ್ಯಾಯಪೀಠ ಶುಕ್ರವಾರ ವಿಚಾರಣೆ ನಡೆಸಿತು. ಎನ್‌ಐಎ ಪರ ವಕೀಲ ಪಿ.ಪ್ರಸನ್ನ ಕುಮಾರ್ 'ಮೇಲ್ಮನವಿದಾರರು ಸಾಮಾನ್ಯ ಕಾಯಿಲೆಯ ನೆಪದಲ್ಲಿ ನಾಲ್ಕನೇ ಬಾರಿಗೆ ವೈದ್ಯಕೀಯ ನೆರವಿನಲ್ಲಿ ಜಾಮೀನು ಕೋರುತ್ತಿದ್ದಾರೆ. ಹಿಂದಿನ ಮೂರು ಬಾರಿ ಎನ್‌ಐಎ ಆಕ್ಷೇಪ ವ್ಯಕ್ತಪಡಿಸಿಲ್ಲ. ಇಂತಹ ಚಾಳಿ ಮುಂದುವರಿಸಲು ಅವಕಾಶ ನೀಡದೆ ಮೆರಿಟ್ ಮೇಲೆ ವಿಚಾರಣೆ ನಡೆಸಬೇಕು' ಎಂದು ಕೋರಿದರು. ಒಂದು ಹಂತದಲ್ಲಿ ಜಾಮೀನು ನೀಡಲು ಮುಂದಾಗಿದ್ದ ನ್ಯಾಯಪೀಠ ಎನ್‌ಐಎ ಆಕ್ಷೇಪವನ್ನು ಗಂಭೀರವಾಗಿ ಪರಿಗಣಿಸಿ ಮೆರಿಟ್ ಮೇಲೆ ವಾದ ಮಂಡಿಸಲು ಮೇಲ್ಮನವಿದಾರ ಪರ ವಕೀಲರಿಗೆ ಸೂಚಿಸಿ ಜಾಮೀನು ಅವಧಿಯನ್ನು ಇದೇ 24ರವರೆಗೆ ಮುಂದುವರಿಸಿತು. ಅಂತೆಯೇ ವಿಚಾರಣೆಯನ್ನು ಇದೇ 23ಕ್ಕೆ ಮುಂದೂಡಿತು.

## ಕಾಲ್ತುಳಿತ ಘಟನೆ ಬೆನ್ನಲ್ಲೇ ಐಪಿಎಸ್ ಅಧಿಕಾರಿಗಳ ವರ್ಗಾವಣೆ

• **ಉದಯವಾಹಿನಿ, ಬೆಂಗಳೂರು**

ಆರ್‌ಸಿಬಿ ವಿಜಯೋತ್ಸವದ ವೇಳೆ ಸಂಭವಿಸಿದ ಕಾಲ್ತುಳಿತದ ಘಟನೆ ಬೆನ್ನಲ್ಲೇ ಸರ್ಕಾರ ಹಲವು ಐಪಿಎಸ್ ಅಧಿಕಾರಿಗಳನ್ನು ವರ್ಗಾವಣೆ ಮಾಡಿ ಆದೇಶ ಹೊರಡಿಸಿದೆ. ಕಾನೂನು ಮತ್ತು ಸುವ್ಯವಸ್ಥೆ ವಿಭಾಗದ ಎಡಿಜಿಪಿ ಆರ್ .ಹಿತೇಂದ್ರ ಅವರನ್ನು ಸಂಚಾರ ಮತ್ತು ರಸ್ತೆ ಸುರಕ್ಷತಾ ವಿಭಾಗಕ್ಕೆ ವರ್ಗಾವಣೆ ಮಾಡಲಾಗಿದೆ. ಸಂಪರ್ಕ, ಲಾಜಿಸ್ಟಿಕ್ ಮತ್ತು ಆಧುನೀಕರಣ ವಿಭಾಗದ ಎಡಿಜಿಪಿ ಎಸ್.ಮುರುಗನ್ ಅವರನ್ನು ನೇಮಕಾತಿ ವಿಭಾಗಕ್ಕೆ ನಿಯೋಜಿಸಲಾಗಿದೆ. ನೇಮಕಾತಿ ವಿಭಾಗದ ಎಡಿಜಿಪಿ ಕೆ.ವಿ.ಶರತ್ ಚಂದ್ರ ಅವರನ್ನು ಸರ್ಕಾರದ ಪ್ರಧಾನ ಕಾರ್ಯದರ್ಶಿಯಾಗಿ ನಿಯೋಜಿಸಲಾಗಿದೆ. ಇವರಿಗೆ ರಾಜ್ಯ ಪೊಲೀಸ್ ವಸತಿ, ಮೂಲಸೌಕರ್ಯ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕರ ಹೆಚ್ಚುವರಿ ಜವಾಬ್ದಾರಿ ನೀಡಲಾಗಿದೆ ಎಂದು ಆದೇಶದಲ್ಲಿ ತಿಳಿಸಲಾಗಿದೆ.

**ಅಕ್ರಂ ಪಾಷಾ, ಶೆಟ್ಟಣ್ಣವರ್ ವರ್ಗಾವಣೆ:** ಬೆಂಗಳೂರು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಆಯುಕ್ತ ಅಕ್ರಂ ಪಾಷಾ ಮತ್ತು ಇಲಾಖೆಯ ಕಾರ್ಯದರ್ಶಿ ಸಂಜಯ್ ಶೆಟ್ಟಣ್ಣವರ್ ಅವರನ್ನು ವರ್ಗಾಯಿಸಲಾಗಿದ್ದು, ಇಬ್ಬರಿಗೂ ಯಾವುದೇ ಹುದ್ದೆ ತೋರಿಸಿಲ್ಲ. ಆಯುಕ್ತರ ಹುದ್ದೆಯನ್ನು ಗೃಹ ಮಂಡಳಿ ಆಯುಕ್ತ ದಯಾನಂದ ಕೆ.ಎ ಅವರಿಗೆ ಹೆಚ್ಚುವರಿಯಾಗಿ ಮತ್ತು ಕಾರ್ಯದರ್ಶಿ ಹುದ್ದೆಯನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಕಾರ್ಯದರ್ಶಿ ತುಳಸಿ ಮದ್ದಿನೇನಿ ಅವರಿಗೆ ಹೆಚ್ಚುವರಿಯಾಗಿ ನೀಡಲಾಗಿದೆ.

## ಜೂನ್ 8 ರಿಂದ ರಾಜ್ಯದಲ್ಲಿ ಮತ್ತೆ ಮಳೆ: 11 ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್ ಘೋಷಣೆ

• **ಉದಯವಾಹಿನಿ, ಬೆಂಗಳೂರು**

ರಾಜಧಾನಿ ಬೆಂಗಳೂರು ಸೇರಿದಂತೆ ಬಹುತೇಕ ಜಿಲ್ಲೆಗಳಲ್ಲಿ ಕೊಂಚ ವಿರಾಮವಾಗಿದ್ದ ಮುಂಗಾರು ಮಳೆ ನಾಳೆ ಜೂನ್ 8ರಿಂದ ಮತ್ತೆ ಚುರುಕಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಉತ್ತರ ಕರ್ನಾಟಕದ 11 ಜಿಲ್ಲೆಗಳಿಗೆ ಯೆಲ್ಲೊ ಅಲರ್ಟ್ ಘೋಷಿಸಲಾಗಿದೆ. ಕೃಷ್ಣಾ ನದಿ ತೀರದ ಜನರಿಗೆ ಪ್ರವಾಹದ ಎಚ್ಚರಿಕೆ ನೀಡಲಾಗಿದೆ, ಜಲಾಶಯದಿಂದ ನೀರು ಬಿಡುಗಡೆಯಾಗುವ ಸಾಧ್ಯತೆ ಇದೆ. ದಾವಣಗೆರೆಯಲ್ಲಿ ಮಳೆ ಬಿಡುವು ನೀಡಿದ್ದು, ಬಿತ್ತನೆ ಕಾರ್ಯ ಚುರುಕುಗೊಂಡಿದೆ. ಬೆಳಗಾವಿ, ಧಾರವಾಡ, ಹಾವೇರಿ, ಗದಗ, ಕೊಪ್ಪಳ, ಬಾಗಲಕೋಟೆ, ವಿಜಯಪುರ, ರಾಯಚೂರು, ಯಾದಗಿರಿ, ಕಲಬುರ್ಗಿ, ಬೀದರ್ ಜಿಲ್ಲೆಗಳಿಗೆ ಭಾರಿ ಮಳೆಯಾಗಲಿದ್ದು, ಇಂದು ಯೆಲ್ಲೋ ಅಲರ್ಟ್ ಕೊಡಲಾಗಿದೆ. ಜೂನ್ 9 ರವರೆಗೆ ರಾಜ್ಯಾದ್ಯಂತ ಅತಿ ಸಾಧಾರಣ ಮಳೆಯಾಗಲಿದೆ. ಜೂ. 10 ರಿಂದ 12ರವರೆಗೆ ಸಾಧಾರಣ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

## ತನಿಖೆಗಿಳಿದ ಸಿಐಡಿ ; ಚಿನ್ನಸ್ವಾಮಿ ಸ್ಟೇಡಿಯಂಗೆ ಭೇಟಿ, ಮಾಹಿತಿ ಸಂಗ್ರಹ

• **ಉದಯವಾಹಿನಿ, ಬೆಂಗಳೂರು**

ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡದ ಸಂಭ್ರಮಾಚರಣೆ ವೇಳೆ ಚಿನ್ನಸ್ವಾಮಿ ಕ್ರೀಡಾಂಗಣದ ಹೊರಗೆ ಸಂಭವಿಸಿದ ಕಾಲ್ತುಳಿತದಲ್ಲಿ 11 ಜನ ಮೃತಪಟ್ಟಿದ್ದು, 56 ಮಂದಿ ಗಾಯಗೊಂಡಿದ್ದಾರೆ. ಕಾಲ್ತುಳಿತ ಪ್ರಕರಣವನ್ನು ರಾಜ್ಯ ಸರ್ಕಾರ ಸಿಐಡಿಗೆ ವಹಿಸಿದ್ದು, ಸಿಐಡಿ ವಿಶೇಷ ವಿಚಾರಣಾ ದಳದ ಎಸ್‌ಪಿ ಶುಭನ್ವಿತಾ ನೇತೃತ್ವದಲ್ಲಿ ತನಿಖೆ ಆರಂಭವಾಗಿದೆ. ಕಾಲ್ತುಳಿತ ಪ್ರಕರಣದ ತನಿಖೆಯ ಭಾಗವಾಗಿ ಸಿಐಡಿ ಅಧಿಕಾರಿಗಳ ತಂಡ ಶುಕ್ರವಾರ ಚಿನ್ನಸ್ವಾಮಿ ಸ್ಟೇಡಿಯಂನಲ್ಲಿರುವ ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆ(ಕೆಎಸ್‌ಸಿಎ) ಕಚೇರಿಗೆ ಭೇಟಿ ನೀಡಿ, ಕಾಲ್ತುಳಿತ ನಡೆದ ಸ್ಥಳದಲ್ಲಿ ಪರಿಶೀಲನೆ ನಡೆಸಿದೆ. ಗೇಟ್ ನಂಬರ್ 7, 19, 18, 16 ಮತ್ತು 21ರ ಬಳಿ ಹೆಚ್ಚು ಅನಾಹುತ ಆಗಿತ್ತು. ಅಲ್ಲಿಗೆ ಭೇಟಿ ನೀಡಿದ ಸಿಐಡಿ ತಂಡ ಪರಿಶೀಲನೆ ನಡೆಸಿದೆ. ಪ್ರಕರಣದ ತನಿಖೆಯನ್ನು ಮತ್ತಷ್ಟು ಚುರುಕುಗೊಳಿಸಲು ಸಿಐಡಿ ಈಗಾಗಲೇ ಬಂಧನಕ್ಕೆ ಒಳಗಾಗಿರುವ ನಾಲ್ವರು ಆರೋಪಿಗಳನ್ನು ವಶಕ್ಕೆ ಪಡೆಯಲು ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಲಿದೆ.


# ಸಿಎಂ, ಡಿಸಿಎಂ, ಗೃಹ ಸಚಿವರ ರಾಜೀನಾಮೆಗೆ ಎಚ್‌ಡಿಕೆ ಆಗ್ರಹ

### ನೈತಿಕತೆ ಇದ್ದರೆ ರಾಜೀನಾಮೆ ನೀಡಬೇಕು ಎಂದು ಜೆಡಿಎಸ್ ನಾಯಕ, ಕೇಂದ್ರ ಸಚಿವ ಎಚ್‌ಡಿ ಕುಮಾರಸ್ವಾಮಿ ಹೇಳಿಕೆ

• **ಉದಯವಾಹಿನಿ, ಬೆಂಗಳೂರು**

ಜೂನ್ 4 ರಂದು ಎಂ ಚಿನ್ನಸ್ವಾಮಿ ಕ್ರೀಡಾಂಗಣದ ಹೊರಗೆ ಸಂಭವಿಸಿದ ಕಾಲ್ತುಳಿತದಲ್ಲಿ 11 ಜನರು ಸಾವಿಗೀಡಾಗಿದ್ದು, ದುರಂತದ ಹೊಣೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಮತ್ತು ಗೃಹ ಸಚಿವ ಜಿ ಪರಮೇಶ್ವರ ಹೊತ್ತುಕೊಳ್ಳಬೇಕು. ಅವರಿಗೆ ನೈತಿಕತೆ ಇದ್ದರೆ ರಾಜೀನಾಮೆ ನೀಡಬೇಕು ಎಂದು ಜೆಡಿಎಸ್ ನಾಯಕ ಮತ್ತು ಕೇಂದ್ರ ಸಚಿವ ಎಚ್‌ಡಿ ಕುಮಾರಸ್ವಾಮಿ ಹೇಳಿದ್ದಾರೆ.

ನಗರ ಪೊಲೀಸ್ ಆಯುಕ್ತರು ಸೇರಿದಂತೆ ಐವರು ಪೊಲೀಸ್ ಅಧಿಕಾರಿಗಳನ್ನು ಅಮಾನತುಗೊಳಿಸಿದ್ದಕ್ಕಾಗಿ ಅವರು ಸರ್ಕಾರವನ್ನು ತರಾಟೆಗೆ ತೆಗೆದುಕೊಂಡರು. ಈ ಅಹಿತಕರ ಘಟನೆಗೆ ಸಂಬಂಧಿಸಿದಂತೆ ಐವರು ಪೊಲೀಸ್ ಅಧಿಕಾರಿಗಳನ್ನು ತರಾತುರಿಯಲ್ಲಿ ಅಮಾನತುಗೊಳಿಸಿರುವುದು ಅನಗತ್ಯ. ಸರ್ಕಾರದ ತಪ್ಪುಗಳಿಗೆ ಅಧಿಕಾರಿಗಳನ್ನು ಬಲಿ ಪಶುಗಳನ್ನಾಗಿ ಮಾಡಿದರೆ, ಅಧಿಕಾರಿಗಳು ಪರಿಣಾಮಕಾರಿಯಾಗಿ ಕೆಲಸ ಮಾಡಲು ಸಾಧ್ಯವೇ ಸರ್ಕಾರ ಇದರ ಬಗ್ಗೆ ಯೋಚಿಸಬೇಕಿತ್ತು' ಎಂದು ಕುಮಾರಸ್ವಾಮಿ ಹೇಳಿದರು. ಇಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸರ್ಕಾರದ ನೇತೃತ್ವ ವಹಿಸುವವರು ಪಾರದರ್ಶಕ, ಸತ್ಯ ಮತ್ತು



ಉದಯವಾಹಿನಿ ಚಿತ್ರ

ನಿಷ್ಠಾವಂತ ಆಡಳಿತವನ್ನು ನೀಡುವುದಾಗಿ ಹೇಳಿಕೊಳ್ಳುತ್ತಾರೆ ಮತ್ತು ಅವರು ತೆಗೆದುಕೊಂಡ ನಿರ್ಧಾರಗಳ ಬಗ್ಗೆ ಸಾರ್ವಜನಿಕ ಅಭಿಪ್ರಾಯವನ್ನು ಅರ್ಥಮಾಡಿಕೊಳ್ಳಬೇಕು ಎಂದರು.

ಜೂನ್ 3ರಂದು ಪಂದ್ಯ ಪ್ರಾರಂಭವಾಗುವ ಮೊದಲೇ, ಜೂನ್ 4ರಂದು ಕ್ರೀಡಾಂಗಣದಲ್ಲಿ ವಿಜಯೋತ್ಸವ ಆಚರಿಸಲು ಅನುಮತಿ ಕೋರಲಾಗಿತ್ತು ಎಂದು ಕಾಲ್ತುಳಿತ ಘಟನೆಗೆ ಸಂಬಂಧಿಸಿದಂತೆ ಎಫ್‌ಐಆರ್ ಹೇಳುತ್ತದೆ.

ಫೈನಲ್ ಪಂದ್ಯ ಸಂಜೆ 7.30ಕ್ಕೆ (ಜೂನ್ 3 ರಂದು) ಪ್ರಾರಂಭವಾಯಿತು. ಆದರೆ, ಮರುದಿನದ ಆಚರಣೆಗಾಗಿ ಸಂಜೆ 6 ಗಂಟೆಗೆ ಅರ್ಜಿಯನ್ನು ಸಲ್ಲಿಸಲಾಯಿತು. ಹಾಗಿದ್ದರೆ, ಪಂದ್ಯವನ್ನು ಗೆಲ್ಲುವ ಕನಸು ಕಂಡಿದ್ದರೇ ವಿಧಾನಸೌಧದ ಮುಂದೆ ಆಚರಣೆಗಾಗಿ ಡಿಎಪಿಆರ್‌ಗೆ ಮತ್ತೊಂದು ಅರ್ಜಿ ಸಲ್ಲಿಸಲಾಯಿತು. ಆ ನಿರ್ಧಾರದ ಹಿಂದೆ ಇದ್ದದ್ದು ಯಾರು ಆ ದಿನ (ಜೂನ್ 4) ಬೆಳಿಗ್ಗೆ 7.30ಕ್ಕೆ ಪೊಲೀಸ್ ಆಯುಕ್ತರ ಮೇಲೆ ಅನುಮತಿಗಾಗಿ ಒತ್ತಡ ಹೇರಿದವರು ಯಾರು' ಎಂದು ಕುಮಾರಸ್ವಾಮಿ ಪ್ರಶ್ನಿಸಿದರು.

ಬರೋಬ್ಬರಿ 18 ವರ್ಷಗಳ ಐಪಿಎಲ್ ಟ್ರೋಫಿ ಎತ್ತಿ ಹಿಡಿದ ಹಿನ್ನಲೆಯಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡದ ವಿಜಯೋತ್ಸವದಲ್ಲಿ ಭಾಗವಹಿಸಲು ಜೂನ್ 4ರಂದು ಇಲ್ಲಿನ ಚಿನ್ನಸ್ವಾಮಿ ಕ್ರೀಡಾಂಗಣದ ಮುಂದೆ ಹೆಚ್ಚಿನ ಸಂಖ್ಯೆಯ ಜನರು ಸೇರಿದ್ದರು. ಈ ವೇಳೆ ಉಂಟಾದ ಕಾಲ್ತುಳಿತದಲ್ಲಿ 11 ಜನರು ಪ್ರಾಣ ಕಳೆದುಕೊಂಡಿದ್ದರು ಮತ್ತು 56 ಜನರು ಗಾಯಗೊಂಡರು. 2006ರಲ್ಲಿ ಎಚ್‌ಡಿ ಕುಮಾರಸ್ವಾಮಿ ಅವರು ಜೆಡಿಎಸ್-ಬಿಜೆಪಿ ಸಮ್ಮಿಶ್ರ ಸರ್ಕಾರದ ಮುಖ್ಯಮಂತ್ರಿಯಾಗಿದ್ದಾಗ ವರನಟ ಡಾ. ರಾಜ್‌ಕುಮಾರ್ ಅವರ ನಿಧನದ ನಂತರ ಕಾನೂನು ಸುವ್ಯವಸ್ಥೆ ಹದಗೆಟ್ಟಿದ್ದನ್ನು ಕರ್ನಾಟಕ ಕಾಂಗ್ರೆಸ್ ನೆನಪಿಸಿಕೊಂಡಿದ್ದು, ಆಗ ಕುಮಾರಸ್ವಾಮಿ ರಾಜೀನಾಮೆ ನೀಡಿದ್ದರೇ ಎಂದು ಪ್ರಶ್ನಿಸಿದೆ.

> **ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿ, ಗೃಹ ಸಚಿವರು ಈ ಕಾಲ್ತುಳಿತದ ಜವಾಬ್ದಾರಿಯನ್ನು ಹೊರಬೇಕಾಗುತ್ತದೆ ಮತ್ತು ಈ ಮೂವರೂ ತಪ್ಪಿತಸ್ಥರು ಎಂದು ಮಾಜಿ ಮುಖ್ಯಮಂತ್ರಿ ಹೇಳಿದರು. ಐಪಿಎಲ್ ಕಪ್ ಗೆದ್ದ 24 ಗಂಟೆಗಳ ಒಳಗೆ ತಂಡವನ್ನು ಅಭಿನಂದಿಸುವ ಅಗತ್ಯ ಏನಿತ್ತು ಸರಿ, ಯಾವ ರೀತಿಯ ಸನ್ಮಾನ ಮಾಡಲಾಯಿತು ಅಂತಹ ಅಜಾಗರೂಕ ಸನ್ಮಾನದ ಅಗತ್ಯವಿದೆಯೇ ನೈತಿಕತೆ ಇದ್ದರೆ ಅವರು ರಾಜೀನಾಮೆ ನೀಡಬೇಕು. ಆದರೆ, ಇತ್ತೀಚಿನ ದಿನಗಳಲ್ಲಿ ಅವರಿಂದ ಅದನ್ನು ನಿರೀಕ್ಷಿಸಲು ಸಾಧ್ಯವಿಲ್ಲ. ಆದರೆ, ವಿರೋಧ ಪಕ್ಷವಾಗಿ ನಾವು ಒತ್ತಾಯಿಸಿದ್ದೇವೆ. ಮೃತ ದೇಹಗಳ ಮೇಲೆ ರಾಜಕೀಯ ಮಾಡುವ ಶೋಚನೀಯ ಸ್ಥಿತಿಯಲ್ಲಿ ನಾವಿಲ್ಲ, ಅಂತಹ ಪರಿಸ್ಥಿತಿ ಎಂದಿಗೂ ಬರುವುದಿಲ್ಲ' ಎಂದು ಅವರು ಹೇಳಿದರು.**

## ಬಕ್ರೀದ್ ಹಿನ್ನೆಲೆ ಮೈಸೂರು ರಸ್ತೆಯಲ್ಲಿ ಸಂಚಾರ ನಿರ್ಬಂಧ

• **ಉದಯವಾಹಿನಿ, ಬೆಂಗಳೂರು**

ಬಕ್ರೀದ್ ಹಬ್ಬದ ಪ್ರಯುಕ್ತ ನಗರದ ಚಾಮರಾಜಪೇಟೆ ಬಿಬಿಎಂಪಿ ಆಟದ ಮೈದಾನ ಹಾಗೂ ಬಿ.ಬಿ. ಜಂಕ್ಷನ್ ಬಳಿಯ ಮಸೀದಿಯಲ್ಲಿ (ಜೂನ್ 7) ಸಾಮೂಹಿಕ ಪ್ರಾರ್ಥನೆ ನಡೆಯಲಿದೆ. ಈ ಹಿನ್ನೆಲೆಯಲ್ಲಿ ಮೈಸೂರು ರಸ್ತೆಯಲ್ಲಿ ಬೆಳಗ್ಗೆ 8 ಗಂಟೆಯಿಂದ ಪ್ರಾರ್ಥನೆ ಮುಗಿಯುವವರೆಗೆ ತಾತ್ಕಾಲಿಕವಾಗಿ ವಾಹನ ಸಂಚಾರ ನಿರ್ಬಂಧಿಸಲಾಗಿದೆ. ಮೈಸೂರು ರಸ್ತೆಯ ಬಿಜಿಎಸ್ ಮೇಲ್ಸೇತುವೆಯಲ್ಲಿ ಎಲ್ಲಾ ಮಾದರಿಯ ವಾಹನಗಳ ಸಂಚಾರ ನಿಷೇಧಿಸಲಾಗಿದ್ದು, ಸವಾರರು ಪರ್ಯಾಯ ರಸ್ತೆಗಳಲ್ಲಿ ಸಂಚರಿಸಬೇಕು ಎಂದು ನಗರ ಸಂಚಾರ ಪೊಲೀಸರು ತಿಳಿಸಿದ್ದಾರೆ.

**ಎಲ್ಲೆಲ್ಲಿ ಸಂಚಾರ ನಿರ್ಬಂಧ:** ಮೈಸೂರು ರಸ್ತೆಯ ಟೋಲ್‌ಗೇಟ್ ಜಂಕ್ಷನ್‌ನಿಂದ ಬಿ.ಬಿ. ಜಂಕ್ಷನ್ ಮೂಲಕ ಬಿಜಿಎಸ್ ಮೇಲ್ಸೇತುವೆ ಮಾರ್ಗವಾಗಿ ಟೌನ್‌ಹಾಲ್‌ವರೆಗೆ

ಟೌನ್‌ಹಾಲ್ ಕಡೆಯಿಂದ ಮೈಸೂರು ಕಡೆಗೆ ಬಿಜಿಎಸ್ ಮೇಲ್ಸೇತುವೆಯಲ್ಲಿ ಬಿ.ಬಿ. ಜಂಕ್ಷನ್ ಮಾರ್ಗವಾಗಿ ಟೋಲ್‌ಗೇಟ್ ಜಂಕ್ಷನ್‌ವರೆಗೆ

**ವಾಹನ ಸಂಚಾರಕ್ಕೆ ಪರ್ಯಾಯ ಮಾರ್ಗ:** ಮೈಸೂರು ಕಡೆಯಿಂದ ಟೌನ್‌ಹಾಲ್ ಕಡೆಗೆ ಹೋಗುವ ವಾಹನಗಳು ಕಿಮ್ಕೊ ಜಂಕ್ಷನ್‌ನಲ್ಲಿ ಎಡ ತಿರುವು ಪಡೆದು



ಉದಯವಾಹಿನಿ ಚಿತ್ರ

ವಿಜಯನಗರ ಮೂಲಕ ಸಂಚರಿಸಬೇಕು. ಟೌನ್‌ಹಾಲ್ ಕಡೆಯಿಂದ ಮೈಸೂರು ಕಡೆಗೆ ಹೋಗುವ ವಾಹನಗಳು ಬಿಜಿಎಸ್ ಫ್ಲೈಓವರ್ ಕೆಳಗಿನ ಸರ್ವಿಸ್ ರಸ್ತೆಯಲ್ಲಿ ಸಾಗಬೇಕು. ಭಾರೀ ವಾಹನಗಳು ವೆಟರ್ನರಿ ಜಂಕ್ಷನ್‌ನಲ್ಲಿ ಬಲ ತಿರುವು ಪಡೆದು ಗೂಡ್‌ಶೆಡ್ ರಸ್ತೆ ಮೂಲಕ ಹೋಗಬೇಕು. ಲಘು ವಾಹನಗಳು ಸಿರ್ಸಿ ಜಂಕ್ಷನ್‌ನಲ್ಲಿ ಬಲ ತಿರುವು ಪಡೆದು ಜೆ.ಜೆ. ನಗರ, ಟ್ಯಾಂಕ್‌ಬಂಡ್ ರಸ್ತೆ, ಬಿನ್ನಿ ಮಿಲ್ ಜಂಕ್ಷನ್, ಹುಣಸೇಮರ ಮೂಲಕ ಸಾಗುವುದು. ಬಸವನಗುಡಿ ಮತ್ತು ಚಾಮರಾಜಪೇಟೆ ಕಡೆಯಿಂದ ಮೆಜೆಸ್ಟಿಕ್ ಕಡೆಗೆ ಹೋಗುವ ವಾಹನಗಳು ಚಾಮರಾಜಪೇಟೆ 1ನೇ ಮುಖ್ಯರಸ್ತೆ, 6ನೇ ಅಡ್ಡ ರಸ್ತೆ ಮೂಲಕ, ಮೈಸೂರು ರಸ್ತೆ, ಸಿರ್ಸಿ ಸರ್ಕಲ್, ಬಿನ್ನಿಮಿಲ್ ರಸ್ತೆ ಮೂಲಕ ಸಂಚರಿಸಬೇಕು.


### ಬಿಎಂಟಿಸಿಗೆ ಬ್ಲೂಗ್ರೀನ್ ಪ್ರಶಸ್ತಿ

**ಬೆಂಗಳೂರು: ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಬಿಬಿಎಂಪಿ)ಯಿಂದ ನೀಡುವ 2025ರ ಪ್ರತಿಷ್ಠಿತ ಬ್ಲೂಗ್ರೀನ್ ಪ್ರಶಸ್ತಿಗೆ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ (ಬಿಎಂಟಿಸಿ) ಭಾಜನವಾಗಿದೆ. ನಗರದ ವ್ಯಾಪ್ತಿಯಲ್ಲಿನ ಪ್ರಮುಖ ಹವಾಮಾನ ಸ್ನೇಹಿ ಕಾರ್ಯಚಟುವಟಿಕೆಗಳನ್ನು ಗುರುತಿಸಿ ಪ್ರೋತ್ಸಾಹಿಸಲು ಬಿಬಿಎಂಪಿ ನೀಡುವ ಈ ಪ್ರಶಸ್ತಿಗೆ ಒಟ್ಟು 8 ಕ್ಷೇತ್ರಗಳಿಂದ 175 ಸಂಸ್ಥೆಗಳ ಪೈಕಿ ಬಿಎಂಟಿಸಿಯ ಮಾಲಿನ್ಯರಹಿತ ಪರಿಸರದ ಉಪಕ್ರಮಗಳಿಗೆ ಈ ಪ್ರಶಸ್ತಿ ದೊರಕಿದೆ. ಬೆಂಗಳೂರಿನ ಯು.ಆರ್. ರಾವ್ ಭವನದಲ್ಲಿ ಶುಕ್ರವಾರ ಆಯೋಜಿಸಿದ್ದ ಪ್ರಶಸ್ತಿ ಸಮಾರಂಭದಲ್ಲಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಬಿಎಂಟಿಸಿಯ ವ್ಯವಸ್ಥಾಪಕ ನಿರ್ದೇಶಕ ಆರ್. ರಾಮಚಂದ್ರನ್ ಅವರಿಗೆ ಪ್ರಶಸ್ತಿ ಪ್ರದಾನ ಮಾಡಿದರು.**

## ಸೂಟ್‌ಕೇಸ್‌ನಲ್ಲಿ ಬಾಲಕಿ ಶವ ಪತ್ತೆ ಪ್ರಕರಣ

• **ಉದಯವಾಹಿನಿ, ಬೆಂಗಳೂರು**

ಚಂದಾಪುರ ರೈಲ್ವೆ ಬ್ರಿಡ್ಜ್ ಬಳಿ ಬಾಲಕಿಯೊಬ್ಬಳನ್ನು ಹತ್ಯೆಗೈದು, ಸೂಟ್‌ಕೇಸ್‌ನಲ್ಲಿ ಶವ ತುಂಬಿ ಎಸೆದಿದ್ದ 7 ಜನ ಆರೋಪಿಗಳನ್ನು ಬೆಂಗಳೂರು ಪೊಲೀಸರು ಬಿಹಾರದಲ್ಲಿ ಬಂಧಿಸಿದ್ದಾರೆ. ಬಂಧಿತ ಎಲ್ಲಾ ಆರೋಪಿಗಳು ಬಿಹಾರದ ನವಾಡ ಜಿಲ್ಲೆಯವರಾಗಿದ್ದಾರೆ. ಆರೋಪಿಗಳನ್ನು ಬೆಂಗಳೂರು ಗ್ರಾಮಾಂತರ ವಿಭಾಗದ ಸೂರ್ಯನಗರ ಪೊಲೀಸರು ಬಿಹಾರದಿಂದ ಕರ್ನಾಟಕಕ್ಕೆ ಕರೆತರುತ್ತಿದ್ದಾರೆ. 7 ರಲ್ಲಿ ಮೂವರ ವಿವರ ಲಭ್ಯವಾಗಿದ್ದು, ಅವರನ್ನು ಆಶಿಕ್ ಕುಮಾರ್, ಮುಖೇಶ್ ಮತ್ತು ರಾಜಾರಾಮ್ ಮೋಹನ್ ಎಂದು ಗುರುತಿಸಲಾಗಿದೆ.



ಆಶಿಕ್ ಕುಮಾರ್ ವಿವಾಹಿತನಾಗಿದ್ದು, ಆತನಿಗೆ ಇಬ್ಬರು ಮಕ್ಕಳಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಈ ಪ್ರಕರಣ ರೈಲ್ವೆ ಪೊಲೀಸರ ವ್ಯಾಪ್ತಿಗೆ ಬರುತ್ತದೆ. ಘಟನೆ ನಮ್ಮ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿರುವುದರಿಂದ, ನಮಗೆ ಸಂಬಂಧಿಸಿರಬಹುದು ಎಂಬ ಕಾರಣಕ್ಕೆ ನಾವು ಭಾಗಿಯಾಗಿದ್ದೇವೆ. ಸೂಟ್‌ಕೇಸ್‌ನಲ್ಲಿ ಶವ ಮಾತ್ರ ಇತ್ತು. ಯಾವುದೇ ಗುರುತಿನ ಚೀಟಿ ಅಥವಾ ವೈಯಕ್ತಿಕ ವಸ್ತುಗಳು ಪತ್ತೆಯಾಗಿರಲಿಲ್ಲ ಎಂದು ಪೊಲೀಸರು ತಿಳಿಸಿದ್ದಾರೆ. ಮೇ 21 ರಂದು ಚಂದಾಪುರ ರೈಲ್ವೆ ಬ್ರಿಡ್ಜ್ ಬಳಿ ಸೂಟ್‌ಕೇಸ್‌ನಲ್ಲಿ ಬಾಲಕಿಯ ಶವ ಪತ್ತೆಯಾಗಿತ್ತು. ಹತ್ಯೆಯಾದ ಬಾಲಕಿಯನ್ನು ರೀಮಾ (17) ಎಂದು ಗುರುತಿಸಲಾಗಿತ್ತು.

ಪ್ರಾಥಮಿಕ ತನಿಖೆಯಲ್ಲಿ, ಬೇರೆಡೆ ಕೊಲೆ ಮಾಡಿ, ಶವ ಇಲ್ಲಿ ಎಸೆಯಲಾಗಿದೆ ಎಂದು ತಿಳಿದು ಬಂದಿತ್ತು. ಕೊಲೆಗೆ ನಿಖರ ಕಾರಣ ಇನ್ನೂ ತಿಳಿದು ಬಂದಿಲ್ಲ

## 11 ಅಮಾಯಕ ಜೀವಗಳ ಬಲಿ ಪಡೆದು ಈ ಸರ್ಕಾರ ಪಾಪಕ್ಕೆ ಗುರಿಯಾಗಿದೆ: ಸೋಮಣ್ಣ

• **ಉದಯವಾಹಿನಿ, ಬೆಂಗಳೂರು**

ಅಮಾಯಕ ಜೀವಗಳನ್ನು ಬಲಿ ತೆಗೆದುಕೊಂಡು ಸಿದ್ದರಾಮಯ್ಯ ಸರ್ಕಾರ ಪಾಪಕ್ಕೆ ಗುರಿಯಾಗಿದೆ ಎಂದು ಕೇಂದ್ರ ಸಚಿವ ಸೋಮಣ್ಣ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

ಚಿನ್ನಸ್ವಾಮಿ ಕಾಲ್ತುಳಿತ ಪ್ರಕರಣದ ಬಗ್ಗೆ ಬೆಂಗಳೂರಿನಲ್ಲಿ ಮಾತಾನಾಡಿದ ಅವರು, ಇದೊಂದು ಲಜ್ಜೆಗೇಡಿ ಸರ್ಕಾರ. ಹೆಸರು ಬರುತ್ತೆ ಎಂದು ತರಾತುರಿಯಲ್ಲಿ ಕಾರ್ಯಕ್ರಮ ಮಾಡಿದರು. ಒಂದು ವಾರ ಬಿಟ್ಟು ಮಾಡಿದ್ರೆ ಏನು ಆಗುತ್ತಿತ್ತು. ಇಂತಹ ಕೆಲಸ ಮಾಡಿ ನೀವು ಪಾಪಕ್ಕೆ ಗುರಿಯಾಗಿದ್ದೀರಾ ಎಂದು ಕಿಡಿಕಾರಿದರು. ಪೊಲೀಸ್ ಕಮೀಷನರ್ ದಯಾನಂದ್ ಪ್ರಾಮಾಣಿಕ ಅಧಿಕಾರಿ. ಅವರನ್ನು ಅಮಾನತು ಮಾಡ್ತೀರಾ. ಸಿದ್ದರಾಮಯ್ಯ



ನೈತಿಕತೆ ಇದ್ದರೆ ರಾಜೀನಾಮೆ ಕೊಡಬೇಕಿತ್ತು.

ಸಿದ್ದರಾಮಯ್ಯ ಅವರೇ ಯಾರು ನಿಮ್ಮ ಕಿವಿ ಕಚ್ಚಿದ್ರು, ಇವತ್ತು ಮಾಡಿ ಅಂತ. ನಿಮ್ಮ ಅನುಭವ, ಚಿಂತನೆ ಏನಾಯ್ತು ಮುಗ್ಧರನ್ನ ಸಾಯಿಸಿ ಶಾಪಗ್ರಸ್ತ ಸರ್ಕಾರ ಆಗಿದೆ ಈ ಸರ್ಕಾರ ಎಂದು ಹರಿಹಾಯ್ದರು.

ನಿಮಗೆ ಮಾನ ಮರ್ಯಾದೆ ಇದ್ದರೆ ಇದರ ಹೊಣೆ ಹೊರಬೇಕು. ಇಂತಹ ಘಟನೆ ಮಾಡಿ ಇತಿಹಾಸದಲ್ಲಿ ನೀವು ಉಳಿದುಕೊಂಡ್ರಿ.

ಈಗ ಕಣ್ಣು ಒರೆಸೋ ತಂತ್ರ ಮಾಡ್ತಿದ್ದೀರಾ. ಒಳ್ಳೆಯ ಅಧಿಕಾರಿಗಳನ್ನು ಅಮಾನತು ಮಾಡಿದ್ರೆ ಅಧಿಕಾರಿಗಳಿಗೆ ನಿಮ್ಮ ಜೊತೆ ಕೆಲಸ ಮಾಡೋಕೆ ಹೇಗೆ ಆಗುತ್ತದೆ. ಸರ್ಕಾರಕ್ಕೆ ಹೆಸರು ಮಾಡೋ ಆತುರದ ಪರಮಾವಧಿ. ಇದಕ್ಕೆ ನಿಮಗೆ ಕೊಡಲಿ ಪೆಟ್ಟಾಗಿದೆ. ಈ ಘಟನೆ ಅಕ್ಷಮ್ಯ ಅಪರಾಧ. ಇದಕ್ಕೆ ನೀವೆ ಬೆಲೆ ತೆರಬೇಕು ಎಂದು ಸರ್ಕಾರದ ವಿರುದ್ಧ ಗುಡುಗಿದರು.

## ಚಿನ್ನಸ್ವಾಮಿಯಲ್ಲಿ ಆರ್‌ಸಿಬಿ ವಿಜಯೋತ್ಸವಕ್ಕೆ 15 ಕೋಟಿ ಖರ್ಚು

• **ಉದಯವಾಹಿನಿ, ಬೆಂಗಳೂರು**

ಆರ್‌ಸಿಬಿ ವಿಜಯೋತ್ಸವ ಕಾರ್ಯಕ್ರಮಕ್ಕಾಗಿ (ವಿಧಾನಸೌಧ ಮತ್ತು ಚಿನ್ನಸ್ವಾಮಿ ಕ್ರೀಡಾಂಗಣ) ಸುಮಾರು ರೂ.15 ಕೋಟಿಗೂ ಹೆಚ್ಚು ಖರ್ಚಾಗಿರುವುದಾಗಿ ಗೊತ್ತಾಗಿದೆ. ಐಪಿಎಲ್‌ನ ಇವೆಂಟ್ ಮ್ಯಾನೇಜ್‌ಮೆಂಟ್ ಜವಾಬ್ದಾರಿ ಹೊತ್ತಿರುವ ಡಿಎನ್‌ಎ ಎಂಟರ್‌ಟೈನ್‌ಮೆಂಟ್ ನೆಟ್ವರ್ಕ್ಸ್ ಪ್ರೈವೆಟ್ ಲಿಮಿಟೆಡ್ ಸಂಸ್ಥೆಯೇ ವಿಜಯೋತ್ಸವ ಕಾರ್ಯಕ್ರಮದ ಜವಾಬ್ದಾರಿ ವಹಿಸಿಕೊಂಡಿತ್ತು.

ಈ ಕಂಪನಿ ರಾಜ್ಯದ ಮಾಜಿ ಮುಖ್ಯಮಂತ್ರಿಯೊಬ್ಬರ ಮೊಮ್ಮಕ್ಕಳಿಗೆ ಸೇರಿದ್ದು, ಸರ್ಕಾರದಲ್ಲಿ ಪ್ರಭಾವ ಹೊಂದಿದ್ದಾರೆ ಎಂದು ಮೂಲಗಳು ತಿಳಿಸಿವೆ. ವಿಜಯೋತ್ಸವವನ್ನು ಶನಿವಾರ ಹಮ್ಮಿಕೊಳ್ಳಬೇಕು ಎಂಬುದು ಆರಂಭದ ಯೋಜನೆಯಾಗಿತ್ತು. ಆದರೆ, ಪ್ರಮುಖ ಸಚಿವರೊಬ್ಬರ ಒತ್ತಡದ ಕಾರಣ ತರಾತುರಿಯಲ್ಲಿ ಬುಧವಾರವೇ ನಿಗದಿ ಮಾಡಲಾಯಿತು. ಹೀಗಾಗಿ ಕ್ರೀಡಾಂಗಣ ಮತ್ತು ವಿಧಾನಸೌಧದ ಬಳಿ ಸೇರಬಹುದಾದ ಜನಸಂಖ್ಯೆ



ಉದಯವಾಹಿನಿ ಚಿತ್ರ

ಮತ್ತು ಅದನ್ನು ನಿಭಾಯಿಸಲು ಕೈಗೊಳ್ಳಬೇಕಾದ ಕ್ರಮಗಳ ಕುರಿತು ಯೋಚಿಸುವಲ್ಲಿ ಡಿಎನ್‌ಎ ಸಂಸ್ಥೆಯೂ ಎಡವಿದೆ ಎಂದು ಮೂಲಗಳು ಹೇಳಿವೆ.

**ವಿಜಯೋತ್ಸವಕ್ಕೆ ಅಧಿಕಾರಿಗಳ ಒತ್ತಡ:** ವಿಧಾನಸೌಧದ ಮೆಟ್ಟಿಲುಗಳ ಮೇಲೆ ವಿಜಯೋತ್ಸವ ನಡೆಸಲು ಸಚಿವರು ಮಾತ್ರವಲ್ಲದೇ ಮುಖ್ಯಕಾರ್ಯದರ್ಶಿಯಾದಿಯಾಗಿ ಹಲವು ಹಿರಿಯ ಅಧಿಕಾರಿಗಳೂ ಮುತುವರ್ಜಿ ವಹಿಸಿದ್ದರು. ಆರ್‌ಸಿಬಿ 18 ವರ್ಷಗಳಲ್ಲಿ ಮೊದಲ ಬಾರಿಗೆ ಗೆದ್ದಿರುವುದರಿಂದ ವಿಧಾನಸೌಧದ ಮುಂದೆ ವಿಜಯೋತ್ಸವ ಆಚರಿಸಬೇಕು ಎಂದು ಮುಖ್ಯಮಂತ್ರಿಯವರಿಗೆ ಸಲಹೆ ನೀಡಿದರು ಎಂದು ಮೂಲಗಳು ತಿಳಿಸಿವೆ.

### ಡಿಎನ್‌ಎ, ಆರ್‌ಸಿಬಿಯ ನಾಲ್ವರ ಬಂಧನ

**ಬೆಂಗಳೂರು ರಾಯಲ್ ಚಾಲೆಂಜರ್ಸ್ (ಆರ್‌ಸಿಬಿ) ತಂಡದ ವಿಜಯೋತ್ಸವದ ವೇಳೆ ಕಾಲ್ತುಳಿತದಿಂದ ಉಂಟಾದ ಸಾವು-ನೋವು ಪ್ರಕರಣ ಸಂಬಂಧ ಆರ್‌ಸಿಬಿಯ ಮಾರುಕಟ್ಟೆ ವಿಭಾಗದ ಮುಖ್ಯಸ್ಥ ನಿಖಿಲ್ ಸೋಸಲೆ, ಡಿಎನ್‌ಎ ಮ್ಯಾನೇಜ್‌ಮೆಂಟ್ (ಇವೆಂಟ್ ಮ್ಯಾನೇಜ್‌ಮೆಂಟ್) ಸಿಬ್ಬಂದಿ ಸುನಿಲ್ ಮ್ಯಾಥ್ಯು, ಕಿರಣ್ ಮತ್ತು ಸುಮಂತ್ ಎಂಬವರನ್ನು ಕೇಂದ್ರ ಅಪರಾಧ ದಳ ಹಾಗೂ ಕಬ್ಬನ್‌ಪಾರ್ಕ್ ಠಾಣೆ ಪೊಲೀಸರು ಬಂಧಿಸಿದ್ದಾರೆ.**

## ಪವನ ಪರಿಮಳ ಪ್ರಸಾರಿಣೀ ಸಮಿತಿಯ 40ನೇ ವಾರ್ಷಿಕೋತ್ಸವ

• **ಉದಯವಾಹಿನಿ, ಬೆಂಗಳೂರು**

ಪ್ರಕಾಶನಗರದ 10ನೇ ಮುಖ್ಯರಸ್ತೆ ಆರನೇ ಅಡ್ಡರಸ್ತೆಯಲ್ಲಿರುವ ಶ್ರೀ ರಾಘವೇಂದ್ರ ಸ್ವಾಮಿಗಳ ಬೃಂದಾವನ ಸನ್ನಿಧಾನದ 67ನೇ ಪ್ರತಿಷ್ಠಾಪನಾ ವರ್ಧಂತಿ ಮಹೋತ್ಸವ ಜೂನ್ 9ರಂದು ಆಯೋಜನೆಗೊಂಡಿದೆ.



ಇದೇ ಸಂದರ್ಭದಲ್ಲಿ ಶ್ರೀ ಮಠದ ಪವನ ಪರಿಮಳ ಪ್ರಸಾರಿಣಿ ಸಮಿತಿಯ 40ನೇ ವಾರ್ಷಿಕೋತ್ಸವವೂ ನೆರವೇರಲಿದೆ. ಶ್ರೀ ಸುವಿದ್ಯೇಂದ್ರತೀರ್ಥ ಸ್ವಾಮೀಜಿ ಸಾನ್ನಿಧ್ಯದಲ್ಲಿ ವಿವಿಧ ಧಾರ್ಮಿಕ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳು ಸಂಪನ್ನಗೊಳ್ಳಲಿವೆ.

ಅಂದು ಬೆಳಗ್ಗೆ 6 ಗಂಟೆಗೆ ರಾಯರ ಬೃಂದಾವನಕ್ಕೆ ಮಧು ಅಭಿಷೇಕ, ವಿಶೇಷ ಫಲ ಪಂಚಾಮೃತ ಅಭಿಷೇಕ ನಂತರ ಶ್ರೀ ರಾಘವೇಂದ್ರ ಅಷ್ಟಾಕ್ಷರ ಹೋಮ ನೆರವೇರಲಿದೆ. ಬೆಳಗ್ಗ 10 ಗಂಟೆಗೆ ಶ್ರೀ ಸುವಿದ್ಯೇಂದ್ರತೀರ್ಥ ಸ್ವಾಮೀಜಿ ಅವರಿಂದ ಸಂಸ್ಥಾನ ಪೂಜೆ 12-30ಕ್ಕೆ ಶ್ರೀಗಳಿಂದ ಶ್ರೀ ಗುರುರಾಯರಿಗೆ ಕನಕ ಅಭಿಷೇಕ ನೆರವೇರಲಿದೆ.

**ವಿವಿಧ ಕ್ಷೇತ್ರದ ಗಣ್ಯರಿಗೆ ಗೌರವಾರ್ಪಣೆ:** ಶ್ರೀ ಮಠದ ಆವರಣದಲ್ಲಿ ಸಂಜೆ ಆರು ಮೂವತ್ತಕ್ಕೆ ವರ್ಧಂತಿ ಉತ್ಸವದ ಅಂಗವಾಗಿ ವಿವಿಧ ರಂಗದ ಸಾಧಕರಿಗೆ ಗೌರವಾರ್ಪಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ತತ್ವಜ್ಞಾನ ಕ್ಷೇತ್ರದ ಪಂಡಿತ ಆರ್. ವೆಂಕಟೇಶ ಆಚಾರ್ಯ, ಸಾಹಿತ್ಯ ಮತ್ತು ಸಂಸ್ಕೃತಿ ಕ್ಷೇತ್ರದ ಡಾ. ಅರಳುಮಲ್ಲಿಗೆ ಪಾರ್ಥಸಾರಥಿ, ವೈದ್ಯಕೀಯ ಕ್ಷೇತ್ರದ ಡಾ.ಕೆ .ಎಂ . ಸೋಮಶೇಖರಮೂರ್ತಿ, ಶಿಕ್ಷಣ ಕ್ಷೇತ್ರದ ಸಾಧಕ ಬಿ. ಕೆ. ಜಯಸಿಂಹ ಅವರನ್ನು ಗೌರವಿಸಲಾಗುವುದು.

ನಂತರ ವಿದ್ಯಾರ್ಥಿ, ಆರೋಗ್ಯನಿಧಿ ವಿತರಣೆ, ಶ್ರೀ ಸುವಿದ್ಯೇಂದ್ರತೀರ್ಥರಿಂದ ಅನುಗ್ರಹ ಸಂದೇಶವಿದೆ. ಭಕ್ತಾದಿಗಳು ಆಗಮಿಸಬೇಕು ಎಂದು ಶ್ರೀ ಗುರು ರಾಘವೇಂದ್ರ ಸೇವಾ ಸಮಿತಿ ಅಧ್ಯಕ್ಷ ಎನ್. ಜಿ. ವೆಂಕಟೇಶಮೂರ್ತಿ ಪತ್ರಿಕಾ ಹೇಳಿಕೆಯಲ್ಲಿ ವಿನಂತಿಸಿದ್ದಾರೆ.

# ಡಾ.ಪುನೀತ್ ರಾಜ್ ಕುಮಾರ್ ಸವಿನೆನಪಿನಲ್ಲಿ ಅಪ್ಪು ಲೆದರ್ ಬಾಲ್ ಕ್ರಿಕೆಟ್

### ವಕೀಲರ ತಂಡ ವಿಜೇತರಾದರು 1ಲಕ್ಷ ರೂಪಾಯಿ ಬಹುಮಾನ ಪಾರಿತೋಷಕ, ಮಾಧ್ಯಮ ತಂಡ ದ್ವಿತೀಯ ಸ್ಥಾನ 50ಸಾವಿರ ರೂಪಾಯಿ ಪಾರಿತೋಷಕ

• **ಉದಯವಾಹಿನಿ, ಬೆಂಗಳೂರು**

ವೈ.ಎಂ.ಸಿ.ಎ.ಕ್ರೀಡಾಂಗಣದಲ್ಲಿ ಬಿಬಿಎಂಪಿ ಅಧಿಕಾರಿ ಮತ್ತು ನೌಕರರ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಕರ್ನಾಟಕ ರತ್ನ, ಪವರ್ ಸ್ಟಾರ್ ಡಾ.ಪುನೀತ್ ರಾಜ್ ಕುಮಾರ್ ರವರ ಸವಿಸ್ಮರಣೆಯಲ್ಲಿ, ಅಪ್ಪು ಸ್ಮಾರಕ ಲೆದರ್ ಬಾಲ್ ಕ್ರಿಕೆಟ್ ಪಂದ್ಯಾವಳಿ ಉದ್ಘಾಟನೆ ಮತ್ತು ಪ್ರಶಸ್ತಿ ಪ್ರಧಾನವನ್ನು ವಿಶೇಷ ಆಯುಕ್ತರಾದ ಅವಿನಾಶ್ ರಾಜೇಂದ್ರ ಮೆನನ್ ರವರು ಕೆ. ಐಪಿಎಸ್ ಅಧಿಕಾರಿ ಸಂತೋಷ್‌ಬಾಬುರವರು, ಕರ್ನಾಟಕ ರಾಜ್ಯ ವಕೀಲರ ಪರಿಷತ್ ಅಧ್ಯಕ್ಷರಾದ ಎಸ್.ಎಸ್.ಮಿಟ್ಟಲಕೋಡ ಸಹಾಯಕ ಪೊಲೀಸ್ ಆಯುಕ್ತರಾದ ಹೆಚ್.ಎಸ್.ಪರಮೇಶ್ವರರವರು, ಕರ್ನಾಟಕ ಚೆಸ್ ಅಸೋಸಿಯೇಷನ್ ಉಪಾಧ್ಯಕ್ಷರಾದ ಶ್ರೀಮತಿ ಸೌಮ್ಯ ಎಂ.ಯು ಹಿರಿಯ ವಕೀಲರುಗಳಾದ ರಾಜೇಶ್ ಎಂ, ಶ್ರೀಮತಿ ಅಶ್ವಿನಿ ರಾವ್, ಕಾರ್ಯನಿರ್ವಾಹಕ ನಿರ್ದೇಶಕರು, ಬ್ರೈನ್ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯ ತ್ರಿವಿಕ್ರಮ್ ರಾವ್, ಆದಿಜಾಂಬವ ಎಂ. ಗಂಗಾಧರ್ ಬೆಂಗಳೂರು ವಕೀಲರ ಸಂಘದ ಖಜಾಂಚಿ ಶ್ವೇತ ರವಿಶಂಕರ್ ರವರು, ಹಿರಿಯ ವಕೀಲರಾದ ಜಿ.ಶಿವಕುಮಾರ್ ರವರು ಬಿಬಿಎಂಪಿ ಅಧಿಕಾರಿ ಮತ್ತು ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರಾದ ಎ.ಅಮೃತ್ ರಾಜ್ ರವರು ಅಂಬೇಡ್ಕರ್ ರತ್ನ ಪ್ರಶಸ್ತಿ ಪುರಸ್ಕೃತರಾದ ಹನುಮಂತರಾಜು ನಿರ್ದೇಶಕ ಸುರೇಶ್ , ಬಿಗ್ ಬಾಸ್ ಖ್ಯಾತಿಯ ಕೆ.ಪಿ.ಅರವಿಂದ್ ಮತ್ತು ಕಾರ್ತಿಕ್



ಉದಯವಾಹಿನಿ ಚಿತ್ರ

ಮಹೇಶ್‌ವರು ಉದ್ಘಾಟನೆ ಮಾಡಿ ಪ್ರಶಸ್ತಿ ಪ್ರಧಾನ ಮಾಡಿದರು. ಬಿಬಿಎಂಪಿ ಅಧಿಕಾರಿ ಮತ್ತು ನೌಕರರ ತಂಡ,ಮಾಧ್ಯಮ ಬಳಗ, ಪೊಲೀಸ್ ಅಧಿಕಾರಿಗಳ ತಂಡ, ಬೆಂಗಳೂರು ವಕೀಲರ ತಂಡದ ನಡುವೆ ಪಂದ್ಯಾವಳಿ ನಡೆಯಿತು.

ಪ್ರಥಮ ಬಹುಮಾನ 1ಲಕ್ಷ ರೂ. ದ್ವಿತೀಯ ಬಹುಮಾನ 50 ಸಾವಿರ ರೂಪಾಯಿ ಪ್ರಶಸ್ತಿ ಪ್ರಧಾನ ಮಾಡಲಾಯಿತು.

ಬಿಬಿಎಂಪಿ ಅಧಿಕಾರಿ, ನೌಕರರ ತಂಡ ಮತ್ತು ಮಾಧ್ಯಮ ತಂಡ ನಡುವೆ ಮೊದಲನೇಯ ಪಂದ್ಯದಲ್ಲಿ ಮಾಧ್ಯಮ ತಂಡ ರೋಚಕ ಗೆಲುವು ಕಂಡಿತು. ವಕೀಲರ ತಂಡ ಮತ್ತು ಪೊಲೀಸ್ ಅಧಿಕಾರಿಗಳ ತಂಡ ನಡುವೆ ವಕೀಲರ ತಂಡ ವಿರೋಚಿತ ಗೆಲುವು ಸಾಧಿಸಿ ಫೈನಲ್ ತಲುಪಿತು. ಫೈನಲ್ ಪಂದ್ಯದಲ್ಲಿ 20ಓವರ್‌ಗಳ ಪಂದ್ಯವಾಗಿತ್ತು .ಮಾಧ್ಯಮ ತಂಡ ಮತ್ತು ವಕೀಲರ ತಂಡ ನಡುವೆ ಪಂದ್ಯದಲ್ಲಿ ಟಾಸ್ ಗೆದ್ದು ಮಾಧ್ಯಮ ತಂಡ ಮೊದಲು ಬ್ಯಾಟಿಂಗ್ ಆಯ್ಕೆ ಮಾಡಿಕೊಂಡರು ವಕೀಲರ ತಂಡ ಕರಾರುವಾಕ್ ಬೌಲಿಂಗ್ ನಿಂದ 17ಓವರ್ ನಲ್ಲಿ 87ರನ್‌ಗಳಿಗೆ ಮಾಧ್ಯಮ ತಂಡ ಸರ್ವಪತನ ಅದರು, ನಂತರ ವಕೀಲರ ತಂಡ 4ವಿಕೆಟ್ ನಷ್ಟಕ್ಕೆ 94ರನ್ ಹೊಡೆದರು, ವಕೀಲರ ತಂಡದಲ್ಲಿ ರಾಹುಲ್ 38ರನ್ ಹೊಡೆದು ತಂಡವನ್ನು ಜಯದತ್ತ ಸಾಗಿಸಿದರು.

ಕ್ರಿಕೆಟ್ ಪಂದ್ಯಾವಳಿ ಉದ್ಘಾಟನೆ

ವಿಶೇಷ ಆಯುಕ್ತರಾದ ಅವಿನಾಶ್ ಮೆನನ್ ರಾಜೇಂದ್ರನ್ ರವರು ಮಾತನಾಡಿ ಕ್ರೀಡೆಯಲ್ಲಿ ಸ್ಪರ್ಧೆ ಇರಬೇಕು ಗೆಲುವು, ಸೋಲು ಮುಖ್ಯವಲ್ಲ, ಕ್ರೀಡೆಯಲ್ಲಿ ಪಾಲ್ಗೊಳ್ಳವುದು ಮುಖ್ಯ. ಬಿಬಿಎಂಪಿ ಅಧಿಕಾರಿ ಮತ್ತು ನೌಕರರು ಕೆಲಸದಲ್ಲಿ ಬಿಡುವು ಮಾಡಿಕೊಂಡು ಕ್ರೀಡೆಯಲ್ಲಿ ಭಾಗವಹಿಸುವುದರಿಂದ ಮಾನಸಿಕ, ದೈಹಿಕವಾಗಿ ಆರೋಗ್ಯವಂತರಾಗಿ ಇರಬಹುದು ಮತ್ತು ಕೆಲಸದಲ್ಲಿ ಹುಮಸ್ಸು ಇರುತ್ತದೆ ಎಂದು ಹೇಳಿದರು. ಐ.ಪಿ.ಎಸ್.ಸಂತೋಷ್ ಬಾಬುರವರು ಕ್ರೀಡಾ ಮನೋಭಾವನೆಯಿಂದ ಎಲ್ಲರು ಆಟವಾಡಬೇಕು.

ಕ್ರೀಡೆ ಎಲ್ಲರನ್ನು ಒಂದು ಮಾಡುತ್ತದೆ. ಆರೋಗ್ಯವೇ ಭಾಗ್ಯ ಎಂಬಂತೆ ಕ್ರೀಡಾ ಚಟುವಟಿಕೆಗಳಲ್ಲಿ ಭಾಗವಹಿಸುವುದರಿಂದ ಆರೋಗ್ಯವಂತರಗಿ ಬಾಳಬಹುದು. ಪೊಲೀಸ್ ಸಹಾಯಕ ಆಯುಕ್ತರಾದ ಹೆಚ್.ಎಸ್.ಪರಮೇಶ್ವರರವರು ಮಾತನಾಡಿ ಅಪ್ಪು ಎಂದರೆ ಪ್ರೀತಿ, ವಿಶ್ವಾಸ, ನಂಬಿಕೆ, ಸ್ನೇಹ ಎಂಬ ಅರ್ಥ. ಕ್ರೀಡಾಪಟುಗಳು ಕ್ರೀಡಾಮನೋಭಾವನೆ ಆಟವಾಡಬೇಕು. ಕ್ರೀಡೆಗಳಿಗೆ ಸಾರ್ವ ಜನಿಕರು ಪ್ರೋತ್ಸಾಹ, ಸಹಕಾರ ನೀಡಬೇಕು. ಬಿಬಿಎಂಪಿ ಅಧಿಕಾರಿ ಮತ್ತು ನೌಕರರ ಕ್ಷೇಮಾಭಿವೃದ್ಧಿ ಸಂಘ ಕ್ರೀಡಾಪಟುಗಳಿಗೆ ಉತ್ತೇಜನ ನೀಡುತ್ತಿದೆ ಎಂದು ಹೇಳಿದರು.

> **ಇದೇ ಸಂದರ್ಭದಲ್ಲಿ ಅಧ್ಯಕ್ಷರಾದ ಎ.ಅಮೃತ್ ರಾಜ್ ರವರು ಮಾತನಾಡಿ ಬಿಬಿಎಂಪಿ ಅಧಿಕಾರಿ ಮತ್ತು ನೌಕರರ ಕ್ಷೇಮಾಭಿವೃದ್ಧಿ ಸಂಘವು ಅಧಿಕಾರಿ ಮತ್ತು ನೌಕರರ ಹಿತರಕ್ಷಣೆ ಹಾಗೂ ಸಮಸ್ಯೆಗಳ ನಿವಾರಣೆ ಸ್ಪಂದಿಸುವ ಜೊತೆಯಲ್ಲಿ ಕನ್ನಡ ನಾಡು, ನುಡಿ, ಪರಿಸರ ಆರೋಗ್ಯ, ಕ್ರೀಡಾ ಚಟುವಟಿಕೆಗಳಲ್ಲಿ ಏರ್ಪಡಿಸಿ ಸಮಾಜದ ಅಭಿವೃದ್ಧಿ ಕೈಜೋಡಿಸಿದೆ. ನೇಪಾಳ ,ಕಾಶಿಯಲ್ಲಿ ಕರ್ನಾಟಕ ರಾಜ್ಯೋತ್ಸವ. ಬಿಬಿಎಂಪಿ ಕೇಂದ್ರ ಕಛೇರಿಯಲ್ಲಿ ಮೇರುನಟ ಡಾ.ರಾಜ್ ಕುಮಾರ್, ಪವರ್ ಸ್ಟಾರ್ ಪುನೀತ್ ರಾಜ್ ಕುಮಾರ್ ರವರ ಪುತ್ಥಳಿ ಸ್ಥಾಪನೆ. ಉಚಿತ ಆರೋಗ್ಯ ತಪಾಸಣೆ ಶಿಬಿರ, ಪರಿಸರ ಜಾಗೃತಿ ಮತ್ತು ಸಂಕಷ್ಟದಲ್ಲಿ ಇರುವವರಿಗೆ ಸಹಾಯಹಸ್ತ ನೀಡುತ್ತಾ ಸಾರ್ವಜನಿಕರಿಗೆ ಉತ್ತಮ ಸೇವಾ ಕಾರ್ಯ ನಮ್ಮ ಸಂಘ ಮಾಡುತ್ತಿದೆ. ಪವರ್ ಸ್ಟಾರ್ ಡಾ.ಪುನೀತ್ ರಾಜ್ ಕುಮಾರ್ ರವರ ಜೀವನ ಆದರ್ಶ, ಸಮಾಜ ಸೇವೆ, ಕ್ರೀಡಾ ಆಸಕ್ತಿಯನ್ನು ನಮ್ಮ ಸಂಘವು ಅಳವಡಿಸಿಕೊಂಡು ಬರುತ್ತಿದೆ ಎಂದು ಹೇಳಿದರು.**

# ಮಾರಮ್ಮ ದೇಗುಲ ಪ್ರವೇಶ ದಲಿತರಿಗೆ ವಿರೋಧ

• **ಉದಯವಾಹಿನಿ, ಮಂಡ್ಯ**

ತಾಲ್ಲೂಕಿನ ಎಲೆಚಾಕನಹಳ್ಳಿಯ ಮಾರಮ್ಮ ದೇವಸ್ಥಾನ ಪ್ರವೇಶದ ವಿಚಾರದಲ್ಲಿ ಸವರ್ಣೀಯ, ದಲಿತ ಸಮುದಾಯಗಳ ನಡುವೆ ಸಂಘರ್ಷ ನಡೆದಿದ್ದು, ದಲಿತರಿಗೆ ಸಾಮಾಜಿಕ ಬಹಿಷ್ಕಾರ ಹಾಕಲಾಗಿದೆ ಎಂಬ ಆರೋಪ ಕೇಳಿಬಂದಿದೆ. ದೇವಾಲಯಕ್ಕೆ ಸರ್ಕಾರಿ ಅಧಿಕಾರಿಗಳು ಒಂದು ಬೀಗ ಜಡಿದಿದ್ದರೆ, ಗ್ರಾಮಸ್ಥರು ಮತ್ತೊಂದು ಬೀಗ ಹಾಕಿದ್ದಾರೆ. ಗ್ರಾಮದಲ್ಲಿ ವಾತಾವರಣ ಬೂದಿ ಮುಚ್ಚಿದ ಕೆಂಡದಂತಿದ್ದು, ಪೊಲೀಸರು ಬಿಗಿ ಪೊಲೀಸ್ ಬಂದೋಬಸ್ತ್ ಏರ್ಪಡಿಸಿದ್ದಾರೆ. ದೇವಾಲಯದಲ್ಲಿ ದಲಿತರು ಪೂಜೆ ಸಲ್ಲಿಸಿದರೆಂಬ ಕಾರಣಕ್ಕೆ ಗ್ರಾಮದಲ್ಲಿ ಉದ್ವಿಗ್ನ ಪರಿಸ್ಥಿತಿ ಉಂಟಾಗಿದ್ದರಿಂದ ತಹಶೀಲ್ದಾರ್ ಶಿವಕುಮಾರ್ ಬಿರಾದರ್ ನೇತೃತ್ವದಲ್ಲಿ ಗ್ರಾಮದಲ್ಲಿ ಶಾಂತಿ ಸಭೆಯನ್ನೂ ನಡೆಸಲಾಗಿತ್ತು.

> **ಎಲೆಚಾಕನಹಳ್ಳಿಗೆ ಪೊಲೀಸ್ ಬಿಗಿ ಬಂದೋಬಸ್ತ್ ಒದಗಿಸಿದ್ದು ಜೂನ್ 9ರಂದು ಶಾಸಕರು ಮತ್ತು ಜಿಲ್ಲಾಧಿಕಾರಿ ನೇತೃತ್ವದಲ್ಲಿ ಶಾಂತಿ ಸಭೆ ನಡೆಸಿ ಸಮಸ್ಯೆ ಪರಿಹರಿಸಲಾಗುವುದು**
>
> **– ಮಲ್ಲಿಕಾರ್ಜುನ ಬಾಲದಂಡಿ, ಎಸ್ಪಿ ಮಂಡ್ಯ**

ದಲಿತರಿಗೆ ದೇವಸ್ಥಾನ ಪ್ರವೇಶಿಸಲು ಬಿಡುವುದಿಲ್ಲ ಎಂದು ಸವರ್ಣೀಯರು ಸಭೆಯನ್ನು ಬಹಿಷ್ಕರಿಸಿ ಎದ್ದು ಹೋಗಿದ್ದರು. ದೇವಾಲಯಕ್ಕೆ ನಮಗೂ ಪ್ರವೇಶ ನೀಡಿ ಎಂದು ದಲಿತರು ಒತ್ತಾಯಿಸಿದ್ದು. ಪ್ರವೇಶ ನೀಡುವುದಿಲ್ಲ ಎಂದು ಸವರ್ಣೀಯರು ಪಟ್ಟು ಹಿಡಿದಿದ್ದಾರೆ. ಅಧಿಕಾರಿಗಳ ಎದುರಿಗೇ ನಮ್ಮನ್ನು ಅವಾಚ್ಯ ಪದ ಬಳಸಿ ನಿಂದಿಸಿದ್ದಾರೆ ಎಂದು ದಲಿತ ಮುಖಂಡರು ಆರೋಪಿಸಿದ್ದಾರೆ.

**ಎಫ್ಐಆರ್ ದಾಖಲು:** 'ಜೂನ್ 3ರಂದು ಮಧ್ಯರಾತ್ರಿ 12.30ರ ಸಂದರ್ಭದಲ್ಲಿ ಗ್ರಾಮದ ದಲಿತ ಸಮುದಾಯದ ವಿಜಯಕುಮಾರ್ ಎಂಬುವರ ಕಾರಿನ ಗಾಜನ್ನು ಒಡೆದಿದ್ದು, ಜಾತಿ ನಿಂದನೆ ಮಾಡಿದ್ದಾರೆ' ಎಂದು ಮಂಡ್ಯ ಗ್ರಾಮಾಂತರ ಠಾಣೆಯಲ್ಲಿ ದೂರು ದಾಖಲಾಗಿದ್ದು, ಶಿವಲಿಂಗ ಬಿನ್ ಕರಿಗೌಡ ಅಲಿಯಾಸ್ ಪಾಪು, ದಿನೇಶ್ ಬಿನ್ ಮಾದೇಗೌಡ, ಜನಾರ್ದನ ಬಿನ್ ತಿಮ್ಮೇಗೌಡ, ಚೇತನ್ ಕುಮಾರ್ ಬಿನ್ ಪುಟ್ಟಸ್ವಾಮಿ, ರೂಪೇಶ ಬಿನ್ ಚಿಕ್ಕಣ್ಣ ಹಾಗೂ ಮನು ಬಿನ್ ಮಾದೇಗೌಡ ಸೇರಿದಂತೆ ಇತರರ ಮೇಲೆ ಎಫ್ಐಆರ್ ದಾಖಲಾಗಿದೆ.

## ನಾನು ಸಾಯುವಮುನ್ನ ನಿಮ್ಮ ಋಣ ತೀರಿಸುವೆ, ನಿಮ್ಮ ಹೃದಯದಲ್ಲಿ ಸ್ಥಾನ ಕೊಡಿ: ಎಚ್‌ಡಿಕೆ

# ನನಗೆ ನಾನು ಮಾಡುವ ಸಾಧನೆಯ ಹೆಸರು ಬೇಡ

• **ಉದಯವಾಹಿನಿ, ಮಂಡ್ಯ**

**ಕಣ್ಣೀರು ಹಾಕುವಂತೆ ಮಾಡಿತು**

ನನಗೆ ನಾನು ಮಾಡುವ ಸಾಧನೆಗೆ ಹೆಸರು ಬೇಡ. ನಿಮ್ಮ ಹೃದಯದಲ್ಲಿ ಕೊಟ್ಟ ಸ್ಥಾನ ಸಾಕು. ನಾನು ಸಾಯುವ ಮುನ್ನ ನಿಮ್ಮ ಋಣ ತೀರಿಸಿ ಹೋಗುವೆ ಎಂದು ಮೈಷುಗರ್ ಶಾಲೆಯ ಕಾರ್ಯಕ್ರಮದಲ್ಲಿ ಕೇಂದ್ರ ಸಚಿವ ಎಚ್‌ಡಿ ಕುಮಾರಸ್ವಾಮಿ ಅವರು ಭಾವುಕರಾಗಿ ಕಣ್ಣೀರಿಟ್ಟರು. ಸಾವಿನ ಬಗ್ಗೆ ಮಾತನಾಡುತ್ತಾ, ನಾನು ಸಾಯುವ ಮುನ್ನ ನಿಮ್ಮ ಋಣ ತೀರಿಸಿ ಹೋಗುವೆ. ತಮ್ಮ ಸಾಧನೆಗಿಂತ ಜನರ ಪ್ರೀತಿ ಮುಖ್ಯವೆಂದು ತಿಳಿಸಿದರು. ಮಂಡ್ಯದಲ್ಲಿ ಇತ್ತೀಚೆಗೆ ನಡೆದ ಎರಡು ದುರ್ಘಟನೆಗಳ ಬಗ್ಗೆ ವಿಷಾದ ವ್ಯಕ್ತಪಡಿಸಿದರು. ಆಸ್ಪತ್ರೆಯಲ್ಲಿ ಬಾಲಕಿ ಸಾವು ಮತ್ತು ಟ್ರಾಫಿಕ್ ಪೊಲೀಸರ ತಪ್ಪಿನಿಂದ ಬಾಲಕಿ ಸಾವನ್ನಪ್ಪಿದ ಪ್ರಕರಣವನ್ನು ಅವರು ಉಲ್ಲೇಖಿಸಿದರು. ಕರ್ನಾಟಕ ಸರ್ಕಾರದ ಸರ್ಕಾರ ನಿರ್ಲಕ್ಷ್ಯದ ಬಗ್ಗೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಎಚ್‌ಡಿಕೆ ಅವರು ಮಂಡ್ಯದಲ್ಲಿ ನಡೆದ ಎರಡು ದುರ್ಘಟನೆಗಳ ಬಗ್ಗೆ ತೀವ್ರ ವಿಷಾದ ವ್ಯಕ್ತಪಡಿಸಿದರು. ಆಸ್ಪತ್ರೆಯಲ್ಲಿ ಬಾಲಕಿ ಸಾವು, ಟ್ರಾಫಿಕ್ ಪೊಲೀಸರ ಎಡವಟ್ಟಿನಿಂದ ಬಾಲಕಿ ಸಾವ ನ್ನಪ್ಪಿದ ಪ್ರಕರಣಗಳನ್ನು ಉಲ್ಲೇಖಿಸಿದರು. ಈ ಸಾವುಗಳಿಗೆ ಸರ್ಕಾರ ನಿರ್ಲಕ್ಷ್ಯವೇ ಕಾರಣ ಎಂದು ಅವರು ಆರೋಪಿಸಿದರು. ಸರ್ಕಾರ ಪರಿಹಾರ ನೀಡಲು ಮುಂದಾಗಿರುವುದಕ್ಕೆ ಆಕ್ರೋಶ ವ್ಯಕ್ತಪಡಿಸಿದ ಅವರು, ಪ್ರತಿಯೊಂದು ಜೀವವನ್ನು ದುಡ್ಡಿನಿಂದ ಅಳೆಯಲು ಸಾಧ್ಯವಿಲ್ಲ ಎಂದರು.



**ಜೀವಗಳಿಗೆ ಸರಿಯಾದ ಬೆಲೆ ಕೊಡುವುದನ್ನು ಕಲಿಯಲಿ:** ಸರ್ಕಾರ, ಅಧಿಕಾರಿಗಳ ವಿರುದ್ಧ ಎಚ್‌ಡಿಕೆ ತೀವ್ರ ವಾಗ್ದಾಳಿ ನಡೆಸಿದರು. ಇನ್ನಾದರೂ ಮಾನವನ ಜೀವಗಳಿಗೆ ಸರಿಯಾದ ಬೆಲೆ ಕೊಡುವುದನ್ನು ಕಲಿಯಲಿ ಎಂದು ಸಲಹೆ ನೀಡಿದರು. ಬಡವರ ಜೀವಕ್ಕೆ ಬೆಲೆ ಇಲ್ಲವೇ ಎಂದು ಪ್ರಶ್ನಿಸಿದರು. ಸರ್ಕಾರವು ಈ ಘಟನೆಗಳನ್ನು ಗಂಭೀರವಾಗಿ ಪರಿಗಣಿಸಬೇಕು ಮತ್ತು ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು. ಎಚ್‌ಡಿಕೆ ಅವರ ಭಾವುಕ ಮಾತುಗಳು ಸಭೆಯಲ್ಲಿದ್ದವರನ್ನು ಕಣ್ಣೀರು ಹಾಕುವಂತೆ ಮಾಡಿತು. ಮಂಡ್ಯದ ಜನರ ಮೇಲಿನ ಅವರ ಪ್ರೀತಿ, ಕಾಳಜಿಯನ್ನು ಎಲ್ಲರೂ ಶ್ಲಾಘಿಸಿದರು.

ಎಚ್‌ಡಿಕೆ ಅವರ ಮಾತುಗಳು ಸರ್ಕಾರಕ್ಕೆ ಎಚ್ಚರಿಕೆಯ ಗಂಟೆಯಾಗಿದ್ದು, ಮುಂದೆ ಇಂತಹ ಘಟನೆಗಳು ನಡೆಯದಂತೆ ಎಚ್ಚರಿಕೆ ವಹಿಸಬೇಕೆಂದು ಸಾರ್ವಜನಿಕರು ಆಗ್ರಹಿಸಿದರು. ಎಚ್.ಡಿ. ಕುಮಾರಸ್ವಾಮಿ ಅವರು ಹಲವು ಬಾರಿ ಸಾರ್ವಜನಿಕವಾಗಿ ಭಾವುಕರಾಗಿದ್ದಾರೆ.

**ಕಾಲ್ತುಳಿತ ಕೇಸ್ ಬಗ್ಗೆ ಎಚ್ಡಿಕೆ ಹೇಳಿದ್ದೇನು?:** ಬೆಂಗಳೂರು ನಗರದ ಚಿನ್ನಸ್ವಾಮಿ ಕ್ರೀಡಾಂ ಗಣದ ಬಳಿ ಆರ್‌ಸಿಬಿ ವಿಜಯೋತ್ಸವದ ಸಂದ ರ್ಭದಲ್ಲಿ ನೂಕುನುಗ್ಗ ಲುನಿಂದ ಉಂಟಾದ ಕಾಲ್ತುಳಿತಕ್ಕೆ ಹತ್ತಕ್ಕೂ ಹೆಚ್ಚು ಜನರು ಧಾರುಣವಾಗಿ ಸಾವನ್ನಪ್ಪಿರುವ ಘಟನೆ ನನಗೆ ತೀವ್ರ ದಿಗ್ಭ್ರಮೆ ಉಂಟು ಮಾಡಿದೆ. ಗೆಲುವಿನ ಸಂಭ್ರಮಕ್ಕೆ ಮುನ್ನವೇ ಮುಗ್ಧರ ಜೀವ ನಷ್ಟವಾಗಿರುವುದು ನನಗೆ ಅತೀವ ದುಃಖ ತಂದಿದೆ. ಸರಿಯಾದ ಪೂರ್ವ ಸಿದ್ಧತೆ ಮಾಡಿಕೊಳ್ಳದೆ, ಯಾವುದೇ ಮುನ್ನೆಚ್ಚರಿಕೆ ವಹಿಸ ದಿರುವುದೇ ಈ ಮಹಾದುರಂತಕ್ಕೆ ನೇರ ಕಾರಣ. ದುರಂತದ ಹೊಣೆಯನ್ನು ರಾಜ್ಯ ಸರಕಾರವೇ ಹೊತ್ತುಕೊಳ್ಳಬೇಕು. ಗಾಯಾಳುಗಳಿಗೆ ಉತ್ತಮ ಚಿಕಿತ್ಸೆ ಕೊಡಿಸುವುದರ ಜತೆಗೆ ಮೃತರ ಕುಟುಂಬಗಳ ನೆರವಿಗೆ ಸರಕಾರ ಕೂಡಲೇ ಧಾವಿಸಬೇಕು. ಕ್ರೀಡಾಂಗಣ ಹಾಗೂ ವಿಧಾನಸೌಧದ ಬಳಿ ಸಂಭ್ರಮವನ್ನು ಕಣ್ತುಂಬಿಕೊಳ್ಳಲು ಬಂದಿದ್ದ ಕ್ರಿಕೆಟ್ ಪ್ರೇಮಿಗಳು ಗಾಬರಿ, ಆತುರಕ್ಕೆ ಒಳಗಾಗದೆ ಕ್ಷೇಮವಾಗಿ ಮನೆ ತಲುಪಬೇಕು ಎಂಬುದು ನನ್ನ ಕಳಕಳಿ. ಪೊಲೀಸರು ಈ ನಿಟ್ಟಿನಲ್ಲಿ ತುರ್ತುಕ್ರಮ ವಹಿಸಿ ಜನರಿಗೆ ನೆರವಾಗಬೇಕು.

> **ಮಂಡ್ಯದ ಮೈಷುಗರ್ ಶಾಲಾ ಕಾರ್ಯಕ್ರಮದಲ್ಲಿ ಕೇಂದ್ರ ಸಚಿವ ಎಚ್‌ಡಿ ಕುಮಾರಸ್ವಾಮಿಯವರು ಭಾವುಕರಾದರು. ಸಾವಿನ ಬಗ್ಗೆ ಮಾತನಾಡುತ್ತಾ, ಜನರ ಋಣ ತೀರಿಸುವುದಾಗಿ ಹೇಳಿದರು. ಮಂಡ್ಯದಲ್ಲಿ ಇತ್ತೀಚೆಗೆ ನಡೆದ ಎರಡು ದುರ್ಘಟನೆಗಳ ಬಗ್ಗೆ ವಿಷಾದ ವ್ಯಕ್ತಪಡಿಸಿದರು. ಆಸ್ಪತ್ರೆಯಲ್ಲಿ ಬಾಲಕಿ ಸಾವು ಮತ್ತು ಟ್ರಾಫಿಕ್ ಪೊಲೀಸರ ತಪ್ಪಿನಿಂದ ಬಾಲಕಿ ಸಾವನ್ನಪ್ಪಿದ ಪ್ರಕರಣಗಳನ್ನು ಉಲ್ಲೇಖಿಸಿದರು. ಜನಸಾಮನ್ಯರ ಬಗ್ಗೆ ಸರ್ಕಾರ ನಿರ್ಲಕ್ಷ್ಯ ವಹಿಸಿದೆ**
>
> **– ಎಚ್‌ಡಿ ಕುಮಾರಸ್ವಾಮಿ, ಕೇಂದ್ರ ಸಚಿವ**

# ಕಾಲ್ತುಳಿತಕ್ಕೆ ಪೊಲೀಸರ ಅಮಾನತು ಖಂಡಿಸಿ ಪ್ರತಿಭಟನೆ

• **ಉದಯವಾಹಿನಿ, ಮೈಸೂರು**

ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಐಪಿಎಲ್ ಗೆದ್ದ ಆರ್‌ಸಿಬಿ ತಂಡ ನೋಡಲು ಆಗಮಿಸಿದ ಸಂದರ್ಭದಲ್ಲಿ ಸಂಭವಿಸಿದ ಕಾಲ್ತುಳಿತಕ್ಕೆ ಬೆಂಗಳೂರು ಪೊಲೀಸ್ ಕಮಿಷನರ್ ಅಮಾನತು ಮಾಡಿರುವ ರಾಜ್ಯ ಸರಕಾರದ ನಿಲುವು ಖಂಡಿಸಿ ಮೈಸೂರು ನಗರ ಬಿಜೆಪಿ ವತಿಯಿಂದ ಪ್ರತಿಭಟನೆ ನಡೆಸಲಾಯಿತು. ನಗರದ ರಾಮಸ್ವಾಮಿ ವೃತ್ತದ ಬಳಿ ಜಮಾಯಿಸಿದ ಬಿಜೆಪಿ ಕಾರ್ಯಕರ್ತರು ಕಾಂಗ್ರೆಸ್ ನೇತೃತ್ವದ ರಾಜ್ಯ ಸರಕಾರ ತಮ್ಮ ಪ್ರಚಾರಕ್ಕೆ 11 ಮಂದಿ ಅಮಾಯಕರ ಬಲಿ ಪಡೆದ ಕೆಟ್ಟ ಸರಕಾರ ಇದಾಗಿದೆ. ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ.

ದೇಶ ಕಂಡ ಕಡು ಭ್ರಷ್ಟ ಸಿಎಂ ಸಿದ್ದರಾಮಯ್ಯ ಅವರಿಗೆ ಧಿಕ್ಕಾರ ಎಂದು ನಾಮಫಲಕ ಹಿಡಿದು ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಕಾಲ್ತುಳಿತ ದುರಂತಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಎ1, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಎ2, ಗೃಹ ಸಚಿವ ಡಾ.ಜಿ.ಪರಮೇಶ್ವರ ಎ3 ಆರೋಪಿಗಳಾಗಿ ಮಾಡಬೇಕು.



ಉದಯವಾಹಿನಿ ಚಿತ್ರ

ಅಲ್ಲದೇ, ಈ ಮೂವರು ತಮ್ಮ ಸ್ಥಾನಗಳಿಗೆ ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿದರು. ಈ ವೇಳೆ ಮಾಧ್ಯಮಗಳೊಂದಿಗೆ ಶಾಸಕ ಟಿ.ಎಸ್. ಶ್ರೀವತ್ಸ ಮಾತನಾಡಿ, ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಸಂಭವಿಸಿದದುರಂತಕ್ಕೆ ಪೊಲೀಸ್ ಅಧಿಕಾರಿಗಳು ಹೊಣೆಎಂದು ಅಮಾನತು ಮಾಡಿದ್ದಾರೆ. ಅದೇ ಮೈಸೂರು ಮುಡಾ ಹಗರಣದಲ್ಲಿ ಅಧಿಕಾರಿಗಳ ಮೇಲೆ ಯಾಕೆ ಕ್ರಮ ಆಗಿಲ್ಲ ಎಂದು ಪ್ರಶ್ನಿಸಿದರು. ಬಿಜೆಪಿ ನಗರಾಧ್ಯಕ್ಷ ಎಲ್.ನಾಗೇಂದ್ರ ಮಾತನಾಡಿ, ಬೆಂಗಳೂರಿನಲ್ಲಿ ಸಂಭವಿಸಿದ ಕಾಲ್ತುಳಿತ ಪ್ರಕರಣ ಸಂಬಂಧ ಹಿರಿಯ ಪೊಲೀಸ್ ಅಧಿಕಾರಿಗಳನ್ನು ಅಮಾನತು ಮಾಡಿರುವುದು, ಕೋತಿ ತಿಂದು ಮೇಕೆ ಬಾಯಿಗೆ ಒರೆಸಿದಂತಾಗಿದೆ ಎಂದು ಟೀಕಿಸಿದರು.

ಸಿಎಂ, ಡಿಸಿಎಂ, ಸೇರಿದಂತೆ ಸಚಿವರ ಮಕ್ಕಳು, ಮೊಮ್ಮಕ್ಕಳು ಐಪಿಎಲ್ ಕಪ್ ಗೆದ್ದ ಆರ್‌ಸಿಬಿ ಆಟಗಾರರ ಜತೆಗೆ ಪೋಟೋ ತೆಗೆದುಕೊಳ್ಳಲು ವಿಧಾನಸೌಧದ ಮುಂಭಾಗಕ್ಕೆ ಕರೆಸಿಕೊಂಡಿದ್ದಾರೆ. ಇವರ ಕುಟುಂಬ ಸದಸ್ಯರ ಪೋಟೋ ತೆಗೆಸಲು, ಇವರ ಪ್ರಚಾರಕ್ಕೆ 11 ಮಂದಿ ಅಮಾಯಕರು ಬಲಿಯಾಗಿದ್ದಾರೆ. ಆರ್ಸಿಬಿ ಅಭಿಮಾನಿಗಳ ಸಾವಿಗೆ ರಾಜ್ಯ ಸರಕಾರವೇ ನೇರ ಹೊಣೆಯಾಗಿದೆ. ಆದರೀಗ ಹಿರಿಯ ಪೊಲೀಸ್ ಅಧಿಕಾರಿಗಳನ್ನು ಅಮಾನತು ಮಾಡಿರುವುದು ಸರಿಯಲ್ಲ ಎಂದು ಕಿಡಿಕಾರಿದರು.

> **ಈ ನಡೆಯನ್ನು ಖಂಡಿಸುತ್ತೇವೆ**
>
> **ಸಿಎಂ ಸಿದ್ದರಾಮಯ್ಯ ಅಧಿಕಾರಿಗಳನ್ನು ತಮ್ಮ ಲಾಭ, ಅನುಕೂಲಕ್ಕೆ ತಕ್ಕಂತೆ ದುರ್ಬಳಕೆ ಮಾಡಿಕೊಳ್ಳುತ್ತಿದ್ದಾರೆ. ಇವರ ಪ್ರಚಾರವಾದರೆ ಸಾಕು. ಅಧಿಕಾರಿಗಳು ಏನಾದರೂ ಇವರಿಗೆ ಏನು ಇಲ್ಲ. ಈ ರೀತಿಯ ನಡೆಯನ್ನು ನಾವು ಖಂಡಿಸುತ್ತೇವೆ ಎಂದು ಕಿಡಿಕಾರಿದರು.**

# ಹೇಮಾವತಿ ನೀರಿಗಾಗಿ ಧರಣಿ.. ಹೋರಾಟವಲ್ಲ, ಬರೀ ದೊಂಬರಾಟ: ಮಂಜುನಾಥ್ ಲೇವಡಿ

• **ಉದಯವಾಹಿನಿ, ಮಾಗಡಿ**

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರದಲ್ಲಿದ್ದರೂ ಶಾಸಕ ಎಚ್.ಸಿ. ಬಾಲಕೃಷ್ಣ ಹೇಮಾವತಿ ನೀರಿಗಾಗಿ ರಾಷ್ಟ್ರೀಯ ಹೆದ್ದಾರಿ ತಡೆದು ಪ್ರತಿಭಟನಾ ಧರಣಿ ನಡೆಸಿದ್ದು ಹಾಸ್ಯಸ್ಪದ ಎಂದು ಮಾಜಿ ಶಾಸಕ ಎ.ಮಂಜುನಾಥ್ ಲೇವಡಿ ಮಾಡಿದರು. ಜೆಡಿಎಸ್ ಕಚೇರಿಯಲ್ಲಿ ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಾಗಡಿ ತಾಲ್ಲೂಕಿನ ರೈತರನ್ನು ಮೆಚ್ಚಿಸಲು ಬಾಲಕೃಷ್ಣ ರಸ್ತೆ ತಡೆ, ಪಾದಯಾತ್ರೆ ಮಾಡುತ್ತಿದ್ದಾರೆ.ಬಂಧನ, ಬಿಡುಗಡೆ ಇವೆಲ್ಲವೂ ಏಕಪಾತ್ರ ಅಭಿನಯವಿದ್ದಂತೆ ಕಾಣುತ್ತಿದೆ ಎಂದರು. ಬಾಲಕೃಷ್ಣ ಪ್ರತಿನಿಧಿಸುವ ಕಾಂಗ್ರೆಸ್ ಸರ್ಕಾರ ಅಧಿಕಾರದಲ್ಲಿದ್ದರೂ ಈ ಹೋರಾಟ ಏಕೆ? ಎಲ್ಲವೂ ಜನರಿಗೆ ಅರ್ಥವಾಗುತ್ತಿದೆ. ಪಕ್ಷಾತೀತ ಹೋರಾಟ ಮಾಡುವುದಾಗಿ ಹೇಳಿದವರು ಪೂರ್ವಸಿದ್ದತಾ ಸಭೆಗೆ ಯಾವ ಪಕ್ಷದವರನ್ನೂ ಆಹ್ವಾನಿಸಲಿಲ್ಲ.

ಗಂಭಿರ ಚಿಂತನೆಯಿಲ್ಲ, ಚರ್ಚೆ ನಡೆಯಲಿಲ್ಲ. ಪ್ರಚಾರಕ್ಕಾಗಿ ಮಾತ್ರ ಹೋರಾಟ ಮಾಡಿದರು ಎಂದರು. ಶಾಸಕರಿಗೆ ಹೇಮಾವತಿ ನೀರಾವರಿ ಯೋಜನೆ ಮಾಹಿತಿ ಕೊರತೆಯಿದೆ. ದ್ವಂದ್ವ ಹೇಳಿಕೆ ನೀಡುತ್ತಾ ನೀರಿನ ರಾಜಕೀಯ ಮಾಡಿಕೊಂಡು ಪ್ರಚಾರ ಗಿಟ್ಟಿಸಿಕೊಳ್ಳಲು ಹೊರಟಿದ್ದಾರೆ. ಬಾಲಕೃಷ್ಣ ಅವರಿಗೆ ಬದ್ಧತೆ ಇದ್ದರೆ ವಿಧಾನಸೌಧ ಮುಂದಿನ ಗಾಂಧಿ ಪ್ರತಿಮೆ ಬಳಿ ಸತ್ಯಾಗ್ರಹ ಮಾಡಲಿ. ಸತ್ಯಾಗ್ರಹದಲ್ಲಿ ನಾನೂ ಭಾಗವಹಿಸುತ್ತೇನೆ. ಅದನ್ನು ಬಿಟ್ಟು ಹೋರಾಟದ ದೊಂಬರಾಟ ಮಾಡಿದರೆ ಹೇಗೆ' ಎಂದು ಪ್ರಶ್ನಿಸಿದರು.



ಉದಯವಾಹಿನಿ ಚಿತ್ರ

> **ಮಾಗಡಿ ಪಾಲಿನ ಹೇಮಾವತಿ ನೀರಿಗಾಗಿ ಬೀದಿಗಿಳಿದು ಹೋರಾಟ ಮಾಡುವ ಅಗತ್ಯವಿಲ್ಲ. ಕಾನೂನು ಹೋರಾಟದಿಂದ ಮಾಗಡಿಗೆ ಹೇಮಾವತಿ ನೀರು ಪಡೆಯಬಹುದು**
>
> **–ಎ.ಮಂಜುನಾಥ್, ಮಾಜಿ ಶಾಸಕ**

# ಟಾಟಾ ಎಲೆಕ್ಟ್ರಾನಿಕ್‌ನಿಂದ ನಿರ್ಮಿಸಲಾದ 18 ಅಂಗನವಾಡಿ, 4 ಶಾಲಾ ಕೊಠಡಿ ಉದ್ಘಾಟನೆ

• **ಉದಯವಾಹಿನಿ, ವೇಮಗಲ್**

ತಾಲ್ಲೂಕಿನ ಕೈಗಾರಿಕಾ ಪ್ರದೇಶದ ಟಾಟಾ ಎಲೆಕ್ಟ್ರಾನಿಕ್ ಕಂಪನಿ ವತಿಯಿಂದ ತಾಲ್ಲೂಕಿನ ವಿವಿಧೆಡೆ ನಿರ್ಮಿಸಲಾದ 18 ಅಂಗನವಾಡಿ ಕೇಂದ್ರಗಳು ಮತ್ತು ಪಟ್ಟಣದಲ್ಲಿರುವ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ನಿರ್ಮಿಸಿಕೊಡಲಾದ ನಾಲ್ಕು ಶಾಲಾ ಕೊಠಡಿಗಳನ್ನು ಉದ್ಘಾಟಿಸಲಾಯಿತು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಜಿಲ್ಲಾ ಎಸ್‌ಪಿ ನಿಖಿಲ್ ಬಿ, ಶಿಕ್ಷಣ ಕ್ಷೇತ್ರದಲ್ಲಿ ಪ್ರಗತಿ ಸಾಧಿಸಿದಾಗ ಮಾತ್ರ ದೇಶದ ಅಭಿವದ್ಧಿ ಸಾಧ್ಯ ಎಂಬ ಉದ್ದೇಶದೊಂದಿಗೆ ಕಂಪನಿಗಳು ಶಿಕ್ಷಣ, ಆರೋಗ್ಯ ಕ್ಷೇತ್ರಕ್ಕೆ ಆದ್ಯತೆ ನೀಡಿವೆ.

ವೇಮಗಲ್ ಕರ್ನಾಟಕ ಮಾದರಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ವಾತಾವರಣವು ಸ್ವಚ್ಛವಾಗಿದ್ದು, ಅದನ್ನು ಮುಂದುವರಿಸಿಕೊಂಡು ಹೋಗಬೇಕು ಎಂದು ಹೇಳಿದರು.

**ಪ್ರತಿಭೆ ಸಾಧಕನ ಸ್ವತ್ತು:** ಪ್ರತಿಭೆ ಸಾಧಕನ ಸ್ವತ್ತಾಗಿದ್ದು, ಯಾರು ಕಷ್ಟಪಟ್ಟು ಆಸಕ್ತಿಯಿಂದ ಶ್ರಮಿಸುವವರು ಸಾಧನೆ ಮಾಡಲಿದ್ದಾರೆ. ಟಾಟಾ ಎಲೆಕ್ಟ್ರಾನಿಕ್ ಕಂಪನಿಯು ವಿದ್ಯಾರ್ಥಿಗಳಿಗಾಗಿ ಏಳಿಗೆಗೆ ಶಕ್ತಿ ಮೀರಿ ಸಿಎಸ್ಅರ್ ಅನುದಾನದಲ್ಲಿ ಶಾಲಾ ಕೊಠಡಿಗಳನ್ನು ನಿರ್ಮಿಸಿ ಕೊಟ್ಟಿದೆ ಎಂದರು. ಬದುಕಿನಲ್ಲಿ ಪುಸ್ತಕ ಸಂಸ್ಕೃತಿ ಬಹು ಮುಖ್ಯವಾಗಿದ್ದು, ಮಹತ್ವದ ಪಾತ್ರ ವಹಿಸುತ್ತವೆ. ಆದರೆ, ಇಂದು ಪುಸ್ತಕ ಓದುವುದು ಮರೆಯಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು.



ಉದಯವಾಹಿನಿ ಚಿತ್ರ


# ಜಿಲ್ಲೆಯ ಎಲ್ಲೆಡೆ ಬಕ್ರೀದ್ ಸಂಭ್ರಮ

• **ಉದಯವಾಹಿನಿ, ಕೋಲಾರ**

ತ್ಯಾಗ, ಬಲಿದಾನದ ಪ್ರತೀಕವಾದ ಬಕ್ರೀದ್ ಹಬ್ಬವನ್ನು ಮುಸ್ಲಿಂ ಸಮುದಾಯದವರು ಶನಿವಾರ ನಗರ ಹಾಗೂ ಗ್ರಾಮಾಂತರ ಪ್ರದೇಶದಲ್ಲಿ ಶ್ರದ್ಧಾ, ಭಕ್ತಿಯಿಂದ ಆಚರಿಸಿದರು. ಬೆಳಿಗ್ಗೆ 9ಕ್ಕೆ ನಗರದ ಚಿಕ್ಕಬಳ್ಳಾಪುರ ರಸ್ತೆಯಲ್ಲಿರುವ ಸಂಗೊಂಡಹಳ್ಳಿಯ ಮೌಲಾಖಾಜ ಇದ್ದಾ ಮೈದಾನದಲ್ಲಿ ಮೌಲಾನ ಮೌಲ್ವಿ ನಜೀಮ್ ಅಲಿ ಅಶ್ರಫಿ ಸಾಹೇಬ್ ನೇತೃತ್ವದಲ್ಲಿ ಈದ್ ಉಲ್ ಅದ್ದಾ ಪ್ರಾರ್ಥನೆ ನಡೆಯಿತು.



ಉದಯವಾಹಿನಿ ಚಿತ್ರ



ಉದಯವಾಹಿನಿ ಚಿತ್ರ

ಬೆಂಗಳೂರು ರಸ್ತೆಯ ಶಾಹಿ ಇದ್ದಾ ಮೈದಾನದಲ್ಲಿ ಬೆಳಿಗ್ಗೆ 10ಕ್ಕೆ ಮೌಲಾನ ಮೌಲ್ವಿ ಮುಫ್ತಿ ಮೊಹಮ್ಮದ್ ಅಸಾದುಲ್ಲಾ ಖಾನ್ ಖಾಸ್ಮೀ ಸಾಹೇಬ್ ನೇತೃತ್ವದಲ್ಲಿ ಪ್ರಾರ್ಥನೆ ನಡೆಯಿತು. ಪ್ರಾರ್ಥನೆ ನೆರವೇರಿಸಿ ಹಬ್ಬದ ಸಂದೇಶ ಸಾರಿದರು.

ಬಕ್ರೀದ್ ಹಬ್ಬದ ಆಚರಣೆ, ದಾನ ಧರ್ಮದ ಮಹತ್ವ ಕುರಿತು ಬೋಧನೆ ಮಾಡಿದರು. ಸಮಾಜದಲ್ಲಿ ಎಲ್ಲರೊಂದಿಗೂ ಸಹೋದರರಂತೆ ಬೆರೆತು ಬಾಳುವಂತೆ ಕರೆ ನೀಡಿದರು. ಎರಡೂ ಇದ್ದಾ ಮೈದಾನಗಳಲ್ಲಿ ಅಪಾರ ಸಂಖ್ಯೆಯಲ್ಲಿ ನೆರೆದಿದ್ದ ಮುಸ್ಲಿಂ ಸಮುದಾಯ ದವರು ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು. ಇದಕ್ಕೂ ಮುಂಚೆ ಬೆಳಿಗ್ಗೆ 7 ಗಂಟೆಯಿಂದಲೇ ವಿವಿಧ ಮಸೀದಿಗಳಲ್ಲಿ ಪ್ರಾರ್ಥನೆ ಸಲ್ಲಿಸಿ ಅಲ್ಲಾಹುವಿನ ಸ್ಮರಣೆ ಮಾಡಿದರು. ಬೆಂಗಳೂರು ರಸ್ತೆಯ ಶಾಹಿ ಈದ್ಗಾ ಮೈದಾನದಲ್ಲಿ ಹೆಚ್ಚು ಜನರು ಸೇರಿದ್ದರಿಂದ ಕೆಲವರು ಪಕ್ಕದಲ್ಲೇ ಇರುವ ಮೇಲ್ಸೇತುವೆ ಮೇಲೂ ಕುಳಿತು ಪ್ರಾರ್ಥನೆ ಸಲ್ಲಿಸಿದರು. ಆಗ ಸಂಚಾರ ನಿರ್ಬಂಧಿಸಲಾಗಿತ್ತು. ಪ್ರಾರ್ಥನೆಯ ಬಳಿಕ ಪರಸ್ಪರ ಶುಭಾಶಯ ವಿನಿಮಯ ಮಾಡಿಕೊಂಡರು.

**ಶುಭ ಕೋರಿದ ಮುಖಂಡರು:** ಶಾಹಿ ಇದ್ದಾ ಮೈದಾನದಲ್ಲಿ ನಡೆದ ಸಾಮೂಹಿಕ ಪ್ರಾರ್ಥನೆಯಲ್ಲಿ ಮುಖ್ಯಮಂತ್ರಿ ರಾಜಕೀಯ ಕಾರ್ಯದರ್ಶಿ ನಸೀರ್ ಅಹ್ಮದ್, ಶಾಸಕ ಕೊತ್ತೂರು ಮಂಜುನಾಥ್, ಮುಖಂಡ ಕೆ.ವಿ.ಗೌತಮ್ ಸೇರಿದಂತೆ ಹಲವರು ಮುಖಂಡರು ಪಾಲ್ಗೊಂಡಿದ್ದರು. ಬಳಿಕ ಮುಸ್ಲಿಂ ಸಮುದಾಯದವರಿಗೆ ಶುಭಾಶಯ ಕೋರಿದರು.



ಉದಯವಾಹಿನಿ ಚಿತ್ರ

# ತ್ಯಾಗ ಬಲಿದಾನದ ಬಕ್ರೀದ್ ಆಚರಣೆ

• **ಉದಯವಾಹಿನಿ, ಚಾಮರಾಜನಗರ**

ತ್ಯಾಗ, ಬಲಿದಾನದ ಮಹತ್ವ ಸಾರುವ ಬಕ್ರೀದ್ ಹಬ್ಬವನ್ನು ಶನಿವಾರ ಜಿಲ್ಲೆಯಾದ್ಯಂತ ಮುಸ್ಲಿಮರು ಶ್ರದ್ಧಾ ಭಕ್ತಿಯಿಂದ ಆಚರಿಸಿದರು.

ಬೆಳಿಗ್ಗೆ ಸೋಮವಾರಪೇಟೆಯ ಅಹಲೆ ಅದಿಶಾ ಇದ್ದಾ ಮೈದಾನದಲ್ಲಿ ಮುಸ್ಲಿಮರು ಸಾಮೂಹಿಕ ಪ್ರಾರ್ಥನೆ ಸಲ್ಲಿಸಿ ಅಲ್ಲಾಹುವಿನ ಸ್ಮರಣೆ ಮಾಡಿದರು. ಜುಬ್ಬಾ ಪೈಜಾಮ, ಟೋಪಿ ಧರಿಸಿ ನಮಾಜ್‌ನಲ್ಲಿ ಭಾಗವಹಿಸಿದ್ದ ಮುಸ್ಲಿಮರು ಪರಸ್ಪರ ಹಬ್ಬದ ಶುಭಾಶಯ ವಿನಿಯಮ ಮಾಡಿಕೊಂಡರು. ಮಕ್ಕಳು ಪ್ರಾರ್ಥನೆಯಲ್ಲಿ ಭಾಗವಹಿಸಿ ಸಂಭ್ರಮಿಸಿದರು. ಪಾಲಿಟೆಕ್ನಿಕ್ ಕಾಲೇಜು ಬಳಿಯ ಈದ್ಗಾ ಮೈದಾನದಲ್ಲೂ ನಮಾಜ್ ಮಾಡಲಾಯಿತು.



ಉದಯವಾಹಿನಿ ಚಿತ್ರ

ಮಸೀದಿಗಳಲ್ಲಿ ಮೌಲ್ವಿಗಳ ನೇತೃತ್ವದಲ್ಲಿ ಪ್ರಾರ್ಥನೆ ನಡೆಯಿತು. ನಗರದಲ್ಲಿ ಮುಸ್ಲಿಮರ ಬಾಹುಳ್ಯ ಹೆಚ್ಚಾಗಿರುವ ಗಾಳಿಪುರ ಸೇರಿದಂತೆ ಹಲವು ಮೊಹಲ್ಲಗಳಲ್ಲಿ ಹಬ್ಬದ ಸಂಭ್ರಮ ಮನೆ ಮಾಡಿತ್ತು. ಬಂಧು ಬಾಂಧವರು ಹಬ್ಬದಲ್ಲಿ ಭಾಗಿಯಾಗಲು ಬಂದಿದ್ದರಿಂದ ದಟ್ಟಣೆ ಹೆಚ್ಚಾಗಿತ್ತು.

ಹಬ್ಬಕ್ಕಾಗಿ ಮುಂಚಿತವಾಗಿಯೇ ಸಂತೆಗಳಿಂದ ಖರೀದಿಸಿ ತಂದಿದ್ದ ಕುರಿ–ಮೇಕೆಗಳನ್ನು ಕುರ್ಬಾನಿ ಕೊಟ್ಟು ತರಹೇವಾರಿ ಮಾಂಸದ ಖಾದ್ಯಗಳನ್ನು ತಯಾರಿಸಲಾಯಿತು. ಮೊಹಲ್ಲಗಳಲ್ಲಿ ಬಿರಿಯಾನಿ ಹಾಗೂ ಮಾಂಸದೂಟದ ಘಮಲು ಹರಡಿತ್ತು. ಹಬ್ಬಕ್ಕೆ ಬಂದಿದ್ದ ಸಂಬಂಧಿಗಳು, ನೆರೆಹೊರೆಯವರ ಜೊತೆಗೆ ಸಹ ಭೋಜನ ನಡೆಸಿ ಸಂಭ್ರಮ ಹಂಚಿಕೊಂಡರು.

# ಕೃಷಿ ಜೊತೆ ಕೋಳಿ ಸಾಕಾಣೆ ಲಾಭದಾಯಕ: ಶಾಸಕ

• **ಉದಯವಾಹಿನಿ, ಚಾಮರಾಜನಗರ**

ಪಶು ವೈದ್ಯಕೀಯ ಸೇವಾ ಇಲಾಖೆ, ಸಹಕಾರ ಕುಕ್ಕುಟ ಮಹಾಮಂಡಳದ ವತಿಯಿಂದ ನಗರದ ಪಶುಪಾಲನಾ ಇಲಾಖೆ ಸಹಾಯಕ ನಿರ್ದೇಶಕರ ಕಚೇರಿ ಆವರಣದಲ್ಲಿ ಚಾಮರಾಜನಗರ ವಿಧಾನ ಸಭಾ ಕ್ಷೇತ್ರದ 121 ಫಲಾನುಭವಿಗಳಿಗೆ ಕೋಳಿಮರಿ ವಿತರಿಸುವ ಕಾರ್ಯಕ್ರಮಕ್ಕೆ ಶಾಸಕ ಸಿ.ಪುಟ್ಟರಂಗಶೆಟ್ಟಿ ಚಾಲನೆ ನೀಡಿದರು. ಬಳಿಕ ಮಾತನಾಡಿದ ಅವರು, ಗಿರಿರಾಜ ತಳಿಯ ಕೋಳಿಮರಿಗಳನ್ನು ಪಡೆದಿರುವ ಫಲಾನುಭವಿಗಳು ಕೃಷಿ, ಹೈನುಗಾರಿಕೆಯ ಜೊತೆಗೆ ಉಪ ಆದಾಯ ಪಡೆಯಬಹುದಾಗಿದ್ದು ಆರ್ಥಿಕ ಸಬಲೀಕರಣಕ್ಕೆ ನೆರವಾಗಲಿದೆ. ವಿಶೇಷವಾಗಿ ಮಹಿಳೆಯರು ಕಾರ್ಯಕ್ರಮದ ಸವಲತ್ತು ಪಡೆದುಕೊಳ್ಳಬೇಕು ಎಂದು ಸಲಹೆ ನೀಡಿದರು.



ಉದಯವಾಹಿನಿ ಚಿತ್ರ

ಪಶುಪಾಲನಾ ಇಲಾಖೆ ಉಪ ನಿರ್ದೇಶಕ ಹನುಮೇಗೌಡ ಮಾತನಾಡಿ, ಈಚೆಗೆ ಕೃಷಿ ಆಧಾರಿತ ಕಸುಬುಗಳಲ್ಲಿ ಒಂದಾದ ಕೋಳಿ ಸಾಕಣೆಯ ಮೂಲಕವೂ ಹೆಚ್ಚು ಲಾಭಗಳಿಸಲು ಅವಕಾಶವಿದ್ದು ಆಸಕ್ತರು ಸದುಪಯೋಗ ಮಾಡಿಕೊಳ್ಳಬೇಕು. ಕೋಳಿಸಾಕಣೆದಾರರು ಮೊದಲ 5 ವಾರ ಮರಿಗಳನ್ನು ಜೋಪಾನವಾಗಿರಿಸಿ ಆರೋಗ್ಯದ ಬಗ್ಗೆ ಗಮನಹರಿಸಬೇಕು ಎಂದು ಸಲಹೆ ನೀಡಿದರು.

# ತುಮಕೂರಿನ ಯದ್ವಾತದ್ವಾ ಹೆದ್ದಾರಿಗೂ ಟೋಲ್!

## ಗುಬ್ಬಿ–ಮಂಡ್ಯ ಸಂಪರ್ಕದ ತಾಲ್ಲೂಕಿನ ಜಿ.ಹೊಸಹಳ್ಳಿ ಬಳಿ ಹೊಸ ಟೋಲ್, ಭಾರಿ ವಿರೋಧ

• **ಉದಯವಾಹಿನಿ, ಗುಬ್ಬಿ**

ತುಮಕೂರು ಜಿಲ್ಲಾ ವ್ಯಾಪ್ತಿಯಲ್ಲಿ ಹಾದು ಹೋಗುವ ಐದು ರಾಷ್ಟ್ರೀಯ ಹೆದ್ದಾರಿಗಳೂ ಯದ್ವಾತದ್ವಾ. ಗುಂಡಿ–ಹೊಂಡಗಳು, ಅವೈಜ್ಞಾನಿಕ ತಿರುವುಗಳು, ಕಿರಿದಾದ ರಸ್ತೆಗಳು, ನಾನಾ ಕಡೆಗಳಲ್ಲಿ ಕಾಮಗಾರಿ ವಿಳಂಬದಿಂದ ಪ್ರಯಾಣ ಹೈರಾಣದ ದುಸ್ಥಿತಿಯಿದೆ. ರಸ್ತೆ ಅಭಿವೃದ್ಧಿ ಆಗದಿದ್ದರೂ ಪರವಾಗಿಲ್ಲ, ಟೋಲ್ ವಸೂಲಿ ಮಾತ್ರ ಆಗಬೇಕೆಂಬ ಧೋರಣೆ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ, ರಾಜ್ಯ ಹೆದ್ದಾರಿ ಪ್ರಾಧಿಕಾರ, ಟೋಲ್ ಗುತ್ತಿಗೆ ಪಡೆದವರದ್ದಾಗಿದೆ. ಇದೀಗ ಗುಬ್ಬಿ ಭಾಗದಲ್ಲಿ ಮತ್ತೊಂದು ಹೊಸ ಟೋಲ್ ಪ್ಲಾಜಾ ನಿರ್ಮಾಣಕ್ಕೆ ಸಿದ್ಧತೆ ನಡೆದಿದ್ದು, ರೈತರು ಸ್ಥಳೀಯರು ತೀವ್ರ ವಿರೋಧ ವ್ಯಕ್ತಪಡಿಸಿ ಪ್ರತಿಭಟನೆ ನಡೆಸಿದ್ದಾರೆ.

ಹೌದು ಮಂಡ್ಯದ ಕೌಡ್ಲಿಗಿ ಸಂಪರ್ಕ ಕಲ್ಪಿಸುವ ರಾಜ್ಯ ಹೆದ್ದಾರಿಯಲ್ಲಿ ಟೋಲ್ ಪ್ಲಾಜಾ ನಿರ್ಮಾಣದ ತೆರೆಮರೆ ಕಸರತ್ತು ನಡೆದಿದ್ದು, ಸ್ಥಳೀಯರು ಆಕ್ಷೇಪ ಎತ್ತಿದ್ದಾರೆ. ಗುಬ್ಬಿಯಿಂದ ಮಂಡ್ಯದ ಕೌಡ್ಲಿಗಿ ಸಂಪರ್ಕ ಕಲ್ಪಿಸುವ ರಾಜ್ಯ ಹೆದ್ದಾರಿಯನ್ನು ಕಳೆದ ಐದು ವರ್ಷಗಳ ಹಿಂದೆ ಮೇಲ್ದರ್ಜೆಗೇರಿಸಿ ರಸ್ತೆ ಅಭಿವೃದ್ಧಿಗೆ ಚಾಲನೆ ನೀಡಿದ್ದ ಸರಕಾರ ಇದುವರೆಗೂ ರಸ್ತೆ ಕಾಮಗಾರಿ ಸರಿಯಾಗಿ ಮುಗಿಸಿಲ್ಲ. ಹೀಗಿರುವಾಗ ಜಿ.ಹೊಸಹಳ್ಳಿಯಲ್ಲಿ ಟೋಲ್ ಪ್ಲಾಜಾ ತೆರೆಯುತ್ತಿರುವುದು ಸರಿಯಲ್ಲ ಎಂದು ಜನ ವಿರೋಧಿಸುತ್ತಿದ್ದಾರೆ.

**ಪ್ರತಿಭಟನೆ:** ಟೋಲ್ ಪ್ಲಾಜಾ ನಿರ್ಮಾಣ ಖಂಡಿಸಿ ರೈತರು, ಸ್ಥಳೀಯರು ಜಿ.ಹೊಸಹಳ್ಳಿಯಲ್ಲಿ ಪ್ರತಿಭಟನೆ ನಡೆಸಿದರು. ಈ ವೇಳೆ ಮಾತನಾಡಿದ ರೈತಸಂಘದ ತಾಲ್ಲೂಕು ಕಾರ್ಯದರ್ಶಿ ಸಿ.ಜಿ.ಲೋಕೇಶ್, ರಸ್ತೆ ಅಭಿವೃದ್ಧಿ ಪಡಿಸದೆ ದಿಢೀರ್ ಗುಬ್ಬಿ ಹೊಸಹಳ್ಳಿ ಬಳಿ ಟೋಲ್ ಪ್ಲಾಜಾ ಮಾಡಲು ಹೊರಟಿದ್ದನ್ನು ತೀವ್ರವಾಗಿ ಖಂಡಿಸುತ್ತೇವೆ ಎಂದಿದ್ದಾರೆ.



ಉದಯವಾಹಿನಿ ಚಿತ್ರ

**ಟೋಲ್ ಪ್ಲಾಜಾ ನಿರ್ಮಾಣದ ಕಸರತ್ತು**

ರಾಜ್ಯ ಹೆದ್ದಾರಿ 84ನ್ನು ಮಾಜಿ ಶಾಸಕರಾದ ದಿ.ವೀರಣ್ಣಗೌಡರ ಅವಧಿಯಲ್ಲಿ ಎರಡು ಜಿಲ್ಲೆಗಳ ನಡುವೆ ರಸ್ತೆ ಸಂಪರ್ಕ ಕಲ್ಪಿಸುವ ದೂರದೃಷ್ಟಿ ಇಟ್ಟುಕೊಂಡು ಈ ರಸ್ತೆಯನ್ನು ಕೆ–ಶಿಪ್‌ಗೆ ವಹಿಸಿ ಮೇಲ್ದರ್ಜೆಗೆ ಏರಿಸಿದ್ದರು. ಆದರೆ, ಹಲವು ತಾಂತ್ರಿಕ ದೋಷದಿಂದ ಈ ರಸ್ತೆ ಇನ್ನು ಸಂಪೂರ್ಣವಾಗಿಲ್ಲ. ಇಲ್ಲಿಹಲವಾರು ತಿರುವುಗಳಿದ್ದು, ತಿರುವುಗಳು ಇರಬಾರದೆಂಬ ಕಾನೂನಿದ್ದರೂ ಅಧಿಕಾರಿಗಳಾಗಲಿ, ಗುತ್ತಿಗೆದಾರರಾಗಲಿ ಸರಿ ಪಡಿಸಿಲ್ಲ. ಕಲ್ಲೂರು ಕೆರೆಯ ಮೇಲಂತೂ ತಿರುವುಗಳ ರಸ್ತೆಯಿದೆ, ಸುರುಗೇನಹಳ್ಳಿ ಬಳಿ, ಕೆ.ಜಿ.ಟೆಂಪಲ್ ಬಳಿ ಅಪಾಯಕಾರಿ ತಿರುವುಗಳಿವೆ. ಇಲ್ಲಿಅನೇಕ ಸಣ್ಣ ಪುಟ್ಟ ಅಪಘಾತಗಳು ಸಂಭವಿಸುತ್ತಲೇ ಇರುತ್ತವೆ. ಹೀಗಿರುವಾಗ ಇವೆಲ್ಲವನ್ನು ಸರಿಪಡಿಸದ ಇಲಾಖೆ ಏಕಾಏಕಿ ಈ ರಸ್ತೆಯಲ್ಲಿ ಟೋಲ್ ಸಂಗ್ರಹಿಸಲು ಹೊರಟರೆ ಸ್ಥಳೀಯರ ಗತಿಯೇನೆಂದು ಪ್ರಶ್ನಿಸಿ, ಯೋಜನೆ ಕೈಬಿಡದಿದ್ದರೆ ಉಗ್ರ ಹೋರಾಟದ ಎಚ್ಚರಿಕೆ ನೀಡಿದ್ದಾರೆ ಎಂದಿದ್ದಾರೆ ರವೀಶ್, ಯತೀಶ್ ಕನ್ನಿಗಪ್ಪ ಪಾಪಣ್ಣ ಸತ್ತಿಗಪ್ಪ ಗಂಗರಾಯಣ್ಣ ಸೇರಿದಂತೆ ಹೊಸಹಳ್ಳಿ ಗ್ರಾಮಸ್ಥರಿದ್ದರು.

> **ಮೂರು ಬಾರಿ ಟೋಲ್ ಮಾಡಲು ಬಂದಿರುವವರನ್ನು ನಾವೇ ತಡೆದಿದ್ದೇವೆ. ಇಲ್ಲಿ ಕೆಎಸ್ಆರ್‌ಟಿಸಿ ಮತ್ತು ಚಿಕ್ಕಪುಟ್ಟ ವಾಹನಗಳ ಓಡಾಡುವುದು ಬಿಟ್ಟರೆ ಇವರಿಗೆ ಹಣ ಸಿಗುವ ಭಾರಿ ವಾಹನಗಳ ಸಂಚಾರವೇನು ಇಲ್ಲಿ ಇದುವರೆಗೂ ಇರುವುದಿಲ್ಲ. ಆದ್ದರಿಂದ ಈ ಟೋಲ್ ಅವಶ್ಯಕವಿಲ್ಲ. ಗೋಪಾಲಪುರ ಗೇಟ್‌ನ ಬಳಿಯಿಂದ ಗುಬ್ಬಿ ಹೊಸಹಳ್ಳಿ ಬಸ್ ನಿಲ್ದಾಣದವರೆಗೆ ರಸ್ತೆ ಇಳಿಜಾರಾಗಿದ್ದು, ಇಲ್ಲಿಈಗಾಗಲೇ ಅನೇಕ ಅಪಘಾತಗಳಾಗಿ ಸಾವು ನೋವು ಸಂಭವಿಸಿರುತ್ತದೆ. ಮುಖ್ಯವಾಗಿ ಇಲ್ಲಿ ಸರಕಾರಿ ಶಾಲೆಯಿದ್ದು, ಮಕ್ಕಳು ರಸ್ತೆ ದಾಟಲು ಬಹಳ ಕಷ್ಟವಾಗಿದೆ**
>
> **–ಜಿ.ಹೊಸಹಳ್ಳಿ ಪ್ರಸಾದ್, ರೈತ ಮುಖಂಡ**

> **ಉಗ್ರ ಹೋರಾಟದ ಎಚ್ಚರಿಕೆ**
>
> **ತುಮಕೂರು ಜಿಲ್ಲೆಯಲ್ಲಿ ಹಾದುಹೋಗುವ ರಾಷ್ಟ್ರೀಯ ಹೆದ್ದಾರಿಗಳ ದುಸ್ಥಿತಿಯ ನಡುವೆಯೂ, ಗುಬ್ಬಿ ಬಳಿ ಹೊಸ ಟೋಲ್ ಪ್ಲಾಜಾ ನಿರ್ಮಾಣಕ್ಕೆ ಸಿದ್ಧತೆ ನಡೆಯುತ್ತಿದೆ. ರಸ್ತೆ ಅಭಿವೃದ್ಧಿ ಕಾರ್ಯಗಳು ವಿಳಂಬವಾಗಿದ್ದರೂ, ಟೋಲ್ ವಸೂಲಿ ಮಾಡಲು ಹೊರಟಿರುವ ಹೆದ್ದಾರಿ ಪ್ರಾಧಿಕಾರದ ಕ್ರಮವನ್ನು ರೈತರು ಮತ್ತು ಸ್ಥಳೀಯರು ತೀವ್ರವಾಗಿ ವಿರೋಧಿಸಿ ಪ್ರತಿಭಟನೆ ನಡೆಸಿದ್ದಾರೆ. ರಸ್ತೆ ದುರಸ್ತಿ ಮಾಡದೆ ಟೋಲ್ ಸಂಗ್ರಹಿಸಿದರೆ ಉಗ್ರ ಹೋರಾಟ ಮಾಡುವುದಾಗಿ ಎಚ್ಚರಿಕೆ ನೀಡಿದ್ದಾರೆ.**

# ಮಿನಿ ನ್ಯೂಸ್

## ಇಬ್ಬರು ಮಕ್ಕಳೊಂದಿಗೆ ನದಿಗೆ ಹಾರಿ ತಾಯಿ ಆತ್ಮಹತ್ಯೆ

• **ಉದಯವಾಹಿನಿ, ಚಿಕ್ಕಬಳ್ಳಾಪುರ**

ಇಬ್ಬರು ಮಕ್ಕಳೊಂದಿಗೆ ತಾಯಿ ಕೆರೆಗೆ ಹಾರಿ ಆತ್ಮಹತ್ಯೆ ಮಾಡಿಕೊಂಡಿರುವ ದಾರುಣ ಘಟನೆ ಚಿಕ್ಕಬಳ್ಳಾಪುರ ಗ್ರಾಮಾಂತರ ಪೊಲೀಸ್ ಠಾಣೆ ವ್ಯಾಪ್ತಿಯ ಸೂಸೆಪಾಳ್ಯದ ರಂಗಧಾಮಕೆರೆಯಲ್ಲಿ ನಡೆದಿದೆ. ಸೂಸೆಪಾಳ್ಯದ ಲಾವಣ್ಯ (28) ಈಕೆಯ ಪುತ್ರಿಯರಾದ ನಿಹಾರಿಕಾ (12), ನೇಹ (6) ಆತ್ಮಹತ್ಯೆ ಮಾಡಿಕೊಂಡ ದುರ್ದೈವಿಗಳು.

**ದುರಂತದ ವಿವರ:** ಚಿಕ್ಕಬಳ್ಳಾಪುರ ನಗರದ ಗಂಗನಮಿದ್ದೇ ರಸ್ತೆಯಲ್ಲಿನ ಬ್ರೈಟ್ ಸ್ಕೂಲಿನಲ್ಲಿ ಈ ಹಿಂದಿನ ಶೈಕ್ಷಣಿಕ ಸಾಲಿನಲ್ಲಿ ವ್ಯಾಸಂಗ ಮಾಡುತ್ತಿದ್ದ ನಿಹಾರಿಕಾ ಮತ್ತು ನೇಹರನ್ನು ಮುಂದಿನ ತರಗತಿಗಳಿಗೆ ಸೇರಿಸಲು ಲಾವಣ್ಯ ತನ್ನ ಪತಿಯೊಂದಿಗೆ ಶಾಲೆಯಲ್ಲಿ ಕರೆದಿದ್ದ ಪೋಷಜರ ಸಭೆಯಲ್ಲಿ ಪಾಲ್ಗೊಂಡಿದ್ದರು. ಪೋಷಕರ ಸಭೆಯ ನಂತರ ಇಬ್ಬರು ಮಕ್ಕಳ ಜೊತೆಗೆ ಲಾವಣ್ಯ ಮತ್ತು ಪತಿ ಜಯಣ್ಣ ಮನೆಗೆ ತೆರಳಲು ಶಾಲೆಯಿಂದ ಹೊರಗೆ ಬಂದಿದ್ದಾರೆ. ಹೊರಬಂದವರೇ ಮಕ್ಕಳ ಜೊತೆ ನೀನು ಮನೆಗೆ ನಡಿ ಎಂದು ಜಯಣ್ಣ ಪತ್ನಿಗೆ ಹೇಳಿದ್ದು ಅದರಂತೆ ಪತ್ನಿ ತನ್ನ ಇಬ್ಬರು ಮಕ್ಕಳೊಂದಿಗೆ ತನ್ನ ಗ್ರಾಮದತ್ತ ಹೊರಟಿದ್ದಾಳೆ.

ಜಯಣ್ಣ ಸಂಜೆ ಮನೆಗೆ ಬಂದು ನೋಡಿದಾಗ ಪತ್ನಿ ಹಾಗೂ ಮಕ್ಕಳು ಮನೇಲಿ ಇರಲಿಲ್ಲ. ವಿಚಲಿತನಾದ ಜಯಣ್ಣ ತನ್ನ ಬಂಧುಬಳಗ ನೆಂಟರಿಷ್ಟರ ಬಳಿ ವಿಚಾರಿಸಿದರೂ ಅವರ ಸುಳಿವು ಸಿಕ್ಕಿರಲಿಲ್ಲ. ಈ ನಡುವೆ ನಿನ್ನೆ ರಂಗಧಾಮಕೆರೆಯಲ್ಲಿ ಮೃತ ದೇಹಗಳು ಕಂಡುಬಂದಿವೆ. ತಾಯಿ ತನ್ನ ಮಕ್ಕಳೊಂದಿಗೆ ಆತ್ಮಹತ್ಯೆ ಮಾಡಿಕೊಳ್ಳಲು ಯಾವುದೇ ನಿಖರ ಮಾಹಿತಿ ಸಿಕ್ಕಿಲ್ಲ ಪೊಲೀಸರ ತನಿಖೆಯಿಂದ ಅಷ್ಟೇ ಸತ್ಯ ಹೊರ ಬರಬೇಕಿದೆ. ಗ್ರಾಮಸ್ಥರಿಂದ ಮಾಹಿತಿ ಪಡೆದ ಚಿ.ಗ್ರಾ. ಪೊಲೀಸರು ಸ್ಥಳಕ್ಕೆ ತೆರಳಿ ಪರಿಶೀಲನೆ ನಡೆಸಿ ಮೃತದೇಹಗಳನ್ನು ಚಿಕ್ಕಬಳ್ಳಾಪುರ ಜಿಲ್ಲಾಸ್ಪತ್ರೆಯ ಶವಗಾರಕ್ಕೆ ಸಾಗಿಸಿ ಮರಣೋತ್ತರ ಪರೀಕ್ಷೆಯ ನಂತರ ವಾರಸುದಾರರಿಗೆ ಮೃತದೇಹಗಳನ್ನು ಹಸ್ತಾಂತರಿಸಿದ್ದಾರೆ. ಘಟನೆ ಸಂಬಂಧ ಪ್ರಕರಣ ದಾಖಲಿಸಿಕೊಂಡ ಚಿಕ್ಕಬಳ್ಳಾಪುರ ಗ್ರಾಮಾಂತರ ಪೊಲೀಸರು ಮುಂದಿನ ಕ್ರಮ ಕೈಗೊಂಡಿದ್ದಾರೆ.

## ಕುದೇರಿನಲ್ಲಿ ಬೋನಿಗೆ ಬಿದ್ದ ಚಿರತೆ

• **ಉದಯವಾಹಿನಿ, ಸಂತೇಮರಹಳ್ಳಿ**

ಸಮೀಪದ ಕುದೇರು ಗ್ರಾಮದ ಕರಿಕಲ್ಲು ಕ್ವಾರಿ ಬಳಿ ಹಿಡಲಾಗಿದ್ದ ಬೋನಿಗೆ ಶನಿವಾರ ಚಿರತೆ ಬಿದ್ದಿದೆ. ಕುದೇರು, ತೊರವಳ್ಳಿ, ಬಡಗ ಮೋಳೆ, ತೆಂಕಲಮೋಳೆ, ಸುತ್ತಮುತ್ತಲಿನ ಗ್ರಾಮಗಳಲ್ಲಿ 2 ವಾರದ ಹಿಂದೆ ಚಿರತೆ ರೈತರ ಜಮೀನಿನಲ್ಲಿ ತಿರುಗಾಡಿರುವುದರ ಹೆಜ್ಜೆ ಗುರುತು ಕಾಣಿಸಿಕೊಂಡಿತ್ತು. ಕುದೇರು ಗ್ರಾಮದ ಬವವರಾಜು ಎಂಬುವರ ಜಮೀನಿನಲ್ಲಿ ಸಾಕಿದ ನಾಯಿ, ತೊರವಳ್ಳಿ, ತೆಂಕಲಮೋಳೆ, ಬಡಗಲಮೋಳೆ ಗ್ರಾಮಗಳ ಜನರು ಆಡು, ಕುರಿಗಳನ್ನು ಮೇಯಿಸಲು ಬಿಟ್ಟ ವೇಳೆಯಲ್ಲಿ ಚಿರತೆ ದಾಳಿ ನಡೆಸಿತ್ತು. ಈ ಹಿನ್ನೆಲೆಯಲ್ಲಿ ಕುದೇರು ಗ್ರಾಮದ ಕರಿಕಲ್ಲು ಕ್ವಾರಿ ಬಳಿ ಚಾಮರಾಜನಗರ ಅರಣ್ಯ ಇಲಾಖೆ ವತಿಯಿಂದ ಬೋನ್ ಹಾಕಲಾಗಿತ್ತು. ಹಿನ್ನೆಲೆಯಲ್ಲಿ ಶನಿವಾರ ಬೋನಿಗೆ ಚಿರತೆ ಬಿದ್ದಿದೆ. ಸ್ಥಳಕ್ಕೆ ಚಾಮರಾಜನಗರದ ಡಿಆರ್‌ಎಫ್ ಚಂದ್ರ ಕುಮಾರ್, ಗೌರಿಶಂಕರ್, ಅರಣ್ಯ ರಕ್ಷಕರಾದ ಪೃಥ್ವಿರಾಜು ಸಿಬ್ಬಂದಿ ಮಹೇಶ್, ರೇವಣ್ಣ ಸ್ಥಳಕ್ಕೆ ಭೇಟಿ ನೀಡಿದ್ದರು.

## 6 ಕೋಟಿ ವೆಚ್ಚದ ಕಾಮಗಾರಿಗೆ ಶಾಸಕ ಪಿ.ಎಂ.ನರೇಂದ್ರಸ್ವಾಮಿ ಚಾಲನೆ

• **ಉದಯವಾಹಿನಿ, ಹಲಗೂರು**

ಗ್ರಾಮಗಳಿಗೆ ಅಗತ್ಯವಿರುವ ಮೂಲ ಸೌಕರ್ಯಗಳನ್ನು ಒದಗಿಸುವ ಮೂಲಕ ಕ್ಷೇತ್ರದ ಸರ್ವಾಂಗೀಣ ಅಭಿವೃದ್ಧಿಗೆ ಶ್ರಮಿಸಲಾಗುತ್ತಿದೆ ಎಂದು ಶಾಸಕ ಪಿ.ಎಂ.ನರೇಂದ್ರಸ್ವಾಮಿ ತಿಳಿಸಿದರು. ಹಲಗೂರು ಮತ್ತು ಕಸಬಾ ಹೋಬಳಿಯ ವಿವಿಧ ಗ್ರಾಮಗಳಲ್ಲಿ 6 ಕೋಟಿ ವೆಚ್ಚದ ಕಾಮಗಾರಿಗೆ ಶನಿವಾರ ಭೂಮಿ ಪೂಜೆ ನೆರವೇರಿಸಿ ಅವರು ಮಾತನಾಡಿದರು. ರಸ್ತೆ ಅಭಿವೃದ್ಧಿ ನಿಗಮ ಮತ್ತು ಲೋಕೋಪಯೋಗಿ ಇಲಾಖೆಯಿಂದ ವಿಶೇಷ ಅನುದಾನದಲ್ಲಿ ದೇವಿರಹಳ್ಳಿ, ಕೆಂಪಯ್ಯನದೊಡ್ಡಿ, ಲಿಂಗಪಟ್ಟಣ, ಕುಂತೂರು, ಅಂತರವಳ್ಳಿ, ಹುಲ್ಲಹಳ್ಳಿ ಬಾಣಗಹಳ್ಳಿ ಗ್ರಾಮಗಳಲ್ಲಿ ರಸ್ತೆ ನಿರ್ಮಾಣ ಮಾಡಲಾಗುತ್ತಿದೆ. ಡಿ.ಹಲಸಹಳ್ಳಿ, ದಳವಾಯಿ ಕೋಡಿಹಳ್ಳಿ, ಬ್ಯಾಡರಹಳ್ಳಿ, ಹಲಗೂರು, ಬೆನಮನಹಳ್ಳಿ, ವಿ.ಬಸಾಪುರ, ಮಾರಗೌಡನಹಳ್ಳಿ, ತೊರೆಕಾಡನಹಳ್ಳಿ, ದಡಮಹಳ್ಳಿ, ಹೊಸಪುರ, ಹುಲ್ಲಾಗಾಲ, ಬೆಳತೂರು, ಹುಸ್ಕೂರು, ಹಾಡ್ಲಿ ಗ್ರಾಮಗಳಲ್ಲಿ ವಿಶೇಷ ಘಟಕ ಯೋಜನೆಯಡಿಯಲ್ಲಿ ಪರಿಶಿಷ್ಟ ಜಾತಿ ಸಮುದಾಯದ ಬೀದಿಗಳಿಗೆ ಕಾಂಕ್ರೀಟ್ ರಸ್ತೆ, ಚರಂಡಿ ನಿರ್ಮಾಣ ಕಾಮಗಾರಿಗೆ ಚಾಲನೆ ನೀಡಲಾಗಿದೆ ಎಂದರು.

## ಎಚ್.ಡಿ.ಕೋಟೆ ಆನೆ ದಾಳಿ: ಬಾಳೆ, ತೆಂಗು, ಮಾವು ನಾಶ

• **ಉದಯವಾಹಿನಿ, ಎಚ್.ಡಿ.ಕೋಟೆ**

ತಾಲ್ಲೂಕಿನ ಗೌಡಿ ಮಾಚನಾಯಕನಹಳ್ಳಿ ಗ್ರಾಮದ ರೈತ ಎ.ಟಿ.ನಾಗರಾಜು ಅವರ 3 ಎಕರೆ ಜಮೀನಿನಲ್ಲಿ ಬೆಳೆದಿದ್ದ ಬಾಳೆ, 5 ತೆಂಗಿನ ಸಸಿಗಳು, ಮಾವಿನ ಗಿಡಗಳನ್ನು ಕಾಡಾನೆಗಳ ಹಿಂಡು ದಾಳಿ ಮಾಡಿ ನಾಶಪಡಿಸಿದೆ. ಬಸವರಾಜು ಎಂಬ ರೈತನ ಜಮೀನಿನಲ್ಲಿ ಬೆಳೆದಿದ್ದ ಎರಡು ಎಕರೆ ಬಾಳೆಯನ್ನು ಆನೆಗಳು ಸಂಪೂರ್ಣ ತುಳಿದು ನಾಶಪಡಿಸಿವೆ.

**ಸೂಕ್ತ ಪರಿಹಾರಕ್ಕೆ ಒತ್ತಾಯ:** ಫಸಲು ನಾಶವಾಗಿರುವುದರಿಂದ ರೈತರಿಗೆ ಅಪಾರ ನಷ್ಟ ಆಗಿದೆ. ಅರಣ್ಯಾಧಿಕಾರಿಗಳು ಪರಿಶೀಲನೆ ನಡೆಸಿ ಶೀಘ್ರ ಪರಿಹಾರ ಕೊಡಿಸಬೇಕು ಎಂದು ರೈತರು ಒತ್ತಾಯಿಸಿದರು. ಹಾವಳಿಗೆ

**ಕಡಿವಾಣ ಹಾಕಿ:** ವೀರನ ಹೊಸಹಳ್ಳಿ, ಮೇಟಿಕುಪ್ಪೆ ವಲಯ ವ್ಯಾಪ್ತಿಯ ಕಾಡಂಚಿನ ಗ್ರಾಮಗಳಲ್ಲಿ ಕಾಡಾನೆಗಳ ಹಿಂಡು ನಿರಂತರ ದಾಳಿ ನಡೆಸಿ, ಫಸಲುಗಳನ್ನು ತಿಂದು, ತುಳಿದು ನಾಶ ಪಡಿಸುತ್ತಿವೆ. ಮಾಹಿತಿ ಇದ್ದರೂ ಅರಣ್ಯಾಧಿಕಾರಿಗಳು ಕ್ರಮಕ್ಕೆ ಮುಂದಾಗಿಲ್ಲ. ಕೂಡಲೇ ಎಚ್ಚೆತ್ತುಕೊಂಡು ಆನೆಗಳ ಹಾವಳಿಗೆ ಕಡಿವಾಣ ಹಾಕದಿದ್ದರೆ ಅರಣ್ಯ ಕಚೇರಿಗೆ ಮುತ್ತಿಗೆ ಹಾಕುವುದಾಗಿ ರೈತ ಸಂಘಟನೆಯ ಮುಖಂಡ ಎ.ಟಿ.ನಾಗರಾಜು ಎಚ್ಚರಿಕೆ ನೀಡಿದರು.

## ಪರಿಸರದ ಅಸ್ತಿತ್ವ ಭವಿಷ್ಯದ ಉಸಿರು

• **ಉದಯವಾಹಿನಿ, ಮೈಸೂರು**

ಭವಿಷ್ಯದ ಉಸಿರು ಪರಿಸರದ ಅಸ್ತಿತ್ವದಲ್ಲಿದೆ. ಈ ವಾಸ್ತವ ಪರಿಸ್ಥಿತಿ ಮಕ್ಕಳಿಗೆ ಮನನ ಮಾಡಿಸುವಲ್ಲಿ ಶಿಕ್ಷಣ ಸಂಸ್ಥೆಗಳ ಕರ್ತವ್ಯ ಪ್ರಮುಖ ಎಂದು ಪರಿಸರ ತಜ್ಞೆ ರೇಖಾ ರೋಹಿತ್ ಹೇಳಿದರು.ನಗರದ ಆರ್.ಟಿ.ನಗರದ ನೈಪುಣ್ಯ ಸ್ಕೂಲ್ ಆಫ್ ಎಕ್ಸಲೆನ್ಸ್ ಶಾಲೆಯ ಕ್ಯಾಂಪಸ್‌ನಲ್ಲಿ ಈಚೆಗೆ ನಡೆದ ಪರಿಸರ ದಿನಾಚರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ಪರಿಸರಕ್ಕೆ ಮನುಷ್ಯರೇ ಕಂಟಕಪ್ರಾಯವಾಗಿದ್ದಾರೆ. ಇದು ವಿಪರ್ಯಾಸದ ಸಂಗತಿ. ತ್ಯಾಜ್ಯ ನಿರ್ವಹಣೆಯ ನಮ್ಮ ಬೇಜವಾಬ್ದಾರಿತನ ಪರಿಸರಕ್ಕೆ ಮಾರಕವಾಗುತ್ತಿದೆ ಎಂದರು. ಶಾಲೆಯ ವಿದ್ಯಾರ್ಥಿಗಳು ಆರ್.ಟಿ.ನಗರ ಬಡಾವಣೆಯಲ್ಲಿ ಪರಿಸರ ಜಾಗೃತಿ ಜಾಥಾ ನಡೆಸಿದರು.

ಅಂತರಾಳದಿಂದ..
EDITORIAL

# ಕೌಟುಂಬಿಕ ದೌರ್ಜನ್ಯಕ್ಕೆ ಲಗಾಮು: ಕೋರ್ಟ್‌ನ ಕಾಳಜಿ ಶ್ಲಾಘನೀಯ

ಕೌಟುಂಬಿಕ ಹಿಂಸಾಚಾರವನ್ನು ಹತ್ತಿಕ್ಕಲು ಇನ್ನೊಂದು ಹೆಜ್ಜೆ ಮುಂದಕ್ಕೆ ಇರಿಸಿರುವ ಸುಪ್ರೀಂ ಕೋರ್ಟ್, ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳು ಜಿಲ್ಲೆ ಹಾಗೂ ತಾಲ್ಲೂಕು ಮಟ್ಟದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳನ್ನು ಗುರುತಿಸಿ. ಅವರನ್ನು ರಕ್ಷಣಾ ಅಧಿಕಾರಿಗಳು ಎಂದು ಘೋಷಿಸಬೇಕು ಎನ್ನುವ ಸೂಚನೆ ನೀಡಿದೆ. ಕೌಟುಂಬಿಕ ಹಿಂಸಾಚಾರ ಪ್ರಕರಣಗಳ ಸಂತ್ರಸ್ತರಿಗೆ ರಕ್ಷಣೆ ಒದಗಿಸುವ ಹೊಣೆಯು ಈ ಅಧಿಕಾರಿಗಳ ಮೇಲೆ ಇರುತ್ತದೆ.



ಕೌಟುಂಬಿಕ ದೌರ್ಜನ್ಯ ತಡೆ ಕಾಯ್ದೆಯ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವ, ಕಾಯ್ದೆಯು ಮಹಿಳೆಯರಿಗೆ ನೀಡಿರುವ ಹಕ್ಕುಗಳ ಬಗ್ಗೆ ಮಾಹಿತಿ ನೀಡುವ, ಕಾಯ್ದೆಗೆ ಅನುಗುಣವಾಗಿ ವಿವಿಧ ಸೇವೆಗಳ ನಡುವೆ ಸಮನ್ವಯ ಖಾತರಿಪಡಿಸುವ ಕೆಲಸವು ಈ ಅಧಿಕಾರಿಗಳದ್ದಾಗಿರುತ್ತದೆ. ಈ ಕೆಲಸಗಳೆಲ್ಲ ಆರು ವಾರಗಳಲ್ಲಿ ಪೂರ್ಣಗೊಳ್ಳಬೇಕು ಎಂದು ಕೋರ್ಟ್ ಹೇಳಿರುವುದು ಈ ವಿಚಾರದಲ್ಲಿ ಅದು ಬಹಳ ಗಂಭೀರವಾಗಿದೆ ಎಂಬುದನ್ನು ತೋರಿಸುತ್ತಿದೆ. ಈ ಕಾಯ್ದೆಯ ಅಡಿಯಲ್ಲಿ ಉಚಿತವಾಗಿ ಕಾನೂನಿನ ನೆರವು ಪಡೆಯುವ ಹಕ್ಕು ಮಹಿಳೆಯರಿಗೆ ಇರುತ್ತದೆ ಎಂಬ ಜಾಗೃತಿ ಮೂಡಿಸುವ ಕೆಲಸ ರಾಜ್ಯ ಕಾನೂನು ಸೇವಾ ಪ್ರಾಧಿಕಾರಗಳಿಂದ ಆಗಬೇಕಿದೆ. ರಾಷ್ಟ್ರೀಯ ಕಾನೂನು ಸೇವಾ ಪ್ರಾಧಿಕಾರದಿಂದ ರಾಜ್ಯಗಳಿಗೆ ಈ ಕುರಿತ ಸೂಚನೆ ರವಾನೆ ಆಗಬೇಕಿದೆ ಎಂದು ನ್ಯಾಯಮೂರ್ತಿಗಳಾದ ಬಿ.ವಿ. ನಾಗರತ್ನ ಮತ್ತು ಸತೀಶ್ ಚಂದ್ರ ಶರ್ಮಾ ಅವರು ಇರುವ ವಿಭಾಗೀಯ ಪೀಠವು ಹೇಳಿದೆ.ವಿ ದಿ ವಿಮೆನ್ ಆಫ್ ಇಂಡಿಯಾ ಎನ್ನುವ ಸ್ವಯಂ ಸೇವಾ ಸಂಸ್ಥೆ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿ ಪೀಠವು ಈ ನಿರ್ದೇಶನ ನೀಡಿದೆ. ಕಾಯ್ದೆಯನ್ನು ರೂಪಿಸಿ 15 ವರ್ಷಗಳು ಕಳೆದಿದ್ದರೂ ಅದರ ಅನುಷ್ಠಾನದಲ್ಲಿ ಸಮಸ್ಯೆಗಳು ಇವೆ ಎಂದು ಈ ಸಂಸ್ಥೆ ಅರ್ಜಿ ಸಲ್ಲಿಸಿತ್ತು. ಮಹಿಳೆಯರನ್ನು ಗುರಿಯಾಗಿಸಿಕೊಂಡು ನಡೆಯುವ ಅಪರಾಧ ಪ್ರಕರಣಗಳಲ್ಲಿ ಕೌಟುಂಬಿಕ ದೌರ್ಜನ್ಯವು ಬಹಳ ವ್ಯಾಪಕವಾಗಿದೆ ಎಂದು ದೂರಲಾಗಿತ್ತು.

**ದೇಶದ ಎಲ್ಲ ಕಡೆಗಳಲ್ಲಿಯೂ ಕೌಟುಂಬಿಕ ದೌರ್ಜನ್ಯವು ಮಹಿಳೆಯರಿಗೆ ಬಹಳ ಗಂಭೀರವಾದ ಬೆದರಿಕೆಯಾಗಿ ಉಳಿದಿದೆ. ಅಧ್ಯಯನವೊಂದರ ಪ್ರಕಾರ, 15ರಿಂದ 49 ವರ್ಷ ವಯಸ್ಸಿನ ನಡುವೆ ಇರುವ ಮಹಿಳೆಯರ ಪೈಕಿ ಶೇ 31ರಷ್ಟು ಮಂದಿ, ದೈಹಿಕ, ಭಾವನಾತ್ಮಕ ಮತ್ತು ಲೈಂಗಿಕ ಹಲ್ಲೆ ಒಳಗೊಂಡಂತೆ ಒಂದಲ್ಲ ಒಂದು ಬಗೆಯಲ್ಲಿ ಕೌಟುಂಬಿಕ ದೌರ್ಜನ್ಯ ಅನುಭವಿಸಿರುವುದಾಗಿ ಹೇಳಿದ್ದಾರೆ. ರಾಷ್ಟ್ರೀಯ ಮಹಿಳಾ ಆಯೋಗಕ್ಕೆ ಪ್ರತಿವರ್ಷ ಸಾವಿರಾರು ದೂರುಗಳು ಬರುತ್ತವೆ. ರಾಷ್ಟ್ರೀಯ ಅಪರಾಧ ದಾಖಲೆಗಳ ಬ್ಯೂರೊ (ಎನ್‌ಸಿಆರ್‌ಬಿ) ನೂರಾರು ಸಂಖ್ಯೆಯ ಪ್ರಕರಣಗಳನ್ನು ಮಾತ್ರ ವರದಿ ಮಾಡುತ್ತದೆ. ಆದರೆ, ದೂರುಗಳು ಹಾಗೂ ಪ್ರಕರಣಗಳ ಸಂಖ್ಯೆಯು ವಾಸ್ತವ ಸ್ಥಿತಿಯನ್ನು ಬಿಂಬಿಸುವುದಿಲ್ಲ, ಅವು ಇಡೀ ಸಮಸ್ಯೆಯ ಒಂದು ಸಣ್ಣ ಭಾಗವನ್ನಷ್ಟೇ ತೋರಿಸುತ್ತವೆ ಎಂಬುದು ತಿಳಿದಿರಬೇಕು.**

ಇಂತಹ ದೌರ್ಜನ್ಯಕ್ಕೆ ಗುರಿಯಾಗುವವರಿಗೆ ಕಾನೂನಿನ ನೆರವು ಸಿಗುವಂತೆ ಆಗಬೇಕು. ಅಗತ್ಯ ಇರುವವರಿಗೆ ಆಶ್ರಯ ಕೇಂದ್ರಗಳು ಸಿಗಬೇಕು ಎಂದು ಕೋರಲಾಗಿತ್ತು. ಕೌಟುಂಬಿಕ ದೌರ್ಜನ್ಯಕ್ಕೆ ಮೂಲ ಕಾರಣಗಳು ಹಲವು. ಸಾಮಾಜಿಕ, ಆರ್ಥಿಕ ಹಾಗೂ ಇತರ ಹಲವು ಅಂಶಗಳು ಈ ಬಗೆಯ ದೌರ್ಜನ್ಯಕ್ಕೆ ಕಾರಣವಾಗುತ್ತಿವೆ. ಈ ಅಂಶಗಳು ಇಂತಹ ದೌರ್ಜನ್ಯಗಳಿಗೆ ಪ್ರತಿಕ್ರಿಯೆ ಏನಿರುತ್ತದೆ ಎಂಬುದರ ಮೇಲೆಯೂ ಪ್ರಭಾವ ಬೀರುತ್ತವೆ. ಮಹಿಳೆಯರು ಕಾನೂನಿನ ನೆರವು ಪಡೆದುಕೊಳ್ಳುವಲ್ಲಿ, ಕುಟುಂಬಗಳು ಹಾಗೂ ಸಮಾಜವು ಇಂತಹ ದೌರ್ಜನ್ಯಕ್ಕೆ ಪ್ರತಿಕ್ರಿಯಿಸುವುದರಲ್ಲಿ ಈ ಅಂಶಗಳ ಪ್ರಭಾವ ಇರುತ್ತದೆ. ದೌರ್ಜನ್ಯಕ್ಕೆ ಪ್ರತಿರೋಧ ಒಡ್ಡಲು, ಕಾನೂನು ಹಾಗೂ ಇತರ ಮಾರ್ಗಗಳ ಮೂಲಕ ಅದನ್ನು ಎದುರಿಸಲು ಕೆಲವೇ ಕೆಲವು ಮಹಿಳೆಯರಿಗೆ ಮಾತ್ರ ಸಾಧ್ಯವಾಗುತ್ತಿದೆ. ಕೌಟುಂಬಿಕ ದೌರ್ಜನ್ಯ ಪ್ರಕರಣಗಳು ನಡೆದಿರುವುದರಲ್ಲಿ, ಅವುಗಳು ವರದಿಯಾಗಿರುವ ವಿಚಾರದಲ್ಲಿ ರಾಜ್ಯದಿಂದ ರಾಜ್ಯಕ್ಕೆ ವ್ಯತ್ಯಾಸ ಇದೆ. ಆದರೆ, ತುಲನಾತ್ಮಕ ಅಂಕಿ–ಅಂಶಗಳು ಸಂಪೂರ್ಣವಾಗಿ ವಿಶ್ವಾಸಾರ್ಹ ಆಗಿಲ್ಲದಿರಬಹುದು. ಕೆಲವು ವರದಿಗಳ ಪ್ರಕಾರ ಇಂತಹ ದೌರ್ಜನ್ಯಗಳು ಕರ್ನಾಟಕದಲ್ಲಿ ಬಹಳ ಹೆಚ್ಚಿವೆ. ಕಾನೂನಿನ ಕಟ್ಟುನಿಟ್ಟಿನ ಅನುಷ್ಠಾನ ಮಾತ್ರವೇ ಇಂತಹ ದೌರ್ಜನ್ಯವನ್ನು ಕಡಿಮೆ ಮಾಡಲು ಇರುವ ಮಾರ್ಗೋಪಾಯ. ಇಂತಹ ಪ್ರಕರಣಗಳನ್ನು ಸುಪ್ರೀಂ ಕೋರ್ಟ್ ಹಾಗೂ ಇತರ ನ್ಯಾಯಾಲಯಗಳು ಈ ಹಿಂದೆಯೂ ಬಹಳ ಗಂಭೀರವಾಗಿ ಪರಿಗಣಿಸಿವೆ. ಈಗ ಸುಪ್ರೀಂ ಕೋರ್ಟ್ ನೀಡಿರುವ ಸೂಚನೆಗಳು, ನ್ಯಾಯಾಂಗವು ಈ ಬಗೆಯ ದೌರ್ಜನ್ಯಗಳ ವಿಚಾರದಲ್ಲಿ ಬಹಳ ಗಂಭೀರವಾಗಿದೆ ಎಂಬುದನ್ನು ತೋರಿಸುತ್ತಿದೆ.

# ಆರ್‌ಸಿಬಿ ಮೆರವಣಿಗೆಯ ದುರಂತದಿಂದ ಸಮಾಜ ಕಲಿಯಬೇಕಾದ ಪಾಠ



ವಿಶ್ವಾಸ್.ಡಿ.ಗೌಡ
• ಉದಯವಾಹಿನಿ, ವಿಶೇಷ



ಐಪಿಎಲ್ ಇತಿಹಾಸದಲ್ಲಿ ಮೊದಲ ಬಾರಿಗೆ ರಾಯಲ್ ಚಾಲೆಂಜರ್ಸ್ ಬೆಂಗಳೂರು (ಆರ್‌ಸಿಬಿ) ಗೆದ್ದಂತಹ ಮಹತ್ತರ ಕ್ಷಣ. ಈ ಗೆಲುವು ಕರ್ನಾಟಕದ ಲಕ್ಷಾಂತರ ಅಭಿಮಾನಿಗಳಿಗೆ ಹೊಳೆಯುವ ಕನಸುಗಳಂತೆ ತೋರುತ್ತಿತ್ತು. ಈ ಗೆಲುವಿನ ಸಂತೋಷದಲ್ಲಿ ನೂರಾರು ಅಭಿಮಾನಿಗಳು ಬೆಂಗಳೂರಿನ ಬೀದಿಗಳಲ್ಲಿ ವಿಜಯೋತ್ಸವ ಮೆರವಣಿಗೆಗಳಲ್ಲಿ ಪಾಲ್ಗೊಂಡರು. ಆದರೆ, ಈ ಹರ್ಷದ ಕ್ಷಣವೇ ಕೆಲವರ ಜೀವನದಲ್ಲಿ ಮರೆಯಲಾಗದ ದುರಂತವಾಯಿತು. ಹೆಬ್ಬಾಳ ಫ್ಲೈಓವರ್ ಬಳಿ ನಡೆದ ಈ ಮೆರವಣಿಗೆಯಲ್ಲಿ ನಿಯಂತ್ರಣ ತಪ್ಪಿದ ಜನಸಂದಣಿಯಿಂದಾಗಿ ಕೆಲವು ಅಭಿಮಾನಿಗಳು ನೆಲಕ್ಕೆ ಬಿದ್ದು, ಭಾರೀ ಗಜ್ಜಿ–ನೂಕುನುಗ್ಗಲಿನಿಂದ ತೀವ್ರವಾಗಿ ಗಾಯಗೊಂಡು ಮೃತಪಟ್ಟರು. ಅವರ ತವರುಮಕ್ಕಳು ತಮ್ಮ ನೆಚ್ಚಿನ ತಂಡವನ್ನು ಸಂಭ್ರಮಿಸಲು ಹೊರಟಾಗಲೇ ಮರಳಲಾರದ ದಾರಿಯಲ್ಲಿ ನುಗ್ಗಿದರು. ಈ ದುರ್ಘಟನೆ ಒಂದೇ ಕ್ಷಣದಲ್ಲಿ ಹರ್ಷವನ್ನು ಮೌನದಲ್ಲಿ ಮುಳುಗಿಸಿತು. ಇದೊಂದು ನಿಖರ ಎಚ್ಚರಿಕೆ. ನಾವು ಹಬ್ಬ, ಸಂಭ್ರಮ, ಕ್ರೀಡಾ ಜಯಗಳನ್ನು ಆಚರಿಸುವಾಗ, ಅದರಲ್ಲಿ ಭಾಗವಹಿಸುವ ಪ್ರತಿಯೊಬ್ಬನ ಜೀವದ ಮೌಲ್ಯವನ್ನೂ ಗಮನದಲ್ಲಿಟ್ಟುಕೊಳ್ಳಬೇಕು. ಒಂದು ತಂಡ ಗೆದ್ದಾಗ, ಒಂದು ರಾಜ್ಯ ಉಲ್ಲಾಸಿಸುವುದು ಸಹಜ. ಆದರೆ ಈ ಉಲ್ಲಾಸವೊಂದು ನಿಯಂತ್ರಣವಿಲ್ಲದ ರೀತಿ ಬೆಳೆಯುವಾಗ ಅದು ಜೀವ ಹರಣವಾಗಬಹುದು ಎಂಬ ಪಾಠ ಈ ಘಟನೆ ನೀಡುತ್ತದೆ. ಮೊದಲು ಕಲಿಯಬೇಕಾದ ಪಾಠ ಭಾವನೆಗಳಿಗೂ ಮಿತಿಯಿರಬೇಕು. ಕ್ರೀಡೆಯು ನಾವು ಜೀವನದಲ್ಲಿ ಆಸಕ್ತಿಯಿಂದ ಅನುಭವಿಸುವ ಒಂದಾದರೂ, ಅದರಲ್ಲಿ ವಿಲೀನವಾಗುವುದು ಬುದ್ಧಿವಿಲೋಪಕ್ಕೆ ಕಾರಣವಾಗಬಾರದು. ಬೈಕ್ ಮೆರವಣಿಗೆ, ಪಟಾಕಿ, ಡಿಜೆ ಮ್ಯೂಸಿಕ್, ನಿಯಂತ್ರಣವಿಲ್ಲದ ಜನಸಮೂಹ ಈ ಎಲ್ಲವೂ ಸಂಭ್ರಮದ ಮುಸುಕಿನಲ್ಲಿ ಅಪಾಯದ ಮೂಲಗಳಾಗಬಹುದು. ಎರಡನೆಯ ಪಾಠ ನಗರ ಆಡಳಿತದ ಹೊಣೆಗಾರಿಕೆ. ಇಂತಹ ದೊಡ್ಡ ಮಟ್ಟದ ಸಮಾರಂಭಗಳ ನಿರ್ವಹಣೆಗೆ ತುರ್ತು ವ್ಯವಸ್ಥೆಗಳು, ಪೊಲೀಸ್ ಭದ್ರತೆ, ಸಂಚಾರ ನಿಯಂತ್ರಣಗಳು ಅಗತ್ಯ. ಈ ಸ್ಥಳದಲ್ಲಿ ಪೊಲೀಸ್ ಭದ್ರತೆ ಕಡಿಮೆಯಾಗಿದ್ದುದೂ ದುರಂತಕ್ಕೆ ಕಾರಣವಾಯಿತೆಂಬ ಆರೋಪಗಳು ಎದ್ದಿವೆ. ಮುಂದಿನ ದಿನಗಳಲ್ಲಿ ನಿರ್ದಿಷ್ಟ ನಿಯಮಗಳನ್ನು ರೂಪಿಸಿ, ಮೆರವಣಿಗೆಗಳಿಗೆ ಪೂರ್ವಾನುಮತಿ ಪಡೆಯುವ ವ್ಯವಸ್ಥೆಯನ್ನು ಕಡ್ಡಾಯಗೊಳಿಸಬೇಕು.

**ಹರ್ಷದಿಂದ ದುಃಖದ ಕಡೆಗೆ**

ಮೂರನೆಯ ಪಾಠ ಸಮಾಜದ ಪಾತ್ರ. ಸಾರ್ವಜನಿಕವಾಗಿ ಯಾವುದೇ ಆಚರಣೆಗಳಲ್ಲಿ ಪಾಲ್ಗೊಳ್ಳುವಾಗ ನಾವು ನಮ್ಮ ವೈಯಕ್ತಿಕ ಸುರಕ್ಷತೆಗಾಗಿ ಎಚ್ಚರಿಕೆಯಿಂದಿರಬೇಕು. ಸಾಮಾಜಿಕ ಜಾಲತಾಣಗಳು ಭಾವನೆಗಳನ್ನು ಹೆಚ್ಚಿಸುತ್ತವೆ, ಆದರೆ ನಿಜವಾದ ಸ್ಥಿತಿಗತಿಯ ಪ್ರಾಮುಖ್ಯತೆಯನ್ನು ಕಡಿಮೆ ಮಾಡುತ್ತವೆ. ಇದು ವಿರಾಟ್ ಗೆದ್ದರು ಎಂಬ ಹರ್ಷವಲ್ಲ, ವಿಷ್ಣು ಹೋದ' ದುಃಖವೂ ಹೌದು. ಆರ್‌ಸಿಬಿ ತಂಡದಿಂದ ಸಂತಾಪ ವ್ಯಕ್ತವಾಗಿದ್ದುದು ಸಹ ಎಚ್ಚರಿಕೆಯ ಕಾಳಜಿಗೆ ಸೂಚನೆ. ನಾಯಕ ವಿರಾಟ್ ಕೊಹ್ಲಿ, ಫಾಫ್ ಡು ಪ್ಲೆಸಿಸ್, ಮ್ಯಾಕ್ಸ್‌ವೆಲ್ ಮತ್ತು ಇತರರು ತೀವ್ರ ದುಃಖ ವ್ಯಕ್ತಪಡಿಸಿದರು. ಆದರೆ ಈ ಸಂತಾಪಗಳಿಂದಲೂ ಮುಂದೆ ಇಂಥ ಘಟನೆಗಳ ಪುನರಾವೃತ್ತಿ ತಪ್ಪಬೇಕಾದ ಅಗತ್ಯವಿದೆ. ಉಪಸಂಹಾರವಾಗಿ, ಈ ದುರಂತವು ಜಯದ ನಿದರ್ಶನವಲ್ಲ, ಜವಾಬ್ದಾರಿಯ ಕೊರತೆಯ ದೋಷಪತ್ರವಾಗಿದೆ. ವಿಷ್ಣು ಮತ್ತು ಅನಿಲ್ ಅವರ ಬದುಕು ಮತ್ತೊಬ್ಬರಿಗಾಗಿ ಎಚ್ಚರಿಕೆಯ ದೀಪವಾಗಬೇಕಾಗಿದೆ. ಕ್ರೀಡೆ ಹರ್ಷ ಕೊಡಬೇಕು, ಹಳಿವು ಅಲ್ಲ. ಮುಂದಿನ ತಲೆಮಾರಿಗೆ ಇದು ಪಾಠವಾಗಲಿ ಸಂಭ್ರಮಿಸಿ, ಆದರೆ ಜವಾಬ್ದಾರಿಯಿಂದ!

# ಆರೋಗ್ಯಕರ ಭಾರತಕ್ಕಾಗಿ ಪ್ರತಿಜ್ಞೆ ಮಾಡಿ: ಜೆ.ಪಿ ನಡ್ಡಾ

• ಉದಯವಾಹಿನಿ, ಬೆಂಗಳೂರು

ಈ ವಿಶ್ವ ಆಹಾರ ಸುರಕ್ಷತಾ ದಿನದಂದು, ಪ್ರತಿಯೊಬ್ಬ ಭಾರತೀಯನು ಉಪ್ಪು ಸೇವನೆ, ಸಂಸ್ಕರಿಸಿದ ಆಹಾರ ಮತ್ತು ತೈಲ ಸೇವನೆಯನ್ನು ಶೇಕಡಾ 10 ರಷ್ಟು ಕಡಿಮೆ ಮಾಡುವ ಪ್ರತಿಜ್ಞೆ ಮಾಡಬೇಕು ಎಂದು ಕೇಂದ್ರ ಆರೋಗ್ಯ ಕುಟುಂಬ ಕಲ್ಯಾಣ ಸಚಿವ ಜಗತ್ ಪ್ರಕಾಶ್ ನಡ್ಡಾ ಹೇಳಿದರು.

ಬೆಂಗಳೂರಿನ ರಾಷ್ಟ್ರೀಯ ಮಾನಸಿಕ ಆರೋಗ್ಯ ಮತ್ತು ನರ ವಿಜ್ಞಾನ ಸಂಸ್ಥೆಯಲ್ಲಿ (ನಿಮ್ಹಾನ್ಸ್) ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ ಆಯೋಜಿಸಿದ್ದ ವಿಶ್ವ ಆಹಾರ ಸುರಕ್ಷತಾ ದಿನ ಕಾರ್ಯಕ್ರಮದಲ್ಲಿ ನಡ್ಡಾ ಮಾತನಾಡಿದ ಅವರು, ಸರಿಯಾದ ಆಹಾರವನ್ನು ಸೇವಿಸುವ ಬಗ್ಗೆ ಜಾಗೃತಿ ಮೂಡಿಸುವುದು ನಮ್ಮ ಸಾಮೂಹಿಕ ಜವಾಬ್ದಾರಿಯಾಗಿದೆ ಎಂದರು. ಪ್ರತಿ ವರ್ಷ ಜೂನ್ 7 ರಂದು ವಿಶ್ವ ಆಹಾರ ಸುರಕ್ಷತಾ ದಿನವನ್ನು ಆಚರಿಸಲಾಗುತ್ತದೆ. ನಮ್ಮ ಪ್ರಧಾನಿ ನರೇಂದ್ರ ಮೋದಿಯವರು ನೀಡಿದ ಸ್ಪಷ್ಟ ಕರೆಯನ್ನು ನಾವು ಸ್ವೀಕರಿಸಬೇಕು. ಕನಿಷ್ಠ ನಮ್ಮ ಸ್ವಂತ ಮನೆಗಳಲ್ಲಿ, ಎಣ್ಣೆ ಮತ್ತು ಉಪ್ಪಿನ ಸೇವನೆಯನ್ನು ಶೇಕಡಾ 10 ರಷ್ಟು ಕಡಿಮೆ ಮಾಡಲು ಸಾಧ್ಯವಾಗುವಂತೆ ನೋಡಿಕೊಳ್ಳಬೇಕು. ಇದು ಅಗತ್ಯವಾಗಿದೆ. ಸಂಸ್ಕರಿಸಿದ ಆಹಾರಗಳನ್ನು ಗರಿಷ್ಠವಾಗಿ ಕಡಿಮೆ ಮಾಡುವಂತೆ ನಾವು ನೋಡಿಕೊಳ್ಳಬೇಕು ಎಂದು ನಡ್ಡಾ ಸಲಹೆ ನೀಡಿದ್ದಾರೆ. ಆರೋಗ್ಯವಾಗಿರಲು, ಸರಿಯಾಗಿ ತಿನ್ನಲು, ಭಾರತವು ತನ್ನ ಸಾಂಪ್ರದಾಯಿಕ ಆಹಾರ ಪದ್ಧತಿಗಳನ್ನು ಮರುಪರಿಶೀಲಿಸಬೇಕು ಎಂದು ಅವರು ಹೇಳಿದರು. ನಮ್ಮ ಸಾಂಪ್ರದಾಯಿಕ ಆಹಾರವು ರಾಗಿಗಳಿಂದ ಅನೇಕ ರೀತಿಯ ಸಿದ್ಧತೆಗಳನ್ನು ಒಳಗೊಂಡಿದೆ. ನಾವು ಈ ಸಂಪ್ರದಾಯವನ್ನು ಪುನರುಜ್ಜೀವನಗೊಳಿಸಬೇಕು ಎಂದು ಅವರು ಹೇಳಿದರು.

ವಿಶ್ವ ಆಹಾರ ಸುರಕ್ಷತಾ ದಿನದಂದು ಮಾತ್ರ ಆಹಾರ ಸುರಕ್ಷತಾ ಅಭ್ಯಾಸಗಳ ಬಗ್ಗೆ ಮಾತನಾಡುವುದರಿಂದ ಕೆಲಸ ಮಾಡುವುದಿಲ್ಲ. ನಾವು ಅದನ್ನು ನಮ್ಮ ಜೀವನದ ಭಾಗವಾಗಿಸಿದರೆ ಮತ್ತು ಅದನ್ನು ಅಭ್ಯಾಸ ಮಾಡಿಕೊಂಡರೆ ಮಾತ್ರ, ಅದು ಕೆಲಸ ಮಾಡುತ್ತದೆ ಎಂದು ಅವರು ಹೇಳಿದರು.




# ಹೊಯ್ಸಳ ಪಬ್ಲಿಕ್ ಸ್ಕೂಲ್‌ನಲ್ಲಿ ಅಕ್ಷರಾಭ್ಯಾಸ: ಹೆಚ್. ಎಸ್. ಪ್ರತಿಮಾ ಹಾಸನ್



• ಉದಯವಾಹಿನಿ, ಬೆಂಗಳೂರು

ಹಾಸನದ ತಣ್ಣೀರು ಹಳ್ಳದಲ್ಲಿ ಇರುವಹೊಯ್ಸಳ ಪಬ್ಲಿಕ್ ಸ್ಕೂಲ್‌ನಲ್ಲಿ ಅಕ್ಷರಾಭ್ಯಾಸ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು ಶಾರದ ಪೂಜೆಯನ್ನು ಆಯೋಜಿಸಿ ಅಕ್ಷರಭ್ಯಾಸ ಮತ್ತು ವಿಧ್ಯಾರಂಭ ಕಾರ್ಯಕ್ರಮ ಶ್ರೀಮತಿ ಹೆಚ್. ಎಸ್. ಪ್ರತಿಮಾ ಹಾಸನ್ ರವರ ಅಧ್ಯಕ್ಷತೆಯಲ್ಲಿ ಪೂಜೆಯು ಅರ್ಥಪೂರ್ಣವಾಗಿ ನೆರವೇರಿತು.

ಪೂಜೆಯಲ್ಲಿ ಪೂರ್ವ ಪ್ರಾಥಮಿಕ ಶಾಲೆಗೆ ಸೇರ್ಪಡೆಗೊಂಡ ಹೊಸ ವಿದ್ಯಾರ್ಥಿಗಳು ತಮ್ಮ ಶಾಲಾ ಜೀವನದ ಮಹತ್ವದ ಹೆಜ್ಜೆಯನ್ನು ಇಟ್ಟರು. ಅಕ್ಷರಾಭ್ಯಾಸ ಕಾರ್ಯಕ್ರವು ವಿಭಿನ್ನವಾಗಿದ್ದು ಪೋಷಕರ ಮನ ಗೆಲ್ಲುವಂತೆ ಮಾಡಿತು. ಅಕ್ಷರಾಭ್ಯಾಸ ಕಾರ್ಯಕ್ರಮವು ಪೂಜೆ ಪುನಸ್ಕಾರಗಳಿಂದ ಏರ್ಪಡಿಸಲಾಗಿದ್ದು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿಕೊಂಡಿದ್ದ ಸಾಹಿತಿ, ಶಿಕ್ಷಕಿ, ಸಾಮಾಜಿಕ ಚಿಂತಕಿ,ಪತ್ರಕರ್ತೆ , ಪ್ರ,ಸಾ,ಸಾ,ಪ್ರ,ದ ಸಂಸ್ಥಾಪಕ ಅಧ್ಯಕ್ಷರಾದ ಶ್ರೀಮತಿ ಹೆಚ್, ಎಸ್, ಪ್ರತಿಮಾ ಹಾಸನ್ ರವರ ಹಾಗೂ ಶೋಭಾ ನಾಗರಾಜ್ ರವರ ಸಮಕ್ಷಮದಲ್ಲಿ ಓಂಕಾರವನ್ನು ಬೋದಿಸಿ ಅಕ್ಷರಾಭ್ಯಾಸಕ್ಕೆ ವಿದ್ಯುತ್ತ್ಯವಾಗಿ ಚಾಲನೆ ನೀಡಲಾಯಿತು. ಇಂದು ಶಾರದಾ ಪೂಜೆಯನ್ನು ಮಾಡುತ್ತಾ ಅಕ್ಷರಾಭ್ಯಾಸದ ಕಾರ್ಯಕ್ರಮವನ್ನು ವಿದ್ಯಾರ್ಥಿಗಳಿಗಾಗಿ ಮಾಡಲಾಗಿದ್ದು ಇಂದಿಗೆ ಮಾತ್ರ ಸೀಮಿತಗೊಳ್ಳದೆ ಪೋಷಕರು ತಮ್ಮ ಮಕ್ಕಳ ಉಜ್ವಲವಾದ ಭವಿಷ್ಯಕ್ಕಾಗಿ ತಮ್ಮ ಅಮೂಲ್ಯವಾದ ಸಮಯವನ್ನು ಮಕ್ಕಳೊಂದಿಗೆ ಕಳೆಯುವುದರ ಜೊತೆಗೆ ಶಿಕ್ಷಣದ ಪದ್ಧತಿ ಆದಂತಹ ಆಧುನಿಕ ಶಿಕ್ಷಣ ಪದ್ಧತಿಯು ರಾಷ್ಟ್ರದ ಅಡಿಪಾಯವನ್ನು ಭದ್ರಪಡಿಸಲಿ ಹಾಗೂ ನಮ್ಮ ಸಂಸ್ಕೃತಿಯನ್ನು ಉಳಿಸುವಲ್ಲಿ ಪ್ರಮುಖ ಪಾತ್ರವನ್ನು ವಹಿಸುವ ಕಾರ್ಯಗಳನ್ನು ಮಾಡುವಂತಾಗಲಿ . ಈ ಶಾಲೆಯು ಪ್ರಾರಂಭವಾಗಿ 18 ವರ್ಷಗಳಾಗಿದ್ದು ಇದರ ಬೆಳವಣಿಗೆಯ ಹಿಂದೆ ಬಹಳಷ್ಟು ಶ್ರಮವಿರುವುದನ್ನು ಅರಿಯಬೇಕಿದೆ. ಎಲ್ಲಾ ಶಿಕ್ಷಕ ವೃಂದದವರು, ಪೋಷಕರು ಶಾಲೆಯ ಅಭಿವೃದ್ಧಿಗೆ ಪ್ರೋತ್ಸಾಹ ನೀಡಬೇಕೆಂದು ಕೇಳಿಕೊಳ್ಳುತ ಅಕ್ಷರಾಭ್ಯಾಸ ಚಾಲನೆಯನ್ನು ಕೊಟ್ಟಂತಹ ಇಂದಿನ ದಿನದಿಂದಲೇ ಮಕ್ಕಳು ಹೊಸದಾಗಿ ಪ್ರಾರಂಭಿಸಿರುವ ವಿದ್ಯಾರ್ಥಿ ಜೀವನವು ಜ್ಞಾನ ಅಭಿವೃದ್ಧಿಗೆ ಕಾರಣವಾಗಲಿ ಎನ್ನುತ್ತ ಶಾಲೆಯು ಉತ್ತಮ ಗುಣಮಟ್ಟದ ಶಿಕ್ಷಣ ನೀಡುತ್ತಾ ಎಲ್ಲೆಡೆಯು ಹೆಸರುವಾಸಿಯಾಗಲಿ ಎಂದು ಹೆಚ್, ಎಸ್, ಪ್ರತಿಮಾ ಹಾಸನ್ ರವರು ತಿಳಿಸಿದರು.

ನಂತರ ಇವರಿಗೆ ಶಿಕ್ಷಣ ಸಂಸ್ಥೆಯವರು ಸನ್ಮಾನಿಸಿ ಗೌರವಿಸಿದರು. ಕಾರ್ಯಕ್ರಮದಲ್ಲಿ ಕಾರ್ಯದರ್ಶಿ ಶೋಭಾ ನಾಗರಾಜ್, ಮುಖ್ಯೋಪಾಧ್ಯಾಯರಾದ ನವೀನ್, ಸಂಧ್ಯಾ, ಶಿಕ್ಷಕ ವೃಂದದವರು, ಪೋಷಕರು, ವಿದ್ಯಾರ್ಥಿಗಳು ಇನ್ನು ಹಲವರು ಉಪಸ್ಥಿತರಿದ್ದು ಕಾರ್ಯಕ್ರಮದ ಯಶಸ್ವಿಗೆ ಕಾರಣರಾದರು.

# ಎಂ.ಎಫ್. ಹುಸೇನ್‌ರ ವೈಭವೀಕರಣ ನಿಲ್ಲಿಸುವಂತೆ ಆಗ್ರಹ

• ಉದಯವಾಹಿನಿ, ಮುಂಬೈ


140 ಕೋಟಿ ಭಾರತೀಯರ ಶ್ರದ್ಧಾ ಕೇಂದ್ರವಾಗಿರುವ ಭಾರತ ಮಾತೆಯನ್ನು ರೇಪ್ ಆಫ್ ಇಂಡಿಯಾ ಹೆಸರಿನಲ್ಲಿ ಅತ್ಯಂತ ವಿಕೃತ, ಅಸಭ್ಯ, ನಗ್ನ ಮತ್ತು ಅಶ್ಲೀಲವಾಗಿ ಚಿತ್ರಿಸಿದ ವಿವಾದಾತ್ಮಕ ಚಿತ್ರಕಾರ ಎಂ.ಎಫ್. ಹುಸೇನ್‌ನ ಇತರೆ 25 ಚಿತ್ರಗಳ ಹರಾಜು ಜೂನ್ 12, 2025 ರಂದು ಮುಂಬಯಿನ ಹ್ಯಾಮಿಲ್ಟನ್ ಹೌಸ್‌ನಲ್ಲಿರುವ ಪಾಂಡೋಲ್ ಆರ್ಟ್ ಗ್ಯಾಲರಿ ಮೂಲಕ ನಡೆಯಲಿದೆ. ಈ ಹಿನ್ನೆಲೆಯಲ್ಲಿ ಹಿಂದೂ ಜನಜಾಗೃತಿ ಸಮಿತಿಯು ಇಂದು ಮಹಾರಾಷ್ಟ್ರದ ಮುಖ್ಯಮಂತ್ರಿ, ಕೇಂದ್ರ ಗೃಹ ಸಚಿವ, ಮುಂಬಯಿ ಪೊಲೀಸ್ ಆಯುಕ್ತರು ಮತ್ತು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿ, ಈ ಹರಾಜಿಗೆ ತಕ್ಷಣವೇ ನಿಷೇಧ ಹೇರಬೇಕು ಮತ್ತು ಹುಸೇನ್‌ನ ಅಪರಾಧ ಕೃತ್ಯಗಳ ವೈಭವೀಕರಣವನ್ನು ನಿಲ್ಲಿಸಬೇಕು ಎಂದು ಆಗ್ರಹಿಸಿದೆ. ಇಲ್ಲವಾದರೆ, ತೀವ್ರ ಹೋರಾಟ ನಡೆಸುವುದಾಗಿ ಎಚ್ಚರಿಕೆ ನೀಡಿದೆ. ಈ ಮನವಿಯಲ್ಲಿ ಹಿಂದೂ ಜನಜಾಗೃತಿ ಸಮಿತಿಯು ಮುಂದಿನಂತೆ ಹೇಳುತ್ತಾ ಎಂ.ಎಫ್. ಹುಸೇನ್ 26/11 ರ ಸಮಯದಲ್ಲಿ ರೇಪ್ ಆಫ್ ಇಂಡಿಯಾ' ಎಂಬ ಚಿತ್ರದಲ್ಲಿ ಭಾರತಮಾತೆಯನ್ನು ನಗ್ನವಾಗಿ ಮತ್ತು ಅವಮಾನಕರವಾಗಿ ಚಿತ್ರಿಸುವ ಮೂಲಕ ದೇಶದ್ರೋಹದ ಪರಮಾವಧಿಯನ್ನು ತಲುಪಿದ್ದಾರೆ. ಮತ್ತೊಂದು ಚಿತ್ರದಲ್ಲಿ ಭಾರತ ಮಾತೆಯನ್ನು ನಗ್ನವಾಗಿ ಚಿತ್ರಿಸಿ, ಅದರ ಮೇಲೆ ವಿವಿಧ ನಗರಗಳ ಹೆಸರುಗಳನ್ನು ಬರೆದು ತೋರಿಸಲಾಗಿದೆ. ಇತರೆ ಚಿತ್ರಗಳಲ್ಲಿ ನಗ್ನ ಹನುಮಂತನ ಬಾಲದ ಮೇಲೆ ಕುಳಿತಿರುವ ನಗ್ನ ಸೀತೆ; ಒಂದು ಚಿತ್ರದಲ್ಲಿ ನಗ್ನ ಹನುಮಂತ, ನಗ್ನ ರಾಮ ಮತ್ತು ನಗ್ನ ಸೀತೆಯನ್ನು ಒಟ್ಟಿಗೆ ತೋರಿಸಲಾಗಿದೆ; ಶ್ರೀ

**ಎಂ.ಎಫ್. ಹುಸೇನ್ ಅವರ ಚಿತ್ರಗಳ ಪ್ರಸ್ತಾವಿತ ಹರಾಜು ಮತ್ತು ಮಾರಾಟವನ್ನು ತಕ್ಷಣವೇ ನಿಲ್ಲಿಸಬೇಕು ಮತ್ತು ಅದರ ಮೇಲೆ ಕಾನೂನುಬದ್ಧ ನಿಷೇಧ ಹೇರಬೇಕು ಎಂದು ಹೇಳಿದೆ. ಈ ಚಿತ್ರಗಳನ್ನು ಪ್ರದರ್ಶಿಸುವ ಅಥವಾ ಮಾರಾಟ ಮಾಡುವ ವ್ಯಕ್ತಿಗಳು, ಸಂಸ್ಥೆಗಳು ಅಥವಾ ಕಲಾ ಗ್ಯಾಲರಿಗಳ ವಿರುದ್ಧ ಕಾನೂನು ಪ್ರಕಾರ ಕ್ರಮ ಕೈಗೊಳ್ಳಬೇಕು. ರಾಷ್ಟ್ರೀಯ ಮತ್ತು ಧಾರ್ಮಿಕ ಭಾವನೆಗಳಿಗೆ ಧಕ್ಕೆ ತರುವ ಕಲಾಕೃತಿಗಳ ಪ್ರಸಾರಕ್ಕೆ ನಿಷೇಧ ಹೇರಬೇಕು, ಹಾಗೆಯೇ ಹುಸೇನ್ ಅವರ ಭಾರತಮಾತೆಯ ಚಿತ್ರವನ್ನು ದೇಶವಿರೋಧಿ ಎಂದು ಘೋಷಿಸಬೇಕು, ಎಂದು ಹಿಂದೂ ಜನಜಾಗೃತಿ ಸಮಿತಿಯು ಆಗ್ರಹಿಸಿದೆ.**



ಗಣೇಶನನ್ನು ನಗ್ನ ಸ್ತ್ರೀಯ ತೊಡೆಯ ಮೇಲೆ ಕುಳ್ಳಿರಿಸಲಾಗಿದೆ; ಇನ್ನೊಂದು ಚಿತ್ರದಲ್ಲಿ ಭಗವಾನ್ ಹನುಮಂತನನ್ನು ನಗ್ನ ಸ್ತ್ರೀಯನ್ನು ಕೈಯಲ್ಲಿ ಹಿಡಿದು ಹಾರುತ್ತಿರುವಂತೆ ತೋರಿಸಲಾಗಿದೆ. ಈ ರೀತಿಯಾಗಿ, ಸರಸ್ವತಿ ಮಾತೆ, ಪಾರ್ವತಿ ಮಾತೆ, ಗಂಗಾ ಮಾತೆ, ಯಮುನಾ ಮಾತೆ ಸೇರಿದಂತೆ ದೇವಿ–ದೇವತೆಗಳನ್ನು ಉದ್ದೇಶಪೂರ್ವಕವಾಗಿ ವಿಕೃತ, ನಗ್ನ ಮತ್ತು ಅಶ್ಲೀಲವಾಗಿ ಚಿತ್ರಿಸುವ ಮೂಲಕ ಕೋಟ್ಯಂತರ ಹಿಂದೂಗಳ ಶ್ರದ್ಧೆಗೆ ಘೋರ ಅಪಮಾನ ಮಾಡಿದ್ದಾರೆ. ಈ ಅವಮಾನಕರ ಚಿತ್ರಗಳ ವಿರುದ್ಧ ಹುಸೇನ್ ವಿರುದ್ಧ ದೇಶಾದ್ಯಂತ 1250 ಕ್ಕೂ ಹೆಚ್ಚು ಪೊಲೀಸ್ ದೂರುಗಳು ದಾಖಲಾಗಿವೆ. ಇದೇ ಕಾರಣಕ್ಕೆ ಅವರ ಪ್ರದರ್ಶನಗಳಿಗೆ ದೇಶಾದ್ಯಂತ ವಿರೋಧ ವ್ಯಕ್ತವಾಗಿತ್ತು ಮತ್ತು ಅಂತಿಮವಾಗಿ ಹುಸೇನ್ ಭಾರತದಿಂದ ಪಲಾಯನ ಮಾಡಿ ಕತಾರ್‌ನ ಪೌರತ್ವವನ್ನು ಸ್ವೀಕರಿಸಿದ್ದರು ಎಂದು ಹೇಳಿದೆ. 25 ಚಿತ್ರಗಳ ಹರಾಜು ಎಂದರೆ ಅವರ ಹಿಂದಿನ ರಾಷ್ಟ್ರವಿರೋಧಿ ಮತ್ತು ಸಮಾಜ ವಿರೋಧಿ ಕೃತ್ಯಗಳಿಗೆ ಪರೋಕ್ಷವಾಗಿ ಬೆಂಬಲ ನೀಡುವುದಾಗಿದೆ.

ಕಲಾತ್ಮಕ ಸ್ವಾತಂತ್ರ್ಯ ಎಂಬ ಹೆಸರಿನಲ್ಲಿ ಧಾರ್ಮಿಕ ಭಾವನೆಗಳಿಗೆ ಧಕ್ಕೆ ತರುವ ಮತ್ತು ದೇಶ ವಿರೋಧಿ ವ್ಯಕ್ತಿಗಳನ್ನು ವೈಭವೀಕರಿಸುವುದು ಯಾವುದೇ ರೀತಿಯಲ್ಲಿ ಸಮರ್ಥನೀಯವಲ್ಲ. ಇತ್ತೀಚೆಗೆ ದೆಹಲಿಯ ಪಟಿಯಾಲಾ ಹೌಸ್ ನ್ಯಾಯಾಲಯವು ಹುಸೇನ್ ಅವರ ಪ್ರದರ್ಶನದ ಚಿತ್ರಗಳನ್ನು ವಶಪಡಿಸಿಕೊಳ್ಳುವಂತೆ ಆದೇಶಿಸಿದ್ದು, ಅದರ ತನಿಖೆ ನಡೆಯುತ್ತಿದೆ. ಇದಕ್ಕೂ ಮೊದಲು ದೇಶಾದ್ಯಂತ ಹುಸೇನ್ ಅವರ ಅನೇಕ ಚಿತ್ರಪ್ರದರ್ಶನಗಳಿಗೆ ವಿರೋಧ ವ್ಯಕ್ತವಾಗಿತ್ತು. ಆ ಪ್ರದರ್ಶನಗಳನ್ನು ರದ್ದುಗೊಳಿಸಲಾಗಿತ್ತು. ಹುಸೇನ್ ಹೆಸರಿನಲ್ಲಿ ನೀಡಲಾಗುತ್ತಿದ್ದ ಪ್ರಶಸ್ತಿಗಳನ್ನೂ ರದ್ದುಗೊಳಿಸಲಾಗಿದೆ, ಎಂದು ಸಮಿತಿಯು ಹೇಳಿದೆ.



# ರಾಮಾಯಣ

ದಶರಥ ರಾಯನ ಶರೀರವನ್ನು ಎಣ್ಣೆಯ ಕೊಪ್ಪರಿಗೆಯಲ್ಲಿ ಇಟ್ಟಿದ್ದು

• ಹಿಂದಿನ ಸಂಚಿಕೆಯಿಂದ 78ನೆಯ ಅಧ್ಯಾಯ

ಭರತನು ಭೂಮಿಯಮೇಲೆ ಹೊರಳುತ್ತ ರೋದನಮಾಡುತ್ತ, ಆ ದೇವಿಯನ್ನು ಕುರಿತು ಹೀಗೆ ಹಲುಬಿದನು: ಅಮ್ಮ, ನನ್ನನ್ನು ಕರೆಕಳುಹಿಸಿದಾಗ ಮಹಾರಾಜನು ಯಾಗವನ್ನು ಮಾಡುವನು ಅಲ್ಲದಿದ್ದರೆ ಶ್ರೀರಾಮನಿಗೆ ಪಟ್ಟವನ್ನು ಕಟ್ಟುವನು ಎಂದು ಮನಸ್ಸಿನಲ್ಲಿ ಯೋಚನೆ ಮಾಡಿಕೊಂಡು ಬಂದೆನು. ಇಲ್ಲಿ ಅದಕ್ಕೆ ವಿರುದ್ಧವಾದ ಸ್ಥಿತಿಯನ್ನು ಕಂಡು ನನ್ನ ಮನಸ್ಸು ಒಡೆಯುತ್ತಿದೆ; ನಾನು ತಂದೆಯನ್ನು ಕಾಣದೆ ಹೋದೆನು ! ಅಮ್ಮ, ನಾನು ಬರುವುದರೊಳಗಾಗಿ ಯಾವ ಕಾರಣದಿಂದ ಆತನು ಶರೀರತ್ಯಾಗಮಾಡಿದನು ಇಲ್ಲಿದ್ದ ರಾಮಲಕ್ಷ್ಮಣರು ಆ ರಾಯನಿಗೆ ಸಂಸ್ಕಾರವನ್ನು ಮಾಡಿ ಕೃತಾರ್ಥರಾದರು. ಅಕಟಕಟಾ! ಕೀರ್ತಿವಂತನಾದ ಮಹಾರಾಜನು ನಾನು ಬಂದದ್ದನ್ನರಿಯನು. ಅವನು ಇದ್ದಿದ್ದರೆ ನನ್ನ ಶಿರಸ್ಸನ್ನು ಆಘ್ರಾಣಿಸುತ್ತಿದ್ದನು. ಧರ್ಮಿಷ್ಟನಾದ ಆ ರಾಯನ ಕೋಮಲವಾದ ಹಸ್ತಸ್ಪರ್ಶವು ನನಗಿನ್ನೆತ್ತಣದು ನಾನು ಆಡುವುದಕ್ಕೆ ಹೋಗಿ ಬಂದರೆ ತನ್ನ ಕೈಯಿಂದ ನನ್ನ ಮೈಮೇಲಿದ್ದ ಧೂಳುಗಳನ್ನು ತೊಡೆಯುತ್ತಿದ್ದನು! ಅದು ಹಾಗಿರಲಿ: ನನಗೆ ಒಡಹುಟ್ಟಿದ ಅಣ್ಣನೂ ತಂದೆಯೂ ಇಷ್ಟ ಬಂಧುವೂ ಧರ್ಮಾತ್ಮನೂ ಆದ ಶ್ರೀರಾಮನ ವೃತ್ತಾಂತವನ್ನು ಹೇಳು. ನಾನು ಆತನಿಗೆ ನೃತ್ಯನು. ಲೋಕದಲ್ಲಿ ಜೇಷ್ಠ ಭ್ರಾತೃವು ತಂದೆಗೆ ಸಮಾನನು. ಶ್ರೀರಾಮನು ಸರ್ವಜ್ಞನು. ಆತನು ಮಹಾಪೂಜ್ಯನು, ಇನ್ನು ನನಗೆ ಆತನೇ ಗತಿ. ಆತನ ಪಾದಗಳಿಗೆ ನಮಸ್ಕಾರವನ್ನು ಮಾಡುವೆನು. ಆತನು ಧರ್ಮ ರಹಸ್ಯವನ್ನು ಬಲ್ಲ ಮಹಾತ್ಮ, ತಾಯಿ, ದಶರಥರಾಯನು ಮಹಾಸತ್ಯಸಂಧನು. ಆ ರಾಯನು ತನ್ನ ನಿರ್ಯಾಣಕಾಲದಲ್ಲಿ ಏನು ಹೇಳಿದನು ಆ ವೃತ್ತಾಂತವನ್ನು ಹೇಳು ಎಂದು ಕೇಳಿದನು. ಕೈಕೇಯಾದೇವಿಯು ಭರತ ಮಹಾರಾಜನು ತನ್ನ ನಿರ್ಯಾಣಕಾಲದಲ್ಲಿ ಹಾ ರಾಮ! ಹಾ ಲಕ್ಷ್ಮಣ! ಹಾ ಸೀತಾದೇವಿ ! ಎಂದು ಹಂಬಲಿಸುತ್ತ ಪಾಶಗಳಿಂದ ಕಟ್ಟಿ ಸೆಳೆಯಲ್ಪಡುವ ಮದ್ದಾನೆಯಂತೆ 'ಲೋಕದಲ್ಲಿ ಕೃತಾರ್ಥರಾದವರು ವನವಾಸದಿಂದ ತಿರುಗಿ ಬರುವ ಸೀತಾಲಕ್ಷ್ಮಣ ಸಮೇತನಾದ ಶ್ರೀರಾಮನನ್ನು ಕಾಣುವರು' ಎಂದು ನುಡಿದು ಶರೀರವನ್ನು ಬಿಟ್ಟನು! ಎಂದು ನುಡಿದಳು, ಶ್ರೀ ರಾಮನು ವನವಾಸಕ್ಕೆ ಹೋದನೇಬ ಎರಡನೆಯ ಅಶುಭವಾರ್ತೆಯನ್ನು ಕೇಳಿ ಭರತನು ಅತ್ಯಂತ ಶೋಕದಿಂದ ಮುಖಕಾಂತಿಗುಂದಿದನು. ಅವನು ಸೀತಾಲಕ್ಷ್ಮಣಸಮೇತನಾದ ಶ್ರೀರಾಮನು ಎಲ್ಲಿದ್ದಾನೆಂದು ಕೇಳಿದನು. ಆಗ ಅವಳು ಭರತನಿಗೆ ಪ್ರಿಯವಾದ ವಿಷಯವೆಂದು ತನ್ನ ಮನಸ್ಸಿನಲ್ಲೆಣಿಸಿ ಭರತ, ಸೀತಾಲಕ್ಷ್ಮಣಸಮೇತನಾಗಿ ರಾಮನು ನಾರುಬಟ್ಟೆಗಳನ್ನುಟ್ಟು ದಂಡಕಾರಣ್ಯಕ್ಕೆ ಹೋದನು ಎಂದು ನುಡಿದಳು. ಭರತನಿಗೆ ತನ್ನ ವಂಶದಲ್ಲಿ ಅವತರಿಸಿದ ಮಹಾತ್ಮನಾದ ಶ್ರೀರಾಮನ ನಡತೆಯಲ್ಲಿ ಏನಾದರೂ ಕಳಂಕ ಬಂದಿತೋ ಎಂಬ ಸಂದೇಹದಿಂದ ಭಯವಾಯಿತು. ಅವನು ಕೈಕೇಯಾದೇವಿಯನ್ನು ಕುರಿತು ಅಮ್ಮ, ಶ್ರೀರಾಮನು ವನಕ್ಕೆ ಹೋಗುವುದಕ್ಕೆ ಏನು ಅಪರಾಧಮಾಡಿದನು ಬ್ರಾಹ್ಮಣರ ದ್ರವ್ಯವನ್ನು ಆಪಹರಿಸಿದನೆ ಪರ ಸ್ತ್ರೀಯರಿಗೆ ಎರಡೆಣಿಸಿದನೆ ಭ್ರೂಣಹತ್ಯವನ್ನು ಮಾಡಿದವನ ಹಾಗೆ ನಿಷ್ಕಾರಣವಾಗಿ ದಂಡಕಾರಣ್ಯಕ್ಕೆ ಹೋಗುವುದಕ್ಕೆ ಕಾರಣವೇನು ಎಂದು ಕೇಳಿದನು.

ಮುಂದುವರಿಯುವುದು...




ಕಲಾ ಸಾಹಿತ್ಯ
ವೈ.ಕೆ. ಸಂಧ್ಯಾಶರ್ಮ
ಲೇಖಕರು
ರಂಗಕರ್ಮಿ ಹಾಗೂ ನೃತ್ಯ ನಾಟಕಗಳ ವಿಮರ್ಶಕರು

# ಅಮೃತಾ- ಅಂಬಿಕಾ ಜೋಡಿಯ ಚೆಂದದ ನರ್ತನ- ನೃತ್ತಗಳ ಝೇಂಕಾರ

• ಉದಯವಾಹಿನಿ, ವಿಶೇಷ

ಖ್ಯಾತ ಮನೋಜ್ಞ ನೃತ್ಯಕಲಾ ಅಕಾಡೆಮಿಯ ನೃತ್ಯಾಚಾರ್ಯ ಡಾ. ಮಾನಸ. ಪಿ ಅವರ ಶಿಷ್ಯೆಯರಾದ ಶ್ರೀಮತಿ ಅಮೃತಾ ಸತ್ಯೇಂದ್ರ ಮತ್ತು ಅಂಬಿಕಾ ಸತ್ಯೇಂದ್ರ ಸೋದರಿಯರು ಎ.ಡಿ.ಎ. ರಂಗಮಂದಿರದಲ್ಲಿ ತಮ್ಮ ಸುಮನೋಹರ ನೃತ್ಯ ಪ್ರದರ್ಶನ ನೀಡುವ ಮೂಲಕ 'ರಂಗಪ್ರವೇಶ' ಮಾಡಿದರು. ವಿದುಷಿ. ಮಾನಸ ಅವರ ಸ್ಫುಟವಾದ ನಟುವಾಂಗದ ಬನಿಗೆ ಕಲಾವಿದೆಯರು ಕಣ್ಮನ ಸೆಳೆಯುವ 'ಮಾರ್ಗಂ' ಸಂಪ್ರದಾಯದ ಕೃತಿಗಳನ್ನು ಅಚ್ಚುಕಟ್ಟಾಗಿ ಪ್ರದರ್ಶಿಸಿದರು. ಶುಭಾರಂಭದಲ್ಲಿ ವಲಚಿರಾಗ- ಆದಿತಾಳಕ್ಕೆ ನಿಬದ್ಧವಾದ ಪುಷ್ಪಾಂಜಲಿಯಲ್ಲಿ ಕಲಾವಿದೆದ್ವಯರು ಗುರು–ಹಿರಿಯರು, ಪ್ರೇಕ್ಷಕರು ಮತ್ತು ದೇವಾನುದೇವತೆಗಳಿಗೆ ವಿವಿಧ ನೃತ್ತವಿನ್ಯಾಸಗಳ ಮೂಲಕ ರಂಗಾಕ್ರಮಣದಲ್ಲಿ ನೃತ್ತ ನಮನ ಸಲ್ಲಿಸಿದ್ದು ವಿಶಿಷ್ಟವಾಗಿತ್ತು. ಗಣೇಶವಂದನೆಯ ಸುಂದರ ಭಂಗಿಗಳು ಕಣ್ಮನ ಸೆಳೆದವು.

ಮುಂದೆ- ಶುದ್ಧ ನೃತ್ತಬಂಧ ಜತಿಸ್ವರ ( ಆಭೋಗಿ ರಾಗ–ಆದಿತಾಳ) ಸಂಕೀರ್ಣವಾದ ಲಯಬದ್ಧ ಪಲ್ಲವಿ ಅನುಪಲ್ಲವಿ ಮತ್ತು ಚರಣ ಭಾಗಗಳಲ್ಲಿ ಮಿನುಗಿದ ಮೆರುಗಿನ ಜತಿಗಳನ್ನು ದೃಷ್ಟಿ ಭೇದ- ಗ್ರೀವ ಭೇದಗಳೊಂದಿಗೆ ಕಲಾವಿದೆಯರು ಸಾಮರಸ್ಯ ನರ್ತನದಲ್ಲಿ ಪ್ರಸ್ತುತಿಪಡಿಸಿದರು. ಅನಂತರ- ವಾರೆ ಮುಡಿ ಕಟ್ಟಿ, ಚೆಂದದ ಇಳಿಮಾಲೆ ಧರಿಸಿದ, ಸಾಕ್ಷಾತ್ ಆಂಡಾಳ್ ಆಗಿ ಗೋಚರಿಸಿದ ಕಲಾವಿದೆಯರು ಮಲಯ ಮಾರುತ ರಾಗ- ಆದಿತಾಳದ 'ಕೌತ್ವಂ' ಮೂಲಕ ಮಹಿಳಾ ಸಂತಳಾದ ಆಂಡಾಳ್ ಜೀವನ ಚಿತ್ರವನ್ನು ಸುಂದರವಾಗಿ ಅನಾವರಣಗೊಳಿಸಿದರು.



'ಕವಿತ್ವಂ' ಅಥವಾ 'ಕೌತ್ವಂ' ಸಂಗೀತ ಮತ್ತು ನೃತ್ಯದ ಮೂಲಕ ದೇವರನ್ನು ಸ್ತುತಿಸುವ ಭಕ್ತಿಗೀತೆ ಎನ್ನಬಹುದು. ವಿಷ್ಣುವಿನ ಮೇಲಿನ ಅತುಲ ಭಕ್ತಿಯಿಂದ ಹದಿನೈದರ ಹುಡುಗಿ ಆಂಡಾಳ್, ತಂದೆ ನಿಶ್ಚಯಿಸಿದ ಮದುವೆಯನ್ನು ನಿರಾಕರಿಸಿ ಹರಿಯನ್ನೇ ಮದುವೆಯಾಗುವುದಾಗಿ ಸಂಕಲ್ಪಿಸಿ, ಭಕ್ತಿಯ ಪರಾಕಾಷ್ಠೆ ಮೆರೆದ ಅನನ್ಯ ಭಕ್ತೆ ಆಂಡಾಳಳ ದೈವೀಕ ಪ್ರೇಮವನ್ನು ಸಾಕ್ಷಾತ್ಕರಿಸಿದರು.

**ಮನಮುಟ್ಟಿದ ದೈವೀಕ ನರ್ತನ**

ಪ್ರಸ್ತುತಿಯ ಪ್ರಮುಖ ಭಾಗ ವರ್ಣ ನೃತ್ತ ಮತ್ತು ಅಭಿನಯ ಎರಡರಲ್ಲೂ ಪ್ರಾವೀಣ್ಯ ಬಯಸುವ ಸಂಕೀರ್ಣ ಜತಿಗಳಿಂದ ಕೂಡಿದ ದೀರ್ಘಬಂಧ.

ಅಂದು ಅಮೃತ ಮತ್ತು ಅಂಬಿಕಾ ನಿರೂಪಿಸಿದ ಭಕ್ತಿಪ್ರಧಾನ ವರ್ಣ ತಿರುಪತಿ ವೆಂಕಟರಮಣನ ವರ್ಣನೆ ಮತ್ತು ಮಹಿಮೆಯನ್ನು ಸ್ತುತಿಸುವ ಷಣ್ಮುಖಪ್ರಿಯ ರಾಗ- ಆದಿತಾಳದ ತಮಿಳು ವರ್ಣ ( ರಚನೆ- ಲಾಲ್ಗುಡಿ ಜಯರಾಮನ್) ವಾಗಿತ್ತು. ಗಜೇಂದ್ರ ಮೋಕ್ಷ ಮತ್ತು ವಾಮನ–ತ್ರಿವಿಕ್ರಮನಾದ ವಿಷ್ಣುವಿನ ಅವತಾರದ ಕಥೆಯ ಸುಂದರ ಸಂಚಾರಿಯನ್ನು ಕಲಾವಿದೆಯರು ನಾಟಕೀಯ ಆಯಾಮದಲ್ಲಿ ಅಭಿವ್ಯಕ್ತಿಸಿದರು. ಅರ್ಜುನ ಮತ್ತು ಪಾರ್ಥಸಾರಥಿ ರಥ ನಡೆಸಿಕೊಂಡು ಬರುವ ಕುರುಕ್ಷೇತ್ರ ಯುದ್ಧದ ಸನ್ನಿವೇಶದಲ್ಲಿ ಅನಾವರಣಗೊಂಡ ಕೃಷ್ಣನ ಗೀತೋಪದೇಶ ಮತ್ತು ವಿಶ್ವರೂಪದ ಭಂಗಿಗಳು ಅನನ್ಯವಾಗಿದ್ದವು.

ನಡುನಡುವೆ ಮೂಡಿ ಬಂದ ನೃತ್ತಗಳ ಜ್ಙೇಂಕಾರಕ್ಕೆ ಗುರು ಮಾನಸರ ಸುಸ್ಪಷ್ಟ –ಖಚಿತ ನಟುವಾಂಗದ ಬನಿ ಮೆಚ್ಚುಗೆ ಪಡೆಯಿತು. ಕಲಾವಿದೆಯರ ಉತ್ಸಾಹಪೂರ್ಣ ಅರೆಮಂಡಿ, ಆಕಾಶಚಾರಿಗಳೊಂದಿಗೆ ಕೂಡಿದ್ದ ರಮ್ಯ ನೃತ್ತದಲ್ಲಿ ವಿವಿಧ ಹಸ್ತ ವಿನಿಯೋಗಗಳು, ಪಾದಭೇದಗಳ ಸೊಗಸು ಮತ್ತು ವಿಶಿಷ್ಟ ಭಂಗಿಗಳು ಮನಸೆಳೆದವು.

ಮುಂದೆ- ಕಲಾವಿದೆ ಅಂಬಿಕಾ- ಹಂಸಾನಂದಿ ರಾಗದ ಶ್ರೀಪುರಂದರದಾಸರ ರಚನೆ- ಕಂಡೆ ಕರುಣಾನಿಧಿಯ, ಗಂಗೆಯ ಶಿರದೊಳಿಟ್ಟ ದೊರೆ- ಮಹಾದೇವನ ಕುರಿತ ಕೃತಿಯನ್ನು ಭಕ್ತ ಮಾರ್ಕಂಡೇಯ, ಬೇಡರ ಕಣ್ಣಪ್ಪನ ಸಂಚಾರಿ ಕಥಾನಕದಲ್ಲಿ ಅವರಿಬ್ಬರ ಭಕ್ತಿ ಪಾರಮ್ಯವನ್ನು ಭಕ್ತಿ ತಾದಾತ್ಮ್ಯತೆಯಿಂದ ನಿರೂಪಿಸಿ, ಉತ್ತಮಾಭಿನಯದೊಂದಿಗೆ ಅರ್ಪಿಸಿದಳು.

ನಂತರ ಅಮೃತಾ ಅಭೇರಿ ರಾಗ–ಆದಿತಾಳದ – ಶೃಂಗೇರಿ ನಿಲಯೇ ಶಾರದೆ ಎಂಬ ಶೃಂಗೇರಿ ಶಾರದಾಂಬೆಯ ಕುರಿತ ದೈವೀಕ ನರ್ತನವನ್ನು ಮೆರುಗಿನಿಂದ ಪ್ರದರ್ಶಿಸಿದಳು. ಶೃಂಗೇರಿ ಶಾರದಾ ಪೀಠದ ಸ್ಥಳಮಹಿಮೆ ಹಾಗೂ ಅದರ ಇತಿಹಾಸದಲ್ಲಿ ಅಡಗಿರುವ ಸೌಹಾರ್ದತೆಗೆ ನಿದರ್ಶನವಾದ 'ಕಪ್ಪೆ ಶಂಕರ'ನ ಕಥಾಪ್ರಸಂಗವನ್ನು ಬಹು ಸುಂದರವಾಗಿ ಅಭಿನಯಿಸಿದಳು. ಅಂತ್ಯದಲ್ಲಿ ಸುಮನೀಶ ರಂಜನಿ ರಾಗದ ಉತ್ಸಾಹಪೂರ್ಣವಾಗಿದ್ದ 'ತಿಲ್ಲಾನ'ದ ವಿವಿಧ ಅಡವು, ಅಂಗಹಾರ, ಆಕರ್ಷಕ ತೀರ್ಮಾನಗಳನ್ನು ಅಮೃತಾ–ಅಂಬಿಕಾ ಚೇತೋಹಾರಿಯಾಗಿ ಪ್ರದರ್ಶಿಸಿ ಆನಂದ ನೀಡಿದರು.

## ಮೀನುಗಾರರ ಸುರಕ್ಷತೆ - ಸಚಿವರಿಂದ ಸಭೆ


ಉದಯವಾಹಿನಿ ಚಿತ್ರ

• ಉದಯವಾಹಿನಿ ಮಂಗಳೂರು

ಕರಾವಳಿಯಲ್ಲಿ ಮೀನುಗಾರರ ಸುರಕ್ಷತಾ ಕ್ರಮಗಳು ಮತ್ತು ನಿಯಮಾವಳಿಗಳನ್ನು ಬಲಪಡಿಸುವ ಬಗ್ಗೆ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರಾದ ಮಂಕಾಳ ಎಸ್. ವೈದ್ಯ ಅವರ ಅಧ್ಯಕ್ಷತೆಯಲ್ಲಿ ಮಂಗಳೂರಿನ ಕೋಸ್ಟ್ ಗಾರ್ಡ್ ಕಚೇರಿಯಲ್ಲಿ ಸಭೆ ನಡೆಯಿತು. ಸಚಿವರು ಮಾತನಾಡಿ, ಮೀನುಗಾರ ಸಮುದಾಯದ ಜೀವನೋಪಾಯವನ್ನು ರಕ್ಷಿಸಲು ಸರಕಾರ ಎಲ್ಲಾ ಕ್ರಮ ಕೈಗೊಳ್ಳಲಿದೆ. ಮೀನುಗಾರರು ತಮ್ಮ ಜೀವವನ್ನು ಪಣಕ್ಕಿಟ್ಟು ಮೀನುಗಾರಿಕೆಗೆ ತೆರಳುತ್ತಾರೆ. ಅವರ ಸುರಕ್ಷತೆ ನಮ್ಮೆಲ್ಲರ ಆದ್ಯತೆಯಾಗಿದೆ. ಸಮುದ್ರದಲ್ಲಿ ಸುರಕ್ಷತೆಯನ್ನು ಹೆಚ್ಚಿಸಲು ಮತ್ತು ಅಪಾಯಗಳನ್ನು ತಗ್ಗಿಸಲು ಎಲ್ಲರೂ ಕಟಿಬದ್ಧರಾಗಿರಬೇಕು ಎಂದು ಹೇಳಿದರು.

ಮೀನುಗಾರಿಕೆಗೆ ತೆರಳುವ ನಾಡದೋಣಿ, ದೋಣಿಗಳಲ್ಲಿ ಸುರಕ್ಷತಾ ಪರಿಕರಗಳಿಗೆ ಮೀನುಗಾರರು ಆದ್ಯತೆ ನೀಡಬೇಕು. ಸಮುದ್ರದ ಉಬ್ಬರ, ನದಿಗಳಲ್ಲಿ ನೀರಿನ ಹರಿವು ಹೆಚ್ಚಳದ ಸಂದರ್ಭದಲ್ಲಿ ಮೀನುಗಾರರಿಗೆ ಮುನ್ಸೂಚನೆ ನೀಡಬೇಕು. ಮೀನುಗಾರರು ಸಮುದ್ರದಲ್ಲಿ ಅಪಾಯದಲ್ಲಿ ಸಿಲುಕಿದ ಸಂದರ್ಭದಲ್ಲಿ ತಕ್ಷಣವೇ ಅವರಿಗೆ ನೆರವು ದೊರಕಿಸಲು ವ್ಯವಸ್ಥೆಗಳಾಗಬೇಕು ಎಂದು ಮಂಕಾಳ ಎಸ್. ವೈದ್ಯ ತಿಳಿಸಿದರು.

### • ಸೈನಿಕರು ದೇಶದ ಗಡಿಯಲ್ಲಿ ಕಾಯ್ದರೆ, ರೈತರು ದೇಶಕ್ಕೆ ಅನ್ನ ನೀಡುತ್ತಾರೆ

## ಸಂತ್ರಸ್ತರ ಮಕ್ಕಳಿಗೆ ಶೇ.50 ಉದ್ಯೋಗ ಮೀಸಲಾಗಲಿ: ಶಿವಾನಂದ

• ಉದಯವಾಹಿನಿ ಕೊಲ್ಹಾರ


ಉದಯವಾಹಿನಿ ಚಿತ್ರ

ಎನ್.ಟಿ.ಪಿ.ಸಿ. ವಿದ್ಯುತ್ ಘಟಕ ಸ್ಥಾಪನೆಗೆ ಸಾವಿರಾರು ಎಕರೆ ಜಮೀನು ಕಳೆದುಕೊಂಡಿರುವ ಸಂತ್ರಸ್ತರ ಮಕ್ಕಳಿಗೆ ಇಲ್ಲಿ ಎ-ದರ್ಜೆಯ ಶೇ.50 ರಷ್ಟು ಹುದ್ದೆ ಮೀಸಲಿಡಿ ಎಂದು ಜವಳಿ, ಕೃಷಿ ಮಾರುಕಟ್ಟೆ, ಸಕ್ಕರೆ ಮತ್ತು ಕಬ್ಬು ಅಭಿವೃದ್ಧಿ ಸಚಿವರಾದ ಶಿವಾನಂದ ಪಾಟೀಲ ಹೇಳಿದರು.

ಕೊಲ್ಹಾರ ತಾಲ್ಲೂಕಿನ ಕೂಡಗಿ ಎನ್‌ಟಿಪಿಸಿ ಪರಿಸರದಲ್ಲಿ 2 ಕೋಟಿ ರೂ. ಅನುದಾನದಲ್ಲಿ ಪೊಲೀಸ್ ಠಾಣೆ ಕಟ್ಟಡ ನಿರ್ಮಾಣ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದ ಅವರು, ಕೂಡಗಿ ಎನ್.ಟಿ.ಪಿ.ಸಿ. ಘಟಕದಲ್ಲಿ ಸಂತ್ರಸ್ತರಿಗೆ ಉದ್ಯೋಗ ದೊರೆಯುವ ಬದಲು ಉತ್ತರ ಭಾರತ ಜನರಿಗೆ ಉದ್ಯೋಗ ಕಲ್ಪಿಸಲಾಗುತ್ತಿದೆ. ಇದರಿಂದ ಭರವಸೆ ಹುಸಿಗೊಂಡಿದ್ದು, ಭವಿಷ್ಯದಲ್ಲಿ ಕನಿಷ್ಠ ಡಿ ದರ್ಜೆಯ ಹುದ್ದೆಗಳಲ್ಲಾದರೂ ಸಂತ್ರಸ್ತರ ಕುಟುಂಬದವರಿಗೆ ಉದ್ಯೋಗದ ನೇಮಕಾತಿಯಲ್ಲಿ ಮೀಸಲು ನೀಡಿ ಎಂದು ಎನ್.ಟಿ.ಪಿ.ಸಿ. ಅಧಿಕಾರಿಗಳಿಗೆ ಸಲಹೆ ನೀಡಿದರು.

ಘಟನಾ ಸ್ಥಳಕ್ಕೆ ಆಗಮಿಸಿದ್ದ ಅಂದು ಇಂಧನ ಸಚಿವರಾಗಿದ್ದ ಇಂದಿನ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಅವರಿಗೆ ವಿದ್ಯುತ್ ಉತ್ಪಾದಕ ಬೃಹತ್ ಕೈಗಾರಿಕೆ ಪರಿಸರದಲ್ಲಿ ಭವಿಷ್ಯದಲ್ಲಿ ಕಾನೂನು- ಸುವ್ಯವಸ್ಥೆ ಸಂರಕ್ಷಣೆಗಾಗಿ ಪೊಲೀಸ್ ಠಾಣೆ ಮಂಜೂರು ಮಾಡುವಂತೆ ನಾನು ಮನವಿ ಮಾಡಿದ್ದೆ ಎಂದು ಕೂಡಗಿ ಪೊಲೀಸ್ ಠಾಣೆ ಸ್ಥಾಪನೆ ಹಿನ್ನೆಲೆ ವಿವರಿಸಿದರು.

**ಶಾಶ್ವತ ಕಟ್ಟಡ ನಿರ್ಮಾಣಕ್ಕೆ ಭೂಮಿ ಪೂಜೆ**

ನನ್ನ ಮನವಿ ಮೇರೆಗೆ ಸಭೆ ನಡೆಸಿದ್ದ ಶಿವಕುಮಾರ ಅವರು, ಸರ್ಕಾರ ಎನ್‌ಟಿಪಿಸಿ ಕೇಂದ್ರದ ಪರಿಸರದಲ್ಲಿ ಪೊಲೀಸ್ ಠಾಣೆ ಮಂಜೂರು ಮಾಡುವಲ್ಲಿ ಸಹಕಾರ ನೀಡಿದ್ದರು. ಕೂಡಗಿ ಎನ್‌ಟಿಪಿಸಿ ನಿವೇಶನದಲ್ಲಿ ತಾತ್ಕಾಲಿಕ ಶೆಡ್‌ನಲ್ಲಿ ಇಬ್ಬರು ಪಿಎಸ್‌ಐ, ಇಬ್ಬರು ಎಎಸ್‌ಐ, 10 ಪೊಲೀಸ್ ಸಿಬ್ಬಂದಿ ಸಹಿತ ಈ ಠಾಣೆ ಕಾರ್ಯ ನಿರ್ವಹಿಸುತ್ತಿದೆ ಎಂದು ವಿವರಿಸಿದರು.

ಸದರಿ ಪೊಲೀಸ್ ಠಾಣೆ ಶಾಶ್ವತ ಕಟ್ಟಡ ನಿರ್ಮಾಣಕ್ಕೆ 18 ಗುಂಟೆ ನಿವೇಶನ ನೀಡಿದ್ದು, 2 ಕೋಟಿ ರೂ. ಅನುದಾನ ಮಂಜೂರು ಮಾಡಿದೆ.

**ಸರ್ಕಾರಕ್ಕೆ ಮನವಿ ಮಾಡಿದ್ದೆ**

ಕೂಡಗಿ ಎನ್‌ಟಿಪಿಸಿ ನಿರ್ಮಾಣ ವಿರೋಧಿಸಿ ಹೋರಾಟ ನಡೆದಿತ್ತು. ಆ ನಡೆದಿದ್ದ ಅಹಿತಕರ ಘಟನೆಯನ್ನು ಅನುಲಕ್ಷಿಸಿ, ನಾನು ಈ ಭಾಗದಲ್ಲಿ ಶಾಶ್ವತವಾಗಿ ಶಾಂತಿ, ಸುವ್ಯವಸ್ಥೆ ಸ್ಥಾಪಿಸಲು ಪೊಲೀಸ್ ಠಾಣೆ ತೆರೆಯುವಂತೆ ಸರ್ಕಾರಕ್ಕೆ ಮನವಿ ಮಾಡಿದ್ದೆ ಎಂದರು.

ಸದರಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಕೂಡಗಿ ಟೌನ್‌ಶಿಪ್ ಮಾತ್ರವಲ್ಲದೇ 9 ಹಳ್ಳಿಗಳು, 2 ತಾಂಡಾಗಳ ವ್ಯಾಪ್ತಿ ಹೊಂದಿದೆ ಎಂದು ವಿವರಿಸಿದರು.

ಸರ್ಕಾರದ ಮಂಜೂರಾತಿ ಬಳಿಕ 2019 ಮಾರ್ಚ 25 ರಂದು ತಾತ್ಕಾಲಿಕ ಶೆಡ್‌ನಲ್ಲಿ ಕೂಡಗಿ ಪೊಲೀಸ್ ಠಾಣೆ ತಲೆ ಎತ್ತಿದ್ದು, ಇದೀಗ ಶಾಶ್ವತ ಕಟ್ಟಡ ನಿರ್ಮಾಣಕ್ಕೆ ಭೂಮಿ ಪೂಜೆ ನೆರವೇರಿಸಿದೆ ಎಂದರು.

> ದಶಕದ ಹಿಂದೆ ಕೂಡಗಿ ಎನ್.ಟಿ.ಪಿ.ಸಿ ಸ್ಥಾಪನೆ ಹಂತದಲ್ಲಿ ನಡೆದ ಅಹಿತಕರ ಘಟನೆಯಿಂದ ಇಲ್ಲಿ ಪೊಲೀಸ್ ಠಾಣೆ ಸ್ಥಾಪನೆ ಮಾಡಲಾಗಿದೆ. ಸಮಾಜದಲ್ಲಿ ಶಾಂತಿ ಸುವ್ಯವಸ್ಥೆ ಕಾಯ್ದುಕೊಳ್ಳುವಲ್ಲಿ ಪೊಲೀಸರ ಪಾತ್ರ ಮಹತ್ವದ್ದಾಗಿದೆ. ಸೈನಿಕರು ದೇಶದ ಗಡಿಯಲ್ಲಿ ಕಾಯ್ದರೆ, ರೈತರು ದೇಶಕ್ಕೆ ಅನ್ನ ನೀಡುತ್ತಾರೆ. ದೇಶದಲ್ಲಿ ಆಂತರಿಕ ಕಾನೂನು, ಸುವ್ಯವಸ್ಥೆ, ಶಾಂತಿ ಸ್ಥಾಪನೆಯಲ್ಲಿ ಪೊಲೀಸ್ ಪಾತ್ರ ಅತ್ಯಂತ ಮಹತ್ವದ್ದಾಗಿದೆ
> -ಶಿವಾನಂದ ಪಾಟೀಲ

ಎನ್‌ಟಿಪಿಸಿ ಮುಖ್ಯ ಪ್ರಧಾನ ವ್ಯವಸ್ಥಾಪಕ ಚಿತ್ತರಂಜನ ರಥಾ, ವಿಜಯಪುರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ, ಬಸವನಬಾಗೇವಾಡಿ ಡಿವೈಎಸ್ಪಿ ಬಲ್ಲಪ್ಪ ನಂದಗಾವಿ, ಕೊಲ್ಹಾರ ತಹಸೀಲ್ದಾರ ಎಸ್ ಎಸ್ ನಾಯಕಲಮಠ, ಕೂಡಗಿ ಠಾಣೆ ಎಎಸ್‌ಐ ಯತೀಶ, ಕೂಡಗಿ ಗ್ರಾ.ಪಂ. ಅಧ್ಯಕ್ಷೆ ಹುಸೇನಬಿ ಮಾಶಾಳ, ಮೇಹರಾಜಪೀರ್ ಜಹಗೀರದಾರ, ಈಶ್ವರ ಜಾಧವ, ಇತರರು ವೇದಿಕೆ ಮೇಲಿದ್ದರು.

## ಮಿನಿ ನ್ಯೂಸ್

### ವಿವಿಧೆಡೆ ಬಕ್ರೀದ್ ಸಂಭ್ರಮ

• ಉದಯವಾಹಿನಿ, ರಿಪ್ಪನ್‌ಪೇಟೆ

ಪಟ್ಟಣದ ಮುಸ್ಲಿಮರು ಅತ್ಯಂತ ಸಂಭ್ರಮದಿಂದ ಬಕ್ರೀದ್ ಹಬ್ಬ ಆಚರಿಸಿದರು. ಹೊಸನಗರ ರಸ್ತೆಯ ಮೊಹಿಯುದ್ದೀನ್ ಜುಮ್ಮಾ ಮಸೀದಿ, ಮೆಕ್ಕಾ ಮಸೀದಿ, ಮದೀನಾ ಮಸೀದಿ ಹಾಗೂ ಗಾಳಿಬೈಲು ಮಸೀದಿಯ ಧರ್ಮ ಗುರುಗಳ ನೇತೃತ್ವದಲ್ಲಿ ಮುಸ್ಲಿಮರು ಸಾಗರ ರಸ್ತೆಯಲ್ಲಿರುವ ಈದ್ಗಾ ಮೈದಾನಕ್ಕೆ ತೆರಳಿ ಪ್ರಾರ್ಥನೆ ಸಲ್ಲಿಸಿದರು.

ನಂತರ ನಡೆದ ಧರ್ಮಸಭೆಯಲ್ಲಿ ಮೊಹಿಯುದ್ದೀನ್ ಜುಮ್ಮಾ ಮಸೀದಿಯ ಧರ್ಮಗುರು ಮುನೀರ್ ಸಖಾಫಿ ಮಾತನಾಡಿ, ಪ್ರತಿಯೊಂದು ಹಬ್ಬಗಳು ಭಾರತೀಯ ಸಂಸ್ಕೃತಿಯ ಪ್ರತೀಕವಾಗಿವೆ. ಜಾತೀಯತೆಯನ್ನು ಬಿಟ್ಟು ಧರ್ಮವನ್ನು ಗೌರವಿಸುವ ಪರಿಪಾಠ ಬೆಳೆಯಬೇಕು. ಸಹೋದರತ್ವ ಸಹಬಾಳ್ವೆ ನಡೆಸಬೇಕು ಎಂದರು. ಇದೇ ಸಂದರ್ಭದಲ್ಲಿ ರಿಪ್ಪನ್ ಪೇಟೆಯ ಈದ್ಗಾ ಮೈದಾನದಲ್ಲಿ ಸರ್ಕಾರದ 50,000 ಅನುದಾನದಲ್ಲಿ ಅಳವಡಿಸಲಾಗಿದ್ದ ಹೈಮಾಸ್ಟ್ ದೀಪವನ್ನು ಉದ್ಘಾಟಿಸಲಾಯಿತು.

## ಸುಲೇಪೇಟ ಗ್ರಾಮದಲ್ಲಿ ಜಗಜೀವನರಾಮ ಭವನ ಹಾಗೂ ಮೂರ್ತಿ ಶೀಘ್ರದಲ್ಲಿ ಸ್ಥಾಪನೆಗೆ: ಸಚಿವ ಶರಣಪ್ರಕಾಶ ಪಾಟೀಲ

• ಉದಯವಾಹಿನಿ, ಚಿಂಚೋಳಿ

ತಾಲ್ಲೂಕಿನ ಸುಲೇಪೇಟ ಗ್ರಾಮದಲ್ಲಿ ಡಾ.ಬಾಬು ಜಗಜೀವನರಾಮ್ ಅವರ ಮೂರ್ತಿ ಹಾಗೂ ಭವನವನ್ನು ಬರುವ ದಿನಗಳಲ್ಲಿ ಶೀಘ್ರದಲ್ಲಿ ಸ್ಥಾಪನೆ ಮಾಡುತ್ತೇನೆ ಎಂದು ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ ಪಾಟೀಲ ಹೇಳಿದರು. ತಾಲ್ಲೂಕಿನ ಸುಲೇಪೇಟ ಗ್ರಾಮದ ಎಸ್ಟಿ ಭವನದಲ್ಲಿ ಹಮ್ಮಿಕೊಂಡ ಡಾ.ಬಾಬು ಜಗಜೀವನ ರಾಮರವರ 118ನೇ ಜಯಂತ್ಯೋತ್ಸವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು,ಜಗಜೀವನರಾಮ ಅವರು ಅನೇಕ ಹುದ್ದೆಗಳು ಅಲಂಕರಿಸಿ ದೇಶಕ್ಕೆ ಅಪಾರ ಕೊಡುಗೆ ನೀಡಿದ್ದಾರೆ.

ಒಳಮೀಸಲಾತಿಗಾಗಿ ಸುಪ್ರೀಂಕೋರ್ಟ್ ಸಹ ತಮ್ಮ ಪರವಾಗಿ ಆದೇಶ ನೀಡಿದ್ದು ಈಗಾಗಲೇ ಮುಖ್ಯಮಂತ್ರಿ ಆದೇಶ ಅನುಸಾರ ಸಮೀಕ್ಷೆ ನಡೆಸಲಾಗುತ್ತಿದೆ ಶೀಘ್ರದಲ್ಲೇ ಸಚಿವ ಸಂಪುಟದಲ್ಲಿ ಚರ್ಚಿಸಿ ಒಳಮೀಸಲಾತಿ ಜಾರಿ ಮಾಡಲಾಗುವುದು. ನನ್ನ ಮತಕ್ಷೇತ್ರದಲ್ಲಿ ಯಾವುದೇ ಸಮಾಜದ ಮೇಲೆ ದೌರ್ಜನ್ಯ ನಡದಿಲ್ಲನಾನು ಯಾವಾಗಲೂ ಜಾತಿ ಮತ ಪಕ್ಷ ಮಾಡಿಲ್ಲನಾನು ಮಾಡಲ್ಲ ನಮ್ಮ ಸರಕಾರ ಕೂಡ ಮಾಡಲ್ಲ,ನಾನು ಬಸವಣ್ಣ ತತ್ವ ಆದರ್ಶ ಮೇಲೆ ನಡೆಯುತ್ತನೆ,ಬಸವಣ್ಣನವರ ಹಾಕಿದ ತಳಹಾದಿ ಮೇಲೆ


ಉದಯವಾಹಿನಿ ಚಿತ್ರ

ಸರಕಾರ ನಡೆಯುತ್ತಿದೆ. ಜಗಜೀವನರಾಮ ತಮಗಾಗಿ ಬೆಳೆಯದೆ ಸಮಾಜಕ್ಕಾಗಿ ಹೋರಾಟ ಮಾಡಿ ನಮಗೆ ಪ್ರೇರಣೆ ನೀಡಿದ್ದಾರೆ ಅವರ ತತ್ವ ಆದಾರ್ಶ ನಮ್ಮ ಜೀವನದಲ್ಲಿ ಅಳವಡಿಸಿಕೊಳಬೇಕು ಎಂದರು.

**ಬೃಹತ ಮೇರವಣಿಗೆ:** ಡಾ ಬಾಬು ಜಗಜೀವನ ರಾಮ್ ಜಯಂತ್ಯೋತ್ಸವ ಪ್ರಯುಕ್ತ ಸುಲೇಪೇಟ ಗ್ರಾಮದ ಡಾ.ಬಾಬು ಜಗಜೀವನರಾಮ್ ವೃತ್ತದಿಂದ ಬಸವೇಶ್ವರ ಮಾರ್ಗವಾಗಿ ಪ್ರಮುಖ ರಸ್ತೆಯಿಂದ ಎಸ್ಟಿ ಭವನದವರೆಗೆ ಬೃಹತ್ ಮೆರವಣಿಗೆ ಮಾಡಲಾಯಿತು.

ಮೇರವಣಿಗೆ ಉದ್ದಕ್ಕೆ ಡಿಜೆ ಸೋಂಡ್ಗೆ ಯುವಕರು ಕುಣಿದು ಕುಪ್ಪಳಿಸದರು. ಮಾಜಿ ಶಾಸಕ ರಾಜಕುಮಾರ ಪಾಟೀಲ,ಬಾಲರಾಜ ಗುತ್ತೇದ್ದಾರ,ಗೋಪಾಲರಾವ ಕಟ್ಟಿಮನಿ, ದೋಡೇಂದ್ರ ಸ್ವಾಮಿಗಳು,ಜಯಂತಿ ಸಮಿತಿಯ ಅಧ್ಯಕ್ಷ ವಿನೋದಕುಮಾರ ಓಂಕಾರ,ಮಾತನಾಡಿದರು.

> ಶಾಸಕ ಡಾ.ಅವಿನಾಶ ಜಾಧವ ಮಾತನಾಡಿದ ಅವರು, ಭಾರತದ ಕೃಷಿಯಲ್ಲಿ ಮಹತ್ತರವಾದ ಬದಲಾವಣೆಯನ್ನು ಮಾಡಿ ಕೃಷಿಯನ್ನು ಉನ್ನತೀಕರಣ ಸೃಷ್ಟಿಸಿದ ಡಾ.ಬಾಬು ಜಗಜೀವನರಾಮರವರು ಹಸಿರು ಕಾಂತ್ರಿಯ ಹರಿಕಾರರು ಭಾರತ ದೇಶಕ್ಕೆ ಅವರ ಕೊಡಗುಗೆ ಅಪಾರವಾಗಿದೆ.ಶೋಷಿತರ ಹಕ್ಕುಗಳಿಗಾಗಿ ಹೋರಾಟ ಮಾಡಿದ ಮಹಾನ್ ನಾಯಕರಾದ ಡಾ.ಬಾಬುಜಗಜೀವನರಾಂ ಅವರು ಶೋಷಿತರ ಆಶಾಕಿರಣರಾಗಿದ್ದಾರೆ
> -ಶರಣಪ್ರಕಾಶ ಪಾಟೀಲ, ಸಚಿವ

## ಹಲಸು ಉತ್ಪನ್ನಗಳಿಗೆ ಬಹಳಷ್ಟು ಮೌಲ್ಯವಿದೆ: ಕಿಶೋರ್ ಕುಮಾರ್ ಕುಡ್ಗಿ

• ಉದಯವಾಹಿನಿ, ಪುತ್ತೂರು

ಹಲಸು ಉತ್ಪನ್ನಗಳನ್ನು ತಯಾರಿಸುವಲ್ಲಿ ಪ್ರಭುದ್ಧ ಚಿಂತನೆಯ ಜೊತೆಗೆ ತಾಳ್ಮೆಯ ಅಗತ್ಯವಿದೆ. ಹಲಸಿನ ಉತ್ಪನ್ನಗಳಿಗೆ ಬಹಳಷ್ಟು ಮೌಲ್ಯವಿದೆ. ಗೋಕುಲ್ ಫ್ರುಟ್ಸ್‌ಗೆ ಹಲಸು ಬ್ರಾಂಡ್ ಹೆಸರು ಬರುವಂತೆ ಮಾಡಿದೆ ಎಂದು ಮಂಗಳೂರು ಕ್ಯಾಂಪ್ಕೋ ಸಂಸ್ಥೆಯ ಅಧ್ಯಕ್ಷ ಕಿಶೋರ್ ಕುಮಾರ್ ಕುಡ್ಗಿ ಅಭಿಪ್ರಾಯಪಟ್ಟರು.

ಅವರು ನವತೇಜ ಪುತ್ತೂರು ಸಂಘಟನೆಯು ಪುತ್ತೂರಿನ ಕಿಲ್ಲೆ ಮೈದಾನದಲ್ಲಿ ಆಯೋಜಿಸಿರುವ ಮೂರು ದಿನಗಳ 'ಹಲಸು ಹಣ್ಣು ಮೇಳ'ದ ಸಭಾ ಕಾರ್ಯಕ್ರಮದಲ್ಲಿ ಸಂಜೆ ಉದ್ಘಾಟಿಸಿ ಮಾತನಾಡಿದರು.

ಕೃಷಿ ವಿಚಾರಗಳಿಗೆ ಸಂಬಂಧಿಸಿದಂತೆ ಕೃಷಿ ಅಕಾಡಮಿ ಸ್ಥಾಪನೆ ಮಾಡುವ ಚಿಂತನೆಯು ಉತ್ತಮ ವಿಚಾರವಾಗಿದೆ. ಆದರೆ ಈ ಅಕಾಡಮಿ ಸ್ಥಾಪನೆಯಾದಲ್ಲಿ ಅದಕ್ಕೆ ಅನುಭವಿಗಳನ್ನು ಸೇರ್ಪಡೆ ಮಾಡಿಕೊಳ್ಳಬೇಕಾಗಿದೆ ಎಂದರು.ದಿಕ್ಸೂಚಿ ಮಾತುಗಳನ್ನಾಡಿದ ಅಡಿಕೆ ಪತ್ರಿಕೆ ಸಂಪಾದಕ ಶ್ರೀಪಡ್ರೆ ಅವರು ಹಲಸು ಆಂದೋಲನವು ಸರ್ಕಾರ, ಇಲಾಖೆಯಿಂದ ಆರಂಭಗೊಂಡಿಲ್ಲ ಬದಲಿಗೆ


ಉದಯವಾಹಿನಿ ಚಿತ್ರ

ಶ್ರೀಸಾಮಾನ್ಯರಿಂದ ಈ ಆಂದೋಲನ ಆರಂಭಗೊಂಡಿದೆ. ಹಲಸು ಉದ್ದಿಮೆ ಏಳಿಗೆಯಾಗಲು ಹೊಸ ಬಗೆಯ ಚಿಂತನೆಯ ಅಗತ್ಯವಿದೆ. ಈ ಉದ್ಯಮಕ್ಕೆ ಬರುವವರು ಸಾಕಷ್ಟು ಅಧ್ಯಯನ ನಡೆಸಿ ಉದ್ಯಮಕ್ಕೆ ಇಳಿಯಬೇಕು. ಹಲಸು ಬಗ್ಗೆ ಇರುವ ಕೀಳರಿಮೆಯಿಂದಾಗಿ ಹಲಸು ಉದ್ಯಮಕ್ಕೆ ದೊಡ್ಡ ಹೊಡೆತ ನೀಡಿದೆ. ಹಲಸು ಮೇಳಗಳ ಮೂಲಕ ಈ ಕೀಳರಿಮೆ ಶಾಪ ವಿಮೋಚನೆಯಾಗಿದೆ. ಹಲಸಿನ ವಿವಿಧ ಉತ್ಪನ್ನಗಳಾದ ಪಲ್ಪ್, ಹಪ್ಪಳ, ಚಿಪ್ಸ್, ಗುಜ್ಜೆ, ಬೀಜದ ಹುಡಿ, ಬೀಜದ ಹಲ್ವಗಳಿಗೆ ಬಹಳಷ್ಟು ಬೇಡಿಕೆಗಳಿವೆ. ದ.ಕ.ಜಿಲ್ಲೆಯಲ್ಲಿ ಹಲಸಿನಿಂದ ಒತ್ತು ಹಪ್ಪಳ ತಯಾರಿಸಿದರೆ ಉತ್ತರ ಕನ್ನಡದಲ್ಲಿ ಅಚ್ಚು ಹಪ್ಪಳ ತಯಾರಿಸುತ್ತಾರೆ. ಅಚ್ಚು ಹಪ್ಪಳ ತಯಾರಿಗೆ ಯಂತ್ರಗಳನ್ನು ತಯಾರಿಸುವ ಬಗ್ಗೆ ಸಿದ್ಧತೆ ನಡೆಸಲಾಗುತ್ತಿದೆ ಎಂದರು. ಶ್ಯಾಮ್ ಸುಂದರ ಭಟ್ ಅವರು ಉತ್ಪಾದಿಸಿದ ಹಲಸಿನ ಬೀಜದಿಂದ ತಯಾರಿಸಿದ ರಸಂ ಹುಡಿ, ಸಾಂಬಾರ್ ಹುಡಿ, ಚಡ್ನಿ ಹುಡಿ ಮತ್ತು ಪಾಯಸ ಹುಡಿಗಳನ್ನು ಬಿಡುಗಡೆಗೊಳಿಸಲಾಯಿತು.

> ಕಳೆದ 20 ವರ್ಷಗಳಿಂದ ಹಲಸಿನ ಉತ್ಪನ್ನ ತಯಾರಿಸುವ ಬಗ್ಗೆ ಆಸಕ್ತಿವಹಿಸಿದ್ದೆವು. ಈ ಬಗ್ಗೆ ಮನೆಯಲ್ಲಿ ಚರ್ಚೆಗಳನ್ನು ನಡೆಸುತ್ತಿದ್ದೆವು. ಅದಕ್ಕಾಗಿ ಈಗಲೂ ಹಲಸು ಮೇಳಕ್ಕೆ ನಾವು ಬೆಂಬಲ ನೀಡುತ್ತಿದ್ದೇವೆ. ಹಲಸು ಉತ್ಪನ್ನ ಮಾರುಕಟ್ಟೆಯ ಬಗ್ಗೆ ಹೆಚ್ಚಿನ ಚಿಂತನೆಯ ಅಗತ್ಯವಿದೆ. ಕೃಷಿ ಕಲಿಕೆಯ ಉದ್ದೇಶಕ್ಕಾಗಿ ಕೃಷಿ ಅಕಾಡಮಿ ಸ್ಥಾಪನೆ ಮಾಡಿ. ನಿರಂತರ ಕಲಿಕೆಯ ದೃಷ್ಟಿಯಲ್ಲಿ ಕೃಷಿ ಪಠ್ಯ ಕ್ರಮ ತಯಾರಿಸಬೇಕು
> -ಕೇಶವ ಪ್ರಸಾದ್ ಮುಳಿಯ
> ಶ್ಯಾಂ ಜ್ಯುವೆಲ್ಸ್ ಗ್ರೂಪ್‌ನ ಎಂಡಿ

## ಸಿಎಂ ಸಿದ್ದರಾಮಯ್ಯರನ್ನು ಬಂಧಿಸಬೇಕು : ಶ್ರೀರಾಮುಲು

• ಉದಯವಾಹಿನಿ, ಬಳ್ಳಾರಿ

ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದ ಬಳಿನಡೆದ ಕಾಲ್ತುಳಿತದ 11 ಜನರ ಸಾವಿನ ಪ್ರಕರಣಕ್ಕೆ ಸಂಬಂಧಿಸಿ ಸರ್ಕಾರವೇ ಹೊಣೆ ಹೊತ್ತು, ಸಿ.ಎಂ.ಡಿಸಿಎಂ, ಗೃಹ ಸಚಿವರು ರಾಜೀನಾಮೆ ನೀಡಬೇಕೆ ಹೊರತು, ಪೊಲೀಸ್ ಅಧಿಕಾರಿಗಳನ್ನು ಅಮಾನತು ಮಾಡುವುದಲ್ಲ ಎಂದು ಬಿಜೆಪಿ ಮುಖಂಡ, ಮಾಜಿ ಸಚಿವ ಬಿ.ಶ್ರೀರಾಮುಲು ಹೇಳಿದ್ದಾರೆ.

ಅವರು ನಗರದ ತಮ್ಮ ನಿವಾಸದಲ್ಲಿ ಸುದ್ದಿಗೋಷ್ಟಿ ನಡೆಸಿ, ಜನ ಸತ್ತರೂ ಲೆಕ್ಕಿಸದೇ ಕಪ್‌ಗೆ ಮುತ್ತು ಕೊಟ್ಟ ಜನ ನಿನಗನೆ ಅತ್ತರೆ ಆಯ್ತಾ, ತಮ್ಮ ಸರ್ಕಾರಕ್ಕೆ ಕಪ್ ಗೆದ್ದವರಿಗೆ ಸನ್ಮಾನ ಮಾಡುವ ಮೂಲಕ ಮೈಲೇಜ್ ತೆಗೆದುಕೊಳ್ಳಲು, ಪುಕ್ಕಟೆ ಪಬ್ಲಿಸಿಟಿಗಾಗಿ ಪೂರ್ವ ಸಿದ್ಧತೆ ಇಲ್ಲದೆ ಈ ರೀತಿ ಕಾರ್ಯಕ್ರಮ ಮಾಡಿ ಸರ್ಕಾರವೇ ಈ 11 ಜನರ ಮರಣಕ್ಕೆ ಕಾರಣವಾಗಿದೆ. ಅದಕ್ಕಾಗಿ ಅಧಿಕಾರ ಇದೆಂದು ಪೊಲೀಸರ ಮೇಲೆ ಕ್ರಮ ಜರುಗಿಸವುದು ಸರಿಯಲ್ಲ. ಈ ಕಾರ್ಯಕ್ರಮ ಮಾಡಲು ನಿರ್ಧಾರ


ಉದಯವಾಹಿನಿ ಚಿತ್ರ

ತೆಗೆದುಕೊಂಡ ಸಿ.ಎಂ. ಸಿದ್ದರಾಮಯ್ಯ, ಡಿಸಿಎಂ, ಡಿ.ಕೆ. ಶಿವಕುಮಾರ್ ಮತ್ತು ಗೃಹ ಸಚಿವ ಡಾ.ಪರಮೇಶ್ವರ ಅವರ ಮೇಲೆ ಪ್ರಕರಣ ದಾಖಲಿಸಬೇಕು, ಇವರನ್ನು ಅರೆಸ್ಟ್ ಮಾಡಬೇಕು, ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕುಇದಕ್ಕೆಲ್ಲ ಕಾರಣ ಇವರೇ ಎಂದರು.


ಸಾಧನಾ ಸಮಾವೇಶಕ್ಕೆ ಎಷ್ಟೆಲ್ಲ ಸಿದ್ಧತೆ, ಸಭೆ, ಪರಿಶೀಲನೆ ಮಾಡಿದ ಸಿಎಂ.ಡಿಸಿಎಂ ಕಪ್ ವಿಜಯೋತ್ಸವಕ್ಕೆ ಸಿದ್ಧತೆ ಇಲ್ಲದೆ ಮಾಡಿದ್ದೇಕೆ ಎಂದು ಪ್ರಶ್ನಿಸಿದರು.

ಅವಮಾನ: ಸಾವಿಂದಾನಿಕ ಹುದ್ದೆಯ ರಾಜ್ಯಪಾಲರನ್ನೇ 20 ನಿಮಿಷಗಳ ಕಾಲ ಕ್ರಿಕೆಟ್ ಆಟಗಾರರಿಗೋಸ್ಕರ್ ಕಾಯುವಂತೆ ಮಾಡಿ ಅವರಿಗೆ ಅವಮಾನ ಮಾಡಿದೆಂದು ಆರೋಪಿಸಿದರು.

## ಮಲ್ಟಿಕಾರ್, ಬೈಕ್ ಪಾರ್ಕಿಂಗ್ ಕಟ್ಟಡ ನಿರ್ಮಾಣಕ್ಕೆ 20 ಕೋಟಿ ರೂ.ಗೆ ಅನುಮೋದನೆ ನೀಡಲು ಯತ್ನಾಳ ಪತ್ರ

• ಉದಯವಾಹಿನಿ, ವಿಜಯಪುರ

ನಗರದ ಮಹಾತ್ಮ ಗಾಂಧಿ ಚೌಕ್ ಹತ್ತಿರ ಮಲ್ಟಿ ಕಾರ್, ಬೈಕ್ ಪಾರ್ಕಿಂಗ್ ಕಟ್ಟಡ ನಿರ್ಮಾಣಕ್ಕೆ ಅಗತ್ಯವಾದ ರೂ. 20 ಕೋಟಿ ಮಂಜೂರಿಸಲು ವಿಜಯಪುರ ನಗರದಲ್ಲಿ ನಡೆಯಲಿರುವ ಸಂಪುಟ ಸಭೆಯಲ್ಲಿ ಅನುಮೋದನೆ ನೀಡುವಂತೆ ನಗರ ಶಾಸಕ ಬಸನಗೌಡ ಪಾಟೀಲ ಯತ್ನಾಳ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದಿದ್ದಾರೆ.



ವಿಜಯಪುರ ನಗರವು ದಿನದಿಂದ ದಿನಕ್ಕೆ ಬೃಹದಾಕಾರವಾಗಿ ಬೆಳೆಯುತ್ತಿದೆ. ಅದರಂತೆ ವಾಹನಗಳ ಸಂಖ್ಯೆಯು ಕೂಡ ಹೆಚ್ಚಾಗುತ್ತಿದೆ. ಪ್ರಮುಖ ಮಾರುಕಟ್ಟೆ ನಗರದ ಹೃದಯ ಭಾಗವಾದ ಮಹಾತ್ಮ ಗಾಂಧಿ ಚೌಕ್ ದಲ್ಲಿ ವಾಹನಗಳ ನಿಲುಗಡೆಗೆ ಪಾಕಿರ್ಂಗ್ ವ್ಯವಸ್ಥೆ ಇಲ್ಲದ್ದರಿಂದ, ಸಾರ್ವಜನಿಕರು ತಮ್ಮ ಕಾರ್, ಬೈಕ್‌ಗಳನ್ನು ನಿಲ್ಲಿಸಲು ಪರದಾಡುತ್ತಿದ್ದಾರೆ.

ಅಲ್ಲದೆ, ಅನಿವಾರ್ಯವಾಗಿ ತಮ್ಮ ವಾಹನಗಳನ್ನು ರಸ್ತೆಯ ಬದಿ ನಿಲ್ಲಿಸಿ ಹೋಗುವುದರಿಂದ ಸಂಚಾರಕ್ಕೂ ತೀವ್ರ ತೊಂದರೆ ಉಂಟಾಗುತ್ತಿದೆ. ಇದು ಸಂಚಾರ ದಟ್ಟಣೆ ಸೃಷ್ಟಿಸುತ್ತಿದ್ದು, ಹೀಗಾಗಿ ವಾಹನಗಳ ನಿಲುಗಡೆಗೆ ಸೂಕ್ತ ಪಾಕಿರ್ಂಗ್ ವ್ಯವಸ್ಥೆ ಅಗತ್ಯವಿದೆ.

ಇದಕ್ಕಾಗಿ ಈಗಾಗಲೇ ಗಾಂಧಿ ಚೌಕ್ ದಲ್ಲಿರುವ ಸರ್ಕಾರಿ ಕನ್ನಡ ಹೆಣ್ಣು ಮಕ್ಕಳ ಶಾಲೆ ನಂ.1, ರಸ್ತೆ ಬದಿಯಲ್ಲಿ ಇರುವುದರಿಂದ, ಶಬ್ದ ಮಾಲಿನ್ಯ ಉಂಟಾಗಿ ಮಕ್ಕಳ ಶಿಕ್ಷಣಕ್ಕೆ ತೀವ್ರ ತೊಂದರೆ ಆಗುತ್ತಿದೆಂದು ಸಮೀಪದ ಸರ್ಕಾರಿ ಪ್ರೌಢ ಶಾಲೆಗೆ ಸ್ಥಳಾಂತರಿಸಲು ಯೋಚಿಸಲಾಗಿದೆ.

ಸ್ಥಳಾಂತರಗೊಂಡ ಶಾಲೆಯ ಜಾಗವು ವಾಹನಗಳ ನಿಲುಗಡೆಗೆ ಮತ್ತು ಹೂ, ಹಣ್ಣು ಮಾರಾಟಕ್ಕೆ ಸೂಕ್ತವಾಗಿದ್ದು, ಆ ಜಾಗದಲ್ಲಿ ಕೆಳಗಡೆ ಹೂ ಮತ್ತು ಹಣ್ಣು ಮಾರಾಟಕ್ಕೆ, ಅದರ ಮೇಲೆ ವಾಹನಗಳ ನಿಲುಗಡೆಗೆ ಅನುಕೂಲಕ್ಕಾಗಿ ಮಲ್ಟಿ ಕಾರ್ ಪಾಕಿರ್ಂಗ್ ಕಟ್ಟಡ ನಿರ್ಮಾಣ ಮಾಡಲು ಮಹಾನಗರ ಪಾಲಿಕೆಯಿಂದ ವಿಸ್ತೃತ ವರದಿ ಸಿದ್ದಪಡಿಸಲಾಗಿದೆ ಎಂದು ತಿಳಿಸಿದ್ದಾರೆ.

**ಶಾಸಕರ ಸಾರ್ವಜನಿಕ ಸಂಪರ್ಕ ಕಾರ್ಯಾಲಯದ ಪ್ರಕಟಣೆ**

ಕಾರಣ ಸಾರ್ವಜನಿಕರ ವಾಹನಗಳ ನಿಲುಗಡೆಗೆ ಆಗುತ್ತಿರುವ ಸಮಸ್ಯೆ ನಿವಾರಣೆಗಾಗಿ ವಾಹನಗಳ ನಿಲುಗಡೆಗೆ ಹಾಗೂ ಹೂ, ಹಣ್ಣು ವ್ಯಾಪಾರಸ್ಥರಿಗೆ ಅಲ್ಲಿಯೇ ಸೂಕ್ತ ವ್ಯವಸ್ಥೆ ಕಲ್ಪಿಸಲು ಮಲ್ಟಿ ಕಾರ್, ಬೈಕ್ ಪಾಕಿರ್ಂಗ್ ಕಟ್ಟಡ ನಿರ್ಮಾಣಕ್ಕೆ ಅಗತ್ಯವಾದ ಅನುದಾನ ಮಂಜೂರಾತಿಗೆ ಸಚಿವ ಸಂಪುಟದಲ್ಲಿ ಅನುಮೋದನೆ ನೀಡಲು ಕೋರಿದ್ದಾರೆ. ಈ ವಿಷಯಕ್ಕೆ ಸಂಬಂಧಿಸಿದಂತೆ, ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ, ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ ಅವರಿಗೂ ಪತ್ರ ಬರೆಯಲಾಗಿದೆ.

## 20 ತೊಲ ಚಿನ್ನಾಭರಣ ಕಳವು, ಯುವಕನ ಮೇಲೆ ಚಾಕುವಿನಿಂದ ಹಲ್ಲೆ

• ಉದಯವಾಹಿನಿ ಕೌಜಲಗಿ

ಪಟ್ಟಣದ ಕಟ್ಟಿ ಬಸವೇಶ್ವರ ದೇವಸ್ಥಾನದ ಹತ್ತಿರವಿರುವ ಮನೆಯೊಂದರಲ್ಲಿ ರಾತ್ರಿ 24 ತೊಲಿಯ ಚಿನ್ನಾಭರಣ ಕಳವು ಮಾಡಲಾಗಿದೆ. ಕಳ್ಳರನ್ನು ಹಿಡಿಯಲು ಯತ್ನಿಸಿದ ಮನೆಯ ಯುವಕನ ಮೇಲೆ ಚಾಕುವಿನಿಂದ ಹಲ್ಲೆ ಮಾಡಲಾಗಿದೆ.

ಪಾರ್ವತಿ ತಮ್ಮನಪ್ಪ ಹಳ್ಳೂರ ಎಂಬುವರ ಮನೆಯ ಮೊದಲ ಮಹಡಿಯ ಬಾಗಿಲ ಮೂಲಕ ಮಧ್ಯರಾತ್ರಿ 1.30ರ ಸುಮಾರಿಗೆ ಮೂವರು ಕಳ್ಳರು ನುಗ್ಗಿದರು. ಬೀರುದಲ್ಲಿದ್ದ ಚಿನ್ನಾಭರಣಗಳನ್ನು ಕದ್ದರು. ಇನ್ನೇನು ಪರಾರಿ ಆಗಬೇಕು ಎನ್ನುವಷ್ಟರಲ್ಲಿ ಅಲ್ಲಿಯೇ ಮಲಗಿದ್ದ ಲೋಕೇಶ ಬಸಪ್ಪ ದಳವಾಯಿ ಅವರಿಗೆ ಎಚ್ಚರವಾಯಿಯು. ಯುವಕ ಕಳ್ಳರನ್ನು ಹಿಡಿಯಲು ಪ್ರಯತ್ನಿಸಿದಾಗ, ಯುವಕನ ಬಲಗೈಗೆ ಚಾಕುವಿನಿಂದ ಇರಿದು ತಪ್ಪಿಸಿಕೊಂಡರೆಂದು ಯುವಕ ಹೇಳಿದ್ದಾರೆ.

ಸುತ್ತಮುತ್ತಲ ಪ್ರದೇಶವನ್ನು ಬೆಳಗಾವಿ ಶ್ವಾನ ದಳದಿಂದ ಪರಿಶೀಲಿಸಲಾಗಿದೆ. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಭೀಮಾಶಂಕರ ಸ್ಥಳಕ್ಕೆ ಭೇಟಿ ನೀಡಿದರು. ಗೋಕಾಕ ಡಿವೈಎಸ್ಪಿ ರಾಜು ನಾಯಿಕ ಮೂಡಲಗಿ ಸಿಪಿಐ ಶ್ರೀಶೈಲ ಬ್ಯಾಕೂಡ, ಕುಲಗೋಡ ಪಿಎಸ್‌ಐ ಆನಂದ ಕೂಡ ಇದ್ದರು.

## ಮಕ್ಕಳಿಗೆ ತೊಂದರೆ ಆದರೆ ಬಿಇಓ, ಡಿಡಿಪಿಐ ಜವಾಬ್ದಾರರು

• ಉದಯವಾಹಿನಿ ಧಾರವಾಡ

ಮಳೆಗಾಲದಲ್ಲಿ ಜಿಲ್ಲೆಯ ಯಾವುದೇ ಶಾಲೆಯಲ್ಲಿ ಮಕ್ಕಳ ಪಾಠಕ್ಕೆ ತೊಂದರೆ ಉಂಟಾದರೆ ಆಯಾ ತಾಲ್ಲೂಕಿನ ಬಿಇಓ, ಡಿಡಿಪಿಐ ಅವರನ್ನು ಜವಾಬ್ದಾರಿಗೊಳಿಸಿ, ಕ್ರಮಕೈಗೊಳ್ಳಲಾಗುವುದು. ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳು ಪ್ರತಿ ಶಾಲೆಗೆ ಭೇಟಿ ನೀಡಿ, ವಾಸ್ತವಿಕ ವರದಿ ಪಡೆದು, ಸೂಕ್ತ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಅವರು ಹೇಳಿದರು.

ಅವರು ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಶಾಲಾ ಕಟ್ಟಡಗಳ ಕಾಮಗಾರಿ ಹಾಗೂ ಕೊಠಡಿಗಳ ದುರಸ್ತಿ ಕುರಿತು ಶಿಕ್ಷಣ ಇಲಾಖೆ ಹಾಗೂ ವಿವಿಧ ಅನುಷ್ಠಾನ ಏಜನ್ಸಿಗಳ


ಉದಯವಾಹಿನಿ ಚಿತ್ರ

ಅಧಿಕಾರಿಗಳೊಂದಿಗೆ ಪ್ರಗತಿ ಪರಿಶೀಲನಾ ಸಭೆ ಜರುಗಿಸಿ, ಮಾತನಾಡಿದರು.

ಈಗಾಗಲೇ ಶಾಲೆಗಳು ಆರಂಭಾಗಿವೆ. ಹವಾಮಾನ ಇಲಾಖೆಯ ಸೂಚನೆ ಪ್ರಕಾರ ಮುಂದಿನ ದಿನಗಳಲ್ಲಿ ಮಳೆ ಪ್ರಮಾಣ ಹೆಚ್ಚಾಗುವ ಸಾಧ್ಯತೆ ಇದೆ. ಆದ್ದರಿಂದ ಮಕ್ಕಳಿಗೆ ತೊಂದರೆ ಆಗದಂತೆ ಶಿಕ್ಷಣ ಇಲಾಖೆ ಅಧಿಕಾರಿಗಳು ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಳ್ಳಬೇಕು.

ಇಂದೇ ಈ ಕುರಿತು ಕ್ರಿಯಾಯೋಜನೆ ರೂಪಿಸಿ, ಬರುವ ಜುಲೈ 15 ರೊಳಗೆ ಸೋರಿಕೆ ಆಗುವ ಮತ್ತು ಶಿಥಿಲಾವಸ್ಥೆಯ ಮಾಳಿಗೆ, ಗೋಡೆಗಳನ್ನು ದುರಸ್ತಿಗೊಳಿಸಿ, ವರದಿ ಸಲ್ಲುಸಬೇಕೆಂದು ಅವರು ನಿರ್ದೇಶನ ನೀಡಿದರು.

> ಈಗಾಗಲೇ ಹಲವಾರು ಬಾರಿ ಈ ಕುರಿತು ಸೂಚನೆ ನೀಡಿದ್ದರೂ, ಸರಿಯಾದ ಪಾಲನೆ ಆಗಿಲ್ಲ. ಶಾಲೆಯ ಸೋರಿಕೆ ಅಥವಾ ಶಿಥಿಲ ಕಟ್ಟಡದಿಂದ ಯಾವುದೇ ವಿದ್ಯಾರ್ಥಿಗಳಿಗೆ ತೊಂದರೆ ಉಂಟಾದರೆ, ಅದನ್ನು ಗಂಭೀರವಾಗಿ ಪರಿಗಣಿಸಿ, ಸೂಕ್ತ ಕ್ರಮ ಕೈಗೊಳ್ಳಲಾಗುತ್ತದೆ -ಸಿಇಓ

## ಪರಿಸರ ಸಂರಕ್ಷಣೆ ನಮ್ಮೆಲ್ಲರ ಹೊಣೆ: ಪ್ರಭುದೇವ ಮಹಾಸ್ವಾಮೀಜಿ

• ಉದಯವಾಹಿನಿ ಬೀದರ

ಬಸವಗಿರಿಯಲ್ಲಿ ರೋಟರಿ ಕ್ಲಬ್ ಬೀದರ ನ್ಯೂ ಸೆಂಚುರಿಯಿಂದ ವಿಶ್ವ ಪರಿಸರ ದಿನಾಚರಣೆಯನ್ನು ನೂರಾರು ಸಸಿಗಳನ್ನು ನೆಡುವ ಮೂಲಕ ಆಚರಿಸಲಾಯಿತು. ಸಿಂಗಪೂರ ಚೆರ್ರಿ ಸಸಿ ನೆಟ್ಟು ಮಾತನಾಡಿದ ಲಿಂಗಾಯತ ಮಹಾಮಠದ ಪ್ರಭುದೇವ ಮಹಾಸ್ವಾಮೀಜಿಯವರು ಪರಿಸರ ಸಂರಕ್ಷಣೆ ನಮ್ಮೆಲ್ಲವರ ಹೊಣೆಯಾಗಿದೆ. ಮಾನವನ ಸ್ವಾರ್ಥದಿಂದ ಪರಿಸರ ಅಳಿವನಂಚಿಗೆ ಹೋಗುತ್ತಿದೆ. ಇದೇ ರೀತಿ ಮುಂದುವರೆದರೆ ಮುಂದಿನ ಪೀಳಿಗೆ ನಮಗೆ ಕ್ಷಮಿಸಲಾರದು. ಕಾರಣ ಈಗಲಾದರೂ ಎಚ್ಚೆತ್ತುಕೊಂಡು ಪ್ರತಿಯೊಬ್ಬರು ಒಂದು ವರ್ಷಕ್ಕೆ ಒಂದಾದರು ಸಸಿ ಹಚ್ಚಿ, ನೀರೆರೆದು ಬೆಳೆಸಿ, ತನ್ನ ಕೈಲಾದ ಕೊಡುಗೆ ನೀಡಬೇಕೆಂದು ಕರೆಯಿತ್ತರು.

ರೋಟರಿ ಕ್ಲಬ್ ಬೀದರ ನ್ಯೂ ಸೆಂಚುರಿಯ ಅಧ್ಯಕ್ಷರಾದ ರೊ. ಶಿವಕುಮಾರ ಪಾಖಾಲರವರು ಸಮಾಜದಲ್ಲಿ ಪರಿಸರ ಜಾಗೃತಿ ಮೂಡಿಸಲು ಪ್ರತಿವರ್ಷವೂ ವಿಶ್ವಪರಿಸರ ದಿನಾಚರಣೆ ಆಚರಿಸಿ, ಕ್ಲಬ್‌ನಿಂದ ನೂರಾರು ಸಸಿಗಳನ್ನು ನೆಟ್ಟು ಪೋಷಿಸಲಾಗುತ್ತಿದೆ. ಕಳೆದ



ಉದಯವಾಹಿನಿ ಚಿತ್ರ

ವರ್ಷ ಕುಂಬಾರವಾಡ ಕಮಾನನಿಂದ ಭವಾನಿಮಾತಾ ದೇವಸ್ಥಾನದ ಮುಖ್ಯರಸ್ತೆ ಮಧ್ಯದಲ್ಲಿ 250 ಸಸಿಗಳನ್ನು ನೆಟ್ಟು ಅವುಗಳಿಗೆ ನಿರಂತರ ನೀರಿನ ವ್ಯವಸ್ಥೆಯೊಂದಿಗೆ ಬೆಳೆಸಲಾಗುತ್ತಿದೆ. ಅದೇ ರೀತಿ ನಗರದ ಬೇರೆ ಬೇರೆ ಭಾಗಗಳಲ್ಲಿ ನೂರಾರು ಸಸಿಗಳನ್ನು ಹಚ್ಚಲಾಗಿದೆ.

ಇದೀಗ ಮಹಾಗನಿ, ಅರಳೆ, ಹಲಸು, ನೇರಳೆ, ಪೇರಲ, ನಿಂಬೆ ಸೇರಿದಂತೆ 100 ಸಸಿಗಳನ್ನು ಬಸಗಿರಿಯಲ್ಲಿ ನೆಡಲಾಗುತ್ತಿದೆ. ಲಿಂಗಾಯತ ಮಹಾಮಠವು ಅವುಗಳ ನಿರ್ವಹಣೆ ಮತ್ತು ಪೋಷಣೆ ಮಾಡಲಿದೆ ಎಂದು ಮಾಹಿತಿ ನೀಡಿದರು. ಕಲ್ಯಾಣ ವಲಯದ ಸಹಾಯಕ ಗವರ್ನರ್ ಸೂರ್ಯಕಾಂತ ರಾಮಶೆಟ್ಟಿ ಅಧ್ಯಕ್ಷತೆ ವಹಿಸಿದ್ದರು.

## ಬಕ್ರೀದ್ ಹಬ್ಬ: ಸಾಮೂಹಿಕ ಪ್ರಾರ್ಥನೆ

• ಉದಯವಾಹಿನಿ ಲಕ್ಷ್ಮೇಶ್ವರ

ತ್ಯಾಗ ಬಲಿದಾನಗಳ ಪ್ರತೀಕವಾದ ಬಕ್ರೀದ್ ಹಬ್ಬವನ್ನು ಶನಿವಾರ ಮುಸ್ಲಿಂ ಸಮುದಾಯ ಶ್ರದ್ಧಾ ಭಕ್ತಿಯಿಂದ ಆಚರಿಸಿದರು. ಪಟ್ಟಣದ ವಿವಿಧ ಮೊಹಲ್ಲಾಗಳ ಸಾವಿರಾರು ಮುಸ್ಲಿಂ ನಿವಾಸಿಗಳು ಈದ್ಗಾ ಮೈದಾನದಲ್ಲಿ ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು. ಪರಸ್ಪರ ಹಬ್ಬದ ಶುಭಾಶಯ ವಿನಿಮಯ ಮಾಡಿಕೊಂಡರು. ಬಂಧು ಬಾಂಧವರು, ಮಿತ್ರರನ್ನು ಮನೆಗೆ ಕರೆದುಕೊಂಡು ಹಬ್ಬದ ಊಟ ಸವಿದರು. ಹಬ್ಬದ ಹಿನ್ನೆಲೆಯಲ್ಲಿ ಮುಸ್ಲಿಂ ಸಹೋದರರು ಬಡವರಿಗೆ ದಾನ ಧರ್ಮ ಮಾಡಿದರು.

## ಜಡಿ ಮಳೆಗೆ ಭೂಮಿಯಲ್ಲೇ ಕೊಳೆತ ಮುಸುಕಿನ ಜೋಳದ ಬೀಜ

• ಉದಯವಾಹಿನಿ ಆಲೂರು

ತಾಲ್ಲೂಕಿನಲ್ಲಿ ಸುರಿದ ಧಾರಾಕಾರ ಮಳೆಯಿಂದಾಗಿ ಬಿತ್ತನೆ ಮಾಡಿದ್ದ ಮುಸುಕಿನ ಜೋಳದ ಬೀಜಗಳು ಕೊಳೆತು ಹೋಗುತ್ತಿದ್ದು, ರೈತರು ನಷ್ಟ ಅನುಭವಿಸುವಂತಾಗಿದೆ.

ವಾರದ ಹಿಂದೆ ಹದ ಮಳೆಯಾದ ಕಾರಣ ಬಹುತೇಕ ರೈತರು ಮುಸುಕಿನ ಜೋಳ ಬಿತ್ತನೆ ಮಾಡಿದ್ದರು. ಬಿತ್ತನೆ ಮಾಡಿದ ಮರುದಿನದಿಂದ ನಾಲ್ಕು ದಿನ ಬಿಡುವಿಲ್ಲದೇ ಮಳೆ ಸುರಿದಿದ್ದು, ಬಿತ್ತನೆ ಮಾಡಿದ್ದ ಬೀಜಗಳು ಅಲ್ಪಸ್ವಲ್ಪ ಮೊಳಕೆ ಒಡೆದಿವೆ. ಶೇ 90ರಷ್ಟು ಬೀಜ ಕೊಳೆತು ಹೋಗಿದೆ. ಬಿತ್ತನೆ ಸಮಯದಲ್ಲಿಯೇ ನಷ್ಟ ಉಂಟಾಗಿದ್ದು, ತಕ್ಷಣ ಸರ್ಕಾರ ನೆರವಿಗೆ ಧಾವಿಸಬೇಕು ಎಂದು ರೈತರು ಒತ್ತಾಯಿಸುತ್ತಿದ್ದಾರೆ.

ಕಳೆದ ವಾರ ಬಿತ್ತನೆ ಮಾಡಿದ್ದ ಜೋಳ ಜಡಿ ಮಳೆಗೆ ಸಿಲುಕಿ ಕೊಳೆತು ಸಂಪೂರ್ಣ ನಾಶವಾಗಿದೆ. ಈಗ ಎರಡು ದಿನಗಳಿಂದ ಬಿತ್ತಿರುವ ಜೋಳ ಹುಲುಸಾಗಿ ಹುಟ್ಟಬೇಕಾದರೆ ಕನಿಷ್ಠ ಒಂದು ವಾರ ಬಿಸಿಲು ವಾತಾವರಣ ಬೇಕು. ಪುನಃ ಮಳೆ ಎದುರಾದರೆ ಜೋಳ ಬಿತ್ತನೆ ಕಾರ್ಯ ಸಂಪೂರ್ಣ ನೆಲ ಕಚ್ಚುತ್ತದೆ. ಬದುಕಿಗೆ ಬರಸಿಡಿಲು ಬಡಿಯುತ್ತದೆ' ಎಂದು ರೈತರು ಹೇಳುತ್ತಿದ್ದಾರೆ.

ಸದ್ಯ ಮಳೆ ಕಡಿಮೆಯಾಗಿ ಎರಡು ದಿನಗಳ ಹಿಂದೆ ಬಿಸಿಲು ಬಿದ್ದಿದ್ದರಿಂದ ಭಾನುವಾರ ಕೆಲ ರೈತರು ಜೋಳ ಬಿತ್ತನೆ ಆರಂಭಿಸಿದ್ದರು. ಬಿಸಿಲು ವಾತಾವರಣ ಮುಂದುವರಿಯುತ್ತದೆ ಎಂಬ ಕಲ್ಪನೆಯಿಂದ ರೈತರ ಆಸೆ ಹುಸಿಯಾಗಿದ್ದು, ಮತ್ತೆ ತುಂತುರು ಮಳೆ ಪ್ರಾರಂಭವಾಯಿತು.

# ತಂಬಾಕು ಸೇವನೆಯಿಂದ ಪ್ರತಿ ವರ್ಷ 60 ಲಕ್ಷ ಸಾವು: ಡಾ. ಶ್ರೀನಿವಾಸ

### • ತಂಬಾಕು ಸೇವನೆ ಆರೋಗ್ಯಕ್ಕೆ ಹಾನಿಕಾರಕ, ತಂಬಾಕಿನಲ್ಲಿರುವ ನಿಕೋಟಿನ್ ಎಂಬ ಮಾದಕ ವಸ್ತು ವ್ಯಸನವಾಗಿಸುತ್ತದೆ

• ಉದಯವಾಹಿನಿ, ಚಿತ್ರದುರ್ಗ

ತಂಬಾಕು ಸೇವನೆಯಿಂದ ವಿಶ್ವದಾದ್ಯಂತ ಪ್ರತಿ ವರ್ಷ 60 ಲಕ್ಷಕ್ಕಿಂತ ಹೆಚ್ಚು ಮಂದಿ ಸಾವನ್ನಪ್ಪುತ್ತಿದ್ದಾರೆಂದು ಎಂದು ಡಾ. ಶ್ರೀನಿವಾಸ ಹೇಳಿದರು.

ಜಿ.ಆರ್.ಹಳ್ಳಿ ಸ್ನಾತಕೋತ್ತರ ಕೇಂದ್ರದ ಜ್ಞಾನ ಗಂಗೋತ್ರಿಯ ಆವರಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಏಡ್ಸ್ ಮತ್ತು ಕ್ಷಯರೋಗ ನಿಯಂತ್ರಣ ಕಛೇರಿ ಹಾಗೂ ಜಿಲ್ಲಾರಕ್ತ ನಿಧಿ ಮತ್ತು ರಾಷ್ಟ್ರೀಯ ಸೇವಾ ಯೋಜನೆ ಘಟಕ 1 ಮತ್ತು 2 ಇವರ ಸಹಯೋಗದೊಂದಲ್ಲಿ ಆಯೋಜಿಸಲಾದ ಮಲೇರಿಯಾ ಮಾಸಚರಣೆ, ಕೋವಿಡ್-19 ಬಗ್ಗೆ ಅರಿವು, ರಕ್ತದಾನ ಶಿಬಿರ ಮತ್ತು ತಂಬಾಕು ನಿಯಂತ್ರಣ ಕುರಿತು, ಹಾಗೂ ಜಾಗೃತಿ ಮತು ಉಪನ್ಯಾಸ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

**ತಂಬಾಕು ನಿಯಂತ್ರಣ ಕುರಿತು, ಜಾಗೃತಿ**


ಉದಯವಾಹಿನಿ ಚಿತ್ರ

ತಂಬಾಕು ಸೇವನೆ ಆರೋಗ್ಯಕ್ಕೆ ಹಾನಿ ಕಾರಕ, ತಂಬಾಕಿನಲ್ಲಿರುವ ನಿಕೋಟಿನ್ ಎಂಬ ಮಾದಕ ವಸ್ತು ವ್ಯಸನವಾಗಿಸುತ್ತದೆ. ಎಂಬ ಕಟು ಸತ್ಯ ಅರ್ಥ ಮಾಡಿಕೊಳ್ಳಬೇಕು. ಹದಿ ಹರೆಯದವರು ತಂಬಾಕು ಉತ್ಪನ್ನಗಳನ್ನು ಸೇವನೆ ಮಾಡಲು ನೇರ ಹಾಗೂ ಪರೋಕ್ಷವಾಗಿ ಜಾಹಿರಾತುಗಳು ಉತ್ತೇಜನ ನೀಡುತ್ತವೆ. ಸಾಮಾನ್ಯವಾಗಿ 18 ವಯಸ್ಸಿನಿಂದ ಯುವಕರು ತಂಬಾಕು ಉತ್ಪನ್ನ ಸೇವನೆಯನ್ನು ಆರಂಭಿಸುವುದಾಗಿ ಅಂದಾಜಿಸಲಾಗಿದೆ. ಧೂಮಪಾನ ಮಾಡುವುದರಿಂದ ಆರೋಗ್ಯದ ಮೇಲೆ ದುಷ್ಪರಿಣಾಮಕ ಬೀರುವುದರೊಂದಿಗೆ ಕ್ಯಾನ್ಸರ್ , ಹೃದಯ ಶ್ವಾಸ ಸಂಬಂಧಿ ಇತ್ಯಾದಿ ಕಾಯಿಲೆಗಳು ಬರುತ್ತವೆ ಎಂದರು.

ಕನ್ನಡ ಅಧ್ಯಯನ ವಿಭಾಗದ ಡಾ.ವಿಜಯಕುಮಾರ್. ಹೆಚ್.ಜಿ ಅಧ್ಯಕ್ಷೀಯ ಭಾಷಣದಲ್ಲಿ ಸ್ನಾತಕೋತ್ತರ ಕೇಂದ್ರದ ಎಲ್ಲಾ ವಿದ್ಯಾರ್ಥಿಗಳಿಗೆ, ಆರೋಗ್ಯವನ್ನು ಕಾಪಾಡಿಕೊಳ್ಳುವಲ್ಲಿ ಗಮನ ಹರಿಸಬೇಕು. ಕುಟುಂಬದ ಸದಸ್ಯರ ಆರೋಗ್ಯ ಕಾಪಾಡುವಲ್ಲಿ ಮಹಿಳೆಯರಿಗೆ ಹೆಚ್ಚಿನ ಜವಾಬ್ದಾರಿಯು ಇರುತ್ತದೆ ತಿಳಿಸಿದರು.

ಕಾರ್ಯಕ್ರಮ ದಲ್ಲಿ ರಕ್ತದಾನ ಶಿಬಿರ ಆಯೋಜಿಸ ಲಾಗಿತ್ತು. ಸ್ನಾತಕೋತ್ತರ ಕೇಂದ್ರದ ಎಲ್ಲಾ ಅಧ್ಯಯನ ವಿಭಾಗದ ಎನ್‌ಎಸ್‌ಎಸ್ ವಿದ್ಯಾರ್ಥಿ, ವಿದ್ಯಾರ್ಥಿನಿಯರು ರಕ್ತದಾ ನವನ್ನು ಮಾಡಿದರು. ರಸಾಯನಶಾಸ್ತ್ರ ಅಧ್ಯಯನ ವಿಭಾಗದ ಡಾ.ರಾಜೇಂದ್ರ ಪ್ರಸಾದ್, ಜಿ ಆರ್ ಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರ, ಡಾಗೀತಾಂಜಲಿ, ಎನ್ ಎಸ್‌ಎಸ್ ಕಾರ್ಯಕ್ರಮಾಧಿಕಾರಿಗಳಾದ ನಿವೇದಿತ. ಬಿ.ಟಿ, ಡಾ.ಸುಂದರಂ.ಎಂ ಸೇರಿದಂತೆ ಮತ್ತಿರರು ಉಪಸ್ಥಿತರಿದ್ದರು.

> ಡಾ. ನಂದಿನಿಯವರು ಮಾತಾನಾಡಿ ಮಲೇರಿಯ ನಿಯಂತ್ರಣದಲ್ಲಿ ಸಮುದಾಯದ ಸಹಭಾಗಿತ್ವ ಅತೀ ಮುಖ್ಯವಾಗಿರುತ್ತದೆಯೆಂದು ತಿಳಿಸಿದರು. ಯಾವುದೇ ಜ್ವರ ಮಲೇರಿಯ ಆಗಿರಬಹುದು ಶೀಘ್ರ ಪತ್ತೆ ಮಾಡುವುದರಿಂದ ಸಂಪೂರ್ಣ ಚಿಕಿತ್ಸೆಯಿಂದ ತಡೆಯಬಹುದು. ಸೊಳ್ಳೆಗಳ ನಿಯಂತ್ರಣ ಕ್ರಮಗಳ, ಜೈವಿಕ ಪರಿಸರ ನಿಯಂತ್ರಣ ಕ್ರಮಕೈಗೊಳ್ಳುವುದು ಸ್ವಯಂರಕ್ಷಣಾ ವಿಧಾನಗಳನ್ನು ಬಳಸುವುದು ಪರಿಸರ ನೈರ್ಮಲ್ಯ ಕಾಪಾಡುವುದು ಗ್ರಾಮ ಪಂಚಾಯಿತಿ ಸದಸ್ಯರು, ಸ್ಥಳಿಯ ಮುಖಂಡರು ಆರೋಗ್ಯ ಕಾರ್ಯಕರ್ತರೊಡನೆ ಸಹಕರಿಸಿ, ಮಲೇರಿಯಾ ನಿಯಂತ್ರಣ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಭಾಗವಹಿಸಿ ಮಲೇರಿಯಾ ನಿಯಂತ್ರಣ ಖಂಡಿತ ಸಾಧ್ಯ -ಡಾ. ನಂದಿನಿ

> ಯಾವುದೇ ಜ್ವರ ಮತ್ತಿತರೆ ಖಾಯಿಲೆಗಳನ್ನು ಶೀಘ್ರದಲ್ಲಿ ಪತ್ತೆ ಮಾಡಿ ನಿಯಂತ್ರಣ ಮಾಡಿ ಆರೋಗ್ಯವನ್ನು ಕಾಪಾಡಿಕೊಳ್ಳುವಂತೆ ಹಾಗೂ ಉತ್ತಮ ಆಹಾರ ಸೇವನೆ, ವ್ಯಾಯಾಮಗಳಿಂದ ಆರೋಗ್ಯವನ್ನು ಕಾಪಾಡಿಕೊಳ್ಳಬಹುದೆಂದು ತಿಳಿಸಿದರು. ಕೋವಿಡ್ -19 ನಿಯಂತ್ರಣಕ್ಕಾಗಿ ಮಾಸ್ಕ್, ಕೈಗಳನ್ನು ಶುಚಿಯಾಗಿ ಟ್ಟುಕೊಳ್ಳವುದು ಸ್ಯಾನಿಟೈಜರ್ ಬಳಸುವುದು ಇದರಿಂದಾಗಿ ನಿಯಂತ್ರಣ ಮಾಡಬಹುದು -ಡಾ. ರವೀಂದ್ರ,ಎಸ್ ಪಿ

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಸಾಯಂಕಾಲ | 04:30 ರಿಂದ 06:00 |
| ಗುಳಿಕ ಕಾಲ | ಮಧ್ಯಾಹ್ನ | 03:00 ರಿಂದ 04:30 |
| ಯಮಗಂಡ ಕಾಲ | ಮಧ್ಯಾಹ್ನ | 12:00 ರಿಂದ 01:30 |

**ಮೇಷ** ನಿಮ್ಮ ಸುತ್ತಲಿರುವ ಜನರು ಏನಾದರೂ ಮಾಡಿ ನಿಮ್ಮ ಜೀವನ ಸಂಗಾತಿ ಮತ್ತೆ ನಿಮ್ಮ ಜೊತೆ ಪ್ರೇಮದಲ್ಲಿ ಬೀಳುವಂತೆ ಮಾಡಬಹುದು. ನಿಮ್ಮ ಸಂಬಂಧವು ಹದಗೆಡುವಷ್ಟು ಹಣಕ್ಕೆ ಹೆಚ್ಚಿನ ಪ್ರಾಮುಖ್ಯತೆ ನೀಡಬೇಡಿ.

**ವೃಷಭ** ಇಂದು ನೀವು ಯಾತ್ರೆಯಲ್ಲಿ ಹೋಗುತ್ತಿದ್ದರೆ ನಿಮ್ಮ ಅಮೂಲ್ಯ ವಸ್ತುಗಳ ಬಗ್ಗೆ ಗಮನ ಹರಿಸಿ ಅವುಗಳನ್ನು ಕಡಿಯುವ ಸಧ್ಯತೆ ಇದೆ. ವಿಶೇಷವಾಗಿ ನಿಮ್ಮ ಹಣದಚೀಲವನ್ನು ಎಚ್ಚರಿಕೆಯಿಂದಿಡಿ.

**ಮಿಥುನ** ನಿಮ್ಮ ಶಕ್ತಿಯ ಮಟ್ಟ ಹೆಚ್ಚಿರುತ್ತದೆ. ನೀವು ಸುಲಭವಾಗಿ ಬಂಡವಾಳ ಪಡೆಯಬಹುದು. ಬಾಕಿಯಿರುವ ಸಾಲಗಳನ್ನು ಸಂಗ್ರಹಿಸಬಹುದು ಅಥವಾ ಹೊಸ ಯೋಜನೆಗಳಿಗೆ ಕೆಲಸ ಮಾಡಲು ಹಣ ಕೇಳಬಹುದು.

**ಕರ್ಕಾಟಕ** ಸ್ನೇಹಿತರ ಅಥವಾ ಒಬ್ಬ ಪರಿಚಯಸ್ಥರ ಸ್ವಾರ್ಥದ ವರ್ತನೆ ನಿಮ್ಮ ಮಾನಸಿಕ ಶಾಂತಿಗೆ ತೊಂದರೆ ತರಬಹುದು. ಇಂವು ನಿಮಗೆ ನಿಮ್ಮ ಸಹೋದರ, ಸಹೋದರಿಯ ಸಹಾಯದಿಂದ ಹಣದ ಲಾಭವಾಗುವ ಸಾಧ್ಯತೆ ಇದೆ.

**ಸಿಂಹ** ಇಂದು ನೀವು ಭರವಸೆಯ ಮಾಯಾಜಾಲದಲ್ಲಿದ್ದೀರಿ. ದೀರ್ಘ ಕಾಲ ಬಾಕಿಯಿದ್ದ ಬಾಕಿಗಳು ಕೊನೆಗೂ ದೊರಕುತ್ತವೆ. ನಿಮ್ಮ ಜೊತೆಗಿರುವ ನಿಮ್ಮೊಂದಿಗೆ ಬಹಳ ಸಂತೋಷದಿಂದಿರುವುದಿಲ್ಲ.

**ಕನ್ಯಾ** ನೀವು ಬಯಸುವ ಲ್ಲಾ ಗಮನವನ್ನೂ ನೀವು ಪಡೆಯುವ ಒಳ್ಳೆಯ ದಿನ. ನಿಮ್ಮ ಮನಸ್ಸಿನಲ್ಲಿ ಅನೇಕ ವಿಷಯಗಳಿರುತ್ತವೆ ಹಾಗೂ ನೀವು ಯಾವುದನ್ನು ಅನುಸರಿಸಬೇಕೆನ್ನುವ ಸಮಸ್ಯೆ ಹೊಂದಿರುತ್ತೀರಿ.

**ತುಲಾ** ನೀವು ಬಹುಕಾಲದಿಂದ ಎದುರು ನೋಡುತ್ತಿದ್ದ ಜೀವನದ ಒತ್ತಡಗಳಿಂದ ಇಂದು ಶಮನ ಪಡೆಯುತ್ತೀರಿ. ಅವುಗಳನ್ನು ಶಾಶ್ವತವಾಗಿ ದೂರವಿಸಿರಿಸಲು ನಿಮ್ಮ ಜೀವನಶೈಲಿಯನ್ನು ಬದಲಿಸಲು ಇದು ಸರಿಯಾದ ಸಮಯ.

**ವೃಶ್ಚಿಕ** ಪ್ರೀತಿಯಲ್ಲಿನ ಏಳುಬೀಳುಗಳನ್ನು ಎದುರಿಸುವ ಧೈರ್ಯ ಹೊಂದಿರಿ. ಇಂದಿನ ದಿನ ನಿಮ್ಮ ಕೆಲವು ಸ್ನೇಹಿತರು ನಿಮ್ಮ ಮನೆಗೆ ಬರಬಹುದು ಮತ್ತು ನೀವು ಅವರೊಂದಿಗೆ ಸಮಯವನ್ನು ಕಳೆಯಬಹುದು.

**ಧನಸ್ಸು** ಸಂಜೆಯಲ್ಲಿ ವಿಶ್ರಾಂತಿ ತೆಗೆದುಕೊಳ್ಳಿ. ಯಾವುದೇ ವ್ಯಕ್ತಿಯ ಸಹಾಯವಿಲ್ಲದೆ ನೀವು ಹಣವನ್ನು ಗಳಿಸಲು ಸಾಧ್ಯವಾಗುತ್ತದೆ. ನೀವು ನಿಮ್ಮ ಮೇಲೆ ನಂಬಿಕೆಯನ್ನಿಡುವ ಅಗತ್ಯವಿದೆ.

**ಮಕರ** ಇಂದು ನೀವು ಚೈತನ್ಯಯುಕ್ತವಾಗಿರುತ್ತೀರಿ. ನೀವೇನೇ ಮಾಡಿದರೂ ಸಾಮಾನ್ಯವಾಗಿ ನೀವು ತೆಗೆದುಕೊಳ್ಳುವ ಅರ್ಧ ಸಮಯದಲ್ಲಿ ಅದನ್ನು ಮಾಡಲು ನಿಮಗೆ ಸಾಧ್ಯವಾಗುತ್ತದೆ.

**ಕುಂಭ** ಆರೋಗ್ಯವು ಇತರರೊಂದಿಗೆ ಸಂತೋಷವನ್ನು ಹಂಚಿಕೊಳ್ಳುವ ಮೂಲಕ ಅರಳುತ್ತದೆ. ದುರ್ಬಲ ಆರ್ಥಿಕ ಸ್ಥಿತಿಯಿಂದ ಕೆಲವು ಪ್ರಮುಖ ಕೆಲಸ ಗಳು ಸ್ಥಗಿತಗೊಳ್ಳುತ್ತವೆ. ಹೊಸ ವಿಷಯಗಳ ಬಗ್ಗೆ ಗಮನ ಹರಿಸಿ.

**ಮೀನ** ಸಮಯ ಮತ್ತು ಹಣದ ಕಾತರ ನೀವು ಮಾಡಬೇಕು ಇಲ್ಲದಿದ್ದರೆ ಮುಂಬರುವ ಸಮಯ ತೊಂದರೆಗಳಿಂದ ತುಂಬಿರಬಹುದು ನೆರೆ ಮನೆಯವರ ಜೊತಗಿನ ಜಗಳ ನಿಮ್ಮ ಮನಸ್ಸು ಕೆಡಿಸುತ್ತದೆ.

## ಕೂಲೂರು ಮಲ್ಲಪ್ಪಸ್ಮಾರಕಕ್ಕೆ ಜಮೀನು ಮಂಜೂರು: ಸಚಿವ ದರ್ಶನಾಪುರಗೆ ಸನ್ಮಾನ

• ಉದಯವಾಹಿನಿ ಶಹಾಪುರ

ಸ್ವಾತಂತ್ರ್ಯ ಹೋರಾಟಗಾರರು ಹಾಗೂ ಕಲ್ಯಾಣ ಕರ್ನಾಟಕ ಗಾಂಧಿ ದಿ. ಕೂಲೂರು ಮಲ್ಲಪ್ಪ ಸ್ಮಾರಕ ನಿರ್ಮಾಣಕ್ಕಾಗಿ ಯಾದಗಿರಿ ನಗರದಲ್ಲಿ 1 ಎಕರೆ 27 ಗುಂಟೆ ಅಂದಾಜು 4 ಕೋಟಿ 66 ಲಕ್ಷ ಮೊತ್ತದ ಜಮೀನು ಉಚಿತವಾಗಿ ಮಂಜೂರು ಮಾಡಿಸುವಲ್ಲಿ ಶ್ರಮಿಸಿದ ಸಣ್ಣ ಕೈಗಾರಿಕೆ ಸಚಿವರು ಹಾಗೂ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವರಾದ ಶರಣಬಸಪ್ಪ ಗೌಡ ದರ್ಶನಾಪೂರ ರವರಿಗೆ ಕೂಲೂರು ಮಲ್ಲಪ್ಪ ಸ್ಮಾರಕ ಟ್ರಸ್ಟ್ ಹಾಗೂ ಅವರ ಅಭಿಮಾನಿಗಳ ಬಳಗದ ವತಿಯಿಂದ ಶಹಾಪುರ ನಗರದ ಪ್ರವಾಸಿ ಮಂದಿರದಲ್ಲಿ ಸಚಿವ ಶರಣಬಸಪ್ಪಗೌಡ ದರ್ಶನಾಪುರ ರವರನ್ನು ಸನ್ಮಾನಿಸಲಾಯಿತು. ಸನ್ಮಾನ ಸ್ವೀಕರಿಸಿ


ಉದಯವಾಹಿನಿ ಚಿತ್ರ

ಜಿಲ್ಲಾ ಉಸ್ತುವಾರಿ ಸಚಿವರಾದ ಶರಣಬಸಪ್ಪಗೌಡ ದರ್ಶನಾಪುರ ಮಾತನಾಡಿದರು. ಕೂಲೂರು ಮಲ್ಲಪ್ಪನವರು ನಮ್ಮ ಭಾಗದ ಹಿರಿಯ ಸ್ವಾತಂತ್ರ್ಯ ಹೋರಾಟಗಾರರು ಅವರು ಕಲ್ಯಾಣ ಕರ್ನಾಟಕದ ಗಾಂಧಿಯಂದೆ ಹೆಸರನ್ನು ಹೊಂದಿದ್ದರು. ಅವರ ಸ್ಮಾರಕ ನಿರ್ಮಾಣಕ್ಕೆ ಸಿಎಂ ಸಿದ್ದರಾಮಯ್ಯ ನವರನ್ನು ಸಂಬಂಧಿಸಿದ ಸಚಿವರನ್ನು ಭೇಟಿಯಾಗಿ ಮನವಿ ಪತ್ರ ಸಲ್ಲಿಸಿದ್ದೆ ಅವರು ನಮ್ಮ ಭಾಗದ ಸ್ವಾತಂತ್ರ್ಯ ಹೋರಾಟಗಾರರಾಗಿದ್ದು ಉಚಿತವಾಗಿಯೇ ಜಮೀನು ಮಂಜೂರು ಮಾಡುವಂತೆ ಕೋರಿದ್ದೆ ಆ ಕಾರಣ ಉಚಿತವಾಗಿಯೇ ನಮ್ಮ ಸರಕಾರವು ಜಮೀನು ಮಂಜೂರು ಮಾಡಿದೆ ಇದು ನನಗೆ ತುಂಬಾ ಸಂತಸವನ್ನು ಉಂಟು ಮಾಡಿದೆ ಮುಂದಿನ ದಿನಗಳಲ್ಲಿಯೂ ಕೂಡಾ ಅವರ ಸ್ಮಾರಕ ನಿರ್ಮಾಣ ಕಾರ್ಯಕ್ಕೆ ನನ್ನ ಸಂಪೂರ್ಣ ಸಹಕಾರ ಬೆಂಬಲ ಇರುತ್ತದೆ ಎಂದು ಅವರು ತಿಳಿಸಿದರು.

**ಸ್ಮಾರಕ ನಿರ್ಮಾಣ ಕಾರ್ಯಕ್ಕೆ ಸಹಕಾರ**

ಈ ಸಂದರ್ಭದಲ್ಲಿ ಹಿರಿಯ ಮುಖಂಡರಾದ ಸಿದ್ದಣ್ಣಗೌಡ ಕಾಡಂನೂರ, ಶಿಮಂತಪ್ಪ ಸಾಹುಕಾರ, ವಿಶ್ವನಾಥ್ ನೀಲಹಳ್ಳಿ, ಕುರುಬ ಸಮಾಜದ ಜಿಲ್ಲಾಧ್ಯಕ್ಷ ಮಲ್ಲಣ್ಣ ಐಕೂರ, ವಿನೋದ್ ಗೌಡ ಮಾಲಿಪಾಟೀಲ್, ಡಾ. ಭೀಮಣ್ಣ ಮೇಟಿ, ಸಾಯಿಬಣ್ಣ ಕೆಂಗೂರಿ, ಸುರೇಶ್ ಮಡ್ಡಿ, ಪ್ರಭು ವಾರದ, ಈಶ್ವರಪ್ಪ ಹೊರುಂಚಿ, ಚಂದ್ರಶೇಖರ್ ಅಲಿಪೂರ, ಆದೇಪ್ಪ ಮಾಸ್ಟರ, ಚನ್ನಕೇಶವ ಗೌಡ ಬಾಣತಿಹಾಳ. ಹಾಗೂ ಇನ್ನಿತರರು ಉಪಸ್ಥಿತರಿದ್ದರು.

### ತಾಪಮಾನ ಏರಿಕೆಯ ಸಂದರ್ಭದಲ್ಲಿ ಎಲ್ಲರೂ ಪರಿಸರವನ್ನು ರಕ್ಷಿಸುವ ಪ್ರಾಮಾಣಿಕ ಕಾಳಜಿ ಹೊಂದಬೇಕಾಗಿದೆ: ನ್ಯಾ.ಪ್ರಕಾಶ್

## ಪರಿಸರ ಪ್ರಜ್ಞೆ ಹಾಗೂ ಕಾನೂನು ಪ್ರಜ್ಞೆ ಜೀವ ಸಂಕುಲಕ್ಕೆ ವರದಾನ

• ಉದಯವಾಹಿನಿ ಬೀದರ

ತಾಪಮಾನ ಏರಿಕೆಯ ಸಂದರ್ಭದಲ್ಲಿ ಎಲ್ಲರೂ ಪರಿಸರವನ್ನು ರಕ್ಷಿಸುವ ಪ್ರಾಮಾಣಿಕ ಕಾಳಜಿ ಹೊಂದಬೇಕಾಗಿದೆ. ಅದರೊಂದಿಗೆ ಸುಂದರ ಸಮಾಜದ ನಿರ್ಮಾಣದಲ್ಲಿ ಈ ನೆಲದ ಕಾನೂನಿನ ಅರಿವು ಹಾಗೂ ಜಾಗೃತಿ ಎಲ್ಲರಿಗೂ ಅವಶ್ಯಕವಾಗಿದೆ ಎಂದು ಬೀದರನ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಪ್ರಕಾಶ್ ಬನಸೋಡೆ ತಿಳಿಸಿದರು.

ಅವರು ಬೀದರ ವಿಶ್ವವಿದ್ಯಾಲಯದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಬೀದರ, ಜಿಲ್ಲಾ ವಕೀಲರ ಸಂಘ, ಬೀದರ ಜಿಲ್ಲಾ ಅರಣ್ಯ ಇಲಾಖೆ, ಬೀದರ ಹಾಗೂ ಬೀದರ ವಿಶ್ವವಿದ್ಯಾಲಯ ರಾಷ್ಟ್ರೀಯ ಸೇವಾ ಯೋಜನೆ ಕೋಶ ಬೀದರ ಇವರುಗಳ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ವಿಶ್ವ ಪರಿಸರ ದಿನಾಚರಣೆ ಹಾಗೂ ಕಾನೂನು ಅರಿವು ಮತ್ತು ನೆರವು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಇಂದಿನ ದಿನಮಾನಗಳಲ್ಲಿ ಪರಿಸರ ಮಾಲಿನ್ಯ ಮಿತಿಮೀರಿದೆ. ಬೇಜವಾಬ್ದಾರಿಯ ವಿಲೇವಾರಿಯಿಂದಾಗಿ ಪರಿಸರ ಹಾಳಾಗುತ್ತಿದೆ.


ಉದಯವಾಹಿನಿ ಚಿತ್ರ

> **ಆಧುನಿಕದ ಯುಗದಲ್ಲಿ ನಮ್ಮ ಆಹಾರ, ವಿಹಾರ, ಸಂಸ್ಕೃತಿಗಳು ಬದಲಾಗುತ್ತಿವೆ. ಮಸಾಲೆಯುಕ್ತ ಪದಾರ್ಥಗಳ ಸೇವನೆಯಿಂದ ಹಣದ ವ್ಯಯದೊಂದಿಗೆ, ಆರೋಗ್ಯವನ್ನೂ ಸಹ ಹಾಳು ಮಾಡಿಕೊಳ್ಳುತ್ತಿದ್ದೇವೆ. ಮಸಾಲೆಯುಕ್ತ ಪದಾರ್ಥಗಳು ಅಧರಕ್ಕೆ ಸಿಹಿ, ಉದರಕ್ಕೆ ಕಹಿಯ ಕಹಿಯಾಗಿರುತ್ತವೆ. ಆದ್ದರಿಂದ ಆರೋಗ್ಯದ ದೃಷ್ಟಿಯಿಂದ ಸರಳ, ಸಾತ್ವಿಕ ಆಹಾರ ಸೇವನೆಯ ಅವಶ್ಯಕತೆಯಿದೆ. ಆರೋಗ್ಯಕ್ಕೆ ಹಾನಿಯಾದರೆ ದೇಶಕ್ಕೂ ಸಹ ಹಾನಿಯಾದಂತೆಯೆ, ಬೀದರ ವಿಶ್ವವಿದ್ಯಾಲಯದಲ್ಲಿ ಮುಂದಿನ ದಿನಮಾನಗಳಲ್ಲಿ ಬೀದರ ವಿಶ್ವವಿದ್ಯಾಲಯದಲ್ಲಿ ಔಷಧೀಯ ವನ ನಿರ್ಮಾಣದ ಮಾಡುವ ಉದ್ದೇಶವಿದೆ. ವಿದ್ಯಾರ್ಥಿಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಗಳ ಸಿದ್ಧತೆ ಹಾಗೂ ತರಬೇತಿ ಕಾರ್ಯಾಗಾರಗಳನ್ನು ಹಮ್ಮಿಕೊಳ್ಳಲಾಗುವುದು**
> -ಪ್ರೊ.ಬಿ.ಎಸ್.ಬಿರಾದಾರ, ಬೀದರ ವಿಶ್ವವಿದ್ಯಾಲಯದ ಕುಲಪತಿಗಳಾದ

ಆದ್ದರಿಂದ ಎಲ್ಲರೂ ಪರಿಸರವನ್ನು ಉಳಿಸಬೇಕಾಗಿದೆ. ಸುಂದರ ಸಮಾಜದ ನಿರ್ಮಾಣದಲ್ಲಿ ಪ್ರತಿಯೊಬ್ಬರೂ ಈ ನೆಲದ ಕಾನೂನನ್ನು ಗೌರವಿಸಬೇಕಾದುದು ಎಲ್ಲರ ಆದ್ಯ ಕರ್ತವ್ಯವಾಗಿದೆ. ಪರವಾನಗಿಯಿಲ್ಲದ ವಾಹನ ಚಾಲನೆಯಿಂದ ಅನೇಕ ಅಪಘಾತಗಳು ಸಂಭವಿಸುತ್ತಿವೆ. ಅಪ್ರಾಪ್ತ ಬಾಲಕಿಯರ ಮೇಲೆ ಲೈಂಗಿಕ ದೌರ್ಜನ್ಯ ತಡೆಗಾಗಿ ಪೋಕ್ಸೊ ಕಾನೂನಿದೆ. ಹೀಗಾಗಿ ಪ್ರತಿಯೊಬ್ಬರು ವಾಹನ ಚಾಲನೆಯ ಪರವಾನಗಿ, ವಾಹನದ ಮತ್ತು ವ್ಯಕ್ತಿಯ ಜೀವವಿಮೆಯನ್ನು ಮಾಡಿಸಬೇಕಾದ ಅಗತ್ಯವಿದೆ.

> **ಪ್ಲಾಸ್ಟಿಕ್ ಬಳಕೆ ಮಿತಿ ಮೀರಿ ಪರಿಸರ, ಭೂಮಿ ವಿಷಮಯವಾಗುತ್ತಿದೆ. ಜಾಗತಿಕ ತಾಪಮಾನ, ಪರಿಸರ ಹಾಳಾಗುತ್ತಿದೆ. ಜನ್ಮದಿನದ ಸಂದರ್ಭದಲ್ಲಿ ಸಸಿ ನೆಡುವುದು, ಹೆಲ್ಮೆಟ್ ನೀಡುವಂತಹ ವಿನೂತನ ಕಾರ್ಯಕ್ರಮ ಹಮ್ಮಿಕೊಳ್ಳಬೇಕಾದ ಅನಿವಾರ್ಯತೆಯಿದೆ**
> -ಶಿವಶರಣಪ್ಪ ಪಾಟೀಲ

ಪರಿಸರದ ರಕ್ಷಣೆಯೊಂದಿಗೆ ಕಾನೂನಿನ ರಕ್ಷಣೆಯೂ ಸಹ ಗೌರವದಿಂದ ಕಂಡಾಗ ಸುಂದರ, ಸ್ವಸ್ಥ, ಸದೃಢ ದೇಶ ಕಟ್ಟಲು ಸಾಧ್ಯವೆಂದರು. ದೇಶದ ಭವಿಷ್ಯ ಯುವಕರ ಮೇಲಿದೆ. ಯುವಕರು ಉತ್ತಮ ಶಿಕ್ಷಣ ಪಡೆದು, ಮತ್ತು ಸೇವೆ ನೀಡುವುದು ಮುಖ್ಯವಾಗಿದೆ.

**ವಿಶ್ವ ಪರಿಸರ ದಿನಾಚರಣೆ**

ವಿದ್ಯಾರ್ಥಿಗಳು ಕಠಿಣ ಪರಿಶ್ರಮವಹಿಸಿ ಅಧ್ಯಯನ ಮಾಡಿದಾಗ ಯಶಸ್ಸು ಪಡೆಯಲು ಸಾಧ್ಯ. ಈ ಭಾಗದಲ್ಲಿ 371 (ಜೆ) ಅಡಿಯಲ್ಲಿ ಅವಕಾಶ ಪಡೆಯಲು ಅನುಕೂಲವಾಗುತ್ತದೆ ಎಂದು ಹೇಳಿದರು. ಬೀದರ ವಿಶ್ವವಿದ್ಯಾಲಯದ ಕುಲಸಚಿವರು (ಆಡಳಿತ) ಸುರೇಖಾ ಕೆ.ಎ.ಎಸ್. ಪ್ರಾಸ್ತಾವಿಕ ಮಾತನಾಡಿ, ಹಸಿರೇ ಉಸಿರು, ಪರಿಸರದ ರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿಯಿದೆ. ಪರಿಸರವೆಂಬ ತೊಟ್ಟಿಲಲ್ಲಿ ಮನುಷ್ಯ ಬಾಳಬೇಕಾದರೆ ಅದನ್ನು ಅತ್ಯಂತ ಕಾಳಜಿಯಿಂದ ಉಳಿಸಿಕೊಳ್ಳಬೇಕಾಗಿದೆ. ಆರೋಗ್ಯಕರ ಸಮಾಜದ ನಿರ್ಮಾಣದಲ್ಲಿ ಎಲ್ಲರೂ ಕಾನೂನನ್ನು ಗೌರವಿಸಬೇಕಾದ ಅನಿವಾರ್ಯತೆಯಿದೆ. ಹಾಗಾದಾಗ ಮಾತ್ರ ಸಮೃದ್ಧ ಸಮಾಜದ ಕನಸು ಕಾಣಲು ಸಾಧ್ಯವೆಂದರು.

ಈ ಸಂದರ್ಭದಲ್ಲಿ ಬೀದರ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಷನ್ಮುಖಯ್ಯಾ ಬಿ.ಸ್ವಾಮಿ, ಸಚಿನ ಮಲ್ಕಾಪೂರೆ, ರಮೇಶ ಕನಕಟ್ಟಾ, ಬೀದರ ಅರಣ್ಯ ಸಂರಕ್ಷಣಾಧಿಕಾರಿ ವಿಜಯಕುಮಾರ ಜಾಧವ, ವಾಣಿಶ್ರೀ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಪರಿಸರ ಸಂರಕ್ಷಣೆ ಪ್ರತಿಯೊಬ್ಬ ನಾಗರಿಕನ ಕರ್ತವ್ಯ


ಉದಯವಾಹಿನಿ ಚಿತ್ರ

• ಉದಯವಾಹಿನಿ ಅಥಣಿ

ದಿನದಿಂದ ದಿನಕ್ಕೆ ಹೆಚ್ಚಾಗುತ್ತಿರುವ ತಾಪಮಾನವನ್ನು ತಡೆಗಟ್ಟದೆ ಹೋದರೆ ಭೂಮಿಯ ಮೇಲಿನ ಜೀವಸಂಕುಲಕ್ಕೆ ಉಳಿಗಾಲವಿಲ್ಲ. ಈ ಸಂಗತಿಯನ್ನು ಪ್ರತಿಯೊಬ್ಬರು ಅರಿತು ಗಿಡಮರಗಳನ್ನು ನೆಟ್ಟು ಪರಿಸರವನ್ನು ಸಂರಕ್ಷಣೆ ಮಾಡಬೇಕು.ಗಿಡ ಮರಗಳನ್ನ ನೆಡುವುದು ಕೇವಲ ಪರಿಸರ ದಿನಾಚರಣೆಗೆ, ಫೊ?ಟೋ, ಪತ್ರಿಕೆಯ ಸುದ್ದಿಗಳಿಗೆ ಸೀಮಿತವಾಗದೇ ಪರಿಸರ ಸಂರಕ್ಷಣೆ ಪ್ರತಿಯೊಬ್ಬ ನಾಗರಿಕನ ಜವಾಬ್ದಾರಿಯಾಗಬೇಕು ಎಂದು ಶಾಸಕ ಲಕ್ಷ್ಮಣ ಸವದಿ ಹೇಳಿದರು.

ಅಥಣಿ ಪಟ್ಟಣದ ಶಂಕರ ನಗರದಲ್ಲಿರುವ ಮಕ್ಕಳ ಉದ್ಯಾನವನದಲ್ಲಿ ಶಾಸಕರ ಪ್ರದೇಶ ಅಭಿವೃದ್ಧಿ ಯೋಜನೆಯಲ್ಲಿ ನೂತನವಾಗಿ ನಿರ್ಮಿಸುವಾಗ ಯೋಗಾಸನ ಕಟ್ಟೆಯ ಲೋಕಾರ್ಪಣೆ ಹಾಗೂ ಪ್ರಾದೇಶಿಕ ಅರಣ್ಯ ವಲಯದಿಂದ ಹಮ್ಮಿಕೊಳ್ಳಲಾಗಿದ್ದ ಪರಿಸರ ದಿನಾಚರಣೆಯ ಕಾರ್ಯಕ್ರಮದಲ್ಲಿ ಸಸಿಗೆ ನೀರೇರುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

## ರೈತರು ಮಾನವೀಯತೆಯ ಮೂರ್ತಿಗಳು: ಡಾ. ಪಿ.ಎಲ್. ಪಾಟೀಲ

• ಉದಯವಾಹಿನಿ ವಿಜಯಪುರ

ಕೃಷಿ ಹರಿಯುತ್ತಿರುವ ನದಿ ಇದ್ದ ಹಾಗೆ. ಇದು ನಿರಂತರ ಸಾಗುವಳಿ ಮಾಡುತ್ತಿರುವ ರೈತರು ಕಾಲಕ್ಕೆ ತಕ್ಕಂತೆ ಬದಲಾವಣೆಯನ್ನು ಅಳವಡಿಸಿಕೊಳ್ಳುತ್ತಿದ್ದಾರೆ. ಅವರು ಪರಿಪೂರ್ಣರೇನಲ್ಲ ಆದರೆ ದೇಶಕ್ಕೆ ಅವಶ್ಯವಿದ್ದಾಗ ಹೆಚ್ಚಿನ ಆಹಾರ ಉತ್ಪಾದನೆ ಮಾಡಿ ಜನರ ಹಸಿವನ್ನು ನೀಗಿಸುವ ಮೂಲಕ ಮಾನವೀಯತೆ ಮೆರೆದಿದ್ದಾರೆ ಎಂದು ಹೇಳಿದರು,

ಕೊಲ್ಹಾರ ತಾಲ್ಲೂಕಿನ ಮುಳವಾಡ ಗ್ರಾಮದಲ್ಲಿ ಕೇಂದ್ರ ಮತ್ತು ರಾಜ್ಯ ಸರಕಾರಗಳ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಲಾದ ಮುಂಗಾರು ಕೃಷಿ ಸಂಕಲ್ಪ ಅಭಿಯಾನವನ್ನು ಉದ್ಘಾಟಿಸಿ


ಉದಯವಾಹಿನಿ ಚಿತ್ರ

ಮಾತನಾಡಿದರು. ವಿಜಯಪುರ ಜಿಲ್ಲೆಯ ಉತ್ಕೃಷ್ಟ ಮಣ್ಣು ಹಾಗೂ ಹವಾಮಾನವು ಮುಂಗಾರು ಬೆಳೆಗಳಿಗೆ ಹೊಂದಿಕೆಯಾಗುತ್ತಿದ್ದು ಇದರಲ್ಲಿ ತೊಗರಿ ಮತ್ತು ಸೂರ್ಯಕಾಂತಿ ಬೆಳೆಗಳಲ್ಲಿ ಹೆಚ್ಚಿನ ಇಳುವರಿ ಪಡೆಯಬಹುದು. ಹೊಸ ತಳಿಗಳು ಕಳೆನಾಶಕಗಳು, ಕುಡಿ ಚಿವುಟುವಿಕೆ

> **ಧಾರವಾಡ ಕೃಷಿ ವಿಶ್ಯವಿದ್ಯಾಲಯ ಅಭಿವೃದ್ಧಿ ಪಡೆದಿರುವ (ಪಲ್ಸ್ ಬೂಸ್ಟರ್) ರೈತರಿಗೆ ಒಂದು ವರದಾನವಾಗಿದ್ದು, ತೊಗರಿ ಬೆಳೆಗೆ ಸಿಂಪರಣೆ ಮಾಡಿದ್ದಾಗ ಅದರಲ್ಲಿ ಶೇ. 10ರಿಂದ 20ರಷ್ಟು ಇಳುವರಿ ಹೆಚ್ಚಳವಾಗುತ್ತಿದೆ**
> -ಡಾ. ಪಿ.ಎಲ್. ಪಾಟೀಲ

ಸಸ್ಯ ಪ್ರಚೋದಕಗಳು ಮತ್ತು ಸಸ್ಯ ಸಂರಕ್ಷಣೆ ಹೊಸ ಅವಿಷ್ಕಾರಗಳನ್ನು ಅಳವಡಿಸಿಕೊಳ್ಳಲು ಕರೆ ನೀಡಿದರು.

## ಸಸಿ ಪೋಷಣೆ ಪರಿಸರ ಸಂರಕ್ಷಣೆ

• ಉದಯವಾಹಿನಿ ಕಮಲನಗರ

ಸಸಿ ನೆಟ್ಟು ಮರವಾಗಿ ಬೆರಳೆಸುವುದರಿಂದ ಉತ್ತಮ ಪರಿಸರಕ್ಕೆ ನಾವೂ ಪರೋಕ್ಷ ಕೊಡುಗೆ ನೀಡಿದಂತಾಗುತ್ತದೆ ಎಂದು ಶಾಲೆ ಮುಖ್ಯಶಿಕ್ಷಕ ಮನೋಜಕುಮಾರ ಹಿರೇಮಠ ಹೇಳಿದರು.

ಪಟ್ಟಣದ ಭಾಗಿರಥಿ ಪಬ್ಲಿಕ್ ಶಾಲೆಯಲ್ಲಿ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಹಮ್ಮಿಕೊಂಡಿದ್ದ ಗಿಡ ನೆಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ಭಾಷಣ-ಪೋಷಣೆಗಳಿಂದ ಪರಿಸರ ಸಂರಕ್ಷಣೆ ಸಾಧ್ಯವಿಲ್ಲ. ಪರಿಸರ ಸಂರಕ್ಷಣೆಗೆ ನೂಜಕಳಕಳಿ ಮತ್ತು ಪ್ರಾಮಾಣಿಕ ಪ್ರಯತ್ನ ಸಹ ಅಗತ್ಯ. ನೆಟ್ಟ ಸಸಿ ಮರವಾಗಿ ಬೆಳೆದಾಗ ಹಲವು ಬಗೆಯಲ್ಲಿ ಉಪಕಾರಿಯಾಗುತ್ತದೆ ಎಂದರು.

## ನಾಪತ್ತೆಯಾದ ಮೀನುಗಾರರ ಕುಟುಂಬಕ್ಕೆ 10 ಲಕ್ಷರೂ. ಪರಿಹಾರ ವಿತರಣೆ

• ಉದಯವಾಹಿನಿ ಮಂಗಳೂರು

ಮೇ 29ರಂದು ಮೀನುಗಾರಿಕೆಗೆ ತೆರಳಿ ನಾಪತ್ತೆಯಾಗಿರುವ ಬೆಂಗರೆಯ ಇಬ್ಬರು ಮೀನುಗಾರರ ಮನೆಗೆ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವ ಮಂಕಾಳ ಎಸ್. ವೈದ್ಯ ಶುಕ್ರವಾರ ಭೇಟಿ ನೀಡಿದರು.

ಸಂತ್ರಸ್ತ ಕುಟುಂಬಕ್ಕೆ ಸಾಂತ್ವನ ಹೇಳಿದ ಸಚಿವರು, ಪ್ರತಿ ಕುಟುಂಬಕ್ಕೆ ಮಿನುಗಾರರ ಸಂಕಷ್ಟ ಪರಿಹಾರ ನಿಧಿಯಿಂದ ತಲಾ 10 ಲಕ್ಷ ರೂಪಾಯಿಗಳ ಚೆಕ್ ವಿತರಿಸಿದರು. ನಾಪತ್ತೆಯಾದವರಿಗಾಗಿ ಶೋಧ ಕಾರ್ಯ ಇನ್ನೂ ನಡೆಯುತ್ತಿದೆ. ರಾಜ್ಯ ಸರಕಾರ ಎಲ್ಲಾ ರೀತಿಯ ನೆರವು ನೀಡಲಿದೆ ಎಂದು ಸಚಿವರು ತಿಳಿಸಿದರು. ಸಂಕಷ್ಟ ಪರಿಹಾರ ನಿಧಿಯಿಂದ ಮೀನುಗಾರರ ಕುಟುಂಬಗಳಿಗೆ ಇದುವರೆಗೆ 8 ಲಕ್ಷ ರೂ. ಪರಿಹಾರ ನೀಡಲಾಗುತ್ತಿತ್ತು. ರಾಜ್ಯ ಸರಕಾರ ಇದನ್ನು 10 ಲಕ್ಷ ರೂ. ಗಳಿಗೇರಿಸಿದೆ ಎಂದು ಸಚಿವರು ತಿಳಿಸಿದರು.

ಶಾಸಕರಾದ ವೇದವ್ಯಾಸ ಕಾಮತ್ ಮತ್ತು ಐವನ್ ಡಿಸೋಜಾ, ಮೀನುಗಾರಿಕೆ ನಿರ್ದೇಶಕ ದಿನೇಶ್ ಕುಮಾರ್, ಜಂಟಿ ನಿರ್ದೇಶಕ ಸಿದ್ಧಯ್ಯ, ಉಪ ನಿರ್ದೇಶಕ ದಿಲೀಪ್ ಕುಮಾರ್, ಮೀನುಗಾರ ಸಂಘಟನೆಗಳ ಮುಖಂಡರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ಬಸ್ ನಿಲ್ದಾಣ ನಿರ್ಮಾಣಕ್ಕೆ ಆಗ್ರಹ

• ಉದಯವಾಹಿನಿ ಕೂಡಲಸಂಗಮ

ಸಮೀಪದ ಕೆಂಗಲ್, ಕಜಗಲ್ಲ ಗ್ರಾಮದ ಬಸ್ ನಿಲ್ದಾಣ ಸಂಪೂರ್ಣ ಶಿಥಿಲಗೊಂಡಿದ್ದು, ತೆರವುಗೊಳಿಸಿ ಬಸ್ ನಿಲ್ದಾಣ ನಿರ್ಮಿಸುವಂತೆ ಕರ್ನಾಟಕ ರಕ್ಷಣಾ ವೇದಿಕೆ ಕಾರ್ಯಕರ್ತರು ಶಿಥಿಲಗೊಂಡ ಬಸ್ ನಿಲ್ದಾಣದ ಬಳಿ ಪ್ರತಿಭಟನೆ ಮಾಡಿದರು. ಪ್ರತಿಭಟನಾ ಸ್ಥಳಕ್ಕೆ ಪಂಚಾಯತ್‌ರಾಜ ಇಲಾಖೆಯ ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್ ಕೃಷ್ಣಾರಾವ್ ನಾಯಕ ಬಂದು ಮನವಿ ಸ್ವೀಕರಿಸಿದರು.

15 ದಿನದೊಳಗೆ ಬಸ್ ನಿಲ್ದಾಣ ಕಾಮಗಾರಿ ಆರಂಭಿಸದಿದ್ದರೆ ಹೋರಾಟ ಮಾಡಲಾಗುವುದು ಎಂದು ಕರವೇ ತಾಲ್ಲೂಕು ವಿದ್ಯಾರ್ಥಿ ಘಟಕದ ಅಧ್ಯಕ್ಷ ಪ್ರವೀಣ ವಾಲಿಕಾರ ತಿಳಿಸಿದರು.


ಉದಯವಾಹಿನಿ ಚಿತ್ರ

## ಹೆಲ್ಮೆಟ್‌ಗೆ ಬಳ್ಳಾರಿಯಲ್ಲಿ ವಿನಾಯ್ತಿ ಇಲ್ಲ: ಎಸ್ಪಿ ಡಾ. ಶೋಭಾರಾಣಿ

• ಉದಯವಾಹಿನಿ ಬಳ್ಳಾರಿ

ಸುಪ್ರೀಂ ಕೋರ್ಟಿನ ಆದೇಶದಂತೆ ದೇಶದಲ್ಲಿ ಬೈಕ್ ಸವಾರರಿಗೆ ಹೆಲ್ಮೆಟ್ ವಿನಾಯ್ತಿ ಇಲ್ಲ. ಬೇಸಿಗೆ ಬಿಸಿಲೆಂದು ಬಳ್ಳಾರಿಗೂ ವಿನಾಯ್ತಿ ಇಲ್ಲ. ಅದಕ್ಕಾಗಿ ಜಿಲ್ಲೆಯಲ್ಲಿ ಎಲ್ಲಾ ಬೈಕ್ ಸವಾರರು ಹೆಲ್ಮೆಟ್ ಹಾಕಲೇ ಬೇಕು ಎಂದು ಎಸ್ಪಿ ಡಾ. ಶೋಭಾರಾಣಿ ಹೇಳಿದ್ದಾರೆ.

ಅವರು ತಮ್ಮ ಕಚೇರಿಯಲ್ಲಿ ಸುದ್ದಿಗೋಷ್ಟಿ ನಡೆಸಿ. ಹೆಲ್ಮೆಟ್ ಧರಸದೇ ಇರುವ ಸವಾರರೇ ಅಪಘಾತಗಳಲ್ಲಿ ಸಾವನ್ನಪ್ಪಿದ್ದಾರೆ. ಅಲ್ಲದೆ ಅತಿ ವೇಗ ಮತ್ತಿತರ ಕಾರಣಗಳಿಂದಲೂ ಅಪಘಾತ ಆಗುತ್ತಿವೆ. ಅದಕ್ಕಾಗಿ ಹೆಲ್ಮೆಟ್ ಕಡ್ಡಾಯ ಮಾಡುತ್ತಿದೆ. ಯಾವುದೇ ಒತ್ತಡಗಳಿಗೆ ಮಣಿಯದೆ ಇದನ್ನು ಜಾರಿಗೆ ತರಲಿದೆ. ಎಲ್ಲರೂ ಹೆಲ್ಮೆಟ್ ಬಳಸಬೇಕು ಎಲ್ಲಾ ಇಲಾಖೆಗಳ ನೌಕರರಿಗೂ ಅರಿವು ಮೂಡಿಸಲು ಸಭೆ ನಡೆಸಲಿದೆ. ಯಾರು ಬಳಸಲ್ಲ ಅವರಿಗೆ 500 ರೂ ದಂಡ ಹಾಕಲಿದೆಂದು ತಿಳಿಸಿದರು.


ಉದಯವಾಹಿನಿ ಚಿತ್ರ

ಸಂಚಾರಿ ಪೊಲೀಸರ ಬಳಿ 7 ಜನರ ಬಳಿ ಬಾಡಿ ಕೆಮೆರಾ ಇದೆ ಅದನ್ನು ಉಪಯೋಗಿಸುತ್ತಿದ್ದಾರೆಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು. ಜೈಲಿನಲ್ಲಿ ಮೊಬೈಲ್ ತರಂಗಗಳಿಗೆ ಜಾಮರ್ ಅಳವಡಿಸಿರುವುದರಿಂದ ಜೈಲ್ ಸುತ್ತಮುತ್ತ 300 ಮೀಟರ್ಸ್ ಇದೆ, ಇದನ್ನು 100 ಮೀಟರ್ಸ್‌ಗೆ ಇಳಿಸಲು ಹೇಳಿದೆ, ತರ್ಡ್ ಪಾರ್ಟಿಯ ಸಭೆಯಲ್ಲಿ ಈ ಬಗ್ಗೆ ತಿಳಿಸಲಿದೆ ನಮ್ಮ ಇಲಾಖೆಗೂ ಒಂದಿಷ್ಟು ಸಮಸ್ಯೆ ಇದೆ ಎಂದರು.

## ಮೆಸ್ಕಾಂ ಸಹಾಯಕ ಕಾರ್ಯನಿರ್ವಾಹಕ ಲೋಕಾಯುಕ್ತ ಬಲೆಗೆ

• ಉದಯವಾಹಿನಿ ಬ್ರಹ್ಮಾವರ

ಕರ್ನಾಟಕ ಲೋಕಾಯುಕ್ತರು ನಡೆಸಿದ ಸುಸಂಘಟಿತ ಕಾರ್ಯಾಚರಣೆಯಲ್ಲಿ, ಬ್ರಹ್ಮಾವರದ ಮೆಸ್ಕಾಂ ಕಚೇರಿಯ ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್ ಅಶೋಕ್ ಪೂಜಾರಿ ಅವರು ಜೂನ್ 6 ರ ಶುಕ್ರವಾರ ಬೆಳಿಗ್ಗೆ ಸಾರ್ವಜನಿಕರೊಬ್ಬರಿಂದ 20,000 ರೂ. ಲಂಚ ಪಡೆಯುತ್ತಿದ್ದಾಗ ರೆಡ್ ಹ್ಯಾಂಡ್ ಆಗಿ ಸಿಕ್ಕಿಬಿದ್ದಿದ್ದಾರೆ.

ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಸುಮಾರು 2 ತಿಂಗಳಿನಿಂದ ದೂರುದಾರರಿಗೆ ಕಿರುಕುಳ ನೀಡುತ್ತಿದ್ದರು, ಅವರ ಮನೆಗೆ ವಿದ್ಯುತ್ ಸಂಪರ್ಕ ನೀಡುವುದನ್ನು ವಿಳಂಬ ಮಾಡುತ್ತಿದ್ದರು ಎಂದು ಆರೋಪಿಸಲಾಗಿದೆ. ಕೆಲವು ಅವರ ಅಧಿಕೃತ ಕರ್ತವ್ಯದ ಭಾಗವಾಗಿದ್ದರೂ, ಮುಂದುವರಿಯಲು ಅವರು ಲಂಚಕ್ಕೆ ಬೇಡಿಕೆ ಇಟ್ಟಿದ್ದರು.



ಆದರೆ ಕಾನೂನು ಬದ್ಧವಾಗಿ ಮಾಡಬೇಕಾದ ಸರ್ಕಾರಿ ಕೆಲಸಕ್ಕೆ ಲಂಚ ನೀಡಿ ಕೆಲಸ ಮಾಡಿಸಿಕೊಳ್ಳಲು ಇಷ್ಟ ಇಲ್ಲದ ಕಾರಣ ದೂರುದಾರರು ಉಡುಪಿ ಲೋಕಾಯುಕ್ತ ಪೊಲೀಸ್ ಠಾಣೆಗೆ ದೂರು ನೀಡಿದ್ದಾನೆ. ಈ ದೂರಿನ ಆಧಾರದ ಮೇಲೆ ಬಲೆ ಬೀಸಲಾಗಿದ್ದು, ಪೂಜಾರಿ ಬ್ರಹ್ಮಾವರದ ಮೆಸ್ಕಾಂ ಕಚೇರಿಯೊಳಗೆ ಲಂಚ ಸ್ವೀಕರಿಸುತ್ತಿದ್ದಾಗ ಬಂಧಿಸಲಾಗಿದೆ. ಅಶೋಕ್ ಪೂಜಾರಿ ಈ ಹಿಂದೆ ಕುಂದಾಪುರದಲ್ಲಿ ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್ ಆಗಿ ಸೇವೆ ಸಲ್ಲಿಸಿದ್ದರು ಮತ್ತು ಕಳೆದ ಮೂರ್ನಾಲ್ಕು ವರ್ಷಗಳಿಂದ ಬ್ರಹ್ಮಾವರದಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ.

ಈ ಕಾರ್ಯಾಚರಣೆಯನ್ನು ಕರ್ನಾಟಕ ಲೋಕಾಯುಕ್ತ ಮಂಗಳೂರು ಪೊಲೀಸ್ ವರಿಷ್ಠಾಧಿಕಾರಿ (ಪ್ರಭಾರ) ಕುಮಾರಚಂದ್ರ ಅವರ ಮಾರ್ಗದರ್ಶನದಲ್ಲಿ ನಡೆಸಲಾಯಿತು. ಉಡುಪಿ ಕರ್ನಾಟಕ ಲೋಕಾಯುಕ್ತ ಉಪ ಪೊಲೀಸ್ ವರಿಷ್ಠಾಧಿಕಾರಿ (ಪ್ರಭಾರ) ಮಂಜುನಾಥ ಅವರು ನೇತೃತ್ವ ವಹಿಸಿದ್ದರು ಮತ್ತು ಪೊಲೀಸ್ ನಿರೀಕ್ಷಕರಾದ ರಾಜೇಂದ್ರ ನಾಯ್ಕ (ಉಡುಪಿ) ಮತ್ತು ಭಾರತಿ ಜಿ (ಮಂಗಳೂರು) ಹಾಗೂ ಉಡುಪಿ ಮತ್ತು ಮಂಗಳೂರು ಘಟಕಗಳ ಲೋಕಾಯುಕ್ತ ಸಿಬ್ಬಂದಿ ಇದ್ದರು.

## ಡೆಂಗಿ ಜ್ವರ ಉದಾಸೀನದಿಂದ ತೊಂದರೆ

• ಉದಯವಾಹಿನಿ ಯಲಬುರ್ಗಾ

ತಾಲ್ಲೂಕಿನ ಬಳೂಟಗಿ ಗ್ರಾಮದಲ್ಲಿ ಆರೋಗ್ಯ ಇಲಾಖೆ, ಜಿಲ್ಲಾಡಳಿತ ಹಾಗೂ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆ ಸಹಯೋಗದಲ್ಲಿ ಡೆಂಗಿ ಜ್ವರ ಕುರಿತ ಜಾಗೃತಿ ಹಾಗೂ ನಿಯಂತ್ರಣ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ನೇತೃತ್ವ ವಹಿಸಿದ್ದ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಶಿವಾನಂದ ಮಾತನಾಡಿ, ಡೆಂಗಿ ಒಂದು ಮಾರಕ ರೋಗವಾಗಿದ್ದು, ಉದಾಸೀನ ಮಾಡಿದರೆ ತೊಂದರೆಗೆ ಒಳಗಾಗಬೇಕಾಗುತ್ತದೆ. ಕಾರಣ ವಾಸಿಸುವ ಪ್ರದೇಶ ಸ್ವಚ್ಛವಾಗಿಟ್ಟುಕೊಳ್ಳುವುದು ಹಾಗೂ ರೋಗ ಲಕ್ಷಣಗಳು ಕಾಣಿಸಿಕೊಂಡರೆ ತ್ವರಿತವಾಗಿ


ಉದಯವಾಹಿನಿ ಚಿತ್ರ

ಚಿಕಿತ್ಸೆ ಪಡೆದುಕೊಳ್ಳುವುದು ಮುಖ್ಯವಾಗಿದೆ ಎಂದರು. ಸಂಜೆ ಸಮಯದಲ್ಲಿ ಮನೆಯ ಮುಂದೆ ಬೇವಿನ ಸೊಪ್ಪಿನ ಹೊಗೆ ಹಾಕಬೇಕು. ಸೊಳ್ಳೆ ಕಡಿತದಿಂದ ದೂರವಿರಲು ವೈಯಕ್ತಿಕ ರಕ್ಷಣೆ ಮಾಡಿಕೊಳ್ಳುವುದು, ಮನೆಯ ಸುತ್ತ ಮುತ್ತ ನೀರು ನಿಲ್ಲದಂತೆ ಎಚ್ಚರಿಕೆ ವಹಿಸಬೇಕು.

ಲಾರ್ವಾ ನಾಶಕ್ಕಾಗಿ ಸ್ವಚ್ಛಗೊಳಿಸುವುದು ಸೇರಿದಂತೆ ಆರೋಗ್ಯ ಇಲಾಖೆ ಸಿಬ್ಬಂದಿ ಮತ್ತು ಆಶಾ ಕಾರ್ಯಕರ್ತೆಯರು ಮನೆಗೆ ಭೇಟಿ ನೀಡಿದ ಸಂದರ್ಭದಲ್ಲಿ ಅವರ ಸಲಹೆ ಸೂಚನೆಗಳನ್ನು ಪಾಲಿಸುವುದು ಅವಶ್ಯಕ ಎಂದರು. ಮಲೇರಿಯಾ ತಾಂತ್ರಿಕ ಮೇಲ್ವಿಚಾರಕ ಮಂಜುನಾಥ ಮಾತನಾಡಿ, ಮಳೆಗಾಲದಲ್ಲಿ ಹರಡುವ ಸಾಂಕ್ರಾಮಿಕ ರೋಗಗಳು ಮತ್ತು ಅವುಗಳ ನಿಯಂತ್ರಣ, ಮುಂಜಾಗ್ರತೆ ಕುರಿತು ಮಾಹಿತಿ ನೀಡಿದರು.

## ರೈಲ್ವೆ ಕಾಮಗಾರಿ ಸುರಕ್ಷತೆ ಅಳವಡಿಸಲು ಒತ್ತಾಯ

• ಉದಯವಾಹಿನಿ ಶಿಕಾರಿಪುರ

ಶಿವಮೊಗ್ಗ -ರಾಣೇಬೆನ್ನೂರು ರೈಲ್ವೆ ಮಾರ್ಗ ನಿರ್ಮಾಣ ಕಾಮಗಾರಿ ಸಂದರ್ಭದಲ್ಲಿ ಸುರಕ್ಷತಾ ಮಾನದಂಡ ಬಳಸದ ಕಾರಣಕ್ಕೆ ತಾಲ್ಲೂಕಿನ ಯರೇಕಟ್ಟೆ ಗ್ರಾಮಸ್ಥರು ತೀವ್ರ ತೊಂದರೆ ಅನುಭವಿಸುವಂತಾಗಿದೆ.

ಯರೇಕಟ್ಟೆ ಗ್ರಾಮದ ಮರಾಠಿ ಗೌಳಿಗಳು ವಾಸವಿರುವ ಪ್ರದೇಶದ ಪಕ್ಕದಲ್ಲಿ ರೈಲ್ವೆ ಮಾರ್ಗ ಹಾದುಹೋಗಿದೆ. ಅಲ್ಲಿ ಅಂದಾಜು 1.5 ಕಿ.ಮೀ. ನಷ್ಟು ದೂರ ರೈಲು 20ರಿಂದ 50 ಅಡಿಗಳಷ್ಟು ಆಳದಲ್ಲಿ ಸಾಗುತ್ತದೆ. ಅದಕ್ಕಾಗಿ ಗುಂಡಿ ತೆಗೆಯಲಾಗಿದೆ. ಆಳದ ಗುಂಡಿಯಿಂದ ನೂರು ಮೀಟರ್ ದೂರದಲ್ಲೇ ಗೌಳಿಗರು ವಾಸವಾಗಿದ್ದು, ಅವರ ಮಕ್ಕಳು ಗುಂಡಿಯಲ್ಲಿ ಆಟವಾಡುತ್ತಾ ಬೀಳುತ್ತಿದ್ದಾರೆ. ಅವರನ್ನು ಹಗ್ಗದಿಂದ ಮೇಲೆತ್ತಬೇಕಿದೆ. ಗುಂಡಿಗೆ ಇಳಿಯುವುದು ಮೇಲೆ ಹತ್ತುವುದು ಮಕ್ಕಳಿಗೆ ಆಟವಾಗಿದ್ದು, ಹಲವರು ಗಾಯ ಮಾಡಿಕೊಂಡು ಚಿಕಿತ್ಸೆಯನ್ನೂ ಪಡೆದಿದ್ದಾರೆ. ಗೌಳಿಗರ ಜಾನುವಾರುಗಳೂ ಗುಂಡಿಯಲ್ಲಿ ಬಿದ್ದಿದ್ದು, ಅವುಗಳನ್ನು ಕಿ.ಮೀ. ದೂರದವರೆಗೂ ಸಾಗಿ ಮೇಲಕ್ಕೆ ಹತ್ತಿಸಲಾಗುತ್ತಿದೆ. ರೈಲ್ವೆ ಮಾರ್ಗ ನಿರ್ಮಾಣಕ್ಕೆ ಅನೇಕ ಗುಂಡಿಗಳು ತೆಗೆದಿದ್ದು ಅದರಲ್ಲಿ ಮಳೆಗಾಲದ ನೀರು ನಿಂತಿದ್ದು ಅದರಲ್ಲೂ ಮಕ್ಕಳು ಆಟವಾಡಲು ತೆರಳಿದರೆ ಅಪಾಯ ಸಂಭವಿಸಬಹುದು.

## ಜಾನುವಾರು ಅಕ್ರಮ ವಧೆಗೆ ಕಡಿವಾಣ ಹಾಕಿ: ಬಿ.ಟಿ.ಕುಮಾರಸ್ವಾಮಿ

### ಗೋವು, ಒಂಟೆಗಳ ವಧೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ ಎಲ್ಲಾ ಇಲಾಖೆಯವರು ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಿ

• ಉದಯವಾಹಿನಿ ಚಿತ್ರದುರ್ಗ

ಜಿಲ್ಲೆಯಲ್ಲಿ ಬಕ್ರೀದ್ ಹಬ್ಬದ ಆಚರಣೆ ಸಂದರ್ಭದಲ್ಲಿ ಅಕ್ರಮವಾಗಿ ಗೋವು, ಒಂಟೆಗಳ ವಧೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ ಸಂಬಂಧಿಸಿದ ಎಲ್ಲಾ ಇಲಾಖೆಯವರು ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು. ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಜಿಲ್ಲಾ ಪ್ರಾಣಿ ದಯಾ ಸಂಘದ ನಿರ್ವಹಣಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಬಕ್ರೀದ್ ಹಬ್ಬದ ಆಚರಣೆ ಸಂದರ್ಭದಲ್ಲಿ ಅನಧಿಕೃತವಾಗಿ ಜಾನುವಾರುಗಳ ವಧೆ, ಸಾಗಾಣಿಕೆ ತಡೆಗಟ್ಟುವಿಕೆ ಸಂಬಂಧ ಸೂಕ್ತ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

2025-26ನೇ ಸಾಲಿನಲ್ಲಿ ಮೈಸೂರಿನ ಪಿಂಜಾರ್ ಪೋಲ್, ಇತರೆ ಗೋಶಾಲೆಗಳಿಗೆ ಹಾಗೂ ಸರ್ಕಾರಿ ಗೋಶಾಲೆಗೆ ಬೆಂಬಲ ನೀಡುವ ಕಾರ್ಯಕ್ರಮದಡಿ


ಉದಯವಾಹಿನಿ ಚಿತ್ರ

ಸರ್ಕಾರದಿಂದ ಅನುದಾನಕ್ಕಾಗಿ ಚಿತ್ರದುರ್ಗ ತಾಲ್ಲೂಕಿನ ಕಾತ್ರಾಳು ಕೆರೆಯ ಆದಿಚುಂಚನಗಿರಿ ಗೋಶಾಲೆ, ಮುತ್ತಯ್ಯನಹಟ್ಟಿಯ ರಾಜರಾಜೇಶ್ವರಿ ದೇವಸ್ಥಾನ ಟ್ರಸ್ಟ್‌ನ ರಾಜರಾಜೇಶ್ವರಿ ಗೋಶಾಲೆ, ಚಳ್ಳಕೆರೆ ತಾಲ್ಲೂಕಿನ ನನ್ನಿವಾಳ ಬೊಮ್ಮದೇವರಹಟ್ಟಿಯ ಮುತ್ಯೆಗಳ ಸ್ವಾಮಿ ಗೋಶಾಲೆ, ನಂದನಹಳ್ಳಿಯ ನಂದಾಮಸಂದ್ ಬಾವಾಜಿ ಪರಾಂಪರೆ ಶ್ರೀ ವೆಂಕಟೇಶ್ವರ ದೇವಸ್ಥಾನ ಬಾವಾಜಿ ಸೇವಾಶ್ರಮ ಹಾಗೂ ಸೇವಾಲಾಲ್ ದೇವರ ಹಸುಗಳ ಗೋ ರಕ್ಷಣಾ ಟ್ರಸ್ಟ್, ಹಿರೇಕೆರೆ ಕಾವಲು ಚೌಡೇಶ್ವರಿ ಗೋ ಸಂರಕ್ಷಣಾ ಟ್ರಸ್ಟ್, ನನ್ನಿವಾಳ ಕಟ್ಟೆಮನೆಯ ಮುತ್ತಿಗಾರ ದೇವರ ಎತ್ತುಗಳ ಕ್ಷೇಮಾಭಿವೃದ್ಧಿ ಟ್ರಸ್ಟ್, ನಾಯಕನಹಟ್ಟಿ ಹೋಬಳಿಯ ಗೌಡಗೆರೆಯ ಶ್ರೀರಂಗನಾಥ ಸ್ವಾಮಿ ದೇವರ ಎತ್ತುಗಳ ಗೋ ರಕ್ಷಣಾ ಟ್ರಸ್ಟ್, ಮೊಳಕಾಲ್ಮುರು ತಾಲ್ಲೂಕಿನ ಬ್ರಹ್ಮಗಿರಿ ಸಿದ್ದೇಶ್ವರ ಗೋಶಾಲೆ, ಹಿರಿಯೂರು ತಾಲ್ಲೂಕಿನ ಬೀರೇನಹಳ್ಳಿ ಸ್ವರ್ಣಭೂಮಿ ಗೋಶಾಲೆ, ಐಮಂಗಲ ಹೋಬಳಿ ಗಿಡ್ಡೋಬನಹಳ್ಳಿಯ ಗೋ-ಸಕೇತ ಶ್ರೀರಾಮ ಮಂಡಳಿ ರಾಮನವಮಿ ಸೆಲಬ್ರೇಷನ್ಸ್ ಟ್ರಸ್ಟ್ ಸೇರಿದಂತೆ ಚಿತ್ರದುರ್ಗ ಜಿಲ್ಲೆಯಲ್ಲಿ ಒಟ್ಟು 10 ಗೋಶಾಲೆಯಿಂದ ಪ್ರಸ್ತಾವನೆಗಳು ಬಂದಿವೆ ಎಂದು ಸಭೆಗೆ ಪಶುಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆಯ ಉಪನಿರ್ದೇಶಕ ಡಾ. ಎನ್.ಕುಮಾರ್ ಮಾಹಿತಿ ನೀಡಿದರು. ನಿಯಮಾನುಸಾರ ಪ್ರಸ್ತಾವನೆಗಳನ್ನು ಸರ್ಕಾರಕ್ಕೆ ಸಲ್ಲಿಸುವಂತೆ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಸೂಚನೆ ನೀಡಿದರು.

### ಪ್ರಾಣಿದಯಾ ಸಂಘ ನವೀಕರಣಕ್ಕೆ ಅನುಮತಿ

**ಜಿಲ್ಲಾ ಪ್ರಾಣಿದಯಾ ಸಂಘವು ನೊಂದಾಯಿತ ಸಂಘವಾಗಿದ್ದು, ವಿವಿಧ ಇಲಾಖೆಯ ಅಧಿಕಾರಿಗಳನ್ನು ಒಳಗೊಂಡ ಜಿಲ್ಲಾ ಪ್ರಾಣಿದಯಾ ಸಂಘದ ನವೀಕರಣಕ್ಕೆ ಸಭೆಯಲ್ಲಿ ಅನುಮತಿ ನೀಡಲಾಯಿತು.**

**ಸೂಕ್ತ ಕ್ರಮ ಕೈಗೊಳ್ಳಬೇಕು**

ಕುರುಡಿಹಳ್ಳಿಯ ಪುಣ್ಯಕೋಟಿ ಸರ್ಕಾರಿ ಗೋಶಾಲೆಯ ಜಮೀನಿನಲ್ಲಿ ಮಹಾತ್ಮಾಗಾಂಧಿ ಉದ್ಯೋಗ ಖಾತರಿ ಯೋಜನೆಯಡಿ ಸರ್ವೆ ನಂ. 77ರ 9.36 ಎಕರೆ ಜಮೀನಿನಲ್ಲಿ ಹಳ್ಳ, ಗುಂಡಿ ಇರುವುದರಿಂದ ನೆಲಸಮತಟ್ಟು ಮಾಡಬೇಕಾಗಿದೆ. ಜಾನುವಾರುಗಳಿಗೆ ಪೌಷ್ಠಿಕ ಹಸಿರು ಮೇವು ಬೆಳೆಯಬಹುದು. ಮಹಾತ್ಮಗಾಂಧಿ ಉದ್ಯೋಗ ಖಾತ್ರಿ ಯೋಜನೆಯಡಿ ಹೆಚ್ಚುವರಿಯಾಗಿ 100 ಜಾನುವಾರುಗಳಿಗೆ ಶೆಡ್ ನಿರ್ಮಾಣ ಮಾಡುವ ಅಗತ್ಯವಿದೆ ಎಂದು ಕುರುಡಿಹಳ್ಳಿ ಪುಣ್ಯಕೋಟಿ ಸರ್ಕಾರಿ ಗೋಶಾಲೆಯ ಉಸ್ತುವಾರಿ ಅಧಿಕಾರಿ ಸಭೆಯ ಗಮನಕ್ಕೆ ತಂದರು.

ಭೂಮಿಯನ್ನು ನೆಲಸಮತಟ್ಟು ಮಾಡಿಕೊಳ್ಳಲು ಜಿಲ್ಲಾ ಪಂಚಾಯತ್ ಕ್ರಮವಹಿಸಬೇಕು. ಹೆಚ್ಚುವರಿಯಾಗಿ ಜಾನುವಾರು ಶೆಡ್ ನಿರ್ಮಾಣ ಮಾಲು ಸರ್ಕಾರಕ್ಕೆ ಪ್ರಸ್ತಾವದ ಬೇಡಿಕೆ ಸಲ್ಲಿಸುವಂತೆ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ತಿಳಿಸಿದರು.

ಸಭೆಯಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ, ನಗರಸಭೆ ಪೌರಾಯುಕ್ತೆ ಎಂ.ರೇಣುಕಾ, ಮುಖ್ಯ ಪಶು ವೈದ್ಯಾಧಿಕಾರಿ ಡಾ.ಎನ್.ಗಿರಿರಾಜ್ ಸೇರಿದಂತೆ ಪಶು ವೈದ್ಯ ಸೇವಾ ಇಲಾಖೆ ಅಧಿಕಾರಿಗಳು ಹಾಗೂ ವಿವಿಧ ಇಲಾಖೆ ಅಧಿಕಾರಿಗಳು ಇದ್ದರು.

# ಉತ್ತರ ಸಿಕ್ಕಿಂ: ಭೂಕುಸಿತದಲ್ಲಿ ಸಿಲುಕಿದ್ದ 76 ಸೇನಾ ಸಿಬ್ಬಂದಿ ರಕ್ಷಣೆ

**ಗ್ಯಾಂಗ್ಟೋಕ್:** ಸಿಕ್ಕಿಂನ ಛಾಟೆನ್ ಬಳಿಯ ಸೇನಾ ಶಿಬಿರದ ಬಳಿ ಸಂಭವಿಸಿದ ಭೂಕುಸಿತದಲ್ಲಿ ಸಿಲುಕಿದ್ದ 76 ಸೇನಾ ಸಿಬ್ಬಂದಿಯನ್ನು ಏರ್ ಲಿಫ್ಟ್ ಮಾಡಲಾಗಿದೆ. ಭಾರೀ ಮಳೆಯಿಂದಾಗಿ ಹಲವಾರು ಭೂಕುಸಿತಗಳು ಸಂಭವಿಸಿವೆ. ರಸ್ತೆ ಸಂಪರ್ಕ ಕಡಿತಗೊಂಡಿದ್ದು, ಅಲ್ಲಿ ಸಿಲುಕಿಕೊಂಡಿದ್ದ ಎಲ್ಲಾ ಪ್ರವಾಸಿಗರನ್ನು ರಕ್ಷಿಸಿ ಸ್ಥಳಾಂತರಿಸುವ ಪ್ರಯತ್ನಗಳು ಪೂರ್ಣಗೊಂಡಿವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಒಟ್ಟಾರೆಯಾಗಿ 76 ಸೇನಾ ಸಿಬ್ಬಂದಿಯನ್ನು ಮೂರು



ಎಂಐ-17 ಹೆಲಿಕಾಪ್ಟರ್‌ಗಳ ಮೂಲಕ ಕರೆತರಲಾಯಿತು. ಹೆಲಿಕಾಪ್ಟರ್‌ಗಳು ಸೇನಾ ಸಿಬ್ಬಂದಿಯನ್ನು ಚಾಟೆನ್‌ನಿಂದ ಪಾಕ್ಯೊಂಗ್ ಗ್ರೀನ್‌ಫೀಲ್ಡ್ ವಿಮಾನ ನಿಲ್ದಾಣಕ್ಕೆ ಸಾಗಿಸುವುದರೊಂದಿಗೆ ರಕ್ಷಣಾ ಕಾರ್ಯಾಚರಣೆ ಪೂರ್ಣಗೊಂಡಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ರಾಜ್ಯ ಸರ್ಕಾರವು ಒಟ್ಟಾರೆ ಪರಿಸ್ಥಿತಿಯನ್ನು ಸೂಕ್ಷ್ಮವಾಗಿ ಗಮನಿಸುತ್ತಲೇ ಇದೆ. ವಿಪತ್ತು ಪೀಡಿತ ಪ್ರದೇಶದಲ್ಲಿ ಅಗತ್ಯವಿರುವ ಎಲ್ಲಾ ಬೆಂಬಲವನ್ನು ಒದಗಿಸಲು ಮತ್ತು ನೈಸರ್ಗಿಕ ವಿಕೋಪಗಳಿಂದ ಪೀಡಿತರಿಗೆ ಸಹಾಯ ಮಾಡಲು ಬದ್ಧವಾಗಿದೆ ಎಂದು ಮತ್ತೊಬ್ಬ ಅಧಿಕಾರಿ ಹೇಳಿದ್ದಾರೆ. ಉತ್ತರ ಸಿಕ್ಕಿಂನಲ್ಲಿ ಇತ್ತೀಚೆಗೆ ಭಾರಿ ಮಳೆಯಿಂದಾಗಿ ಅನೇಕ ಭೂಕುಸಿತಗಳು ಸಂಭವಿಸಿದ್ದು, ರಸ್ತೆ ಸಂಪರ್ಕ ಅಸ್ತವ್ಯಸ್ತವಾಗಿದೆ. ಇದರ ಪರಿಣಾಮವಾಗಿ, 1,600ಕ್ಕೂ ಹೆಚ್ಚು ಪ್ರವಾಸಿಗರು ಲಾಚೆನ್, ಲಾಚುಂಗ್ ಮತ್ತು ಚುಂಗ್‌ಥಾಂಗ್ ಪಟ್ಟಣಗಳಲ್ಲಿ ಸಿಲುಕಿ ಕೊಂಡಿದ್ದರು. ಭಾರತೀಯ ಸೇನೆ, ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆ, ರಾಜ್ಯ ವಿಪತ್ತು ನಿರ್ವಹಣಾ ಪಡೆ, ಗಡಿ ರಸ್ತೆಗಳ ಸಂಸ್ಥೆ, ಮಂಗನ್ ಜಿಲ್ಲಾಡಳಿತವು ಹಲವು ದಿನಗಳ ಕಾಲ ರಕ್ಷಣಾ, ಶೋಧ ಕಾರ್ಯಾಚರಣೆಗಳನ್ನು ನಡೆಸಿ, ಸಿಕ್ಕಿಬಿದ್ದ ಎಲ್ಲಾ ಪ್ರವಾಸಿಗರು ಮತ್ತು ಸ್ಥಳೀಯ ಜನರನ್ನು ಸ್ಥಳಾಂತರಿಸಿವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.140 ಕ್ಕೂ ಹೆಚ್ಚು ಪ್ರವಾಸಿಗರನ್ನು ವಿಮಾನದ ಮೂಲಕ ಸ್ಥಳಾಂತರಿಸಲು ಹಲವಾರು ಹೆಲಿಕಾಪ್ಟರ್‌ಗಳನ್ನು ಸೇವೆಗೆ ನಿಯೋಜಿಸಲಾಗಿದೆ ಎಂದು ಅವರು ಹೇಳಿದರು.

# ಟ್ರಂಪ್-ಮಸ್ಕ್ ಗೆಳೆತನ ಕಸಿದ ಒನ್ ಬಿಗ್ ಬ್ಯುಟಿಫುಲ್ ಬಿಲ್

## ಸಂಪೂರ್ಣವಾಗಿ ಹಳಸಿದ ಡೊನಾಲ್ಡ್ ಟ್ರಂಪ್-ಎಲಾನ್ ಮಸ್ಕ್ ನಡುವಿನ ಸಂಬಂಧ

**ವಾಷಿಂಗ್ಟನ್:** ಎಲ್ಲದಕ್ಕೂ ಒಂದು ಅಂತ್ಯ ಅಂತಾ ಇರುತ್ತದೆ ಆದರೆ ಆ ಅಂತ್ಯ ಬರುವುದಕ್ಕೂ ಒಂದು ಸಮಯ ಅಂತಾ ಇರುತ್ತದೆ. ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತು ಟೆಕ್ ದೈತ್ಯ ಎಲಾನ್ ಮಸ್ಕ್ ನಡುವಿನ ಗೆಳೆತನದ ಅವಧಿ ಕೇವಲ 9 ತಿಂಗಳದ್ದಾಗಿತ್ತು. ಆದರೆ ಇದು ಇಷ್ಟು ಅವಧಿಯ ಸ್ನೇಹಸಂಬಂಧ ಎಂಬುದು ಜಗತ್ತಿಗೆ ಬಿಡಿ, ಖುದ್ದು ಎಲಾನ್ ಮಸ್ಕ್, ಡೊನಾಲ್ಡ್ ಟ್ರಂಪ್ ಅವರಿಗೂ ಗೊತ್ತಿರಲಿಲ್ಲವೇನೋ. ಹೌದು, ಡೊನಾಲ್ಡ್ ಟ್ರಂಪ್, ಎಲಾನ್ ಮಸ್ಕ್ ನಡುವಿನ ಸಂಬಂಧ ಸಂಪೂರ್ಣವಾಗಿ ಹಳಸಿದ್ದು, ಒನ್ ಬಿಗ್ ಬ್ಯುಟಿಫುಲ್ ಬಿಲ್ ವಿಚಾರವಾಗಿ ಇಬ್ಬರೂ ಒಬ್ಬರನ್ನೊಬ್ಬರು ದೂಷಿಸಿತ್ತಾ ಇಡೀ ಜಗತ್ತಿಗೆ ಮನರಂಜನೆ ನೀಡುತ್ತಿದ್ದಾರೆ. ಈಗಾಗಲೇ ಡೊನಾಲ್ಡ್ ಟ್ರಂಪ್ ವಿರುದ್ಧ ಗುರುತರ ಆರೋಪಗಳನ್ನು ಮಾಡಿರುವ ಎಲಾನ್ ಮಸ್ಕ್, ಮಕ್ಕಳ ಲೈಂಗಿಕ ಅಪರಾಧಿ, ಕಳ್ಳಸಾಗಣೆದಾರ ಜೆಫ್ರಿ ಎಪ್ಸ್ಟೀನ್ ಜೊತೆಗಿನ ಡೊನಾಲ್ಡ್ ಟ್ರಂಪ್ ಅವರ ಸ್ನೇಹ ಸಂಬಂಧದ ಬಗ್ಗೆ ದೋಷಾರೋಪಣೆ ತನಿಖೆ ನಡೆಸಬೇಕೆಂದು ಒತ್ತಾಯಿಸಿದ್ದಾರೆ.

ಇದೀಗ ಎಲಾನ್ ಮಸ್ಕ್ ವಿರುದ್ಧ ತಿರುಗಿ ಬಿದ್ದಿರುವ ಡೊನಾಲ್ಡ್ ಟ್ರಂಪ್, ಮಾನಸಿಕ ಸ್ಥಿಮಿತ ಕಳೆದುಕೊಂಡಿರುವ ವ್ಯಕ್ತಿಯೊಂದಿಗೆ ಮಾತನಾಡಿ ಪ್ರಯೋಜನವಿಲ್ಲ ಎಂದು ತಿರುಗೇಟು ನೀಡಿದ್ದಾರೆ. ಅಲ್ಲದೇ ಒನ್ ಬಿಗ್ ಬ್ಯುಟಿಫುಲ್ ಬಿಲ್ ಬಗ್ಗೆ ನನಗಿಂತಲೂ ಮೊದಲು ಎಲಾನ್ ಮಸ್ಕ್‌ಗೆ ಚೆನ್ನಾಗಿ ಗೊತ್ತಿತ್ತು ಎಂದು ಅಮೆರಿಕದ ಅಧ್ಯಕ್ಷರು ಸ್ಪಷ್ಟಪಡಿಸಿದ್ದಾರೆ.



**ಮಾತುಕತೆ ನಡೆದಿಲ್ಲ ಎಂದ ಟ್ರಂಪ್**

**ಇನ್ನು ಎಲಾನ್ ಮಸ್ಕ್ ಅವರಿಗೆ ದೂರವಾಣಿ ಕರೆ ಮಾಡಿ ಮಾತನಾಡಿರುವ ವದಂತಿಯನ್ನು ತಳ್ಳಿಹಾಕಿರುವ ಡೊನಾಲ್ಡ್ ಟ್ರಂಪ್ ಮಾನಸಿಕ ಸ್ಥಿಮಿತ ಕಳೆದುಕೊಂಡವರೊಂದಿಗೆ ಮಾತನಾಡಿ ಏನು ಪ್ರಯೋಜನ ಎಂದು ಪ್ರಶ್ನಿಸಿದ್ದಾರೆ. ಎಲಾನ್ ಮಸ್ಕ್ ಜೊತೆ ಯಾವುದೇ ಮಾತುಕತೆ ನಡೆದಿಲ್ಲ, ಮಾತುಕತೆಯ ಅವಶ್ಯಕತೆಯೂ ನನಗಿಲ್ಲ ಎಂದು ಡೊನಾಲ್ಡ್ ಟ್ರಂಪ್ ಸ್ಪಷ್ಟಪಡಿಸಿದ್ದಾರೆ.**

ನಾವು ಎಲಾನ್ ಮಸ್ಕ್‌ಗೆ ಒನ್ ಬಿಗ್ ಬ್ಯುಟಿಫಿಲ್ ಬಿಲ್ ಬಗ್ಗೆ ಸಂಪೂರ್ಣ ಮಾಹಿತಿ ನೀಡಿದ್ದೇವು. ಅವರು

**ಇದಕ್ಕೂ ಮೊದಲು ಶ್ವೇತಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಎಲಾನ್ ಮಸ್ಕ್ ಕುರಿತ ಪ್ರಶ್ನೆಗಳಿಗೆ ಉತ್ತರಿಸಲು ನಿರಾಕರಿಸಿದ ಡೊನಾಲ್ಡ್ ಟ್ರಂಪ್, ನಾವಿಬ್ಬರೂ ಉತ್ತಮ ಸ್ನೇಹಿತರು, ಆದರೆ ಈ ಸ್ನೇಹಸಂಬಂಧ ಹೀಗೆಯೇ ಮುಂದುವರೆಯುತ್ತದೆ ಎಂಬ ಖಾತರಿ ನನಗಿಲ್ಲ ಎಂದು ಮಾರ್ಮಿಕವಾಗಿ ಹೇಳಿದ್ದರು.**

ಆಡಳಿತದ ಭಾಗವಾಗಿದ್ದ ಕ್ಷಣದವರೆಗೆ ಈ ಕುರಿತು ಚಕಾರ ಎತ್ತದೇ, ಈಗ ಆಡಳಿತದಿಂದ ಹೊರಹೋಗಿ ಏಕಾಏಕಿ ಮಸೂದೆಯನ್ನು ಟೀಕಿಸುತ್ತಿದ್ದಾರೆ. ಇದು ಅವರ ದ್ವಂದ್ವ ಮತ್ತು ಕಲುಷಿತ ಮಾನಸಿಕತೆಗೆ ಸಾಕ್ಷಿ. ಅಮೆರಿಕದಲ್ಲಿ ಹೊಸ ರಾಜಕೀಯ ಪಕ್ಷ ಕಟ್ಟುವ ಬಗ್ಗೆ ಮಾತನಾಡುವ ವ್ಯಕ್ತಿಯನ್ನು ಹುಚ್ಚ ಎನ್ನಬೇಕಷ್ಟೇ ಎಂದು ಡೊನಾಲ್ಡ್ ಟ್ರಂಪ್ ತೀವ್ರ ವಾಗ್ದಾಳಿ ನಡೆಸಿದ್ದಾರೆ.

ಸದ್ಯ ಡೊನಾಲ್ಡ್ ಟ್ರಂಪ್ ಅವರೊಂದಿಗಿನ ಜಟಾಪಟಿ, ಒನ್ ಬಿಗ್ ಬ್ಯುಟಿಫುಲ್ ಬಿಲ್‌ನಿಂದಾಗಿ ಎಲಾನ್ ಮಸ್ಕ್ ಅವರ ಉದ್ಯಮಕ್ಕೆ ಬರೋಬ್ಬರಿ 150 ಶತಕೋಟಿ ಅಮೆರಿಕನ್ ಡಾಲರ್ ನಷ್ಟವುಂಟಾಗಿದೆ ಎಂದು ಅಂದಾಜಿಸಲಾಗಿದೆ. ಒಟ್ಟಿನಲ್ಲಿ ಹೇಳುವುದಾದರೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತು ಎಲಾನ್ ಮಸ್ಕ್ ನಡುವಿನ ಜಟಾಪಟಿ ಜಾಗತಿಮ ಮಟ್ಟದಲ್ಲಿ ನಗೆಪಾಟಲಿಗೆ ಗುರಿಯಾಗಿದೆ.

# ಮಿನಿ ನ್ಯೂಸ್

## ಬಕ್ರಿದ್ ಹಬ್ಬದ ಶುಭಾಷಯ ಕೋರಿದ ಪ್ರಧಾನಿ ಮೋದಿ

**ನವದೆಹಲಿ:** ಪ್ರಧಾನಿ ನರೇಂದ್ರ, ಮೋದಿ ಈದ್ ಉಲ್-ಅದಾ ಸಂದರ್ಭದಲ್ಲಿ ಜನರಿಗೆ ಬಕ್ರಿದ್ ಹಬ್ಬದ ಶುಭಾಶಯ ಕೋರಿದರು. ಈದ್ ಉಲ್-ಅಝೂ ಹಬ್ಬದ ಶುಭಾಶಯಗಳು. ಈ ಸಂದರ್ಭವು ಸಾಮರಸ್ಯವನ್ನು ಪ್ರೇರೇಪಿಸಲಿ ನಮ್ಮ ಸಮಾಜದಲ್ಲಿ ಶಾಂತಿಯ ರಚನೆಯನ್ನು ಬಲಪಡಿಸಲಿ.

ಎಲ್ಲರಿಗೂ ಉತ್ತಮ ಆರೋಗ್ಯ, ಸಮೃದ್ಧಿಯನ್ನು ಹಾರೈಸುತ್ತೇನೆ ಎಂದು ಅವರು ಎಕ್ಸ್ ಮಾಡಿದ್ದಾರೆ. ಪ್ರಮುಖ ಇಸ್ಲಾಮಿಕ್ ಹಬ್ಬಗಳಲ್ಲಿ ಒಂದಾದ ಇದು, ಅಬ್ರಹಾಮಿಕ್ ಧರ್ಮಗಳಿಂದ ಪ್ರವಾದಿ ಎಂದು ಪರಿಗಣಿಸಲ್ಪಟ್ಟ ಅಬ್ರಹಾಂ ದೇವರ ಆಜ್ಞೆಯನ್ನು ಪಾಲಿಸಲು ತನ್ನ ಮಗನನ್ನು ತ್ಯಾಗ ಮಾಡಲು ಇಚ್ಛಿಸಿದ್ದಕ್ಕಾಗಿ ಸ್ಮರಿಸುತ್ತದೆ.

## ಭದ್ರತಾ ಪಡೆಗಳ ಎನ್‌ಕೌಂಟರ್‌ಗೆ ಐವರು ನಕ್ಸಲರು ಬಲಿ

**ಬಿಜಾಪುರ:** ಛತ್ತೀಸ್‌ಗಢದ ಬಿಜಾಪುರ ಜಿಲ್ಲೆಯ ಇಂದ್ರಾವತಿ ರಾಷ್ಟ್ರೀಯ ಉದ್ಯಾನವನ ಪ್ರದೇಶದಲ್ಲಿ ನಡೆಯುತ್ತಿರುವ ಕಾರ್ಯಾಚರಣೆಯಲ್ಲಿ ಭದ್ರತಾ ಪಡೆಗಳೊಂದಿಗೆ ನಡೆದ ಎರಡು ಪ್ರತ್ಯೇಕ ಎನ್‌ಕೌಂಟರ್‌ಗಳಲ್ಲಿ ಐವರು ನಕ್ಸಲರು ಸಾವನ್ನಪ್ಪಿದ್ದಾರೆ ಎಂದು ಪೊಲೀಸರು ಶನಿವಾರ ತಿಳಿಸಿದ್ದಾರೆ. ಇತ್ತೀಚಿನ ಸಾವುನೋವುಗಳೊಂದಿಗೆ, ಕಳೆದ ಮೂರು ದಿನಗಳಲ್ಲಿ ಉನ್ನತ ನಕ್ಸಲ್ ನಾಯಕರಾದ ಸುಧಾಕರ್, ಭಾಸ್ಕರ್ ಸೇರಿದಂತೆ ಏಳು ನಕ್ಸಲರನ್ನು ತಟಸ್ಥಗೊಳಿಸಲಾಗಿದೆ ಎಂದರು.

ಜಿಲ್ಲೆಯ ಇಂದ್ರಾವತಿ ರಾಷ್ಟ್ರೀಯ ಉದ್ಯಾನವನ ಪ್ರದೇಶದಲ್ಲಿ ನಡೆಯುತ್ತಿರುವ ನಕ್ಸಲ್ ವಿರೋಧಿ ಕಾರ್ಯಾಚರಣೆಯ ಸಮಯದಲ್ಲಿ ಭದ್ರತಾಪಡೆಗಳು ಏಳು ಮಾವೋವಾದಿಗಳ ಶವಗಳನ್ನು ವಶಪಡಿಸಿಕೊಂಡಿವೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಶನಿವಾರ, ಗುಂಡಿನ ಚಕಮಕಿಯ ನಂತರ ಎರಡು ಶವಗಳನ್ನು ವಶಪಡಿಸಿಕೊಳ್ಳಲಾಗಿದೆ. ಆದರೆ ಶುಕ್ರವಾರ ಮಧ್ಯರಾತ್ರಿ ನಡೆದ ಗುಂಡಿನ ಚಕಮಕಿಯ ನಂತರ ಮೂರು ಶವಗಳು ಪತ್ತೆಯಾಗಿವೆ ಎಂದು ಅವರು ಹೇಳಿದ್ದಾರೆ. ರಾಷ್ಟ್ರೀಯ ಉದ್ಯಾನದಲ್ಲಿ ಹಿರಿಯ ನಕ್ಸಲ್ ನಾಯಕರೊಬ್ಬರು ಅಡಗಿರುವ ಮಾಹಿತಿ ಪಡೆದುಕೊಂಡ ಬಳಿಕ ಜಿಲ್ಲಾ ಮೀಸಲು ಪಡೆ ಕೋಬ್ರಾ, ವಿಶೇಷ ಕಾರ್ಯಪಡೆ ಒಳಗೊಂಡ ಜಂಟಿ ತಂಡ ಗುರುವಾರದಿಂದ ಶೋಧ ಕಾರ್ಯಾಚರಣೆ ನಡೆಸುತಿತ್ತು.

## ಹೆದ್ದಾರಿಯಲ್ಲೇ ಹೆಲಿಕಾಪ್ಟರ್ ಭೂಸ್ಪರ್ಶ ಪ್ರಯಾಣಿಕರು ಸುರಕ್ಷಿತ

**ರುದ್ರಪ್ರಯಾಗ:** ಕೇದಾರನಾಥಕ್ಕೆ ತೆರಳುತ್ತಿದ್ದ ಹೆಲಿಕಾಪ್ಟರ್ ಟೇಕ್-ಆಫ್ ಆಗುವಾಗ ತಾಂತ್ರಿಕ ದೋಷ ಕಾಣಿಸಿಕೊಂಡ ಹಿನ್ನೆಲೆಯಲ್ಲಿ ಹೆದ್ದಾರಿಯಲ್ಲೇ ತುರ್ತು ಭೂಸ್ಪರ್ಶ ಮಾಡಿದ ಘಟನೆಯು ಶನಿವಾರ ರುದ್ರ ಪ್ರಯಾಗದಲ್ಲಿ ಜರುಗಿದೆ. ಘಟನೆಯಲ್ಲಿ ಯಾವುದೇ ತೊಂದರೆಯಾಗಿಲ್ಲ. ಎಲ್ಲಾ ಪ್ರಯಾಣಿಕರು, ಪೈಲಟ್ ಸುರಕ್ಷಿತವಾಗಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಹೆಲಿಕಾಪ್ಟರ್ ಹೆದ್ದಾರಿ ಮಧ್ಯದಲ್ಲಿರುವ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವ್ಯಾಪಕವಾಗಿ ಹರಿದಾಡುತ್ತಿದೆ.

ಘಟನೆ ನಡೆದ ಸ್ಥಳದ ಬಳಿಯೇ ದೊಡ್ಡ ಕಟ್ಟಡವಿದ್ದು ಕೂದಲೆಳೆ ಅಂತರದಲ್ಲಿ ದೊಡ್ಡ ಅಪಘಾತ ತಪ್ಪಿದೆ. ಆದರೆ, ಹೆಲಿಕಾಪ್ಟರ್‌ನ ಹಿಂಭಾಗಕ್ಕೆ, ಒಂದು ಕಾರಿಗೆ ಸ್ವಲ್ಪ ಹಾನಿಯಾಗಿದೆ. ಈ ಹೆಲಿಕಾಪ್ಟರ್ ಕೆಸ್ಟೆಲ್ ವಿಮಾನಯಾನ ಸಂಸ್ಥೆಗೆ ಸೇರಿದೆ. ಹೆಲಿಕಾಪ್ಟರ್‌ನಲ್ಲಿ ಪೈಲಟ್ ಸೇರಿದಂತೆ ಆರು ಜನ ಯಾತ್ರಿಕರಿದ್ದರು. ಘಟನೆಯಲ್ಲಿ ಪೈಲಟ್‌ಗೆ ಸ್ವಲ್ಪ ಪ್ರಮಾಣದ ಗಾಯವಾಗಿದ್ದು, ತಕ್ಷಣವೇ ಆಸ್ಪತ್ರೆಗೆ ದಾಖಲಿಸಲಾಗಿದೆ. ಹೆದ್ದಾರಿಯಿಂದ ಹೆಲಿಕಾಪ್ಟರ್ ಸ್ಥಳಾಂತರಿಸಲಾಗುತ್ತಿದ್ದು, ಘಟನೆಯಿಂದ ಕೇದಾರನಾಥ ಹೆಲಿಕಾಪ್ಟರ್ ಸೇವೆಯಲ್ಲಿ ಯಾವುದೇ ವ್ಯತ್ಯಯ ವಾಗುವುದಿಲ್ಲ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

## ಓವೈಸಿ ಹೆಸರಲ್ಲಿ ಹೂಡಿಕೆ ಉತ್ತೇಜಿಸುವ ಡೀಪ್‌ಫೇಕ್ ವಿಡಿಯೋ: ದೂರು ದಾಖಲು

**ಹೈದರಾಬಾದ್:** ಆನ್‌ಲೈನ್ ಹೂಡಿಕೆ ಯೋಜನೆಯನ್ನು ಉತ್ತೇಜಿಸಲು ಸಾಮಾಜಿಕ ಮಾಧ್ಯಮಗಳಲ್ಲಿ ಪ್ರಸಾರವಾಗುತ್ತಿರುವ ತಮ್ಮ ಡೀಪ್‌ಫೇಕ್ ವಿಡಿಯೋ ವಿರುದ್ಧ ಎಐಎಂಐಎಂ ಅಧ್ಯಕ್ಷ ಅಸಾದುದ್ದೀನ್ ಓವೈಸಿ ನಗರ ಪೊಲೀಸರಿಗೆ ದೂರು ನೀಡಿದ್ದಾರೆ. ಎಐ- ಸೃಷ್ಟಿಸಿದ ನಕಲಿ ವಿಡಿಯೊದಲ್ಲಿ ಓವೈಸಿ ಅವರ ಚಿತ್ರ, ಹೆಸರು ಜೊತೆಗೆ ಇತರ ಪ್ರಸಿದ್ಧ ವ್ಯಕ್ತಿಗಳ ಚಿತ್ರಗಳನ್ನು ಬಳಸಲಾಗಿದೆ. ಅವರೆಲ್ಲರೂ ಹೂಡಿಕೆಯ ಬಗ್ಗೆ ಪ್ರಚಾರ ಮಾಡುತ್ತಿದ್ದಾರೆ ಎಂದು ಸಾರ್ವಜನಿಕರು ನಂಬುವಂತೆ ದಾರಿ ತಪ್ಪಿಸಲಾಗಿದೆ. ಈ ನಕಲಿ ವಿಡಿಯೊದಲ್ಲಿ ಪ್ರತಿದಿನ 53,000 ಲಾಭದ ಭರವಸೆ ನೀಡಲಾಗಿದೆ ಎಂದು ಪೊಲೀಸರು ಶನಿವಾರ ತಿಳಿಸಿದ್ದಾರೆ. ಈ ವಿಡಿಯೋದಲ್ಲಿ ಜನರಿಗೆ ವೆಬ್‌ಸೈಟ್‌ನಲ್ಲಿ ಹೂಡಿಕೆ ಮಾಡುವಂತೆ ನಿರ್ದೇಶಿಸಲಾಗುತ್ತಿದೆ.

ಇದರಿಂದಾಗಿ ಮುಗ್ಧ ಜನರು ಹಣ ಕಳೆದುಕೊಳ್ಳುವ ಅಪಾಯವಿದೆ ಎಂದು ಓವೈಸಿ ಪೊಲೀಸರಿಗೆ ಸಲ್ಲಿಸಿದ ದೂರಿನಲ್ಲಿ ತಿಳಿಸಿದ್ದಾರೆ. ಮುಗ್ಧ ಜನರನ್ನು ಆಕರ್ಷಿಸಲು, ನನ್ನ ಹೆಸರಿನಲ್ಲಿ ಸುಳ್ಳು ಪ್ರಚಾರ ಮಾಡುವ ದುರುದ್ದೇಶದಿಂದ ಈ ವಿಡಿಯೊವನ್ನು ರಚಿಸಿ ಅಪ್‌ಲೋಡ್ ಮಾಡಲಾಗಿದೆ ಎಂದು ಓವೈಸಿ ದೂರಿನಲ್ಲಿ ಉಲ್ಲೇಖಿಸಿದ್ದಾರೆ.

ಈ ವಿಡಿಯೊದಲ್ಲಿ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್, ಕೈಗಾರಿಕೋದ್ಯಮಿ ಮುಖೇಶ್ ಅಂಬಾನಿ, ಇನ್ಫೋಸಿಸ್ ಸಂಸ್ಥಾಪಕ ನಾರಾಯಣ ಮೂರ್ತಿ ಅವರ ಕೃತಕ ಬುದ್ಧಿಮತ್ತೆ ಆಧಾರಿತ ಕ್ಲಿಪ್‌ಗಳನ್ನೂ ಸೇರಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ವಿಡಿಯೋದ ಮೂಲವನ್ನು ಪತ್ತೆಹಚ್ಚಲು ಪ್ರಸಾರವಾಗುತ್ತಿರುವ ವಿಡಿಯೋವನ್ನು ತೆಗೆದುಹಾಕಲು ವಿವಿಧ ಸಾಮಾಜಿಕ ಮಾಧ್ಯಮಗಳಿಗೆ ನಿರ್ದೇಶನ ನೀಡುವಂತೆ ಓವೈಸಿ ಪೊಲೀಸರಲ್ಲಿ ಮನವಿ ಮಾಡಿದ್ದಾರೆ.

## ಕೀವ್ ಮೇಲೆ ರಷ್ಯಾ ದಾಳಿ: 3 ಸಾವು

**ಕೀವ್ :** ಉಕ್ರೇನ್‌ನ ಆರು ಪ್ರಾಂತ್ಯಗಳ ಮೇಲೆ ರಷ್ಯಾದಿಂದ ಡ್ರೋನ್, ಕ್ಷಿಪಣಿ ದಾಳಿ ನಡೆದಿದೆ ಎಂದು ಉಕ್ರೇನ್‌ನ ಅಧಿಕಾರಿಗಳು ಶುಕ್ರವಾರ ತಿಳಿಸಿದ್ದಾರೆ.ಸುಮಾರು ನಾಲ್ಕು ಗಂಟೆಗೂ ಹೆಚ್ಚು ಹೊತ್ತು ನಡೆದ ದಾಳಿಯಲ್ಲಿ ಕೀವ್‌ನಲ್ಲಿ ತುರ್ತು ಸ್ಪಂದನಾ ತಂಡದ ಮೂವರು ಮೃತಪಟ್ಟಿದ್ದಾರೆ ಎಂದು ಹೇಳಿದ್ದಾರೆ. ರಷ್ಯಾ ಸೇನೆಯು 407 ಡ್ರೋನ್‌ಗಳು, 44 ಕ್ಷಿಪಣಿಗಳನ್ನು ಹಾರಿಸಿದೆ. ಅದರಲ್ಲಿ ಸುಮಾರು 200 ಡ್ರೋನ್‌ಗಳು, 30 ಕ್ಷಿಪಣಿಗಳನ್ನು ಉಕ್ರೇನ್ ಪಡೆಗಳು ಹೊಡೆದುರುಳಿಸಿವೆ ಎಂದು ಸೇನೆಯ ವಕ್ತಾರ ಯೂರಿ ಇನಾತ್ ತಿಳಿಸಿದ್ದಾರೆ. ಇದಕ್ಕೆ ಪ್ರತಿಯಾಗಿ, ಮಾಸ್ಕೊ ಸೇರಿದಂತೆ ವಿವಿಧ ಪ್ರದೇಶಗಳನ್ನು ಗುರಿಯಾಗಿಸಿ ಉಕ್ರೇನ್ ಸೇನೆ ಶುಕ್ರವಾರ ಬೆಳಿಗ್ಗೆ ಡ್ರೋನ್ ದಾಳಿ ನಡೆಸಿದೆ. ಮಾಸ್ಕೊ ಕಡೆ ಬರುತ್ತಿದ್ದ 10 ಡ್ರೋನ್‌ಗಳು ಒಳಗೊಂಡಂತೆ ಒಟ್ಟು 174 ಡ್ರೋನ್‌ಗಳನ್ನು ಹೊಡೆದುರುಳಿಸಿದ್ದೇವೆ ಎಂದು ರಷ್ಯಾದ ರಕ್ಷಣಾ ಸಚಿವಾಲಯ ತಿಳಿಸಿದೆ.

# ಭಾರತದೊಂದಿಗೆ ಅಮೆರಿಕ ಬಲವಾಗಿ ನಿಂತಿದೆ

**ವಾಷಿಂಗ್ಟನ್:** ಭಯೋತ್ಪಾದನೆ ವಿರುದ್ಧದ ಹೋರಾಟದಲ್ಲಿ ಭಾರತದೊಂದಿಗೆ ಅಮೆರಿಕ ಬಲವಾಗಿ ನಿಂತಿದೆ ಎಂದು ಅಮೆರಿಕದ ವಿದೇಶಾಂಗ ಉಪ ಕಾರ್ಯದರ್ಶಿ ಕ್ರಿಸ್ಟೋಫರ್ ಲ್ಯಾಂಡ್ ಕಾಂಗ್ರೆಸ್ ಸಂಸದ ಶಶಿ ತರೂರ್ ನೇತೃತ್ವದ ಸರ್ವಪಕ್ಷ ನಿಯೋಗಕ್ಕೆ ಭರವಸೆ ನೀಡಿದ್ದಾರೆ. ತರೂರ್ ನೇತೃತ್ವದ ನಿಯೋಗ ಇಲ್ಲಿ ಲ್ಯಾಂಡ್ ಅವರನ್ನು ಭೇಟಿ ಮಾಡಿ, ಏಪ್ರಿಲ್ 22 ರಂದು 26 ಜೀವಗಳನ್ನು ಬಲಿ ಪಡೆದ ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ ಪಾಕಿಸ್ತಾನ ಮತ್ತು ಪಾಕಿಸ್ತಾನ ಆಕ್ರಮಿತ ಕಾಶ್ಮೀರದಲ್ಲಿ ಭಯೋತ್ಪಾದಕ ಮೂಲಸೌಕರ್ಯವನ್ನು ಗುರಿಯಾಗಿಸಿಕೊಂಡು ನಡೆಸಲಾದ ಆಪರೇಷನ್ ಸಿಂಧೂರ್ ಬಗ್ಗೆ ಪ್ರಮುಖ ಸಂವಾದಕರಿಗೆ ವಿವರಿಸಿತು. ಪಹಲ್ಗಾಮ್ ಭಯೋತ್ಪಾದಕ ದಾಳಿ, ಆಪರೇಷನ್ ಸಿಂಧೂರ್‌ನ ದೌರ್ಜನ್ಯಗಳ ಬಗ್ಗೆ ಭಾರತೀಯ ನಿಯೋಗವು ಅವರಿಗೆ ವಿವರಿಸಿತು ಎಂದು ಭಾರತೀಯ ರಾಯಭಾರ ಕಚೇರಿ ಎಕ್ಸ್‌ನಲ್ಲಿ ತಿಳಿಸಿದೆ. ಲ್ಯಾಂಡೌ ಅವರು ಎಕ್ಸ್‌ನ ಪೋಸ್ಟ್‌ನಲ್ಲಿ, ಇದು ಭಾರತೀಯ ಸಂಸದೀಯ ಪ್ರತಿನಿಧಿಗಳೊಂದಿಗೆ ಮಹಾನ್ ಸಭೆ ಎಂದು ಹೇಳಿದರು.



ಭಯೋತ್ಪಾದನೆ ವಿರುದ್ಧದ ಹೋರಾಟದಲ್ಲಿ ಭಾರತದೊಂದಿಗೆ ಅಮೆರಿಕ ಬಲವಾಗಿ ನಿಲ್ಲುತ್ತದೆ ಎಂದು ನಾನು ಪುನರುಚ್ಚರಿಸಿದ್ದೇನೆ. ಎರಡೂ ದೇಶಗಳ ಬೆಳವಣಿಗೆ, ಸಮೃದ್ಧಿಯನ್ನು ಉತ್ತೇಜಿಸಲು ವ್ಯಾಪಾರ, ವಾಣಿಜ್ಯ ಸಂಬಂಧಗಳನ್ನು ವಿಸ್ತರಿಸುವುದು ಸೇರಿದಂತೆ ಅಮೆರಿಕ-ಭಾರತ ಕಾರ್ಯತಂತ್ರದ ಸಂಬಂಧದ ಕುರಿತು ನಾವು ಚರ್ಚಿಸಿದ್ದೇವೆ ಎಂದು ಅವರು ಹೇಳಿದರು.

ಉಭಯ ದೇಶಗಳಲ್ಲಿ ಆರ್ಥಿಕ ಬೆಳವಣಿಗೆ, ಸಮೃದ್ಧಿಯನ್ನು ಉತ್ತೇಜಿಸಲು ವ್ಯಾಪಾರ ಮತ್ತು ವಾಣಿಜ್ಯ ಸಂಬಂಧಗಳನ್ನು ವಿಸ್ತರಿಸುವುದು ಸೇರಿದಂತೆ ದ್ವಿಪಕ್ಷೀಯ ಸಂಬಂಧದ ಪ್ರಮುಖ ಕ್ಷೇತ್ರಗಳನ್ನು ಮುನ್ನಡೆಸುವ ಮಹತ್ವವನ್ನು ನಿಯೋಗವು ಲ್ಯಾಂಡೌ ಅವರೊಂದಿಗೆ ಚರ್ಚಿಸಿದೆ

**ವಿದೇಶಾಂಗ ಇಲಾಖೆಯ ವಕ್ತಾರ ಟ್ಯಾಮಿ ಬ್ರೂಸ್ ಬಿಡುಗಡೆ ಮಾಡಿದ ಹೇಳಿಕೆಯಲ್ಲಿ, ಲ್ಯಾಂಡೌ ಭಯೋತ್ಪಾದನೆ ವಿರುದ್ಧದ ಹೋರಾಟದಲ್ಲಿ ಭಾರತಕ್ಕೆ ಅಮೆರಿಕವು ಬಲವಾದ ಬೆಂಬಲವನ್ನು, ಎರಡೂ ದೇಶಗಳ ನಡುವಿನ ಕಾರ್ಯತಂತ್ರದ ಪಾಲುದಾರಿಕೆಯನ್ನು ಪುನರುಚ್ಚರಿಸಿದ್ದಾರೆ ಎಂದರು.**

ಎಂದು ಹೇಳಿಕೆಯಲ್ಲಿ ತಿಳಿಸಲಾಗಿದೆ.

ನಿಯೋಗವು ಯುಎಸ್ ಸೆನೆಟ್ ವಿದೇಶಾಂಗ ಸಂಬಂಧಗಳ ಸಮಿತಿಯ ಸದಸ್ಯ ಸೆನೆಟರ್ ಕ್ರಿಸ್ ವ್ಯಾನ್ ಹೊಲೆನ್ ಅವರೊಂದಿಗೆ ಉತ್ಪಾದಕ ಸಭೆ ನಡೆಸಿತು. ಪಹಲ್ಗಾಮ್ ನಲ್ಲಿ ನಡೆದ ಘೋರ ಭಯೋತ್ಪಾದಕ ದಾಳಿಯ ಬಗ್ಗೆ ನಿಯೋಗವು ಅವರಿಗೆ ವಿವರಿಸಿತು. ಭಾರತದ ನಂತರದ ಆಪರೇಷನ್ ಸಿಂಧೂರ್ ಬಗ್ಗೆ ಚರ್ಚಿಸಿತು, ಎಲ್ಲಾ ರೀತಿಯ ಗಡಿಯಾಚೆಗಿನ ಭಯೋತ್ಪಾದನೆಯನ್ನು ಅದರ ಎಲ್ಲಾ ರೂಪಗಳಲ್ಲಿ ಎದುರಿಸಲು ಭಾರತದ ದೃಢ ಸಂಕಲ್ಪವನ್ನು ಮುಂದಿಟ್ಟಿತು ಎಂದು ರಾಯಭಾರ ಕಚೇರಿ ಎಕ್ಸ್‌ನಲ್ಲಿ ತಿಳಿಸಿದೆ.

# ಪಹಲ್ಗಾಮ್ ಉಗ್ರರ ದಾಳಿಯನ್ನು ಖಂಡಿಸಿದ ಬ್ರಿಕ್ಸ್

**ನವದೆಹಲಿ:** ಭಾರತ, ಚೀನಾ, ಬ್ರೆಜಿಲ್, ರಷ್ಯಾ ಒಳಗೊಂಡಿರುವ ಬ್ರಿಕ್ಸ್ ಒಕ್ಕೂಟದ 10 ರಾಷ್ಟ್ರಗಳು ಪಹಲ್ಗಾಮ್ ಭಯೋತ್ಪಾದಕ ದಾಳಿಯನ್ನು ಖಂಡಿಸಿವೆ. ಅಲ್ಲದೇ ಭಯೋತ್ಪಾದನೆ ವಿರುದ್ಧ ಒಗ್ಗಟ್ಟಾಗಿ ಹೋರಾಡಲು ನಿರ್ಧರಿಸಿ ಭಾರತಕ್ಕೆ ಬೆಂಬಲ ಸೂಚಿಸಿವೆ. ಭಾರತ ಸೇರಿದಂತೆ 10 ಬ್ರಿಕ್ಸ್ ಸದಸ್ಯ ರಾಷ್ಟ್ರಗಳ ಸಂಸತ್ ಪ್ರತಿನಿಧಿಗಳು ಬ್ರೆಸಿಲಿಯಾದಲ್ಲಿ ನಡೆದ 11ನೇ ವಾರ್ಷಿಕ ಸಭೆಯಲ್ಲಿ ಭಾಗವಹಿಸಿದ್ದರು. ಬ್ರಿಕ್ಸ್ ಸಂಸದೀಯ ವೇದಿಕೆಯಲ್ಲಿ ಭಾರತ, ಬ್ರೆಜಿಲ್, ರಷ್ಯಾ, ಚೀನಾ, ದಕ್ಷಿಣ ಆಫ್ರಿಕಾ, ಇರಾನ್, ಯುನೈಟೆಡ್ ಅರಬ್ ಎಮಿರೇಟ್ಸ್, ಈಜಿಪ್ಟ್, ಇಥಿಯೋಪಿಯಾ, ಇಂಡೋನೇಷ್ಯಾ ಸಂಸತ್ ಪ್ರತಿನಿಧಿಗಳು ಪಾಲ್ಗೊಂಡಿದ್ದರು.

ಕಾನೂನು ಪ್ರಕ್ರಿಯೆಗೆ ಸಹಕರಿಸುವುದು ಸೇರಿದಂತೆ ಹಲವು ವಿಚಾರಗಳ ಬಗ್ಗೆ ಭಾರತದ ನಿಯೋಗವು ಬಲವಾಗಿ ಪ್ರತಿಪಾದಿಸಿತು. ಹಲವು ಸುತ್ತಿನ ಮಾತುಕತೆ ಬಳಿಕ ಸದಸ್ಯ ರಾಷ್ಟ್ರಗಳು ಪಹಲ್ಗಾಮ್ ದಾಳಿಯನ್ನು ಖಂಡಿಸಿದವು ಮತ್ತು ಭಯೋತ್ಪಾದನೆ ನಿಗ್ರಹದ ಅಗತ್ಯತೆ ಬಗ್ಗೆ ಒತ್ತಿ ಹೇಳಿದವು. ಜೊತೆಗೆ ಕೃತಕ ಬುದ್ಧಿಮತ್ತೆ, ಜಾಗತಿಕ ವ್ಯಾಪಾರ, ಆರ್ಥಿಕತೆ, ಅಂತರ್ ಸಂಸದೀಯ ಸಹಕಾರ, ಜಾಗತಿಕ ಶಾಂತಿ ಮತ್ತು ಭದ್ರತೆಯಂತಹ ಪ್ರಮುಖ ವಿಷಯಗಳಿಗೆ ಒಮ್ಮತ ಸೂಚಿಸುವ ಬಗ್ಗೆಯೂ ಚರ್ಚಿಸಲಾಯಿತು. ಸಭೆಯಲ್ಲಿ ಬ್ರೆಜಿಲ್, ರಷ್ಯಾ, ಚೀನಾ, ದಕ್ಷಿಣ ಆಫ್ರಿಕಾ, ಇರಾನ್, ಸಂಯುಕ್ತ ಅರಬ್ ಸಂಸ್ಥಾನದ ಪ್ರತಿನಿಧಿಗಳು ಭಾಗಿಯಾಗಿದ್ದರು. ಅಲ್ಲದೇ




**ಇದೇ ಸಭೆಯಲ್ಲಿ ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಅವರ ನೇತೃತ್ವದ ಭಾರತೀಯ ಸಂಸದೀಯ ನಿಯೋಗವು ಬ್ರೆಸಿಲಿಯಾದಲ್ಲಿ ನಡೆದ ಸಭೆಯಲ್ಲಿ ಭಾಗಿಯಾಗಿ, ಭಯೋತ್ಪಾದನೆ ವಿರುದ್ಧ ಭಾರತದ ಹೋರಾಟವನ್ನು ಪ್ರತಿಪಾದಿಸಿತು. ಭಯೋತ್ಪಾದಕ ಸಂಘಟನೆಗಳಿಗೆ ಹಣಕಾಸಿನ ನೆರವನ್ನು ಕಡಿತಗೊಳಿಸುವುದು, ಗುಪ್ತಚರ ಮಾಹಿತಿಯನ್ನು ಹಂಚಿಕೊಳ್ಳುವುದು, ಆಧುನಿಕ ತಂತ್ರಜ್ಞಾನಗಳ ದುರ್ಬಳಕೆ ನಿಯಂತ್ರಿಸುವುದು.**

ಮುಂದಿನ ಬ್ರಿಕ್ಸ್ ಸಭೆಯು ಭಾರತದಲ್ಲಿ ನಡೆಯಲಿದ್ದು, ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಅವರನ್ನೇ ಅಧ್ಯಕ್ಷರನ್ನಾಗಿ ನೇಮಿಸಲಾಗಿದೆ.

# ಭಾರತದಲ್ಲಿ ಕಡಿಮೆಯಾಗುತ್ತಿದೆ ಕಡುಬಡವರ ಸಂಖ್ಯೆ: ವಿಶ್ವಬ್ಯಾಂಕ್

**ನವದೆಹಲಿ:** ದೇಶದಲ್ಲಿ ತೀವ್ರ ಬಡತನದ ಪ್ರಮಾಣ ಕಡಿಮೆಯಾಗಿದೆ. 2011-12ರಲ್ಲಿ ಇದ್ದ ಶೇ.27.1 ರ ಪ್ರಮಾಣ 2022-23ರಲ್ಲಿ ಶೇ.5.3 ಕ್ಕೆ ಇಳಿದಿದೆ ಎಂದು ವಿಶ್ವಬ್ಯಾಂಕ್‌ನ ಇತ್ತೀಚಿನ ದತ್ತಾಂಶವು ಬಹಿರಂಗಪಡಿಸಿದೆ. 2022-23ರ ಅವಧಿಯಲ್ಲಿ ಭಾರತದಲ್ಲಿ ಸುಮಾರು 75.24 ಮಿಲಿಯನ್ ಜನರು ತೀವ್ರ ಬಡತನದಲ್ಲಿ ವಾಸಿಸುತ್ತಿದ್ದರು, ಇದು 2011-12ರಲ್ಲಿ 344.47 ಮಿಲಿಯನ್ನಿಂದ ಭಾರಿ ಕುಸಿತವಾಗಿದೆ.ವಿಶ್ವಬ್ಯಾಂಕ್ ದತ್ತಾಂಶದ ಪ್ರಕಾರ, ಇದರರ್ಥ ಸುಮಾರು 11 ವರ್ಷಗಳಲ್ಲಿ 269 ಮಿಲಿಯನ್ ವ್ಯಕ್ತಿಗಳನ್ನು ತೀವ್ರ ಬಡತನದಿಂದ ಮೇಲಕ್ಕೆತ್ತಲಾಗಿದೆ. 2011-12ರಲ್ಲಿ ಭಾರತದ ತೀವ್ರ ಬಡವರಲ್ಲಿ ಒಟ್ಟಾರೆಯಾಗಿ ಶೇಕಡಾ 65 ರಷ್ಟಿದ್ದ ಉತ್ತರ ಪ್ರದೇಶ, ಮಹಾರಾಷ್ಟ್ರ, ಬಿಹಾರ, ಪಶ್ಚಿಮ ಬಂಗಾಳ, ಮಧ್ಯಪ್ರದೇಶಗಳು 2022-23ರ ವೇಳೆಗೆ ಒಟ್ಟಾರೆ ತೀವ್ರ ಬಡತನದ ಕುಸಿತದ ಮೂರನೇ



ಎರಡರಷ್ಟು ಕೊಡುಗೆ ನೀಡಿವೆ. ಸಂಪೂರ್ಣವಾಗಿ ಹೇಳುವುದಾದರೆ, ತೀವ್ರ ಬಡತನದಲ್ಲಿ ವಾಸಿಸುವ ಜನರು 344.47 ಮಿಲಿಯನ್‌ನಿಂದ ಕೇವಲ 75.24 ಮಿಲಿಯನ್‌ಗೆ ಇಳಿದಿದ್ದಾರೆ ಎಂದು ವಿಶ್ವ ಬ್ಯಾಂಕಿನ ಇತ್ತೀಚಿನ ಡೇಟಾವನ್ನು ತೋರಿಸಲಾಗಿದೆ.ಅಂತರರಾಷ್ಟ್ರೀಯ ಬಡತನ ರೇಖೆಗೆ ದಿನಕ್ಕೆ 3.00 ಆಧರಿಸಿದ ವಿಶ್ವ ಬ್ಯಾಂಕಿನ ಮೌಲ್ಯಮಾಪನವು ಗ್ರಾಮೀಣ, ನಗರ ಪ್ರದೇಶಗಳಲ್ಲಿ ವಿಶಾಲ ಆಧಾರಿತ ಕಡಿತವನ್ನು ತೋರಿಸುತ್ತದೆ. 2.15 ದೈನಂದಿನ ಬಳಕೆಯಲ್ಲಿ 2017ರ ಬೆಲೆಗಳನ್ನು ಆಧರಿಸಿದ ಹಿಂದಿನ ಬಡತನ ರೇಖೆ ತೀವ್ರ ಬಡತನದಲ್ಲಿ ವಾಸಿಸುವ ಭಾರತೀಯರ ಪಾಲು 2.3 ಪ್ರತಿಶತದಷ್ಟಿದೆ, ಇದು ವಿಶ್ವ ಬ್ಯಾಂಕಿನ ಅಂದಾಜಿನ ಪ್ರಕಾರ 2011-12 ರಲ್ಲಿ ಶೇ. 16.2 ಕ್ಕಿಂತ ಗಮನಾರ್ಹವಾಗಿ ಕಡಿಮೆಯಾಗಿದೆ. ದಿನಕ್ಕೆ 2.15 ಬಡತನ ರೇಖೆಗಿಂತ ಕೆಳಗೆ ವಾಸಿಸುವ ಜನರ ಸಂಖ್ಯೆ 2022 ರಲ್ಲಿ 33.66 ಮಿಲಿಯನ್‌ಗೆ ದಾಖಲಾಗಿದೆ, ಇದು ಇತ್ತೀಚಿನ ಡೇಟಾದ ಪ್ರಕಾರ 2011 ರಲ್ಲಿ 205.93 ಮಿಲಿಯನ್ ಆಗಿತ್ತು. ಕಳೆದ 11 ವರ್ಷಗಳಲ್ಲಿ ಗ್ರಾಮೀಣ ತೀವ್ರ ಬಡತನವು ಶೇಕಡಾ 18.4 ರಿಂದ ಶೇ.2.8 ಕ್ಕೆ ಮತ್ತು ನಗರ ತೀವ್ರ ಬಡತನವು ಶೇ.10.7 ರಿಂದ ಶೇ. 1.1 ಕ್ಕೆ ಇಳಿದಿದ್ದು, ಈ ತೀವ್ರ ಕುಸಿತವನ್ನು ಏಕರೂಪವಾಗಿ ಗಮನಿಸಲಾಗಿದೆ ಎಂದು ದತ್ತಾಂಶವು ತೋರಿಸಿದೆ. ಇದಲ್ಲದೆ, ಬಹು ಆಯಾಮದ ಬಡತನವನ್ನು ಕಡಿಮೆ ಮಾಡುವಲ್ಲಿ ಭಾರತವು ಗಮನಾರ್ಹ ಪ್ರಗತಿಯನ್ನು ಸಾಧಿಸಿದೆ. ಬಹು ಆಯಾಮದ ಬಡತನ ಸೂಚ್ಯಂಕ 2005-06 ರಲ್ಲಿ ಶೇಕಡಾ 53.8 ರಿಂದ 2019-21 ರ ವೇಳೆಗೆ ಶೇಕಡಾ 16.4 ಕ್ಕೆ ಇಳಿದಿದೆ ಮತ್ತು 2022-23 ರಲ್ಲಿ ಶೇಕಡಾ 15.5 ಕ್ಕೆ ಇಳಿದಿದೆ ಎಂದು ದತ್ತಾಂಶವು ತಿಳಿಸಿದೆ. ಕೇಂದ್ರದಲ್ಲಿ ಬಿಜೆಪಿ ನೇತೃತ್ವದ ಎನ್‌ಡಿಎ ಸರ್ಕಾರವು 11 ವರ್ಷಗಳನ್ನು ಪೂರೈಸುತ್ತಿರುವಾಗ, ಬಡತನದಿಂದ ಜನರನ್ನು ಮೇಲಕ್ಕೆತ್ತಲು ಕೇಂದ್ರವು ತೆಗೆದುಕೊಂಡಿರುವ ಮಹತ್ವದ ಕ್ರಮಗಳನ್ನು ಮತ್ತು ಸಬಲೀಕರಣ, ಮೂಲಸೌಕರ್ಯ ಮತ್ತು ನೇರ್ಪಡೆಯ ಮೇಲೆ ಅದರ ಗಮನವನ್ನು ಪ್ರಧಾನಿ ಮೋದಿ ಎತ್ತಿ ತೋರಿಸಿದ್ದಾರೆ.

ಪ್ರಧಾನ ಮಂತ್ರಿ ಆವಾಸ್ ಯೋಜನೆ, ಪ್ರಧಾನ ಮಂತ್ರಿ ಉಜ್ವಲ ಯೋಜನೆ, ಜನ್ ಧನ್ ಯೋಜನೆ, ಆಯುಷ್ಮಾನ್ ಭಾರತ್ ನಂತಹ ಉಪಕ್ರಮಗಳು ವಸತಿ, ಶುದ್ಧ ಅಡುಗೆ ಇಂಧನ, ಬ್ಯಾಂಕಿಂಗ್ ಮತ್ತು ಆರೋಗ್ಯ ರಕ್ಷಣೆಗೆ ಪ್ರವೇಶವನ್ನು ಹೆಚ್ಚಿಸಿವೆ. ನೇರ ಪ್ರಯೋಜನ ವರ್ಗಾವಣೆ, ಡಿಜಿಟಲ್ ಸೇರ್ಪಡೆ ಮತ್ತು ಬಲಿಷ್ಠ ಗ್ರಾಮೀಣ ಮೂಲಸೌಕರ್ಯಗಳು ಪಾರದರ್ಶಕತೆ ಮತ್ತು ಕೊನೆಯ ಹಂತದವರೆಗೆ ಪ್ರಯೋಜನಗಳ ತ್ವರಿತ ವಿತರಣೆಯನ್ನು ಖಚಿತಪಡಿಸಿವೆ. 25 ಕೋಟಿಗೂ ಹೆಚ್ಚು ಜನರು ಬಡತನವನ್ನು ಹೋಗಲಾಡಿಸಲು ಸಹಾಯ ಮಾಡಿದೆ.

# ಭಾರತ-ಪಾಕ್ ಕದನ ವಿರಾಮ: ಟ್ರಂಪ್‌ಗೆ ಕ್ರೆಡಿಟ್

**ಮಾಸ್ಕೋ:** ಭಾರತ, ಪಾಕಿಸ್ತಾನದ ನಡುವೆ ಕದನ ವಿರಾಮ ಒಪ್ಪಂದ ವಿಷಯದಲ್ಲಿ ಟ್ರಂಪ್ ಮಧ್ಯಸ್ಥಿಕೆ ವಹಿಸಿದ್ದಾರೆ ಎಂಬ ಹೇಳಿಕೆಯನ್ನು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರ ಸಹಾಯಕ ಯೂರಿ ಉಶಕೋವ್ ಅನುಮೋದಿಸಿದ್ದಾರೆ. ಇತ್ತೀಚಿಗಿನ ಟ್ರಂಪ್, ವ್ಲಾಡಿಮಿರ್ ಪುಟಿನ್ ನಡುವಿನ ದೂರವಾಣಿ ಮಾತುಕತೆಯಲ್ಲಿ ಭಾರತ- ಪಾಕಿಸ್ತಾನ ನಡುವಿನ ಉದ್ವಿಗ್ನತೆ ಶಮನದಲ್ಲಿ, ಟ್ರಂಪ್ ವೈಯಕ್ತಿಕವಾಗಿ ತೊಡಗಿಸಿಕೊಂಡಿದ್ದರ ಕುರಿತು ಚರ್ಚಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಮಧ್ಯ ಪ್ರಾಚ್ಯ ರಾಷ್ಟ್ರಗಳ ಕುರಿತು ಚರ್ಚಿಸಿದ ಜೊತೆಗೆ ಭಾರತ, ಪಾಕಿಸ್ತಾನ ನಡುವಿನ ಸಶಸ್ತ್ರ ಸಂಘರ್ಷವನ್ನು ಅಧ್ಯಕ್ಷ ಟ್ರಂಪ್ ಅವರ ಮಧ್ಯಸ್ಥಿಕೆಯಿಂದ ಸ್ಥಗಿತಗೊಳಿಸಲಾಗಿದೆ ಎಂದು ಅವರು ಹೇಳಿದರು. ಭಾರತ, ಪಾಕಿಸ್ತಾನದ ಮಿಲಿಟರಿ ಕಾರ್ಯಾಚರಣೆಗಳ ಮಹಾನಿರ್ದೇಶಕರು ಮಾತುಕತೆ ಮೂಲಕ ಕದನ ವಿರಾಮ ಒಪ್ಪಂದಕ್ಕೆ ಸಮ್ಮತಿ ನೀಡಿದ್ದಾರೆ. ಯಾವುದೇ ಮೂರನೇ ವ್ಯಕ್ತಿ ಭಾಗಿಯಾಗಿಲ್ಲ ಎಂದು ಭಾರತ



ಸರ್ಕಾರದ ಮೂಲಗಳು ಹೇಳಿವೆ. ಭಾರತ, ಪಾಕಿಸ್ತಾನದ ನಡುವಿನ ಉದ್ವಿಗ್ನತೆ ಶಮನಕ್ಕೆ ನಾನು ನೆರವಾಗಿದ್ದೇನೆ. ಸಂಘರ್ಷ ನಿಲ್ಲಿಸಿದರೆ ಮಾತ್ರ ಅವರೊಂದಿಗೆ ಸಾಕಷ್ಟು ವ್ಯಾಪಾರ-ವಹಿವಾಟು ನಡೆಸಲಿದೆ ಅಮೆರಿಕ ಹೇಳಿರುವುದಾಗಿ ಟ್ರಂಪ್ ಪದೇ ಪದೇ ಹೇಳುತ್ತಿದ್ದರು. ಏ. 22 ರಂದು ಜಮ್ಮು, ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯಲ್ಲಿ 26 ನಾಗರಿಕರು ಉಗ್ರರ ಗುಂಡಿಗೆ ಬಲಿಯಾದ ನಂತರ ಪಾಕಿಸ್ತಾನ, ಪಾಕ್ ಆಕ್ರಮಿತ ಕಾಶ್ಮೀರದಲ್ಲಿ ಭಯೋತ್ಪಾದಕ ಮೂಲ ಸೌಕರ್ಯವನ್ನು ಗುರಿಯಾಗಿಟ್ಟುಕೊಂಡು ಭಾರತ ಆಪರೇಷನ್ ಸಿಂಧೂರ್‌ಅನ್ನು ಪ್ರಾರಂಭಿಸಿತ್ತು.

# ಏಪ್ರಿಲ್‌ನಲ್ಲಿ ರಾಷ್ಟ್ರೀಯ ಚುನಾವಣೆ: ಮೊಹಮ್ಮದ್ ಯೂನಸ್ ಘೋಷಣೆ

**ಢಾಕಾ:** ಬಾಂಗ್ಲಾದೇಶದಲ್ಲಿ ಸಾರ್ವತ್ರಿಕ ಚುನಾವಣೆಗಳು 2026ರ ಏ.ಮಧ್ಯಭಾಗದಲ್ಲಿ ನಡೆಸಲಾಗುವುದು ಎಂದು ಮಧ್ಯಂತರ ಸರ್ಕಾರದ ಮುಖ್ಯ ಸಲಹೆಗಾರ ಮೊಹಮ್ಮದ್ ಯೂನಸ್ ಘೋಷಿಸಿದ್ದಾರೆ ಈದ್-ಉಲ್-ಅಝೂ ಮುನ್ನಾದಿನದಂದು ರಾಷ್ಟ್ರೀಯವಾಗಿ ದೂರದರ್ಶನದಲ್ಲಿ ಭಾಷಣ ಮಾಡಿದ ಮುಹಮ್ಮದ್ ಯೂನಸ್, ಚುನಾವಣಾ ಆಯೋಗವು ಶೀಘ್ರದಲ್ಲೇ ವಿವರವಾದ ಮಾರ್ಗಸೂಚಿ ಪ್ರಕಟಿಸಲಿದೆ ಎಂದಿದ್ದಾರೆ. ದೇಶದ ಇತಿಹಾಸದಲ್ಲಿ ಅತ್ಯಂತ ಮುಕ್ತ, ನ್ಯಾಯ ಯುತ, ಸ್ಪರ್ಧಾತ್ಮಕ, ಸ್ವೀಕಾರಾರ್ಹ ಎಂದು ಖಚಿತಪಡಿಸಿಕೊಳ್ಳಲು ಸರ್ಕಾರವು ಎಲ್ಲಾ ರಾಜಕೀಯ ಪಕ್ಷಗಳೊಂದಿಗೆ ಸಮಾಲೋಚಿಸಿದೆ ಎಂದು ಮುಹಮ್ಮದ್ ಯೂನಸ್ ಹೇಳಿದರು.

ಚುನಾವಣಾ ಸಮಯದ ಕುರಿತು ತಿಂಗಳುಗಳ ಕಾಲ ನಡೆದ ಊಹಾಪೋಹ. ರಾಜಕೀಯ ಜಗಳವನ್ನು ಈ ಘೋಷಣೆ ಕೊನೆಗೊಳಿಸಿದೆ. ಸುಧಾರಣೆಗಳ ವೇಗವನ್ನು



**ಅಧಿಕಾರಕ್ಕಾಗಿ ಪೈಪೋಟಿ ನಡೆಸುತ್ತಿರುವ ರಾಜಕೀಯ ಪಕ್ಷಗಳು ಯೂನಸ್ ಅವರನ್ನು ಚುನಾವಣಾ ವೇಳಾಪಟ್ಟಿಯನ್ನು ನಿಗದಿಪಡಿಸುವಂತೆ ಪದೇ ಪದೇ ಒತ್ತಾಯಿಸುತ್ತಿವೆ, ಆದರೆ ಹಸೀನಾ ಅವರ ಅಧಿಕಾರಾವಧಿಯ ನಂತರ ದೇಶವು ತನ್ನ ಪ್ರಜಾಪ್ರಭುತ್ವ ಸಂಸ್ಥೆಗಳ ಕೂಲಂಕುಷ ಪರೀಕ್ಷೆಯ ಅಗತ್ಯವಿರುವುದರಿಂದ ಸಮಯದ ಅಗತ್ಯವಿದೆ**

**-ಮೊಹಮ್ಮದ್ ಯೂನಸ್**
**ಮಧ್ಯಂತರ ಸರ್ಕಾರದ ಮುಖ್ಯ ಸಲಹೆಗಾರ**

ಅವಲಂಬಿಸಿ ಡಿಸೆಂಬರ್ 2025 ಮತ್ತು ಜೂನ್ 2026ರ ನಡುವೆ ಯಾವುದೇ ಸಮಯದಲ್ಲಿ ಚುನಾವಣೆಗಳನ್ನು ನಡೆಸಬಹುದು ಎಂದು ಮುಹಮ್ಮದ್ ಯೂನಸ್ ಈ ಹಿಂದೆ ಸೂಚಿಸಿದ್ದರು.

ಚುನಾವಣೆಯನ್ನು ನಡೆಸಲು ಅನುಕೂಲಕರ ವಾತಾವರಣವನ್ನು ಸೃಷ್ಟಿಸಲು ಸರ್ಕಾರವು ಅಗತ್ಯವಿರುವ ಎಲ್ಲವನ್ನೂ ಮಾಡುತ್ತಿದೆ ಎಂದಿದ್ದಾರೆ. ಬಾಂಗ್ಲಾದೇಶವು ಪ್ರತಿ ಬಾರಿ ಚುನಾವಣೆಗಳನ್ನು ನಡೆಸಿದಾಗಲೂ ಆಳವಾದ ಬಿಕ್ಕಟ್ಟಿಗೆ ಸಿಲುಕಿದೆ ಎಂಬುದನ್ನು ನೆನಪಿನಲ್ಲಿಡಬೇಕು ಎಂದು ತಮ್ಮ ಭಾಷಣದಲ್ಲಿ ಹೇಳಿದರು.

ಬಾಂಗ್ಲಾದೇಶದಲ್ಲಿ ನಡೆದ ವ್ಯಾಪಕ ಪ್ರತಿಭಟನೆಗಳು ಆಗಸ್ಟ್‌ನಲ್ಲಿ ಶೇಖ್ ಹಸೀನಾ ಅವರ ರಾಜೀನಾಮೆಗೆ ಕಾರಣವಾದ ಕಾರಣ ಬಾಂಗ್ಲಾದೇಶ ಕಳೆದ ವರ್ಷ ಗಮನಾರ್ಹ ರಾಜಕೀಯ ದಂಗೆಯನ್ನು ಕಂಡಿತು. ಪ್ರಸ್ತುತ ಗಡಿಪಾರಾಗಿ ಭಾರತದಲ್ಲಿ ವಾಸವಾಗಿದ್ದಾರೆ.

ಸರ್ಕಾರದ ಉದ್ಯೋಗ ಕೋಟಾ ವ್ಯವಸ್ಥೆಯಲ್ಲಿ ಸುಧಾರಣೆಗಳ ಬೇಡಿಕೆಗಳಿಂದ ರಾಜಕೀಯ ದಂಗೆ ಮತ್ತಷ್ಟು ಹೆಚ್ಚಾಯಿತು. ಅದು ಶೀಘ್ರವಾಗಿ ಭ್ರಷ್ಟಾಚಾರದ ವಿರುದ್ಧದ ವಿಶಾಲ ಚಳುವಳಿಯಾಗಿಯೂ ಬೆಳೆಯಿತು. ಇದರಿಂದ ಶೇಖ್ ಹಸೀನಾ ಪ್ರಧಾನಿ ಹುದ್ದೆಯಿಂದ ಕೆಳಗಿಳಿಯಬೇಕಾಯಿತು.

# ವಲಸೆ ಶೋಧಕಾರ್ಯ ವಿರೋಧಿಸಿ ಭಾರೀ ಪ್ರತಿಭಟನೆ

## ಹಿಂಸಾತ್ಮಕ ಪ್ರತಿಭಟನೆಗೆ ಬೆಚ್ಚಿಬಿದ್ದ ಲಾಸ್ ಏಂಜಲೀಸ್, ಫೆಡರಲ್ ವಲಸೆ ಕಟ್ಟಡಕ್ಕೆ ಬಿಗಿ ಭದ್ರತೆ

**ಲಾಸ್ ಏಂಜಲೀಸ್:** ಅಮೆರಿಕದ ವಲಸೆ ಕಸ್ಟಮ್ಸ್ ಜಾರಿ (ಐಸಿಇ) ಏಜೆಂಟರ ವಲಸೆ ಶೋಧ ಕಾರ್ಯಾಚರಣೆಯನ್ನು ವಿರೋಧಿಸಿ, ಹಿಂಸಾತ್ಮಕ ಪ್ರತಿಭಟನೆ ಭುಗಿಲೆದ್ದ ಘಟನೆ ಲಾಸ್ ಏಂಜಲೀಸ್‌ನಲ್ಲಿ ನಡದಿದೆ. ಮಾನವೀಯ ವಲಸೆ ಹಕ್ಕುಗಳ ಒಕ್ಕೂಟ ಆಯೋಜಿಸಿದ್ದ ರ‍್ಯಾಲಿ ನಂತರ, ಸುಮಾರು 500 ಪ್ರತಿಭಟನಾಕಾರರು ಫೆಡರಲ್ ಕಟ್ಟಡದ ಬಳಿ ವಲಸೆ ಪರ ಬ್ಯಾನರ್‌ಗಳು, ಧ್ವಜಗಳನ್ನು ಪ್ರದರ್ಶಿಸಿದರು.ಆದರೆ ಈ ರ‍್ಯಾಲಿಯನ್ನು ಕಾನೂನುಬಾಹಿರ ಎಂದು ಘೋಷಿಸಿದ್ದ ಲಾಸ್ ಏಂಜಲೀಸ್ ಪೊಲೀಸ್, ಪ್ರತಿಭಟನಾಕಾರರನ್ನು ಒತ್ತಾಯಪೂರ್ವಕವಾಗಿ ಫೆಡರಲ್ ಕಟ್ಟಡದಿಂದ ಹೊರಗೆ ಕಳುಹಿಸಲು ಮುಂದಾ ದರು. ಈ ವೇಳೆ ಹಿಂಸಾಚಾರ ಭುಗಿಲೆದ್ದಿದ್ದು, ಪೊಲೀ ಸರು ಪ್ರತಿಭಟ ನಾಕಾರರ ಮೇಲೆ ಲಾಠಿ ಪ್ರಹಾರ, ಅಶ್ರುವಾಯು ಪ್ರಯೋಗ ಮಾಡಿದ್ದಾರೆ. ಹಿಂಸಾಚಾರಕ್ಕೆ ಸಂಬಂಧಿಸಿದಂತೆ ಲಾಸ್ ಏಂಜಲೀಸ್ ಪೊಲೀಸರು 45ಕ್ಕೂ ಹೆಚ್ಚುನ ಜನರನ್ನು ಬಂಧಿಸಿದ್ದು, ಫೆಡರಲ್ ವಲಸೆ ಕಟ್ಟಡಕ್ಕೆ ಬಿಗಿ ಭದ್ರತೆ ಒದಗಿಸಿದ್ದಾರೆ. ವಲಸೆ ಶೋಧ ಕಾರ್ಯಾಚರಣೆಗೆ ಲಾಸ್ ಏಂಜಲೀಸ್‌ನಲ್ಲಿ ಭಾರೀ ವಿರೋಧ ವ್ಯಕ್ತವಾಗುತ್ತಿದೆ. ಅಮೆರಿಕದ ಕಠಿಣ ವಲಸೆ ನೀತಿಯಿಂದಾಗಿ ವಿದ್ಯಾರ್ಥಿ ವೀಸಾ ಕೂಡ ಸಮಸ್ಯೆಯ ಸುಳಿಯಲ್ಲಿ ಸಿಲುಕಿದೆ

**ಎಲ್ಲೆಲ್ಲಿ ಪ್ರತಿಭಟನೆ?:** ಸ್ಯಾನ್ ಡಿಯಾಗೋ ಉಪಹಾರ ಗೃಹದಲ್ಲಿ ವಲಸೆ ಜಾರಿ ಅಧಿಕಾರಿಗಳ ದಾಳಿ ಬಳಿಕ,



**ವಲಸೆ ಕಟ್ಟಡಕ್ಕೆ ಬಿಗಿ ಭದ್ರತೆ**

ಪ್ರತಿಭಟನೆ ಭುಗಿಲೆದ್ದಿತು. ಅದೇ ರೀತಿ ಮಿನ್ನಿಯಾಪೊಲಿಸ್‌ನಲ್ಲಿ ಫೆಡರಲ್ ಏಜೆಂಟರ ಲ್ಯಾಟಿನೋ ಸಮುದಾಯದಲ್ಲಿ ಶೋಧ ಕಾರ್ಯ ಆರಂಭಿಸಿದಾಗ, ಅದನ್ನು ವಿರೋಧಿಸಿ ಪ್ರದರ್ಶನಗಳು ನಡೆದವು. ಪ್ರದರ್ಶನದ ಸಮಯದಲ್ಲಿ ಕೆಲವರು ಫೆಡರಲ್ ಕಟ್ಟಡದೊಳಕ್ಕೆ ನುಗ್ಗಲು ಯತ್ನಿಸಿದ್ದರಿಂದ, ಪೊಲೀಸರು ಅವರನ್ನು ಬಲ ವಂತವಾಗಿ ಹೊರಗೆ ಎಳೆದರು. ಈ ವೇಳೆ ಹಿಂಸಾಚಾರಕ್ಕೆ ಮುಂದಾದ ಪ್ರತಿಭಟನಾಕಾರರ ಮೇಲೆ ಲಾಠಿ ಪ್ರಹಾರ, ಅಶ್ರುವಾಯು ಪ್ರಯೋಗ ನಡೆಸಲಾಯಿತು.

**ಪ್ರತಿಭಟನೆ ಏಕೆ?:** ವಲಸೆ ಅಧಿಕಾರಿಗಳು ಏಕಾಏಕಿ

**ದಾಖಲೆ ಪತ್ರಕ್ಕೆ ಸಹಿ ಮಾಡದಂತೆ ಕರೆ**

**ಇನ್ನು ವಲಸೆ ಅಧಿಕಾರಿಗಳ ಶೋಧ ಕಾರ್ಯವನ್ನು ವಿರೋಧಿಸಿ ನಡೆಯುತ್ತಿರುವ ಪ್ರದರ್ಶನದಲ್ಲಿ, ಯಾವುದೇ ಕಾರಣಕ್ಕೂ ವಲಸಿಗರು ದಾಖಲೆ ಪತ್ರಗಳಿಗೆ ಸಹಿ ಮಾಡಬಾರದು ಮತ್ತು ತಾವು ಎಲ್ಲಿಂದ ಬಂದವರು ಎಂಬುದರ ಮಾಹಿತಿ ನೀಡಬಾರದು ಎಂದು ಮನವಿ ಮಾಡಿಕೊಳ್ಳಲಾಗುತ್ತಿದೆ. ಇದು ಸಮಸ್ಯೆಯನ್ನು ಹೆಚ್ಚಿಸಿದ್ದು, ವಲಸೆ ಜಾರಿ ಅಧಿಕಾರಿಗಳು ಬಲವಂತವಾಗಿ ದಾಖಲೆ ಪತ್ರಗಳ ಶೋಧ ಕಾರ್ಯ ನಡೆಸುವ ಅನಿವಾರ್ಯತೆ ಸೃಷ್ಟಿಯಾಗಿದೆ. ಅಮೆರಿಕದ ಕಠಿಣ ವಲಸೆ ನೀತಿಗೆ ಭಾರೀ ವಿರೋಧ ವ್ಯಕ್ತವಾಗುತ್ತಿದೆ.**

ಶೋಧ ಕಾರ್ಯ ಆರಂಭಿಸಿದ್ದೇ ಪ್ರತಭಟನೆ ಭುಗಿಲೇಳಲು ಕಾರಣ ಎಂದು ಅಮೆರಿಕದ ಮಾಧ್ಯಮಗಳು ವರದಿ ಮಾಡಿವೆ. ವಲಸೆ ಜಾರಿ ಕ್ರಮವನ್ನು ಖಂಡಿಸಿ ಲಾಸ್ ಏಂಜಲೀಸ್ ಫೆಡರಲ್ ಕಟ್ಟಡದ ಬಳಿ, ಸಂಜೆ 4 ಗಂಟೆಗೆ ದೊಡ್ಡ ಜನಸಮೂಹ ಜಮಾಯಿಸಿತು. ಪ್ರತಿಭಟನಾಕಾರರು ಬಂಧನಕ್ಕೊಳಗಾಗಿರುವ ಸೇವಾ ನೌಕರರ ಅಂತಾರಾಷ್ಟ್ರೀಯ ಒಕ್ಕೂಟದ ಕ್ಯಾಲಿ ಫೋರ್ನಿಯಾ ಅಧ್ಯಕ್ಷ ಡೇವಿಡ್ ಹುಯೆರ್ಟಾ ಬಿಡುಗಡೆಗೊಳಿಸುವತೆ ಒತ್ತಾಯಿಸಿದರು. ಈ ವೇಳೆ ಪ್ರತಿಭಟನಕಾರರು, ಪೊಲೀಸರ ನಡುವೆ ಜಟಾಪಟಿ ನಡೆದು, ಹಿಂಸಾತ್ಮಕ ಪ್ರತಿಭಟನೆಯಲ್ಲಿ ನಿರತ ರಾದವರ ಮೇಲೆ ಪೊಲೀಸರು ಬಲಪ್ರಯೋಗ ಮಾಡಿದರು. ಈ ವೇಳೆ ಪ್ರತಿಭಟನಾಕಾರರನ್ನು ಚದುರಿಸಲು ಪೊಲೀಸರು ಪೆಪ್ಪರ್ ಸ್ಪ್ರೇ, ಸ್ಮೋಕ್ ಬಾಂಬ್‌ಗಳನ್ನು ಬಳಸಿದರು.

**ನೀವು ತಿಳಿದರಬೇಕಾದ 10 ಪ್ರಮುಖ ಅಂಶಗಳು**

- ವಲಸೆ ಅಧಿಕಾರಿಗಳ ಶೋಧ ಕಾರ್ಯ ವಿರೋಧಿಸಿದ ಲಾಸ್ ಎಂಜಲೀಸ್‌ನಲ್ಲಿ ಪ್ರತಿಭಟನೆ
- ಫೆಡರಲ್ ವಲಸೆ ಕಟ್ಟಡದ ಸಮೀಪ ಭುಗಿಲೆದ್ದ ಹಿಂಸಾತ್ಮಕ ಪ್ರತಿಭಟನೆ
- ಪ್ರತಿಭಟನಾಕಾರರನ್ನು ಚದುರಿಸಲು ಪೊಲೀಸರ ಬಲಪ್ರಯೋಗ, ಸ್ಮೋಕ್ ಬಾಂಬ್ ಬಳಕೆ
- ಸೇವಾ ನೌಕರರ ಅಂತಾರಾಷ್ಟ್ರೀಯ ಒಕ್ಕೂಟದ ಕ್ಯಾಲಿಫೋರ್ನಿಯಾ ಅಧ್ಯಕ್ಷ ಡೇವಿಡ್ ಹುಯೆರ್ಟಾ ಬಂಧನ
- ಲಾಸ ಏಂಜಲೀಸ್‌ನಲ್ಲಿ ಪ್ರತಿಭಟನಾಕಾರರು ಮತ್ತು ಪೊಲೀಸರ ನಡುವೆ ಜಟಾಪಟಿ
- ಲ್ಯಾಟಿನೋ ಸಮುದಾಯದ ವಲಸಿಗರ ದಾಖಲೆ ಪತ್ರಗಳ ಪರಿಶೀಲನೆಗೆ ಮುಂದಾದ ವಲಸೆ ಅಧಿಕಾರಿಗಳು
- ಯಾವುದೇ ದಾಖಲೆ ಪತ್ರ ಪ್ರದರ್ಶಿಸದಂತೆ ವಲಸಿಗರಿಗೆ ಪ್ರತಿಭಟನಕಾರ ಮನವಿ
- ಪ್ರತಿಭಟನೆಯನ್ನು ನಿರ್ದಾಕ್ಷಿಣ್ಯವಾಗಿ ಹತ್ತಿಕ್ಕುವುದಾಗಿ ಎಚ್ಚರಿಸಿದ ಲಾಸ್ ಏಂಜಲೀಸ್ ಪೊಲೀಸ್
- ಮತ್ತೊಂದು ಸುತ್ತಿನ ಭಾರೀ ಪ್ರತಿಭಟನೆಗೆ ಸಜ್ಜಾದ ಮಾನವೀಯ ವಲಸೆ ಹಕ್ಕುಗಳ ಒಕ್ಕೂಟ
- ಅಮೆರಿಕದಲ್ಲಿ ಹಿಂಸಾತ್ಮಕ ಪ್ರತಿಭಟನೆಗಳಿಗೆ ಸಾಕ್ಷಿಯಾಗುತ್ತಿರುವ ಟ್ರಂಪ್ ವಲಸೆ ನೀತಿ



# ಥಗ್‌ಲೈಫ್ ಸೋಲು ರಾಮ್‌ಚರಣ್‌ಗೂ ಭಯ

**ಕಮಲ್ ಹಾಸನ್‌ಗೆ ಸಾಕಷ್ಟು ನಷ್ಟ**

ಕಮಲ್ ಹಾಸನ್ ಅಭಿನಯದ 'ಥಗ್ ಲೈಫ್ ಚಿತ್ರದ ಬಾಕ್ಸ್ ಆಫೀಸ್ ವೈಫಲ್ಯವು ರಾಮ್ ಚರಣ್ ಅವರ ಮುಂಬರುವ ಚಿತ್ರ, 'ಪೆದ್ದಿಗೆ ಆತಂಕ ವನ್ನುಂಟು ಮಾಡಿದೆ. ಎರಡೂ ಚಿತ್ರಗಳಿಗೆ ಸಂಗೀತ ಸಂಯೋಜನೆ ಮಾಡಿದ್ದು ಖ್ಯಾತ ಸಂಗೀತ ನಿರ್ದೇಶಕ ಎಆರ್ ರೆಹಮಾನ್. 'ಥಗ್ ಲೈಫ್ ಚಿತ್ರದ ಸಂಗೀತದ ವಿಫಲತೆಯು 'ಪೆದ್ದಿ ಚಿತ್ರದ ಯಶಸ್ಸಿನ ಮೇಲೆ ಪ್ರಭಾವ ಬೀರಬಹುದು ಎಂಬ ಆತಂಕವಿದೆ.

ಕಮಲ್ ಹಾಸನ್ ಅವರ ನಟನೆಯ 'ಥಗ್ ಲೈಫ್ ಸಿನಿಮಾ ಬಾಕ್ಸ್ ಆಫೀಸ್‌ನಲ್ಲಿ ದುರಂತ ಅಂತ್ಯ ಕಾಣುವ ಸೂಚನೆ ನೀಡಿದೆ. 300 ಕೋಟಿ ರೂಪಾಯಿ ಬಜೆಟ್‌ನ ಈ ಚಿತ್ರ ಎರಡು ದಿನಕ್ಕೆ ಗಳಿಕೆ ಮಾಡಿದ್ದು ಕೇವಲ 23 ಕೋಟಿ ರೂಪಾಯಿ. ಈ ಚಿತ್ರದಿಂದ ನಿರ್ಮಾಪಕನಾಗಿ ಕಮಲ್ ಹಾಸನ್ ಅವರು ಸಾಕಷ್ಟು ನಷ್ಟ ಅನುಭವಿಸುವ ಸಾಧ್ಯತೆ ಇದೆ. ಈ ಮಧ್ಯೆ ಕಮಲ್ ಹಾಸನ್ ಚಿತ್ರದ ಸೋಲಿನಿಂದ ರಾಮ್ ಚರಣ್ ಅಭಿನಯದ 'ಪೆದ್ದಿ ಚಿತ್ರಕ್ಕೂ ಭಯ ಆರಂಭ ಆಗಿದೆ. ಎರಡೂ ಚಿತ್ರಗಳ ಮಧ್ಯೆ ಇರುವ ಲಿಂಕ್ ಏನು ಎಂಬುದರ ಬಗ್ಗೆ ಇಲ್ಲಿದೆ ಮಾಹಿತಿ. 'ಥಗ್ ಲೈಫ್ ಚಿತ್ರಕ್ಕೆ ಸಂಗೀತ ಸಂಯೋಜನೆ ಮಾಡಿದ್ದು ಎಆರ್ ರೆಹಮಾನ್. ಇವರು ಎರಡು ಆಸ್ಕರ್ ಅವಾರ್ಡ್‌ನ ಪಡೆದುಕೊಂಡಿದ್ದಾರೆ.

ಹೀಗಾಗಿ ಇವರು ಸಂಗೀತ ಸಂಯೋಜನೆ ಮಾಡುತ್ತಾರೆ ಎಂದರೆ ಅಲ್ಲಿ ಹಾಡುಗಳ ಬಗ್ಗೆ ನಿರೀಕ್ಷೆ ಹೆಚ್ಚಿರುತ್ತದೆ. 'ಥಗ್ ಲೈಫ್ ಸಿನಿಮಾಗೆ ಇವರೇ ಮ್ಯೂಸಿಕ್ ನೀಡಿದ್ದರು. ಆದರೆ, ಹಾಡಿನ ಮೂಲಕವಾಗಲಿ ಅಥವಾ ಹಿನ್ನೆಲೆ ಸಂಗೀತದ ಮೂಲಕವಾಗಲಿ ಅವರು ಗೆಲ್ಲಲು ಸಾಧ್ಯವಾಗಲೇ ಇಲ್ಲ. ಮಣಿರತ್ನಂ ನಿರ್ದೇಶನದ ಸಿನಿಮಾಗಳು ಎಂದರೆ ಅಲ್ಲಿ ಹಾಡುಗಳಿಗೆ ಹೆಚ್ಚು ಪ್ರಾಮುಖ್ಯತೆ ಇರುತ್ತದೆ. 'ಥಗ್ ಲೈಫ್ ಚಿತ್ರದ ಯಾವ ಹಾಡುಗಳು ಕೂಡ ಪ್ರೇಕ್ಷಕರಿಗೆ ಇಷ್ಟ ಆಗಿಲ್ಲ. ಹಿನ್ನೆಲೆ ಸಂಗೀತ ಕೂಡ ಚಿತ್ರಕ್ಕೆ ಸಾಥ್ ನೀಡಿಲ್ಲ. ಈ ಚಿತ್ರ ಸೋಲಲು ಇದು ಕೂಡ ಒಂದು ಕಾರಣ ಎಂದು ಅನೇಕರು ಬಣ್ಣಿಸಿದ್ದಾರೆ. ಈಗ ರೆಹಮಾನ್ ಅವರು ಸಂಗೀತ ನೀಡುತ್ತಿರುವ ಮುಂದಿನ ಚಿತ್ರವೇ 'ಪೆದ್ದಿ. ಈ ಕಾರಣಕ್ಕೆ ರಾಮ್ ಚರಣ್ ಫ್ಯಾನ್ಸ್‌ಗೆ ಆತಂಕ ಮೂಡಿದೆ.



# ಮಡೆನೂರು ಮನು ಜೈಲಿನಿಂದ ರಿಲೀಸ್



**ಪ್ರತಿ ಹಂತದಲ್ಲಿಯೂ ಷಡ್ಯಂತ್ರ**

ಅತ್ಯಾಚಾರ ಪ್ರಕರಣದಲ್ಲಿ ಜೈಲು ಸೇರಿದ್ದ ಕಾಮಿಡಿ ಕಿಲಾಡಿಗಳು ಖ್ಯಾತಿಯ ಮಡೆನೂರು ಮನು ಶನಿವಾರ ಜಾಮೀನಿನ ಮೇಲೆ ಜೈಲಿನಿಂದ ಬಿಡುಗಡೆ ಆಗಿದ್ದಾರೆ. ಪರಪ್ಪನ ಅಗ್ರಹಾರ ಜೈಲು ಸೇರಿ ನ್ಯಾಯಾಂಗ ಬಂಧನದಲ್ಲಿದ್ದ ಮನು ಇಂದು ರಿಲೀಸ್ ಆದ ಬಳಿಕ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿದ್ದಾರೆ. ಶಿವಣ್ಣ, ದರ್ಶನ್ ಹಾಗೂ ಧ್ರುವ ಸರ್ಜಾ ಬಗ್ಗೆ ಮಾತನಾಡಿರುವ ಆಡಿಯೋ ನನ್ನದಲ್ಲ. ನಾನು ಮೊದಲು ಶಿವಣ್ಣ ಅವರನ್ನು ಭೇಟಿ ಮಾಡಿ ಅವರಿಗೆ ನಡೆದ ಎಲ್ಲಾ ಘಟನೆಯನ್ನು ತಿಳಿಸುತ್ತೇನೆ. ಮೂರು ವರ್ಷಗಳ ಶ್ರಮವನ್ನು ಹಾಳು ಮಾಡಿದ್ದಾರೆ. ಐದಾರು ಮಂದಿ ಸೇರಿಕೊಂಡು ನನ್ನ ಮೇಲೆ ಪ್ಲಾನ್ ಮಾಡಿ ಈ ರೀತಿ ಮಾಡಿದ್ದಾರೆ ಎಂದು ಬೇಸರ ವ್ಯಕ್ತಪಡಿಸಿದ್ದಾರೆ.

ಸಾಕಷ್ಟು ಅಡೆತಡೆಗಳ ನಡುವೆ ಸಿನಿಮಾ ರಿಲೀಸ್ ಆಯ್ತು. ನನ್ನ ವಿರುದ್ಧ ಪ್ರತಿ ಹಂತದಲ್ಲಿಯೂ ಷಡ್ಯಂತ್ರ ನಡೆದಿದೆ. ಸಿನಿಮಾ ರಿಲೀಸ್‌ಗೂ ಮೊದಲೇ ಕುಣಿಗಲ್ ಬಳಿ ಮೊಟ್ಟೆ ಹೊಡೆದಿದ್ದಾರೆ. ನನ್ನ ಮೇಲೆ ಹಲ್ಲೆ ನಡೆಸಿ ಬಟ್ಟೆಗಳನ್ನು ಹರಿದಿದ್ದಾರೆ. ಅವರೇ ನನ್ನ ಮೇಲೆ ಕೇಸ್ ಮಾಡಿದ್ದಾರೆ. ಏನೇ ಆದರೂ ಕಲೆ ತಾಯಿ ಶಾರದೆ ಕೈ ಬಿಡುವುದಿಲ್ಲ ಎಂದು ತಿಳಿಸಿದ್ದಾರೆ. ಅತ್ಯಾಚಾರ ಕೇಸ್‌ನಲ್ಲಿ ಕಾನೂನು ಹೋರಾಟ ಮಾಡುತ್ತೇನೆ. ನ್ಯಾಯಾಲಯದ ಮೇಲೆ ನನಗೆ ನಂಬಿಕೆ ಇದೆ ಎಂದು ಮನು ಮಾಧ್ಯಮಗಳಿಗೆ ಹೇಳಿಕೆ ನೀಡಿದ್ದಾರೆ.

# ಟ್ಯಾಟೂ ಅಳಿಸಿ ಹಾಕಿದ ಸಮಂತಾ



**ಮದುವೆಗೆ ಧರಿಸಿದ್ದ ಉಡುಪು ಮರು ವಿನ್ಯಾಸ**

ನಟಿ ಸಮಂತಾ ಋತ್ ಪ್ರಭು ಬಹಳ ಇಷ್ಟಪಟ್ಟು ಹಾಕಿಸಿದ್ದ ಟ್ಯಾಟೂ ಅನ್ನು ಕೊನೆಗೂ ಅಳಿಸಿಹಾಕಿದ್ದಾರೆ. ಸಮಂತಾ ಋತ್ ಪ್ರಭು ವೃತ್ತಿ ಜೀವನಕ್ಕೆ ಹಾಗೂ ಖಾಸಗಿ ಜೀವನದಲ್ಲಿಯೂ ಅತ್ಯಂತ ಮಹತ್ವ ಹೊಂದಿದ್ದ ಸಿನಿಮಾದ ಹೆಸರನ್ನು ಟ್ಯಾಟೂ ಹಾಕಿಸಿಕೊಂಡಿದ್ದರು. ವಿಚ್ಛೇದನದ ಬಳಿಕವೂ ಅದನ್ನು ತೆಗೆದಿರಲಿಲ್ಲ. ಆದರೆ ಈಗ ಅದನ್ನು ತೆಗೆದು ಹಾಕಿದ್ದಾರೆ. ನಟಿ ಸಮಂತಾ ಋತ್ ಪ್ರಭು, ನಾಗ ಚೈತನ್ಯ ಅವರಿಂದ ವಿಚ್ಛೇದನ ಪಡೆದು ನಾಲ್ಕು ವರ್ಷಗಳಾಗುತ್ತಾ ಬಂದಿದೆ. ಸಮಂತಾ, ತಮ್ಮ ಮದುವೆಗೆ ಧರಿಸಿದ್ದ ಉಡುಪನ್ನು ಮರು ವಿನ್ಯಾಸಗೊಳಿಸಿ ವಾರಿಯರ್ ರೀತಿಯ ಉಡುಗೆ ಮಾಡಿಸಿಕೊಂಡಿದ್ದಾರೆ. ಮದುವೆಗೆ ಮುಂಚೆ ಇದ್ದ ಅನೇಕ ವಸ್ತುಗಳೊಟ್ಟಿಗೆ ತಮ್ಮ ಸೆಂಟಿಮೆಂಟ್ ಅನ್ನು ಅಂತ್ಯಗೊಳಿಸಿದ್ದಾರೆ. ಆದರೆ ಮದುವೆಗೆ ಮುಂಚೆ ಹಾಕಿಸಿಕೊಂಡಿದ್ದ ಒಂದು ಟ್ಯಾಟೂ ಅನ್ನು ಮಾತ್ರ ತೆಗೆಯದೆ ಹಾಗೆಯೇ ಉಳಿಸಿಕೊಂಡಿದ್ದರು. ಇದೀಗ ಅದನ್ನೂ ಅಳಿಸಿ ಹಾಕಿದ್ದಾರೆ. ಸಮಂತಾ ಋತ್ ಪ್ರಭು, ಚಿತ್ರರಂಗಕ್ಕೆ ಪರಿಚಯಗೊಂಡಿದ್ದು 'ಏ ಮಾಯ ಚೇಸಾವೆ ಸಿನಿಮಾ ಮೂಲಕ. ಅದೇ ಸಿನಿಮಾದಲ್ಲಿ ನಾಗ ಚೈತನ್ಯ ಸಹ ನಟಿಸಿದ್ದರು. ಆ ಸಿನಿಮಾ ಬ್ಲಾಕ್ ಬಸ್ಟರ್ ಆಗಿ ಸಮಂತಾ ಚಿತ್ರರಂಗದಲ್ಲಿ ನೆಲೆ ನಿಲ್ಲಲು ಕಾರಣವಾಗಿತ್ತು. ಅಲ್ಲದೆ ಅವರಿಗೆ ನಾಗ ಚೈತನ್ಯ ಸಿಕ್ಕಿದ್ದು ಸಹ ಅದೇ ಸಿನಿಮಾದಿಂದ. ಇದೇ ಕಾರಣಕ್ಕೆ 'ಏ ಮಾಯ ಚೇಸಾವೆ ಸಿನಿಮಾ ಮೇಲೆ ಸಮಂತಾಗೆ ವಿಶೇಷ ಪ್ರೀತಿ.

# ಅಟ್ಲಿ ಚಿತ್ರಕ್ಕೆ ದೀಪಿಕಾ ಎಂಟ್ರಿ

ಅಲ್ಲು ಮತ್ತು ಅಟ್ಲಿ ಅವರ ಮುಂಬರುವ ಚಿತ್ರಕ್ಕೆ ದೀಪಿಕಾ ಪಡುಕೋಣೆ ನಾಯಕಿಯಾಗಿ ಸೇರ್ಪಡೆಯಾಗಿದ್ದಾರೆ. ಈ ಚಿತ್ರದ ಪ್ರೋಮೋ ಇತ್ತೀಚೆಗೆ ಬಿಡುಗಡೆಯಾಗಿದೆ. ದೀಪಿಕಾ ಅವರು ದಿನಕ್ಕೆ 8 ಗಂಟೆಗಳ ಕೆಲಸ ಮಾಡಲು ಒಪ್ಪಿಕೊಂಡಿದ್ದಾರೆ ಮತ್ತು ಅದಕ್ಕೆ ತಕ್ಕಂತೆ ಸಂಭಾವನೆ ಪಡೆಯುತ್ತಿದ್ದಾರೆ. ಅಲ್ಲು ಅರ್ಜುನ್ ಮತ್ತು ದೀಪಿಕಾ ಅವರ ಮೊದಲ ಚಿತ್ರ ಇದಾಗಿದೆ. ಅಲ್ಲು ಅರ್ಜುನ್ ಹಾಗೂ ಅಟ್ಲಿ ಒಟ್ಟಾಗಿ ಸಿನಿಮಾ ಮಾಡುತ್ತಿದ್ದಾರೆ. ಈ ಚಿತ್ರ ಘೋಷಣೆ ಆಗಿ ಕೆಲವು ತಿಂಗಳು ಕಳೆದಿವೆ. ಈ ಸಿನಿಮಾಗೆ ದೀಪಿಕಾ ಪಡುಕೋಣೆ ನಾಯಕಿ ಎಂದು ಈ ಮೊದಲು ಹೇಳಲಾಗುತ್ತಿತ್ತು. ಈ ಬಗ್ಗೆ ಭರ್ಜರಿ ಚರ್ಚೆಗಳು ಕೂಡ ನಡೆದಿದ್ದವು. ಈಗ ಈ ಬಗ್ಗೆ ಅಧಿಕೃತ ಘೋಷಣೆ ಆಗಿದೆ. ದೀಪಿಕಾ ಪಡುಕೋಣೆ ಅವರು ಅಧಿಕೃತವಾಗಿ ತಂಡ ಸೇರಿಕೊಂಡಿದ್ದಾರೆ. ಈ ಪ್ರೋಮೋನ ಬಿಡುಗಡೆ ಮಾಡಲಾಗಿದೆ. ಈ ಚಿತ್ರದಲ್ಲಿ ಅವರ ಪಾತ್ರ ಯಾವ ರೀತಿ ಇರಬಹುದು ಎನ್ನುವುದ ಝಲಕ್ ಕೂಡ ಸಿಕ್ಕಿದೆ. ದೀಪಿಕಾ ಪಡುಕೋಣೆ ಅವರು ಸಾಮಾನ್ಯವಾಗಿ ಹೊಸ ಪಾತ್ರಗಳನ್ನು ಒಪ್ಪಿಕೊಳ್ಳುವಾಗ ಸಾಕಷ್ಟು ಯೋಚಿಸುತ್ತಾರೆ. ಇದಕ್ಕೆ ಕಾರಣ ಈಗ ಅವರಿಗೆ ಇರೋ ವಿಶೇಷ ಜವಾಬ್ದಾರಿ. ದೀಪಿಕಾ ಈಗ ಮಗುವಿನ ಪಾಲನೆ ಮಾಡಬೇಕಿದೆ. ಹೀಗಾಗಿ ದಿನಕ್ಕೆ 8 ಗಂಟೆ ಮಾತ್ರ ಅವರು ಕೆಲಸ ಮಾಡಲು ಸಿದ್ಧರಿದ್ದಾರೆ. ಇನ್ನು ಇದಕ್ಕೆ ತಕ್ಕಂತೆ ದೊಡ್ಡ ಸಂಭಾವನೆ ಕೂಡ ಅವರು ಪಡೆಯುತ್ತಾರೆ.

# ಟೂರಿಸ್ಟ್ ಫ್ಯಾಮಿಲಿಯ ಕೊಂಡಾಡಿದ ಕಿಚ್ಚ



**ಪ್ರತಿ ಪಾತ್ರಕ್ಕೂ ಅದರದ್ದೇ ಆದ ಮಹತ್ವ**

ಕಿಚ್ಚ ಸುದೀಪ್ ಅಪ್ಪಟ ಸಿನಿಮಾ ಪ್ರೇಮಿ. ಒಳ್ಳೆಯ ಸಿನಿಮಾಗಳನ್ನು ನೋಡುವುದು ಸಿನಿಮಾ ಇಷ್ಟವಾದಾಗ ಅದಕ್ಕೆ ಮೆಚ್ಚುಗೆ ವ್ಯಕ್ತಪಡಿಸುವುದನ್ನು ಅವರು ಮರೆಯುವುದಿಲ್ಲ. ಇದೀಗ ಸುದೀಪ್ ಅವರಿಗೆ ತಮಿಳಿನ ಸಣ್ಣ ಬಜೆಟ್‌ನ ಸಿನಿಮಾ ಒಂದು ಇಷ್ಟವಾಗಿದ್ದು, ಸಿನಿಮಾದ ಬಗ್ಗೆ ಟ್ವೀಟ್ ಮಾಡಿದ್ದಾರೆ. ನಟ ಕಿಚ್ಚ ಸುದೀಪ್ , ಸಿನಿಮಾ ಪ್ರೇಮಿ. ಒಳ್ಳೆಯ ಸಿನಿಮಾಗಳನ್ನು ನೀಡಬೇಕೆಂಬ ಹಂಬಲದ ಜೊತೆಗೆ ಒಳ್ಳೆಯ ಸಿನಿಮಾಗಳನ್ನು ನೋಡುತ್ತಾರೆ, ಮೆಚ್ಚಿಕೊಳ್ಳುತ್ತಾರೆ. ಒಳ್ಳೆಯ ಸಿನಿಮಾ ಮಾಡಿದ ಪ್ರತಿಭಾವಂತರನ್ನು ಬೆಂಬಲಿಸುತ್ತಾ ಬರುತ್ತಾರೆ. ಒಳ್ಳೆಯ ಸಿನಿಮಾ ವಿಷಯಕ್ಕೆ ಬಂದಾಗ ಸುದೀಪ್‌ಗೆ ಭಾಷೆಯ ಹಂಗಿಲ್ಲ. ಯಾವುದೇ ಭಾಷೆಯದ್ದಾದರೂ ಸಿನಿಮಾ ಚೆನ್ನಾಗಿದೆಯೆಂದರೆ ಮೆಚ್ಚುಗೆ ಸೂಚಿಸದೇ ಇರುವುದಿಲ್ಲ. ಇತ್ತೀಚೆಗೆ ಬಿಡುಗಡೆ ಆದ ತಮಿಳಿನ ಒಂದು ಸದಭಿರುಚಿಯ ಸಿನಿಮಾ ಸುದೀಪ್ ಗಮನ ಸೆಳೆದಿದ್ದು, ಸಿನಿಮಾ ಬಗ್ಗೆ ಒಳ್ಳೆಯ ಮಾತುಗಳನ್ನು ಟ್ವಿಟ್ಟರ್‌ನಲ್ಲಿ ಹಂಚಿಕೊಂಡಿದ್ದಾರೆ.

ತಮಿಳಿನಲ್ಲಿ 'ಟೂರಿಸ್ಟ್ ಫ್ಯಾಮಿಲಿ ಹೆಸರಿನ ಸಣ್ಣ ಬಜೆಟ್ ಸಿನಿಮಾ ಒಂದು ಇತ್ತೀಚೆಗೆ ಬಿಡುಗಡೆ ಆಗಿದೆ. ಸಿನಿಮಾ ಈಗ ಒಟಿಟಿಯಲ್ಲಿಯೂ ಲಭ್ಯವಿದೆ. ಸಿಮ್ರನ್, ಸಸಿಕುಮಾರ್, ಯೋಗಿಬಾಬು ಮುಖ್ಯ ಪಾತ್ರದಲ್ಲಿ ನಟಿಸಿರುವ ಈ ಸಿನಿಮಾ ತಮಿಳು ಮಾತ್ರವಲ್ಲದೆ ತೆಲುಗು ಪ್ರೇಕ್ಷಕರ ಮನಸ್ಸು ಗೆದ್ದಿದೆ. ಕೇವಲ ಎಂಟು ಕೋಟಿ ಬಜೆಟ್‌ನಲ್ಲಿ ನಿರ್ಮಾಣವಾಗಿದ್ದ ಈ ಸಿನಿಮಾ ಮೇ 1 ರಂದು ಚಿತ್ರಮಂದಿರಗಳಲ್ಲಿ ಬಿಡುಗಡೆ ಆಗಿತ್ತು. ಸಿನಿಮಾದಲ್ಲಿನ ಹಾಸ್ಯ, ಮಾನವೀಯ ಅಂಶಗಳ ಕಾರಣದಿಂದಾಗಿ ಸಾಮಾನ್ಯ ಪ್ರೇಕ್ಷಕರ ಮೆಚ್ಚುಗೆಗೆ ಪಾತ್ರವಾಗಿದೆ. ಸಿನಿಮಾ ಇತ್ತೀಚೆಗಷ್ಟೆ ಜಿಯೋ ಹಾಟ್‌ಸ್ಟಾರ್‌ನಲ್ಲಿ ಬಿಡುಗಡೆ ಆಗಿದ್ದು, ಸಿನಿಮಾ ಒಟಿಟಿಗೆ ಬಂದ ಬಳಿಕ ವೀಕ್ಷಿಸಿದಂತಿರುವ ಸುದೀಪ್ ಟ್ವೀಟ್ ಮಾಡಿದ್ದು, 'ಇತ್ತೀಚೆಗೆ ಬಂದ ಸಿನಿಮಾಗಳಲ್ಲಿಯೇ ಅದ್ಭುತ ಬರವಣಿಗೆ ಮತ್ತು ಎಕ್ಸಿಕ್ಯೂಷನ್ 'ಟೂರಿಸ್ಟ್ ಫ್ಯಾಮಿಲಿ ಸಿನಿಮಾದ್ದು. ಈ ಸಿನಿಮಾದ ಕತೆ ಹೇಳಿದ ವಿಧಾನ ಅದ್ಭುತವಾಗಿದ್ದು, ನನ್ನನ್ನು ಕದಲದೆ ಸೀಟಿನಲ್ಲಿ ಕುಳಿತಿರುವಂತೆ ಮಾಡಿತು. ಸಿನಿಮಾದಲ್ಲಿನ ಪ್ರತಿ ಪಾತ್ರಕ್ಕೂ ಅದರದ್ದೇ ಆದ ಮಹತ್ವ ಮತ್ತು ಪ್ರಧಾನತೆ ಇದೆ. ಎಲ್ಲಾ ಪಾತ್ರಗಳನ್ನು ನಟರು ಅದ್ಭುತವಾಗಿ ನಿರ್ವಹಿಸಿದ್ದಾರೆ. ಸಂಗೀತವಂತೂ ಸಿನಿಮಾದ ಆಸ್ತಿಯೇ ಆಗಿದೆ. ನನ್ನ ಗೆಳೆಯ ನಿರ್ದೇಶಕ ಅಭಿಷಾನ್ ಜೀವಿಂತ್ ಹಾಗೂ ಅವರ ತಂಡಕ್ಕೆ ಅಭಿನಂದನೆಗಳು ಎಂದಿದ್ದಾರೆ ಕಿಚ್ಚ ಸುದೀಪ್. ತಮ್ಮ ಟ್ವೀಟ್‌ನಲ್ಲಿ ನಟ ಸಸಿಕುಮಾರ್, ಸಿಮ್ರನ್, ಯೋಗಿಬಾಬು ಇನ್ನೂ ಹಲವರನ್ನು ಟ್ಯಾಗ್ ಮಾಡಿದ್ದಾರೆ.

# ಹೆಚ್ಚು ಟೆಸ್ಟ್ ಕ್ರಿಕೆಟ್ ಆಡಿದ್ರೆ ಕೊನೆಗೆ ಸಿಗುವುದು ಚೊಂಬೆ

**ಕೊಹ್ಲಿ ಹೇಳಿಕೆಗೆ ರಸೆಲ್ ಟಾಂಗ್**


ಐಪಿಎಲ್ ಮಧ್ಯದಲ್ಲಿ ಟೆಸ್ಟ್ ಕ್ರಿಕೆಟ್‌ನಿಂದ ನಿವೃತ್ತಿ ಹೊಂದುವ ಮೂಲಕ ಭಾರತ ತಂಡದ ಮಾಜಿ ನಾಯಕ ವಿರಾಟ್ ಕೊಹ್ಲಿ ಎಲ್ಲಾರನ್ನೂ ಅಚ್ಚರಿಗೊಳಿಸಿದ್ದರು. ಆದರೆ ಮೊದಲ ಬಾರಿಗೆ ಐಪಿಎಲ್ ಟ್ರೋಫಿ ಗೆದ್ದ ನಂತರ ಟೆಸ್ಟ್ ಕ್ರಿಕೆಟ್ ಬಗ್ಗೆ ಕೊಹ್ಲಿ ನೀಡಿದ ಹೇಳಿಕೆ ಹೊಸ ಚರ್ಚೆಗೆ ನಾಂದಿ ಹಾಡಿದೆ. ಆರ್‌ಸಿಬಿ ಚಾಂಪಿಯನ್ ಆದಾಗ ತುಂಬಾ ಭಾವುಕರಾದ ವಿರಾಟ್ ಕೊಹ್ಲಿ ಇದು ತಮ್ಮ ವೃತ್ತಿಜೀವನದ ಅತ್ಯಂತ ಸ್ಮರಣೀಯ ಕ್ಷಣಗಳಲ್ಲಿ ಒಂದಾಗಿದೆ ಎಂದರು. ಮುಂದುವರೆದು ಮಾತನಾಡಿದ ಕೊಹ್ಲಿ, ಆರ್‌ಸಿಬಿ ಮೊದಲ ಬಾರಿಗೆ ಚಾಂಪಿಯನ್ ಆಗುವುದು ನನಗೆ ದೊಡ್ಡ ವಿಷಯ. ಆದರೆ ಈ ಚಾಂಪಿಯನ್ ಕಿರೀಟ ಟೆಸ್ಟ್ ಕ್ರಿಕೆಟ್‌ಗಿಂತ ಐದು ಹಂತ ಕಡಿಮೆ. ನನಗೆ ಟೆಸ್ಟ್ ಆಡುವುದೇ ಹೆಚ್ಚು ಇಷ್ಟ ಎಂದಿದ್ದರು. ಇದೀಗ ಕೊಹ್ಲಿ ಹೇಳಿಕೆಯ ಬಗ್ಗೆ ಪ್ರತಿಕ್ರಿಯೆ ನೀಡಿರುವ ವೆಸ್ಟ್ ಇಂಡೀಸ್ ಆಲ್‌ರೌಂಡರ್ ಆಂಡ್ರೆ ರಸೆಲ್ , ಹೆಚ್ಚು ಟೆಸ್ಟ್ ಕ್ರಿಕೆಟ್ ಆಡಿದರೆ ನಿವೃತ್ತಿಯ ನಂತರ ನಮ್ಮ ಬಳಿ ಏನು ಇರುವುದಿಲ್ಲ ಎಂದಿದ್ದಾರೆ.

**ಆಂಡ್ರೆ ರಸೆಲ್ ಹೇಳಿದ್ದೇನು;** ವಿರಾಟ್ ಕೊಹ್ಲಿ ಹೇಳಿಕೆಯ ಬಗ್ಗೆ ವೆಸ್ಟ್ ಇಂಡೀಸ್ ಆಲ್‌ರೌಂಡರ್ ಆಂಡ್ರೆ ರಸೆಲ್ ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದ್ದು, 'ವಿರಾಟ್ ಕೊಹ್ಲಿಯಂತಹ ಆಟಗಾರರು ಟೆಸ್ಟ್ ಕ್ರಿಕೆಟ್‌ಗೆ ಹೆಚ್ಚಿನ ಪ್ರಾಮುಖ್ಯತೆಯನ್ನು ನೀಡುತ್ತಾರೆ ಏಕೆಂದರೆ ಅವರು ಭಾರತದಂತಹ ದೇಶದಿಂದ ಆಡುತ್ತಾರೆ. ಅಲ್ಲಿನ ಕ್ರಿಕೆಟ್ ಮಂಡಳಿಯು ಟೆಸ್ಟ್ ಆಡುವ ಆಟಗಾರರಿಗೆ ಹೆಚ್ಚಿನ ಹಣವನ್ನು ಪಾವತಿಸುತ್ತದೆ. ಭಾರತ, ಆಸ್ಟ್ರೇಲಿಯಾ ಅಥವಾ ಇಂಗ್ಲೆಂಡ್‌ನಂತಹ ದೇಶಗಳಲ್ಲಿ ಟೆಸ್ಟ್ ಆಟಗಾರರನ್ನು ಚೆನ್ನಾಗಿ ನೋಡಿಕೊಳ್ಳಲಾಗುತ್ತದೆ ಎಂದು ನಾನು ಭಾವಿಸುತ್ತೇನೆ. ಇದು ವೆಸ್ಟ್ ಇಂಡೀಸ್‌ನಂತಹ ದೇಶಗಳಿಗಿಂತ ಸಂಪೂರ್ಣವಾಗಿ ಭಿನ್ನವಾಗಿದೆ.

**ಹೆಚ್ಚಿನ ಸಂಬಳ ನೀಡುವುದಿಲ್ಲ:** ಭಾರತ, ಆಸ್ಟ್ರೇಲಿಯಾ ಅಥವಾ ಇಂಗ್ಲೆಂಡ್ ಕ್ರಿಕೆಟಿಗರಿಗೆ ಟೆಸ್ಟ್ ಕ್ರಿಕೆಟ್ ಆಡಲು ಉತ್ತಮ ಕೇಂದ್ರ ಒಪ್ಪಂದಗಳು ಸಿಗುತ್ತವೆ. ಅಂತಹ ಸವಲತ್ತುಗಳು ಸಿಗುವಾಗ ಈ ಆಟಗಾರರು ಟೆಸ್ಟ್ ಆಡಲು ಬಯಸುವುದರಲ್ಲಿ ಯಾವುದೇ ತಪ್ಪಿಲ್ಲ. ಆದರೆ ನಮ್ಮ ಆಟಗಾರರು 50 ಅಥವಾ 100 ಟೆಸ್ಟ್‌ಗಳನ್ನು ಆಡಿದರೂ, ನಿವೃತ್ತಿಯ ನಂತರ ಅವರ ಬಳಿ ಏನೂ ಉಳಿದಿರುವುದಿಲ್ಲ ಎಂದಿದ್ದಾರೆ. ಅಂದರೆ ರಸೆಲ್ ಪ್ರಕಾರ, ವಿಂಡೀಸ್ ಮಂಡಳಿ ಟೆಸ್ಟ್ ಕ್ರಿಕೆಟ್ ಆಡುವ ಆಟಗಾರರಿಗೆ ಹೆಚ್ಚಿನ ಸಂಬಳ ನೀಡುವುದಿಲ್ಲ. ಹೀಗಾಗಿ ಟೆಸ್ಟ್ ಕ್ರಿಕೆಟ್ ಅನ್ನೇ ನೆಚ್ಚಿಕೊಂಡರೆ ಆಟಗಾರನಿಗೆ ಹೆಚ್ಚಿನ ಸಂಪಾದನೆ ಮಾಡಲು ಸಾಧ್ಯವಾಗುವುದಿಲ್ಲ ಎಂಬುದಾಗಿದೆ.

**ಕೇವಲ ಒಂದು ಟೆಸ್ಟ್ ಪಂದ್ಯವನ್ನಾಡಿರುವ ರಸೆಲ್:** ಆಂಡ್ರೆ ರಸೆಲ್ 2010 ರಲ್ಲಿ ವೆಸ್ಟ್ ಇಂಡೀಸ್ ಪರ ಟೆಸ್ಟ್ ಕ್ರಿಕೆಟ್‌ಗೆ ಪಾದಾರ್ಪಣೆ ಮಾಡಿದರು, ಆದರೆ ಅವರಿಗೆ ಇದುವರೆಗೆ ಕೇವಲ ಒಂದು ಟೆಸ್ಟ್ ಪಂದ್ಯವನ್ನು ಮಾತ್ರ ಆಡಲು ಅವಕಾಶ ಸಿಕ್ಕಿದೆ. ನಾನು ಬಿಳಿ ಚೆಂಡಿಗೆ ಮಾತ್ರ ಫಿಟ್ ಎಂದು ಮಂಡಳಿ ಭಾವಿಸಿದ್ದರಿಂದ ಅವರನ್ನು ನೇರವಾಗಿ ಟೆಸ್ಟ್ ತಂಡದಿಂದ ಕೈಬಿಡಲಾಯಿತು. ಟೆಸ್ಟ್ ಕ್ರಿಕೆಟ್ ನನ್ನ ವೃತ್ತಿಜೀವನದ ಪ್ರಮುಖ ಭಾಗವಾಗಿತ್ತು, ಆದರೆ ಕೆಲವರು ನನ್ನನ್ನು ಅದರಿಂದ ದೂರ ತಳ್ಳಿದರು, ಆದರೆ ನನಗೆ ಅದರ ಬಗ್ಗೆ ಯಾವುದೇ ವಿಷಾದವಿಲ್ಲ ಎಂದು ರಸೆಲ್ ಹೇಳಿಕೊಂಡಿದ್ದಾರೆ.

ಆಂಡ್ರೆ ರಸೆಲ್ 2010 ರ ನವೆಂಬರ್ 15 ರಂದು ಶ್ರೀಲಂಕಾ ವಿರುದ್ಧ ತಮ್ಮ ಏಕೈಕ ಟೆಸ್ಟ್ ಪಂದ್ಯವನ್ನು ಆಡಿದ್ದರು. ಈ ಪಂದ್ಯದಲ್ಲಿ ಅವರು ಕೇವಲ ಎರಡು ರನ್ ಗಳಿಸಲಷ್ಟೇ ಶಕ್ತರಾದರು.



## ಶತಕ ವಂಚಿತ ಜೋಸ್ ಬಟ್ಲರ್

# ವಿಂಡೀಸ್ ವಿರುದ್ಧ ಇಂಗ್ಲೆಂಡ್ ಗೆಲುವಿನ ಆರಂಭ

ವೆಸ್ಟ್ ಇಂಡೀಸ್ ವಿರುದ್ಧದ ಏಕದಿನ ಸರಣಿಯನ್ನು 3-0 ಅಂತರದಿಂದ ಗೆದ್ದುಕೊಂಡಿದ್ದ ಇಂಗ್ಲೆಂಡ್ , ಟಿ20 ಸರಣಿಯನ್ನು ಗೆಲುವಿನೊಂದಿಗೆ ಆರಂಭಿಸಿದೆ. ವಿಕೆಟ್ ಕೀಪರ್ ಬ್ಯಾಟ್ಸ್‌ಮನ್ ಜೋಸ್ ಬಟ್ಲರ್ ಅವರ ಅದ್ಭುತ ಅರ್ಧಶತಕ ಮತ್ತು ಲಿಯಾಮ್ ಡಾಸನ್ ಅವರ ಮಾರಕ ಬೌಲಿಂಗ್‌ನಿಂದ ವೆಸ್ಟ್ ಇಂಡೀಸ್ ತಂಡ ಸೋಲು ಅನುಭವಿಸಿತು. ಚೆಸ್ಟರ್ ಲೀ ಸ್ಟ್ರೀಟ್‌ನಲ್ಲಿ ನಡೆದ ಮೊದಲ ಟಿ20 ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಇಂಗ್ಲೆಂಡ್ 186 ರನ್ ಕಲೆಹಾಕಿತು. ಗುರಿ ಬೆನ್ನಟ್ಟಿದ ವಿಂಡೀಸ್ 167 ರನ್ ಕಲೆಹಾಕಲಷ್ಟೇ ಶಕ್ತವಾಗಿ 21 ರನ್‌ಗಳ ಸೋಲನ್ನು ಎದುರಿಸಬೇಕಾಯಿತು. ಇಂಗ್ಲೆಂಡ್ ಪರ ಗೆಲುವಿನ ಇನ್ನಿಂಗ್ಸ್ ಆಡಿದ ಜೋಸ್ ಬಟ್ಲರ್ ಕೇವಲ 4 ರನ್‌ಗಳಿಂದ ಶತಕ ವಂಚಿತರಾದರೂ ತಮ್ಮ ತಂಡಕ್ಕೆ ಗೆಲುವು ತಂದುಕೊಡುವಲ್ಲಿ ಯಶಸ್ವಿಯಾದರು.



**6 ಬೌಂಡರಿ 4 ಸಿಕ್ಸರ್ 96 ರನ್**

### ಬಟ್ಲರ್ ಅದ್ಭುತ ಇನ್ನಿಂಗ್ಸ್

ವೆಸ್ಟ್ ಇಂಡೀಸ್ ವಿರುದ್ಧದ ಮೊದಲ ಟಿ20 ಪಂದ್ಯದಲ್ಲಿ ಇಂಗ್ಲೆಂಡ್ ನಾಯಕ ಹ್ಯಾರಿ ಬ್ರೂಕ್ ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಲು ನಿರ್ಧರಿಸಿದರು. ಆದರೆ ಇಂಗ್ಲೆಂಡ್‌ಗೆ ಉತ್ತಮ ಆರಂಭ ಸಿಗಲಿಲ್ಲ. ಬೆನ್ ಡಕೆಟ್ ಇನ್ನಿಂಗ್ಸ್‌ನ ಎರಡನೇ ಓವರ್‌ನಲ್ಲಿ ಪೆವಿಲಿಯನ್ ಸೇರಿಕೊಂಡರು. ಇದಾದ ನಂತರ, ಜೇಮೀ ಸ್ಮಿತ್ ಮತ್ತು ಜೋಸ್ ಬಟ್ಲರ್ ಇಂಗ್ಲೆಂಡ್‌ನ ಇನ್ನಿಂಗ್ಸ್ ಮುನ್ನಡೆಸಿ ಇಬ್ಬರೂ ಎರಡನೇ ವಿಕೆಟ್‌ಗೆ 39 ಎಸೆತಗಳಲ್ಲಿ 79 ರನ್‌ಗಳ ಜೊತೆಯಾಟ ನಡೆಸಿದರು. ಬಟ್ಲರ್ 59 ಎಸೆತಗಳಲ್ಲಿ 6 ಬೌಂಡರಿ ಮತ್ತು 4 ಸಿಕ್ಸರ್‌ಗಳ ಸಹಾಯದಿಂದ 96 ರನ್‌ಗಳ ಇನ್ನಿಂಗ್ಸ್ ಆಡಿದರು. ಆದರೆ, ಅವರು ಕೇವಲ 4 ರನ್‌ಗಳಿಂದ ತಮ್ಮ ಶತಕವನ್ನು ಪೂರ್ಣಗೊಳಿಸಲು ಸಾಧ್ಯವಾಗಲಿಲ್ಲ.

ಬಟ್ಲರ್ ಹೊರತುಪಡಿಸಿ, ಆರಂಭಿಕ ಆಟಗಾರ ಜೇಮೀ ಸ್ಮಿತ್ 20 ಎಸೆತಗಳಲ್ಲಿ 38 ರನ್ ಗಳಿಸಿದರೆ, ಜಾಕೋಬ್ ಬೆಥೆಲ್ 23 ಎಸೆತಗಳಲ್ಲಿ 23 ರನ್‌ಗಳ ಇನ್ನಿಂಗ್ಸ್ ಆಡಿದರು. ಈ ರೀತಿಯಾಗಿ, ಇಂಗ್ಲೆಂಡ್ 20 ಓವರ್‌ಗಳಲ್ಲಿ 6 ವಿಕೆಟ್‌ಗಳಿಗೆ 188 ರನ್ ಗಳಿಸಿತು. ವೆಸ್ಟ್ ಇಂಡೀಸ್ ಪರ ರೊಮಾರಿಯೊ ಶೆಫರ್ಡ್ ಗರಿಷ್ಠ ಎರಡು ವಿಕೆಟ್‌ಗಳನ್ನು ಪಡೆದರು. 189 ರನ್‌ಗಳ ಗುರಿಯನ್ನು ಬೆನ್ನಟ್ಟಿದ ವೆಸ್ಟ್ ಇಂಡೀಸ್ ತಂಡ ಸ್ಥಿರ ಆರಂಭ ಪಡೆಯಿತು.

ಎವಿನ್ ಲೂಯಿಸ್ ಮತ್ತು ಜಾನ್ಸನ್ ಚಾರ್ಲ್ಸ್ ಮೊದಲ ವಿಕೆಟ್‌ಗೆ 20 ಎಸೆತಗಳಲ್ಲಿ 27 ರನ್‌ಗಳ ಜೊತೆಯಾಟ ನೀಡಿತು. ಆದರೆ ಇದಾದ ನಂತರ ವೆಸ್ಟ್ ಇಂಡೀಸ್ ಇನ್ನಿಂಗ್ಸ್ ಕುಸಿಯಲು ಪ್ರಾರಂಭಿಸಿತು. ತಂಡದ ವಿಕೆಟ್‌ಗಳು ನಿಯಮಿತ ಅಂತರದಲ್ಲಿ ಬೀಳಲು ಪ್ರಾರಂಭಿಸಿದವು. ಎವಿನ್ ಲೂಯಿಸ್ ಹೊರತುಪಡಿಸಿ, ಯಾವುದೇ ಬ್ಯಾಟ್ಸ್‌ಮನ್‌ಗೆ ಉತ್ತಮ ಪ್ರದರ್ಶನ ನೀಡಲು ಸಾಧ್ಯವಾಗಲಿಲ್. ಅಂತಿಮವಾಗಿ ತಂಡವು 20 ಓವರ್‌ಗಳಲ್ಲಿ 9 ವಿಕೆಟ್‌ಗಳಿಗೆ 167 ರನ್ ಗಳಿಸಲಷ್ಟೇ ಶಕ್ತವಾಯಿತು. ವಿಂಡೀಸ್ ಪರ ಲೂಯಿಸ್ 23 ಎಸೆತಗಳಲ್ಲಿ 39 ರನ್ ಗಳಿಸಿದರು. ಇಂಗ್ಲೆಂಡ್ ಪರ ಲಿಯಾಮ್ ಡಾಸನ್ ಅದ್ಭುತ ಬೌಲಿಂಗ್ ಮಾಡಿ 4 ಓವರ್‌ಗಳಲ್ಲಿ ಕೇವಲ 20 ರನ್‌ಗಳಿಗೆ 4 ವಿಕೆಟ್‌ಗಳನ್ನು ಪಡೆದರು. ಮ್ಯಾಥ್ಯೂ ಪಾಟ್ಸ್ ಮತ್ತು ಜಾಕೋಬ್ ಬೆಥೆಲ್ ತಲಾ ಎರಡು ವಿಕೆಟ್‌ಗಳನ್ನು ಪಡೆದರು. ಲಿಯಾಮ್ ಡಾಸನ್ ತಮ್ಮ ಅದ್ಭುತ ಬೌಲಿಂಗ್‌ಗಾಗಿ ಪಂದ್ಯಶ್ರೇಷ್ಠ ಪ್ರಶಸ್ತಿಗೂ ಭಾಜನರಾದರು.

# ಹ್ಯಾಟ್ರಿಕ್ ಅರ್ಧಶತಕ ಸಿಡಿಸಿದ ಜುರೆಲ್

**ಭಾರತ ಟೆಸ್ಟ್ ತಂಡದಲ್ಲಿ ಜುರೇಲ್‌ಗೆ ಸ್ಥಾನ**

ಭಾರತ-ಎ ಹಾಗೂ ಇಂಗ್ಲೆಂಡ್ ಲಯನ್ಸ್ ನಡುವೆ ನಾರ್ಥಾಂಪ್ಟನ್‌ನ ಕೌಂಟಿ ಮೈದಾನದಲ್ಲಿ ನಡೆಯುತ್ತಿರುವ ಎರಡನೇ ಅನಧಿಕೃತ ಟೆಸ್ಟ್ ಪಂದ್ಯದಲ್ಲಿ ಭಾರತ ಎ ತಂಡದ ವಿಕೆಟ್ ಕೀಪರ್ ಬ್ಯಾಟ್ಸ್‌ಮನ್ ಧ್ರುವ್ ಜುರೆಲ್ ಅರ್ಧಶತಕ ಸಿಡಿಸಿ ಮಿಂಚಿದ್ದಾರೆ. ಇದು ಜುರೇಲ್ ಅವರ ಸತತ ಮೂರನೇ ಅರ್ಧಶತಕವಾಗಿದೆ. ಐಪಿಎಲ್‌ನಲ್ಲಿ ಅದ್ಭುತ ಪ್ರದರ್ಶನ ನೀಡಿದ್ದ ಜುರೇಲ್, ಇಂಗ್ಲಿಷ್ ನೆಲದಲ್ಲಿಯೂ ಸಾಕಷ್ಟು ರನ್ ಗಳಿಸುತ್ತಿದ್ದಾರೆ. ಮೊದಲ ಟೆಸ್ಟ್ ಪಂದ್ಯದ ಎರಡೂ ಇನ್ನಿಂಗ್ಸ್‌ಗಳಲ್ಲಿ ಅರ್ಧಶತಕ ಬಾರಿಸಿದ್ದ ಜುರೇಲ್, ಇದೀಗ ಎರಡನೇ ಟೆಸ್ಟ್ ಪಂದ್ಯದ ಮೊದಲ ಇನ್ನಿಂಗ್ಸ್‌ನಲ್ಲೂ ಅರ್ಧಶತಕ ಸಿಡಿಸಿ ಅರ್ಧಶತಕಗಳ ಹ್ಯಾಟ್ರಿಕ್ ಪೂರ್ಣಗೊಳಿಸಿದ್ದಾರೆ. ಮೊದಲ ಟೆಸ್ಟ್ ಪಂದ್ಯದಲ್ಲಿ, ಜುರಲೇ ಕೇವಲ 6 ರನ್‌ಗಳಿಂದ ಶತಕ ವಂಚಿತರಾಗಿದ್ದರು.

**ಸತತ ಮೂರನೇ ಅರ್ಧಶತಕ:** ಇಂಗ್ಲೆಂಡ್ ಲಯನ್ಸ್ ವಿರುದ್ಧದ ಎರಡನೇ ಅನಧಿಕೃತ ಟೆಸ್ಟ್ ಪಂದ್ಯದ ಮೊದಲ ದಿನದಂದು ಧ್ರುವ್ ಜುರೆಲ್ ಅದ್ಭುತ ಬ್ಯಾಟಿಂಗ್ ಪ್ರದರ್ಶಿಸಿದರು. ಅವರು 87 ಎಸೆತಗಳಲ್ಲಿ 7 ಬೌಂಡರಿಗಳ ಸಹಾಯದಿಂದ 52 ರನ್ ಗಳಿಸಿದರು. ಅಲ್ಲದೆ ಕೆಎಲ್ ರಾಹುಲ್ (116 ರನ್) ಅವರೊಂದಿಗೆ ಮೂರನೇ ವಿಕೆಟ್‌ಗೆ 121 ರನ್‌ಗಳ ಶತಕದ ಪಾಲುದಾರಿಕೆಯನ್ನು ಹಂಚಿಕೊಂಡರು. ಇದಕ್ಕೂ ಮೊದಲು, ಇಂಗ್ಲೆಂಡ್ ಲಯನ್ಸ್ ವಿರುದ್ಧದ ಮೊದಲ ಟೆಸ್ಟ್ ಪಂದ್ಯದ ಮೊದಲ ಇನ್ನಿಂಗ್ಸ್‌ನಲ್ಲಿ ಜುರೆಲ್ 120 ಎಸೆತಗಳಲ್ಲಿ 11 ಬೌಂಡರಿ ಮತ್ತು 1 ಸಿಕ್ಸರ್ ಸಹಾಯದಿಂದ 94 ರನ್ ಗಳಿಸಿ ಕೇವಲ 6 ರನ್‌ಗಳಿಂದ ತಮ್ಮ ಶತಕವನ್ನು ತಪ್ಪಿಸಿಕೊಂಡರು. ಇದರ ನಂತರ, ಎರಡನೇ ಇನ್ನಿಂಗ್ಸ್‌ನಲ್ಲಿಯೂ 53 ಎಸೆತಗಳಲ್ಲಿ 4 ಬೌಂಡರಿಗಳ ಸಹಾಯದಿಂದ 53 ರನ್‌ಗಳ ಅಜೇಯ ಇನ್ನಿಂಗ್ಸ್ ಆಡಿದರು. ಇಂಗ್ಲೆಂಡ್ ವಿರುದ್ಧದ 5 ಪಂದ್ಯಗಳ ಟೆಸ್ಟ್ ಸರಣಿಗೆ ಧ್ರುವ್ ಜುರೆಲ್ ಅವರನ್ನು ಟೀಂ ಇಂಡಿಯಾದಲ್ಲಿ ಎರಡನೇ ವಿಕೆಟ್ ಕೀಪರ್ ಬ್ಯಾಟ್ಸ್‌ಮನ್ ಆಗಿ ಆಯ್ಕೆ ಮಾಡಲಾಗಿದೆ. ಪ್ರಸ್ತುತ ಅವರು ರನ್ ಗಳಿಸುತ್ತಿರುವ ರೀತಿಯನ್ನು ನೋಡಿದರೆ ಅವರಿಗೆ ಭಾರತ ತಂಡದಲ್ಲಿ ಸ್ಥಾನ ಸಿಗುವ ಎಲ್ಲಾ ಸಾಧ್ಯತೆಗಳಿವೆ.





# ಕೊಹ್ಲಿ ಇಲ್ಲದ ಟೀಂ ಇಂಡಿಯಾಗೆ ಇಂಗ್ಲೆಂಡ್‌ನಲ್ಲಿ ಬೆಲೆಯೇ ಇಲ್ಲ

**ಭಾರತ ತಂಡದಲ್ಲಿ ಯುವ ಪಡೆ**

ಐದು ಟೆಸ್ಟ್ ಪಂದ್ಯಗಳ ಸರಣಿಯನ್ನು ಆಡಲು ಭಾರತ ತಂಡ ಇಂಗ್ಲೆಂಡ್ ತಲುಪಿದೆ. ಶುಭ್‌ಮನ್ ಗಿಲ್ ನೇತೃತ್ವದ ಯುವ ತಂಡ ಈ ಬಾರಿ ಇತಿಹಾಸ ಸೃಷ್ಟಿಸುವ ಉದ್ದೇಶದಿಂದ ಇಂಗ್ಲೆಂಡ್‌ಗೆ ಕಾಲಿಟ್ಟಿದೆ. ವಿರಾಟ್ ಕೊಹ್ಲಿ ಮತ್ತು ರೋಹಿತ್ ಶರ್ಮಾ ಟೆಸ್ಟ್ ಕ್ರಿಕೆಟ್‌ನಿಂದ ನಿವೃತ್ತರಾದ ನಂತರ, ಟೀಂ ಇಂಡಿಯಾ ಇಂಗ್ಲಿಷ್ ನೆಲದಲ್ಲಿ ಅಗ್ನಿ ಪರೀಕ್ಷೆಯನ್ನು ಎದುರಿಸಲಿದೆ. ಏಕೆಂದರೆ ಭಾರತ ಮತ್ತು ಇಂಗ್ಲೆಂಡ್ ನಡುವೆ ನಡೆಯುವ ಮೊದಲ ಟೆಸ್ಟ್ ಪಂದ್ಯದಿಂದಲೇ 2025-27 ರ ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್ ಕೂಡ ಪ್ರಾರಂಭವಾಗಲಿದೆ. ಆದ್ದರಿಂದ, ಎರಡೂ ತಂಡಗಳು ಈ ಆವೃತ್ತಿಯನ್ನು ಗೆಲುವಿನೊಂದಿಗೆ ಪ್ರಾರಂಭಿಸಲು ಬಯಸುತ್ತವೆ. ಹೀಗಾಗಿ ಉಭಯ ತಂಡಗಳ ನಡುವೆ ಜಿದ್ದಾಜಿದ್ದಿನ ಕಾಳಗವನ್ನು ನಿರೀಕ್ಷಿಸಬಹುದಾಗಿದೆ. ಇದೀಗ ಈ ಸರಣಿಗಾಗಿ ಭಾರತ ಯುವ ಪಡೆ ಇಂಗ್ಲೆಂಡ್ ಇಂಗ್ಲೆಂಡ್ ತಲುಪಿದೆ. ಆದರೆ ವಿಮಾನ ನಿಲ್ದಾಣದಲ್ಲಿ ಟೀಂ ಇಂಡಿಯಾಗೆ ಈ ಹಿಂದೆ ಸಿಗುತ್ತಿದ್ದ ಸ್ವಾಗತ ಈ ಬಾರಿ ಸಿಕ್ಕಿಲ್ಲ.

**ಅಭಿಮಾನಿಗಳಿಲ್ಲದ ಸ್ವಾಗತ:** ಮಾಧ್ಯಮ ವರದಿಗಳ ಪ್ರಕಾರ, ಭಾರತ ತಂಡ ಇಂಗ್ಲೆಂಡ್ ವಿಮಾನ ನಿಲ್ದಾಣದಿಂದ ಹೊರಬಂದಾಗ ಅವರನ್ನು ಸ್ವಾಗತಿಸಲು ಒಬ್ಬ ಅಭಿಮಾನಿಯೂ ಇರಲಿಲ್ಲ. ಇಂಗ್ಲೆಂಡ್‌ನಲ್ಲಿ ಇದೇ ಮೊದಲ ಬಾರಿಗೆ ಈ ರೀತಿಯ ಘಟನೆ ಕಂಡುಬಂದಿದೆ. ಅನುಭವಿ ಬ್ಯಾಟ್ಸ್‌ಮನ್‌ಗಳಾದ ವಿರಾಟ್ ಕೊಹ್ಲಿ ಮತ್ತು ರೋಹಿತ್ ಶರ್ಮಾ ಇತ್ತೀಚೆಗೆ ಟೆಸ್ಟ್ ಕ್ರಿಕೆಟ್‌ನಿಂದ ನಿವೃತ್ತರಾಗಿದ್ದಾರೆ. ಈ ಬಾರಿಯ ಟೆಸ್ಟ್ ಸರಣಿಯ ಬಗ್ಗೆ ಅಭಿಮಾನಿಗಳು ಹೆಚ್ಚು ಉತ್ಸುಕರಾಗಿಲ್ಲದಿರಲು ಬಹುಶಃ ಇದೇ ಕಾರಣವಿರಬಹುದು. ಅವರನ್ನು ನೋಡಲು ವಿಮಾನ ನಿಲ್ದಾಣದಲ್ಲಿ ಅಭಿಮಾನಿಗಳ ಉದ್ದನೆಯ ಸರತಿ ಸಾಲು ಇರುತ್ತದೆ ಎಂದು ಭಾರತೀಯ ಆಟಗಾರರು ನಿರೀಕ್ಷಿಸಿದ್ದರು, ಆದರೆ ಇದು ಸಂಭವಿಸಿಲ್ಲ.

ಈ ಬಾರಿ ಇಂಗ್ಲೆಂಡ್ ಪ್ರವಾಸದಲ್ಲಿ ಶುಭ್‌ಮನ್ ಗಿಲ್ ಟೀಂ ಇಂಡಿಯಾವನ್ನು ಮುನ್ನಡೆಸುತ್ತಿದ್ದಾರೆ. ರಿಷಭ್ ಪಂತ್ ಅವರನ್ನು ಉಪನಾಯಕರನ್ನಾಗಿ ಮಾಡಲಾಗಿದೆ. ಇದಲ್ಲದೆ, ಅನೇಕ ಬಲಿಷ್ಠ ಆಟಗಾರರು ತಂಡದಲ್ಲಿ ಸ್ಥಾನ ಪಡೆದಿದ್ದಾರೆ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news

ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966